ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

45

ಸೆಪ್ಟೆಂಬರ್ 30 ಸೋಮವಾರ 2024

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 165 | ಪುಟಗಳು: 10

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಜಾತಿ ಗಣತಿ ವರದಿ ಶಿಫಾರಸು ಜಾರಿ

ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ

ಮೈಸೂರು, ಸೆ.29(ಜಿಎ)–ಇನ್ನೂ ಸೌಲಭ್ಯಗಳಿಂದ ವಂಚಿತರಾಗಿರುವ ಜನರನ್ನು ಗುರುತಿಸುವ ಉದ್ದೇಶದಿಂದಲೇ ನಮ್ಮ ಸರ್ಕಾರ ಸಾಮಾಜಿಕ ಗಣತಿಯನ್ನು(ಜಾತಿಗಣತಿ ಎಂಬುದನ್ನು ಮುಖ್ಯಮಂತ್ರಿಗಳು ಸಾಮಾಜಿಕ ಗಣತಿ ಎಂದು ಸಂಬೋಧಿಸಿದ್ದಾರೆ.) ನಡೆಸಿದ್ದು, ಮುಂದಿನ ದಿನಗಳಲ್ಲಿ ಈ ವರದಿಯನ್ನು ಸಚಿವ ಸಂಪುಟದ ಮುಂದಿರಿಸಿ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ಕ್ರಮಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದರು.

ಮೈಸೂರಿನ ಕಲಾಮಂದಿರಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮೈಸೂರು ಜಿಲ್ಲಾ ಬಿಸಿಎಂ ಹಿರಿಯ ವಿದ್ಯಾರ್ಥಿಗಳ ಸಂಘ ಉದ್ಘಾಟಿಸಿ ಮಾತನಾಡಿದ ಅವರು, ಸಾಮಾಜಿಕ ಗಣತಿ ವರದಿಯನ್ನು ಸರ್ಕಾರ ಸ್ವೀಕರಿಸಿದೆ. ಆದರೆ ಹಲವು ಕಾರಣದಿಂದ ಆ ವರದಿ ಇನ್ನೂ ಜಾರಿಯಾಗಿಲ್ಲ. ಆದರೆ ಮುಂದಿನ ದಿನಗಳಲ್ಲಿ ಈ ವರದಿಯನ್ನು ಸಚಿವ ಸಂಪುಟದ ಮುಂದಿರಿಸಿ ಜಾರಿಗೆ ಕ್ರಮಕೈಗೊಳ್ಳಲಾಗುವುದು. ಜಾತಿ ಜನಗಣತಿ ಕಾಂಗ್ರೆಸ್ ಪಕ್ಷದ ಸಿದ್ಧಾಂತವೂ ಆಗಿದೆ. ದೇಶದಲ್ಲಿ ಜನಸಂಖ್ಯೆಯ ಗಣತಿಯೊಂದಿಗೆ ಜಾತಿ ಗಣತಿ ಕಾರ್ಯ 1930ರ ನಂತರ ಆಗಿಲ್ಲ. ಈಗ ಎಲ್ಲಾ ರಾಜ್ಯಗಳಲ್ಲಿ ಜಾತಿ ಗಣತಿ ಕುರಿತು ಚರ್ಚೆ ನಡೆಯುತ್ತಿದೆ ಎಂದು ವಿವರಿಸಿದರು.

ಹಿಂದುಳಿದವರಿಗೆ, ದಲಿತ– ಅಲ್ಪಸಂಖ್ಯಾತರಿಗೆ ಸಮಾನ ಅವಕಾಶ ದೊರೆಯಬೇಕೆಂಬುದು ಸಂವಿಧಾನ ರಚಿಸಿದ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಉದ್ದೇಶವಾಗಿತ್ತು. ಅವಕಾಶಗಳಿಂದ ವಂಚಿತರಾಗಿರುವುದರಿಂದಲೇ ಈ ಅಸಮಾನತೆ ಸೃಷ್ಟಿಯಾಗಿದ್ದು, ಎಲ್ಲರಿಗೂ ಸಮಾನ ಅವಕಾಶವನ್ನು ಸಂವಿಧಾನದ ಮೂಲಕ ಕಲ್ಪಿಸಲು ಅವರು ಪ್ರಯತ್ನಿಸಿದರು. ಸಾಮಾಜಿಕ ಜವಾಬ್ದಾರಿಯನ್ನು ಈ ತಲೆಮಾರಿನಲ್ಲಿ ಮೂಡಿಸುವ ಉದ್ದೇಶದಿಂದ ಸಂವಿಧಾನ ಪೀಠಿಕೆ ಬಗ್ಗೆ ಅರಿವು ಮೂಡಿಸುವ ಕಾರ್ಯವನ್ನು ರಾಜ್ಯಾದ್ಯಂತ ನಾವು ಮಾಡಿದ್ದೇವೆ ಎಂದರು. ವಸತಿ ನಿಲಯಗಳಲ್ಲಿ ಕಲಿತ ಅನೇಕ ಮಂದಿ ಉನ್ನತ ಸ್ಥಾನಗಳಲ್ಲಿದ್ದಾರೆ. ಈ ರೀತಿ ಉನ್ನತ ಹುದ್ದೆಗಳಲ್ಲಿರುವವರು ಸಮಾಜಕ್ಕೆ ಹಿಂತಿರುಗಿ ನೀಡಬೇಕಾಗಿದೆ. ನೀವು ಯಾವ ಕ್ಷೇತ್ರದಲ್ಲಿದ್ದೀರಿ ಅಲ್ಲಿ ಸಮಾಜದ ದೀನ ದಲಿತರಿಗಾಗಿ ನಿಮ್ಮ ಕೈಯಿಂದಾಗುವಷ್ಟು ಸಹಾಯ ಮಾಡಿ. ಇದುವೇ ನೀವು ಸಮಾಜಕ್ಕೆ ನೀಡುವ ಕೊಡುಗೆ. ಸಮಾಜದ ಋಣ ತೀರಿಸಿದರೆ ನಮ್ಮ ಜೀವನ ಸಾರ್ಥಕ. ಸಮಾಜದ ಬಗ್ಗೆ ಚಿಂತಿಸದೆ, ಕುಟುಂಬದ ಬಗ್ಗೆ ಮಾತ್ರ ಯೋಚಿಸುವವರು ಸ್ವಾರ್ಥಿಗಳಾಗುತ್ತಾರೆ. ಇಂತವರಿಂದಲೇ ಸಮಾಜದಲ್ಲಿ ವೃದ್ಧಾಶ್ರಮಗಳ ಸಂಖ್ಯೆಯೂ ಹೆಚ್ಚಾಗುತ್ತಿದೆ. ವ್ಯವಸ್ಥೆಯಲ್ಲಿ ಬದಲಾವಣೆ ತರಲು ಪ್ರತಿಯೊಬ್ಬರೂ ಪ್ರಯತ್ನಿಸಬೇಕು ಎಂದರು.

ಜಾತಿ ವ್ಯವಸ್ಥೆ, ಕಂದಾಚಾರ, ಮೌಢ್ಯಗಳಿಂದ ಮುಕ್ತರಾಗಿ ಕುವೆಂಪು ಹೇಳಿದ ಹಾಗೆ ವಿಶ್ವ ಮಾನವರಾಗಬೇಕಿದೆ. ವೈಜ್ಞಾನಿಕತೆ, ವೈಚಾರಿಕತೆ, ಸಮಾಜಮುಖಿಯಾದ ಜವಾಬ್ದಾರಿ ಬೆಳೆಯದೆ ಹೋದರೆ ವಿದ್ಯೆ ದೊರೆತು ಏನು ಪ್ರಯೋಜನ. ಪ್ರತಿಯೊಬ್ಬರೂ ಸಮಾಜಮುಖಿಯಾಗಿ ಸಮಾಜಕ್ಕೆ ನಮ್ಮ ಕೊಡುಗೆ ಏನು ಎಂದು ಯೋಚಿಸಬೇಕಿದೆ ಎಂದು ಹೇಳಿದರು. ■5ನೇ ಪುಟಕ್ಕೆ



ಮೈಸೂರಿನ ಕಲಾಮಂದಿರದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮೈಸೂರು ಜಿಲ್ಲಾ ಬಿಸಿಎಂ ಹಿರಿಯ ವಿದ್ಯಾರ್ಥಿಗಳ ಸಂಘವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಿದರು.

ಹೋಬಳಿಗೊಂದು ವಸತಿ ಶಾಲೆ

ನಾನು ಹಣಕಾಸು ಮಂತ್ರಿಯಾಗಿದ್ದಾಗ, ದಲಿತ ಸಂಘರ್ಷ ಸಮಿತಿಯವರು ಸಾರಾಯಿ ಅಂಗಡಿ ಬೇಡ, ಮಕ್ಕಳಿಗೆ ವಸತಿ ಶಾಲೆ ನಿರ್ಮಾಣವಾಗಬೇಕೆಂಬ ಬೇಡಿಕೆಯನ್ನಾಧರಿಸಿ, 1994–95ರಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯನ್ನು ಪ್ರಾರಂಭಿಸಲಾಯಿತು. ಹೋಬಳಿಗೊಂದು ವಸತಿ ಶಾಲೆ ಯೋಜನೆಯಂತೆ ರಾಜ್ಯದಲ್ಲಿ ಒಟ್ಟು 822 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ನಿರ್ಮಿಸಲಾಗಿದೆ. ಈ ವರ್ಷ 20 ವಸತಿ ಶಾಲೆ ನಿರ್ಮಿಸಲು ತೀರ್ಮಾನಿಸಲಾಗಿದೆ. ಹಳ್ಳಿಗಾಡಿನ ಮಕ್ಕಳಿಗೂ ಗುಣಮಟ್ಟದ ಶಿಕ್ಷಣ ದೊರೆಯಬೇಕೆಂಬ ಉದ್ದೇಶದಿಂದ ಮುಂದಿನ ವರ್ಷದೊಳಗೆ ರಾಜ್ಯದ ಪ್ರತಿ ಹೋಬಳಿಯಲ್ಲಿ ಒಂದು ವಸತಿ ಶಾಲೆ ನಿರ್ಮಿಸುವ ಗುರಿಯನ್ನು ಸಾಧಿಸಬೇಕು. ಕಲ್ಯಾಣ ಕರ್ನಾಟಕ ಭಾಗದಲ್ಲಿ ಮಕ್ಕಳು ಅಪೌಷ್ಟಿಕತೆಯಿಂದ ಬಳಲುತ್ತಿದ್ದಾರೆ. ಆದ್ದರಿಂದ ಹತ್ತನೇ ತರಗತಿಯಲ್ಲಿ ಓದುವ ಮಕ್ಕಳಿಗೆ ವಾರಕ್ಕೆ ಆರು ದಿನ ಮೊಟ್ಟೆ ನೀಡಲಾಗುತ್ತಿದೆ. ಅನ್ನಭಾಗ್ಯದಡಿ 5 ಕೆಜಿ ಅಕ್ಕಿ, ಕ್ಷೀರಭಾಗ್ಯ ಕಾರ್ಯಕ್ರಮ, ಬಡಮಕ್ಕಳಿಗೆ ಶೂ ಭಾಗ್ಯ ಸೇರಿದಂತೆ ಹಲವು ಜನಪರ ಯೋಜನೆ ಜಾರಿಗೆ ತರಲಾಗಿದೆ.

–ಸಿದ್ದರಾಮಯ್ಯ, ಮುಖ್ಯಮಂತ್ರಿ

ರಾಜಕೀಯವಾಗಿ ಕೆಲ ದಿನ ತೊಂದರೆ ಕೊಡಬಹುದು... ನಾನು ಯಾವುದಕ್ಕೂ ಜಗ್ಗೋದು ಇಲ್ಲ, ಬಗ್ಗೋದು ಇಲ್ಲ...

ಮೈಸೂರು, ಸೆ.29(ಎಸ್‌ಬಿಡಿ)– ನನಗೆ ರಾಜಕೀಯವಾಗಿ ಕೆಲವು ದಿನ ತೊಂದರೆ ಕೊಡಬಹುದು. ಆದರೆ ನಾನು ಯಾವುದಕ್ಕೂ ಜಗ್ಗೋದು ಇಲ್ಲಾ, ಬಗ್ಗೋದು ಇಲ್ಲಾ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘರ್ಜಿಸಿದರು.

ಜಿಲ್ಲಾ ಪಂಚಾಯಿತಿ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಅಶೋಕಪುರಂನ ಸರ್ಕಾರಿ ಪ್ರಾಥಮಿಕ ಶಾಲಾ ಆವರಣದಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ಅಶೋಕಪುರಂನಲ್ಲಿ ಕೈಗೊಂಡಿರುವ ಸುಮಾರು 10 ಕೋಟಿ ರೂ. ಅಂದಾಜು ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿ ಹಾಗೂ ಸಾಂಕೇತಿಕವಾಗಿ ಐವರು ವೀಳ್ಯದೆಲೆ ಬೆಳೆಗಾರರಿಗೆ ಜಮೀನು ಮಂಜೂರಾತಿ ಹಕ್ಕು ಪತ್ರ ವಿತರಿಸಿ ಅವರು ಮಾತನಾಡಿದರು.

ಜನಪರ ಆಡಳಿತ ನೀಡುವುದನ್ನು ಸಹಿಸಲಾಗದೆ ಪ್ರತಿಪಕ್ಷದವರಿಗೆ ಹೊಟ್ಟೆ ಉರಿಯಾಗಿದೆ. ಆದರೆ ನಿಮ್ಮ ಆಶೀರ್ವಾದ ಇರುವವರೆಗೂ ಯಾರೂ ಕೂಡ ಏನೂ ಮಾಡಲು ಸಾಧ್ಯವಿಲ್ಲ. ಕೆಲವು ದಿನ ರಾಜಕೀಯವಾಗಿ ತೊಂದರೆ ಕೊಡಬಹುದೇ ಹೊರತು ಕಾನೂನು ಪ್ರಕಾರ ತೊಂದರೆ ಕೊಡಲು ಸಾಧ್ಯವೇ ಇಲ್ಲ. ಕೆಲವರು ನನ್ನ ಬಳಿ ಬಂದು ಧೈರ್ಯವಾಗಿರಿ ಸರ್, ರಾಜೀನಾಮೆ ಕೊಡಬೇಡಿ ಸರ್ ಎನ್ನುತ್ತಾರೆ. ನನ್ನ ಆತ್ಮಸಾಕ್ಷಿ ಸ್ಪಷ್ಟ ಹಾಗೂ ಸ್ವಚ್ಛವಾಗಿದೆ. ಅದರಂತೆ ನಡೆದುಕೊಳ್ಳುತ್ತೇನೆ. ನಿಮ್ಮ ಆಶೀರ್ವಾದ ಇರುವಾಗ ಹೆದರುವ ಪ್ರಶ್ನೆಯೇ ಇಲ್ಲ. ನಾನು ಯಾವುದಕ್ಕೂ ಜಗ್ಗುವುದೂ ಇಲ್ಲ, ಬಗ್ಗುವುದೂ ಇಲ್ಲ. ರಾಜಕೀಯವಾಗಿ ಎಲ್ಲವನ್ನೂ ಎದುರಿಸಿ ನಿಲ್ಲುವುದು ನನಗೆ ಗೊತ್ತಿದೆ ಎಂದರು.

ಗ್ಯಾರಂಟಿ ನಿಲ್ಲುವುದಿಲ್ಲ: ರಾಜಕೀಯ ಪ್ರಜಾಪ್ರಭುತ್ವದ ಜೊತೆಗೆ ಸಾಮಾಜಿಕ ಹಾಗೂ ಆರ್ಥಿಕ ಪ್ರಜಾಪ್ರಭುತ್ವ ಸಾಕಾರವಾದಾಗ ಮಾತ್ರ ಸಮಾನತೆ ಸಾಧಿಸಲು ಸಾಧ್ಯ ಎಂದು ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರು ಹೇಳಿದ್ದಾರೆ. ಆದ್ದರಿಂದಲೇ ನಾನು ಮೊದಲ ಬಾರಿ ಮುಖ್ಯಮಂತ್ರಿಯಾಗಿದ್ದಾಗ ಜನಸಂಖ್ಯೆ ಆಧಾರದಲ್ಲಿ ಪರಿಶಿಷ್ಟರಿಗೆ ಶೇ.24ರಷ್ಟು ಅನುದಾನ ಮೀಸಲು ಕಾನೂನು ಜಾರಿ ಜೊತೆಗೆ ಹಲವು ಜನಪರವಾದ ಕಾರ್ಯಕ್ರಮಗಳನ್ನು ನೀಡಿದ್ದೆ. ಪ್ರಸಕ್ತ ಅವಧಿಯಲ್ಲಿ ಐದು ಗ್ಯಾರಂಟಿ ಯೋಜನೆಗಳ ಮೂಲಕ ಸಾಮಾಜಿಕ ಹಾಗೂ ಆರ್ಥಿಕ ಶಕ್ತಿ ತುಂಬುವ ಪ್ರಯತ್ನ ಮಾಡಿದ್ದೇವೆ. ಗ್ಯಾರಂಟಿ ಯೋಜನೆಗಳಿಗಾಗಿ ■6ನೇ ಪುಟಕ್ಕೆ

ಸಾಂಪ್ರದಾಯಿಕ ಬೆಳೆ ಸಂರಕ್ಷಣೆ

ಮೈಸೂರು ವೀಳ್ಯದೆಲೆ, ಮೈಸೂರು ಮಲ್ಲಿಗೆ, ಈರನಗೆರೆ ಬದನೆಕಾಯಿ, ನಂಜನಗೂಡು ರಸಬಾಳೆ ಮೈಸೂರಿನ ಹೆಮ್ಮೆಯ ಪಾರಂಪರಿಕ ಬೆಳೆಗಳಾಗಿವೆ. ಈ ಬೆಳೆಗಳ ರಕ್ಷಣೆ, ವಿಸ್ತರಣೆಗೆ ಸರ್ಕಾರದಿಂದ ಕಾರ್ಯಕ್ರಮ ಘೋಷಣೆ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು.

ಭಾಷಣ ಮಾಡುವಾಗಲೇ ಅಸ್ವಸ್ಥರಾದ ಮಲ್ಲಿಕಾರ್ಜುನ ಖರ್ಗೆ

ಸ್ವಲ್ಪ ವಿಶ್ರಾಂತಿ ಪಡೆದ ನಂತರ ಮೋದಿಯನ್ನು ಅಧಿಕಾರದಿಂದ ಕೆಳಗಿಳಿಸುವವರೆಗೆ ಸಾಯಲ್ಲ ಎಂದು ಗುಡುಗಿದ ಎಐಸಿಸಿ ಅಧ್ಯಕ್ಷ



ಶ್ರೀನಗರ, ಸೆ.29– ಜಮ್ಮು ಮತ್ತು ಕಾಶ್ಮೀರದ ಕಥುವಾದಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡುತ್ತಿದ್ದ ವೇಳೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಇದ್ದಕ್ಕಿದ್ದಂತೆ ಅಸ್ವಸ್ಥರಾಗಿದ್ದಾರೆ. ಕೆಲ ಸಮಯದ ಬಳಿಕ ಮತ್ತೆ ವೇದಿಕೆಗೆ ಬಂದ ಅವರು ಮೋದಿ ವಿರುದ್ಧ ಗುಡುಗಿದ್ದಾರೆ. ಜೊತೆಗೆ ಜಮ್ಮು ಮತ್ತು ಕಾಶ್ಮೀರದಲ್ಲಿ ಪ್ರತ್ಯೇಕ ರಾಜ್ಯ ಸ್ಥಾನಮಾನ ಮರುಸ್ಥಾಪಿಸುತ್ತೇವೆ ಎಂಬುದಾಗಿಯೂ ಭರವಸೆ ನೀಡಿದ್ದಾರೆ.

ಜಮ್ಮು ಮತ್ತು ಕಾಶ್ಮೀರದ ಅಂತಿಮ ಹಂತದ ಚುನಾವಣಾ ಪ್ರಚಾರ ಸಭೆಯಲ್ಲಿ ಭಾನುವಾರ ಮಾತನಾಡುವ ವೇಳೆ ಖರ್ಗೆ ಅವರು ಅಸ್ವಸ್ಥರಾದರು. ತಕ್ಷಣ ಸುತ್ತುವರಿದ ಪಕ್ಷದ ಮುಖಂಡರು ಅವರನ್ನು ಕುರ್ಚಿಯಲ್ಲಿ ಕೂರಿಸಿದರು. ಕೆಲ ನಿಮಿಷಗಳ ನಂತರ, ಮತ್ತೆ ವೇದಿಕೆಗೆ ಬಂದ ಖರ್ಗೆ ಅವರು ಮೋದಿ ವಿರುದ್ಧ ತೀವ್ರವಾಗಿ ವಾಗ್ದಾಳಿ ನಡೆಸಿದರು. ಜಮ್ಮು ಮತ್ತು ಕಾಶ್ಮೀರದಲ್ಲಿ ಪ್ರತ್ಯೇಕ ■5ನೇ ಪುಟಕ್ಕೆ

ಮಲ್ಲಿಕಾರ್ಜುನ ಖರ್ಗೆ ಆರೋಗ್ಯವಾಗಿದ್ದಾರೆ

ಪ್ರಿಯಾಂಕ್ ಖರ್ಗೆ ಮಾಹಿತಿ

ಬೆಂಗಳೂರು: ಜಮ್ಮು ಮತ್ತು ಕಾಶ್ಮೀರದಲ್ಲಿ ಇಂದು (ಭಾನುವಾರ) ಚುನಾವಣೆ ಪ್ರಚಾರದ ವೇಳೆ ಅಸ್ವಸ್ಥರಾಗಿದ್ದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಆರೋಗ್ಯವಾಗಿದ್ದಾರೆ ಎಂದು ಪುತ್ರ, ಕರ್ನಾಟಕ ಸರ್ಕಾರದ ಮಾಹಿತಿ ತಂತ್ರಜ್ಞಾನ ಸಚಿವರೂ ಆಗಿರುವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮ 'ಎಕ್ಸ್'ನಲ್ಲಿ ಮಾಹಿತಿ ನೀಡಿರುವ ಪ್ರಿಯಾಂಕ್ ಖರ್ಗೆ, ಜಮ್ಮು ಮತ್ತು ಕಾಶ್ಮೀರದಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡುವ ವೇಳೆ ಖರ್ಗೆ ಸ್ವಲ್ಪ ಅಸ್ವಸ್ಥರಾಗಿದ್ದರು ಎಂದು ತಿಳಿಸಿದ್ದಾರೆ.

ವೈದ್ಯಕೀಯ ತಂಡವು ಖರ್ಗೆ ಅವರನ್ನು ಪರೀಕ್ಷಿಸಿದ್ದು, ರಕ್ತದೊತ್ತಡ ಅಲ್ಪ ಕಡಿಮೆಯಾಗಿರುವುದನ್ನು ಹೊರತುಪಡಿಸಿದರೆ ಅವರು ಆರೋಗ್ಯವಾಗಿದ್ದಾರೆ. ನಿಮ್ಮೆಲ್ಲರ ಕಾಳಜಿಗೆ ಕೃತಜ್ಞನಾಗಿದ್ದೇನೆ ಎಂದು ಹೇಳಿದ್ದಾರೆ. ದೃಢ ಸಂಕಲ್ಪ, ಹಿತೈಷಿಗಳ ಶುಭ ಹಾರೈಕೆಯಿಂದ ಮತ್ತಷ್ಟು ಪ್ರಬಲರಾಗಿ ಅವರು ಮುಂದುವರಿಯಲಿದ್ದಾರೆ ಎಂದು ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ರಾಜಮನೆತನಕ್ಕೆ ದಸರಾಗೆ ಆಹ್ವಾನ



ಮೈಸೂರು ಅರಮನೆ ಆವರಣದಲ್ಲಿರುವ ರಾಜವಂಶಸ್ಥರ ನಿವಾಸದಲ್ಲಿ ಭಾನುವಾರ ರಾಜವಂಶಸ್ಥೆ ಪ್ರಮೋದಾದೇವಿ ಒಡೆಯರ್ ಅವರಿಗೆ ಫಲತಾಂಬೂಲದೊಂದಿಗೆ ಆಹ್ವಾನ ಪತ್ರಿಕೆ ನೀಡಿ, ಮೈಸೂರು ದಸರಾದಲ್ಲಿ ಪಾಲ್ಗೊಳ್ಳುವಂತೆ ರಾಜಮನೆತನಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಆಹ್ವಾನಿಸಿದರು.

ಮೈಸೂರು, ಸೆ.29(ಪಿಎಂ)– ನಾಡಹಬ್ಬ ಮೈಸೂರು ದಸರಾ ಮಹೋತ್ಸವಕ್ಕೆ ಮೈಸೂರು ರಾಜಮನೆತನದವರಿಗೆ ಭಾನುವಾರ ಅಧಿಕೃತ ಆಹ್ವಾನ ನೀಡಲಾಯಿತು.

ರಾಜ್ಯ ಸರ್ಕಾರದ ಪರವಾಗಿ ಸಮಾಜ ಕಲ್ಯಾಣ ಸಚಿವರೂ ಆದ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಮೈಸೂರು ಒಡೆಯರ್ ರಾಜವಂಶಸ್ಥೆ ಪ್ರಮೋದಾದೇವಿ ಒಡೆಯರ್ ಅವರಿಗೆ ಅಧಿಕೃತ ಆಹ್ವಾನ ನೀಡಿದರು. ಮೈಸೂರು ಅರಮನೆ ಆವರಣದಲ್ಲಿರುವ ರಾಜವಂಶಸ್ಥರ ನಿವಾಸದಲ್ಲಿ ಪ್ರಮೋದಾದೇವಿ ಒಡೆಯರ್ ಅವರನ್ನು ಭೇಟಿಯಾದ ಸಚಿವರು, ಸಾಂಪ್ರದಾಯಿಕವಾಗಿ ಅವರಿಗೆ ಹೂಗುಚ್ಛ–ಫಲತಾಂಬೂಲ, ಆಹ್ವಾನ ಪತ್ರಿಕೆ ನೀಡಿ, ದಸರಾ ಉತ್ಸವಕ್ಕೆ ಆತ್ಮೀಯವಾಗಿ ಆಹ್ವಾನಿಸಿದರು. ಅಲ್ಲದೆ, ಪ್ರತಿವರ್ಷ ನೀಡುವಂತೆ ಸರ್ಕಾರದಿಂದ ಗೌರವ ರಾಜಧನದ ಚೆಕ್ ನೀಡಿದರು.

ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ, ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ಜಿಪಂ ಸಿಇಒ ಕೆ.ಎಂ.ಗಾಯಿತ್ರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಷ್ಣುವರ್ಧನ, ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜು, ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಎಂ.ಜೆ.ರೂಪ, ಅರಮನೆ ಮಂಡಳಿ ಉಪನಿರ್ದೇಶಕ ಟಿ.ಎಸ್.ಸುಬ್ರಹ್ಮಣ್ಯ, ಅರಮನೆ ಎಸಿಪಿ ಚಂದ್ರಶೇಖರ್ ಮತ್ತಿತರರು ಹಾಜರಿದ್ದರು.

ಆಪರೇಷನ್ ಕಮಲ ಮಾಡಿ ಸಿಎಂ ಆಗಲು ಒಬ್ಬ ನಾಯಕ ಸಾವಿರ ಕೋಟಿ ರೂ. ರೆಡಿ ಮಾಡಿದ್ದಾರೆ



ದಾವಣಗೆರೆ, ಸೆ.29– ರಾಜ್ಯದಲ್ಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ಸರ್ಕಾರವನ್ನು ಕೆಡವಿ, ತಾವು ಸಿಎಂ ಆಗಬೇಕೆಂದು ಬಿಜೆಪಿಯ ನಾಯಕರೊಬ್ಬರು ಒಂದು ಸಾವಿರ ಕೋಟಿ ರೂ. ರೆಡಿ ಮಾಡಿಕೊಂಡಿದ್ದಾರೆ ಎಂದು ವಿಜಯಪುರ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೊಸ ಬಾಂಬ್ ಸಿಡಿಸಿದ್ದಾರೆ.

ದಾವಣಗೆರೆಯಲ್ಲಿ ಇಂದು ನಡೆದ ಬಿಜೆಪಿ ಅಸಮಾಧಾನಿತ ನಾಯಕರ ಸಭೆಯಲ್ಲಿ ಪಾಲ್ಗೊಂಡಿದ್ದ ಅವರು ಅಲ್ಲಿ ಮಾಧ್ಯಮಗಳಿಗೆ ಹೇಳಿಕೆ ನೀಡುವಾಗ ಈ ಮಾತು ಹೇಳಿದ್ದಾರೆ. ಈ ಹಿಂದೆ, ಮುಖ್ಯಮಂತ್ರಿ ಹುದ್ದೆಗಾಗಿ ಬಿಜೆಪಿ ಹೈಕಮಾಂಡ್‌ಗೆ ಯಾರು ಎರಡೂವರೆ ಸಾವಿರ ಕೋಟಿ ರೂ. ಕೊಡುತ್ತಾರೋ ಅವರಿಗೆ ಮುಖ್ಯಮಂತ್ರಿ ಪಟ್ಟ ಒಲಿಯುತ್ತದೆ ಎಂದು ಹೇಳುವ ಮೂಲಕ ಭಾರಿ ಸಂಚಲನ ಸೃಷ್ಟಿಸಿದ್ದರು. ಈಗ, ಬಿಜೆಪಿ ನಾಯಕರೊಬ್ಬರು ಸಿಎಂ ಆಗಲು 1000 ಕೋಟಿ ರೂ. ಕೂಡಿಟ್ಟುಕೊಂಡಿದ್ದಾರೆ ಎಂದು ಹೇಳುವ ಮೂಲಕ ಮತ್ತೊಂದು ಬಾಂಬ್ ಸಿಡಿಸಿದ್ದಾರೆ. ಆದರೆ, ಸಾವಿರ ಕೋಟಿ ರೂ. ಕೂಡಿಟ್ಟುಕೊಂಡಿರುವ ಬಿಜೆಪಿ ನಾಯಕ ಯಾರು ಎಂಬುದನ್ನು ಬಹಿರಂಗಪಡಿಸಿಲ್ಲ. ■6ನೇ ಪುಟಕ್ಕೆ

ದಸರಾ ಸಂದರ್ಭದಲ್ಲಿ ಸಾಂಸ್ಕೃತಿಕ ನಗರಿಯಲ್ಲಿ ಇದೆಂತಹಾ ವಿಕೃತಿ?

ಮೈಸೂರಿನ ಹೊರವಲಯದಲ್ಲಿ ರೇವ್ ಪಾರ್ಟಿ



ರೇವ್ ಪಾರ್ಟಿಗಾಗಿ ಅಳವಡಿಸಿದ್ದ ಟೆಂಟ್‌ಗಳನ್ನು ತೆರವುಗೊಳಿಸಿರುವುದು.




ರಾಕ್ ಮ್ಯೂಸಿಕ್‌ಗೆ ಕುಣಿದು ಕುಪ್ಪಳಿಸುತ್ತಿರುವ ಯುವ ಜನತೆ.

- 8 ಯುವತಿಯರು ಸೇರಿದಂತೆ 64 ಮಂದಿ ಪೊಲೀಸರ ವಶಕ್ಕೆ
- ಮದ್ಯದ ನಶೆಯಲ್ಲಿ ರಾಕ್ ಮ್ಯೂಸಿಕ್‌ಗೆ ಕುಣಿದು ಕುಪ್ಪಳಿಸುತ್ತಿದ್ದ ಯುವ ಸಮೂಹ
- ರಾಜ್ಯ ಹಾಗೂ ಹೊರರಾಜ್ಯದವರು ಮಾತ್ರವಲ್ಲ, ವಿದೇಶಿಯರೂ ಭಾಗಿ
- ವಿದೇಶಿ ರ್‍ಯಾಪರ್ ಅನ್ನು ಕರೆತಂದಿದ್ದ ಆಯೋಜಕರು?

ಮೈಸೂರು, ಸೆ.29(ಬಿಎಲ್‌ಯು)– ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಈ ಬಾರಿ ನಾಡಹಬ್ಬ ದಸರಾ ಮಹೋತ್ಸವಕ್ಕಾಗಿ ಅದ್ಧೂರಿ ತಯಾರಿ ನಡೆದಿದೆ. ಪ್ರಮುಖ ರಸ್ತೆಗಳೆಲ್ಲಾ ದೀಪಾಲಂಕಾರದಿಂದ ಪ್ರಜ್ವಲಿಸುತ್ತಿವೆ. ಮಾನಸ ಗಂಗೋತ್ರಿಯ ಬಯಲು ರಂಗಮಂದಿರದಲ್ಲಿ ವರ್ಣರಂಜಿತವಾಗಿ ನಡೆಯುತ್ತಿದೆ. ಪ್ರವಾಸಿಗರ ದಂಡು ಮೈಸೂರಿನತ್ತ ಹರಿದು ಬರುತ್ತಿದೆ.


ಈ ನಡುವೆಯೇ ಮೈಸೂರಿನ ಹೊರವಲಯದ ಕೆಆರ್‌ಎಸ್ ಹಿನ್ನೀರಿನಲ್ಲಿ ರೇವ್ ಪಾರ್ಟಿಯಂತಹ ವಿಕೃತಿ ನಡೆದಿದೆ. ಡ್ರಗ್ಸ್ ನಶೆಯಲ್ಲಿ ತೇಲಾಡುತ್ತಾ ಎದೆ ಝಲ್ ಎನಿಸುವ ರಾಕ್ ಮ್ಯೂಸಿಕ್‌ನಲ್ಲಿ ಅರೆಬರೆ ಬಟ್ಟೆಯೊಂದಿಗೆ ಯುವಕ–ಯುವತಿಯರು ವಿಕೃತವಾಗಿ ಡ್ಯಾನ್ಸ್ ಮಾಡುತ್ತಾ ಸಂಭ್ರಮಿಸುತ್ತಿದ್ದ ಘಟನೆ ನಡೆದಿದ್ದು, ಮೈಸೂರು ಜಿಲ್ಲಾ ಪೊಲೀಸರು ದಾಳಿ ನಡೆಸಿ 8 ಯುವತಿಯರೂ ಸೇರಿದಂತೆ 64 ಮಂದಿಯನ್ನು ವಶಕ್ಕೆ ಪಡೆದು ಅವರ ರಕ್ತದ ಸ್ಯಾಂಪಲ್ ಅನ್ನು ಪ್ರಯೋಗಾಲಯಕ್ಕೆ ರವಾನಿಸಿದ್ದಾರೆ.



ರೇವ್ ಪಾರ್ಟಿಯಲ್ಲಿ ಪೊಲೀಸರು ವಶಪಡಿಸಿಕೊಳ್ಳಲಾದ ವಸ್ತುಗಳು.

ಸಂಸ್ಕೃತಿಗೆ ಹೆಸರಾಗಿರುವ ಮೈಸೂರಿಗೆ ಕಪ್ಪುಚುಕ್ಕೆ ತರುವಂತಹ ರೇವ್ ಪಾರ್ಟಿಗಳು ವ್ಯವಸ್ಥಿತವಾಗಿ ನಡೆಯುತ್ತಿರುವುದು ಆತಂಕದ ವಿಚಾರವಾಗಿದ್ದು, ವಾಣಿಜ್ಯ ನಗರಿ ಮುಂಬೈ, ಸಿಲಿಕಾನ್ ಸಿಟಿ ಬೆಂಗಳೂರು ಮುಂತಾದ ಹೈಫೈ ನಗರಗಳಲ್ಲಿ ನಡೆಯುತ್ತಿದ್ದ ರೇವ್ ಪಾರ್ಟಿ ಸಾಂಸ್ಕೃತಿಕ ನಗರಿ ಮೈಸೂರಿಗೂ ಕಾಲಿಟ್ಟಿರುವುದು ಆತಂಕಕಾರಿಯಾಗಿದೆ.

ಮೈಸೂರು ತಾಲೂಕು ಇಲವಾಲ ಹೋಬಳಿ ಮೀನಾಕ್ಷಿಪುರ ಮತ್ತು ಅಮಚವಾಡಿ ನಡುವೆ ಯಡಹಳ್ಳಿ ಫಾರಂ ಹೌಸ್‌ನಲ್ಲಿ ಶನಿವಾರ ರಾತ್ರಿ ರೇವ್ ಪಾರ್ಟಿ ನಡೆಯುತ್ತಿತ್ತು. ಕಿವಿಗಡಚಿಕ್ಕುವ ರಾಕ್ ಸಂಗೀತದೊಂದಿಗೆ ಬೃಹತ್ ಎಲ್‌ಇಡಿ ಟಿವಿಗಳಲ್ಲಿ ಪಾಶ್ಚಿಮಾತ್ಯ ರಾಕ್ ಮ್ಯೂಸಿಕ್ ಇರುವ ಪ್ರದರ್ಶನದೊಂದಿಗೆ ರ್‍ಯಾಪರ್‌ಗಳ ರಾಕ್ ಮ್ಯೂಸಿಕ್‌ಗೆ ನಶೆ ಏರಿರುವ ಯುವಕ–ಯುವತಿಯರು ತಮ್ಮನ್ನೇ ಮರೆತು ನೃತ್ಯದಲ್ಲಿ ತಲ್ಲೀನರಾಗಿದ್ದರು.



ಪಾರ್ಟಿಯಲ್ಲಿ ಭಾಗವಹಿಸಿದ್ದ ಯುವಕ–ಯುವತಿಯರು ಪೊಲೀಸ್ ವಶದಲ್ಲಿ.

ಈ ಪಾರ್ಟಿಯಲ್ಲಿ ರಾಜಕಾರಣಿಗಳ ಮಕ್ಕಳು, ಉದ್ಯಮಿಗಳು, ಅವರ ಮಕ್ಕಳು, ದೇಶ–ವಿದೇಶದ ವಿದ್ಯಾರ್ಥಿಗಳು ಭಾಗವಹಿಸಿದ್ದರು ಎಂದು ಮೂಲಗಳು ತಿಳಿಸಿವೆ. ಈ ಪಾರ್ಟಿಗೆ ಇಸ್ರೇಲ್‌ನ ರ್‍ಯಾಪರ್ ಗ್ರೇನ್ ರಿಪ್ಪರ್ ಅವರನ್ನು ■6ನೇ ಪುಟಕ್ಕೆ

ಗ್ರಾಮ ಆಡಳಿತಾಧಿಕಾರಿಗಳ ನೇಮಕಾತಿಗೆ ಪರೀಕ್ಷೆ

38 ಸಾವಿರ ಅಭ್ಯರ್ಥಿಗಳು ಪರೀಕ್ಷೆಯಲ್ಲಿ ಭಾಗಿ

ಮೈಸೂರು,ಸೆ.29(ಬಿಎಲ್‌ಯು)– ಮೈಸೂರಿನಲ್ಲಿ ಭಾನುವಾರ, ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಗ್ರಾಮ ಆಡಳಿತಾಧಿಕಾರಿಗಳ ನೇರ ನೇಮಕಾತಿಗೆ ಪರೀಕ್ಷೆ ನಡೆಸಿತು.

ಮೈಸೂರು ನಗರದ 60 ಪರೀಕ್ಷಾ ಕೇಂದ್ರ ಸೇರಿದಂತೆ 7 ತಾಲೂಕಿನ 24 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಿತು. ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಮೈಸೂರು ಜಿಲ್ಲೆಯ ಒಟ್ಟು 84 ಪರೀಕ್ಷಾ ಕೇಂದ್ರಗಳಲ್ಲಿ 38097 ಅಭ್ಯರ್ಥಿಗಳಿಗೆ ಪರೀಕ್ಷೆ ಬರೆಯಲು ಸ್ಥಳ ನಿಗದಿ ಮಾಡಿತ್ತು. ಈ ಪೈಕಿ 30470 ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರೆ, 7555 ಅಭ್ಯರ್ಥಿಗಳು ಗೈರು ಹಾಜರಾಗಿದ್ದರು. ಪರೀಕ್ಷಾ ಕೇಂದ್ರದ ಸುತ್ತಲಿನ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿ ಮಾಡಲಾಗಿತ್ತು. ಪ್ರತಿಯೊಂದು ಪರೀಕ್ಷಾ ಕೇಂದ್ರದಲ್ಲಿ ಪೊಲೀಸರನ್ನು ನಿಯೋಜಿಸಲಾಗಿತ್ತು. ಪರೀಕ್ಷಾ ಕೇಂದ್ರದಲ್ಲಿ ಜಾಮರ್ ಅಳವಡಿಸಲಾಗಿತ್ತು. ನಕಲಿಗೆ ಅವಕಾಶ ನೀಡದಂತೆ ಬ್ಲೂಟೂತ್ ಸೇರಿದಂತೆ ಹಲವು ಆಕ್ಷೇಪಾರ್ಹ ವಸ್ತುಗಳನ್ನು ಪರೀಕ್ಷಾ ಕೇಂದ್ರದೊಳಗೆ ತೆಗೆದುಕೊಂಡು ಹೋಗುವುದಕ್ಕೆ ನಿಷೇಧ ಹೇರಲಾಗಿತ್ತು. ಅಲ್ಲದೇ ಪರೀಕ್ಷಾ ಕೇಂದ್ರದ ಸುತ್ತಲಿನ ಜೆರಾಕ್ಸ್ ಹಾಗೂ ಬ್ರೌಸಿಂಗ್ ಸೆಂಟರ್‌ಗಳನ್ನು ಪರೀಕ್ಷೆಯ ಅವಧಿಯಲ್ಲಿ ಮುಚ್ಚಿಸಲಾಗಿತ್ತು. ಒಟ್ಟಾರೆ ಬಿಗಿ ಪೊಲೀಸ್ ಬಂದೋಬಸ್ತ್‌ನಲ್ಲಿ ಕಟ್ಟುನಿಟ್ಟಾಗಿ ಪರೀಕ್ಷೆ ನಡೆಸಲಾಯಿತು.

ಇಡಿಗೆ ದೂರು ಕೊಟ್ಟ ಕೂಡಲೇ ಏನೂ ಆಗುವುದಿಲ್ಲ

ಮುಖ್ಯಮಂತ್ರಿ ಸಿದ್ದರಾಮಯ್ಯರ ಧೈರ್ಯದ ಮಾತು

ಮೈಸೂರು, ಸೆ.29(ಬಿಎಲ್‌ಯು)– ತಮ್ಮ ವಿರುದ್ಧ ಇಡಿ (ಜಾರಿ ನಿರ್ದೇಶನಾಲಯ)ಗೆ ದೂರು ಕೊಟ್ಟ ತಕ್ಷಣ ಏನೂ ಆಗುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ.

ಮೈಸೂರಿನ ರಾಮಕೃಷ್ಣ ನಗರದ ತಮ್ಮ ನಿವಾಸದಲ್ಲಿ ಇಂದು ಪತ್ರಕರ್ತರ ಜೊತೆ ಮಾತನಾಡಿದ ಅವರು, ಇಡಿಗೆ ದೂರು ಕೊಟ್ಟರೆ ಕಾನೂನಾತ್ಮಕವಾಗಿ ಏನಾಗುತ್ತದೆಯೊ ಆಗಲಿ ಎಂದು ಸವಾಲು ಹಾಕಿದರು.



ಮೈಸೂರಿನ ರಾಮಕೃಷ್ಣ ನಗರದ ತಮ್ಮ ನಿವಾಸದಲ್ಲಿ ಭಾನುವಾರ ಪತ್ರಕರ್ತರ ಜೊತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿದರು.

ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಎಡಿಜಿಪಿ ಚಂದ್ರಶೇಖರ್ ಹಂದಿ ಎಂದು ಕರೆದಿದ್ದಾರೆಂಬ ಆರೋಪದ ಬಗ್ಗೆ ಪ್ರತಿಕ್ರಿಯೆ ನೀಡಿದ ಸಿದ್ದರಾಮಯ್ಯ, ಕುಮಾರಸ್ವಾಮಿ ಅವರನ್ನು ಎಡಿಜಿಪಿ ಹಂದಿ ಅಂತ ಕರೆದಿಲ್ಲ. ಜಾರ್ಜ್ ಬರ್ನಾಡ್ ಶಾ ಅವರ ಮಾತನ್ನು ಉಲ್ಲೇಖಿಸಿ ಚಂದ್ರಶೇಖರ್ ಹೇಳಿದ್ದಾರೆ ಎಂದು ಸಮರ್ಥನೆ ಮಾಡಿಕೊಂಡರು.

ಕುಮಾರಸ್ವಾಮಿ ಮತ್ತು ಎಡಿಜಿಪಿ ನಡುವಿನ ಆರೋಪ ಪ್ರತ್ಯಾರೋಪದಲ್ಲಿ ನಾನು ಮಧ್ಯ ಪ್ರವೇಶ ಮಾಡುವುದಿಲ್ಲ. ಎಡಿಜಿಪಿ ವಿರುದ್ಧ ಕುಮಾರಸ್ವಾಮಿ ಆರೋಪ ಮಾಡಿದ್ದಾರೆ. ಅದಕ್ಕೆ ಎಡಿಜಿಪಿ ಉತ್ತರ ಕೊಟ್ಟಿದ್ದಾರೆ ಎಂದು ಸ್ಪಷ್ಟನೆ ನೀಡಿದರು.

ತಮ್ಮ ವಿರುದ್ಧ ಕುಮಾರಸ್ವಾಮಿ ಮಾಡುತ್ತಿರುವ ಆರೋಪಗಳಿಗೆ ಪ್ರತಿಕ್ರಿಯೆ ನೀಡುವುದಿಲ್ಲ ಎಂದು ನಾನು ನಿನ್ನೆಯೆ ಸ್ಪಷ್ಟಪಡಿಸಿದ್ದೇನೆ. ಇವತ್ತು ಕೂಡ ಕುಮಾರಸ್ವಾಮಿ ಆರೋಪಗಳಿಗೆ ಉತ್ತರ ನೀಡುವುದಿಲ್ಲ. ಮುಡಾ ಪ್ರಕರಣ ಬಗ್ಗೆ ಲೋಕಾಯುಕ್ತದಲ್ಲಿ ತನಿಖೆ ನಡೆಯುತ್ತಿದೆ. ಆದ ಕಾರಣ ಈ ಬಗ್ಗೆ ಕೂಡ ನಾನು ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ ಎಂದರು.

ತಮ್ಮ ವಿರುದ್ಧ ಲೋಕಾಯುಕ್ತ ಹಾಗೂ ಇಡಿಗೆ ದೂರು ನೀಡಿ ಕಾನೂನು ಸಮರ ಸಾರಿರುವ ಸ್ನೇಹಮಯಿ ಕೃಷ್ಣ ಆರೋಪದ ಬಗ್ಗೆ ಕೂಡ ನೋ ಕಾಮೆಂಟ್ ಎಂದ ಸಿದ್ದರಾಮಯ್ಯ, ಆತ ಯಾರು ಅಂತ ನನಗೆ ಗೊತ್ತಿಲ್ಲ, ಆತನ ಮುಖವನ್ನು ಈ ತನಕ ನಾನು ನೋಡಿಲ್ಲ ಎಂದು ಹೇಳಿದರು.

ಸಿದ್ದರಾಮಯ್ಯ ಮನೆ ಮುಂದೆ 2ನೇ ದಿನವೂ ಖಾಲಿ ಖಾಲಿ

ಅಹವಾಲು ಸಲ್ಲಿಸಲು ಬೆರಳೆಣಿಕೆಯಷ್ಟು ಜನರು

ಮೈಸೂರು,ಸೆ.29(ಬಿಎಲ್‌ಯು)–ಸದಾ ಗಿಜಿಗಿಡುತ್ತಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮೈಸೂರಿನ ರಾಮಕೃಷ್ಣನಗರದ ಮನೆ ಮುಂದೆ ಇಂದು ಅಹವಾಲು ಸಲ್ಲಿಸಲು ಕೇವಲ ಬೆರಳೆಣಿಕೆಯಷ್ಟು ಜನರಿದ್ದರು. ಸಿದ್ದರಾಮಯ್ಯ ಮೈಸೂರಿಗೆ ಬಂದರೆಂದರೆ ಅವರ ಹಿಂದೆ ಮುಂದೆ ನೂರಾರು ಜನರು ಹಿಂಬಾಲಿಸುತ್ತಾರೆ. ಮೈಸೂರಿನ ವಿಮಾನ ನಿಲ್ದಾಣಕ್ಕೆ ಮೊನ್ನೆ ಸಿದ್ದರಾಮಯ್ಯ ಬಂದ ವೇಳೆ ಸಾವಿರಾರು ಬೆಂಬಲಿಗರು ಸೇರಿ ಸ್ವಾಗತ ಕೋರಿದ್ದರು. ಮನೆಯ ಒಳಗೆ ಜಾಗವಿಲ್ಲದೆ ಬಾಲ್ಕನಿ, ಮೆಟ್ಟಿಲು ಮೇಲೆ ನಿಲ್ಲುತ್ತಿದ್ದರು. ಮನೆಯೊಳಗೆ ಹೋಗಿ ಸಿದ್ದರಾಮಯ್ಯ ಭೇಟಿಗಾಗಿ ಮುಗಿ ಬೀಳುತ್ತಿದ್ದರು. ಆದರೆ ನಿನ್ನೆಯಂತೆ ಇಂದು ಕೂಡ ಸಿದ್ದರಾಮಯ್ಯ ಮನೆ ಬಳಿ ಖಾಲಿ ಖಾಲಿಯಾಗಿತ್ತು. ಜನರು ಅಹವಾಲು ಸಲ್ಲಿಸಲು ಬಂದಾಗ ಬಿಸಿಲಿನಲ್ಲಿ ಒಣಗಬಾರದು ಎಂದು ಮನೆ ಪಕ್ಕದಲ್ಲೆ ಪೆಂಡಾಲ್ ಹಾಕಲಾಗುತ್ತದೆ. ಅದರಂತೆ ಇಂದು ಕೂಡ ಪೆಂಡಾಲ್ ಹಾಕಲಾಗಿತ್ತು. ಆದರೆ ಬೆರಳೆಣಿಕೆಯಷ್ಟು ಜನರು ಮಾತ್ರ ಅರ್ಜಿ ಹಿಡಿದು ನಿಂತಿದ್ದರು. ಸಿದ್ದರಾಮಯ್ಯ ಮನೆಯಿಂದ ಹೊರಗೆ ಬಂದ ನಂತರ ನೂಕು ನುಗ್ಗಲು ಇಲ್ಲದೆ ಜನರು ಸರಾಗವಾಗಿ ಅಹವಾಲು ಸಲ್ಲಿಸಿ, ತಮ್ಮ ಬೇಡಿಕೆಯನ್ನು ಸಿಎಂ ಮುಂದಿಟ್ಟರು. ಸಿದ್ದರಾಮಯ್ಯ ವಿರುದ್ಧ ಎಫ್‌ಐಆರ್ ದಾಖಲಾದ ಕೂಡಲೇ ಅವರ ಮನೆ ಮುಂದಿನ ವಾತಾವರಣ ದಿಢೀರ್ ಬದಲಾಗಿರುವುದು ಸಹಜವಾಗಿಯೇ ಅಚ್ಚರಿ ಮೂಡಿಸಿದೆ.



ಕಡಕೊಳ ಪಟ್ಟಣ ಪಂಚಾಯಿತಿ ವತಿಯಿಂದ ಪೌರಕಾರ್ಮಿಕರ ದಿನಾಚರಣೆ



ಮೈಸೂರು ತಾಲೂಕು ಕಡಕೊಳ ಪಪಂ ವತಿಯಿಂದ ಆಯೋಜಿಸಿದ್ದ ಪೌರಕಾರ್ಮಿಕರ ದಿನಾಚರಣೆ ಕಾರ್ಯಕ್ರಮವನ್ನು ನಗರಾಭಿವೃದ್ಧಿ ಇಲಾಖೆ ಜಿಲ್ಲಾ ಯೋಜನಾ ನಿರ್ದೇಶಕಿ ಶ್ರೀಮತಿ ಶುಭ. ಬಿ. ಉದ್ಘಾಟಿಸಿದರು.

ಮೈಸೂರು, ಸೆ. 29–ಮೈಸೂರು ತಾಲೂಕು ಕಡಕೊಳ ಪಪಂ ವತಿಯಿಂದ ಆಯೋಜಿಸಿದ್ದ ಪೌರಕಾರ್ಮಿಕರ ದಿನಾಚರಣೆಯನ್ನು ನಗರಾಭಿವೃದ್ಧಿ ಇಲಾಖೆಯ ಜಿಲ್ಲಾ ಯೋಜನಾ ನಿರ್ದೇಶಕಿ ಶ್ರೀಮತಿ ಶುಭ. ಬಿ. ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ಪೌರಕಾರ್ಮಿಕ ಬಂಧುಗಳು ತಮ್ಮ ದೈನಂದಿನ ಕರ್ತವ್ಯದಲ್ಲಿ ತಂತ್ರಜ್ಞಾನದ ಜೊತೆಗೆ ವೈಚಾರಿಕತೆಯನ್ನು ಅಳವಡಿಸಿಕೊಂಡು ಕೆಲಸ ಮಾಡಿದಾಗ ಜೊತೆಗೆ ನಿಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬಹುದೆಂದು ತಿಳಿಸಿದರು. ಇದೇ ವೇಳೆ ಪಪಂ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಪೌರಕಾರ್ಮಿಕರನ್ನು ಸನ್ಮಾನಿಸಿ ನೆನಪಿನ ಕಾಣಿಕೆ ನೀಡಲಾಯಿತು.

ಪ.ಪಂ ಮುಖ್ಯಾಧಿಕಾರಿ ಶ್ರೀಮತಿ ದೀಪಾ, ಪಪಂ ಸ್ವಚ್ಛತಾ ರಾಯಭಾರಿ ಕಡಕೊಳ ಕುಮಾರಸ್ವಾಮಿ, ಜಿಲ್ಲಾ ಸಫಾಯಿ ಕರ್ಮಚಾರಿ ಸಂಘದ ಅಧ್ಯಕ್ಷ ರಾಜು, ರಾಜಸ್ವ ನಿರೀಕ್ಷಕರಾದ ಶ್ರೀಮತಿ ವೀಣಾ ಮತ್ತಿತರರು ಉಪಸ್ಥಿತರಿದ್ದರು.

ಇಂದು ಉಪನ್ಯಾಸ

ಮೈಸೂರು, ಸೆ29–ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ವತಿಯಿಂದ ಸೆ.30ರಂದು ಬೆಳಗ್ಗೆ 11 ಗಂಟೆಗೆ ಕರ್ನಾಟಕ ದಸರಾ ವಸ್ತು ಪ್ರದರ್ಶನ ಪ್ರಾಧಿಕಾರದ ಆವರಣದಲ್ಲಿರುವ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಆಯುಕ್ತರ ಕಚೇರಿಯಲ್ಲಿ "ಬನವಾಸಿ ಕದಂಬರ ಇತಿಹಾಸ, ಕಲೆ, ವಾಸ್ತುಶಿಲ್ಪ ಮತ್ತು ಕೊಡುಗೆ" ವಿಷಯದ ಕುರಿತಾಗಿ ಉಪನ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ದೆಹಲಿಯ ಫೆಲೋಶಿಪ್ ಕಮಿಟಿಯ ಸದಸ್ಯರು ಮತ್ತು ಇತಿಹಾಸಕಾರರಾದ ಡಾ. ಲಕ್ಷ್ಮೀಶ್ ಹೆಗಡೆ ಸೋಂದಾ ಅವರು ಉಪನ್ಯಾಸ ನೀಡಲಿದ್ದು, ಆಸಕ್ತ ವಿದ್ಯಾರ್ಥಿಗಳು ಭಾಗವಹಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ಪ್ರಥಮ ದರ್ಜೆ ಸಹಾಯಕರಾದ ಶಶಿಧರ ಎಸ್ ಅವರ ಮೊ.ಸಂ: 7349057976 ಅನ್ನು ಸಂಪರ್ಕಿಸಬಹುದು ಎಂದು ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಮಾಜದ ಅಭಿವೃದ್ಧಿಗೆ ರಾಜೇಂದ್ರ ಶ್ರೀಗಳ ದೂರದೃಷ್ಟಿ ಪೂರಕ

ಶ್ರೀಗಳ ಜಯಂತಿ ಮಹೋತ್ಸವ ಉದ್ಘಾಟಿಸಿದ ಆದಾಯ ತೆರಿಗೆ ಇಲಾಖೆ ಆಯುಕ್ತೆ ಸೌಮ್ಯ ಆಚಾರ್ ಅಭಿಮತ

ಮೈಸೂರು, ಸೆ.29– ಸಮಾಜದ ಅಭಿವೃದ್ಧಿಗೆ ರಾಜೇಂದ್ರ ಶ್ರೀಗಳ ದೂರದೃಷ್ಟಿ ಪೂರಕವಾಗಿತ್ತು ಎಂದು ಆದಾಯ ತೆರಿಗೆ ಇಲಾಖೆ ಆಯುಕ್ತೆ ಸೌಮ್ಯ ಆಚಾರ್ ಅಭಿಮತ ವ್ಯಕ್ತಪಡಿಸಿದರು.

ಮೈಸೂರು ಜೆಎಸ್‌ಎಸ್ ಆಸ್ಪತ್ರೆಯಲ್ಲಿ ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ 109ನೇ ಜಯಂತಿ ಮಹೋತ್ಸವ ಉದ್ಘಾಟಿಸಿ ಮಾತನಾಡಿದ ಅವರು, ಸಮಾಜದ ಅವಶ್ಯಕತೆಗಳನ್ನೆಲ್ಲಾ ಸರ್ಕಾರಗಳಿಂದ ಪೂರೈಸಲು ಸಾಧ್ಯವಿಲ್ಲ. ಅಂತಹ ಸಂದರ್ಭಗಳಲ್ಲಿ ಸರ್ಕಾರದ ಕೆಲಸಗಳಿಗೆ ಬೆನ್ನೆಲುಬಾಗಿ ನಿಂತಿರುವುದು ಜೆಎಸ್‌ಎಸ್ ಸಂಸ್ಥೆ. ಸ್ವಾತಂತ್ರ್ಯ ಪೂರ್ವದಲ್ಲಿ ಶಿಕ್ಷಣದ ಬಗ್ಗೆ ಶ್ರೀಗಳಿಗೆ ಇದ್ದ ದೂರದೃಷ್ಟಿ ಶ್ಲಾಘನೀಯವಾದುದು. ಆ ಕಾಲದಲ್ಲೇ ರಾಜೇಂದ್ರ ಶ್ರೀಗಳು ಶಿಕ್ಷಣಕ್ಕೆ ಪ್ರೋತ್ಸಾಹ ನೀಡಿದರು. ಪೂಜ್ಯರ ಸಾಧನೆಗಳು, ಆದರ್ಶಗಳನ್ನು ಮುಂದಿನ ಪೀಳಿಗೆಗೆ ತಿಳಿಸಬೇಕು. ನಮ್ಮ ನಿತ್ಯ ಜೀವನದಲ್ಲಿ ಅವುಗಳನ್ನು ಅಳವಡಿಸಿಕೊಳ್ಳಬೇಕು. ಸಮಾಜಕ್ಕೆ ನಮ್ಮಿಂದಾಗುವ ಸೇವೆ ಸಲ್ಲಿಸಬೇಕು ಎಂದರು.



ಮೈಸೂರು ಜೆಎಸ್‌ಎಸ್ ಆಸ್ಪತ್ರೆಯಲ್ಲಿ ಏರ್ಪಡಿಸಿದ್ದ ಶ್ರೀ ಶಿವರಾತ್ರಿ ರಾಜೇಂದ್ರ ಶ್ರೀಗಳ 109ನೇ ಜಯಂತಿ ಮಹೋತ್ಸವವನ್ನು ಆದಾಯ ತೆರಿಗೆ ಇಲಾಖೆ ಆಯುಕ್ತೆ ಸೌಮ್ಯ ಆಚಾರ್, ಶ್ರೀಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಉದ್ಘಾಟಿಸಿದರು.

ಜೆಎಸ್‌ಎಸ್ ಮಹಾವಿದ್ಯಾಪೀಠದ ವೈದ್ಯಕೀಯ ಶಿಕ್ಷಣ ವಿಭಾಗದ ನಿರ್ದೇಶಕ ಆರ್.ಮಹೇಶ್ ಮಾತನಾಡಿ, ರಾಜೇಂದ್ರ ಶ್ರೀಗಳು ಬಡವರಿಗಾಗಿ ಶಾಲಾ ಕಾಲೇಜುಗಳು ಹಾಗೂ ಪ್ರಸಾದ ನಿಲಯಗಳನ್ನು ಸ್ಥಾಪಿಸಿದರು. ಅವರ ಸೇವೆ ಮತ್ತು ಕಾಯಕದಿಂದಲೇ ಜೆಎಸ್‌ಎಸ್ ಸಂಸ್ಥೆ ಇಂದು ಹೆಮ್ಮರವಾಗಿ ಬೆಳೆದಿದೆ ಎಂದರು.

ವಿಶ್ರಾಂತ ಪ್ರಾಧ್ಯಾಪಕ ಡಾ.ಡಿ.ಎಸ್. ಸದಾಶಿವಮೂರ್ತಿ ಮಾತನಾಡಿ, ರಾಜೇಂದ್ರ ಶ್ರೀಗಳು ಲಕ್ಷಾಂತರ ಜನರಿಗೆ ಜ್ಞಾನ, ಅನ್ನ ದಾಸೋಹ ನೀಡಿದರು. 1941ರಲ್ಲಿ 12 ಜನರಿಂದ ಸ್ಥಾಪಿಸಲ್ಪಟ್ಟ ವಿದ್ಯಾರ್ಥಿನಿಲಯ ಇಂದು ಬೃಹದಾಕಾರವಾಗಿ ಬೆಳೆದು 300ಕ್ಕೂ ಹೆಚ್ಚು ಸಂಸ್ಥೆಗಳನ್ನು ಹೊಂದಿದೆ. ಕಷ್ಟದಲ್ಲಿ ಬೆಳೆದು ಸಾಧನೆಗೈದ ಮಹಾನ್ ತ್ಯಾಗಿಗಳು ರಾಜೇಂದ್ರ ಶ್ರೀಗಳು. ತಮ್ಮ ಸುಖಕ್ಕಿಂತ ಪರರ ಸುಖ ಮುಖ್ಯ ಎಂದು ತಿಳಿದು ಜೀವಿಸಿದರು. ಅನಾಥರು, ಬಡವರನ್ನೇ ಭಗವಂತನ ರೂಪದಲ್ಲಿ ಕಂಡವರು ಎಂದು ತಿಳಿಸಿದರು.

ಶ್ರೀಗಳ ಜಯಂತಿ ಅಂಗವಾಗಿ ಪ್ರತಿವರ್ಷದಂತೆ ವಿಶೇಷಚೇತನರಿಗೆ ಜೈನ್ ಮಿಲನ್ ಮತ್ತು ಆಸರೆ ಗ್ರೂಪ್ ವತಿಯಿಂದ ಉಚಿತವಾಗಿ ಕೃತಕಾಂಗಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಜೆಎಸ್‌ಎಸ್ ಮಹಾವಿದ್ಯಾಪೀಠದ ಹಣಕಾಸು ವಿಭಾಗ ನಿರ್ದೇಶಕ ಎಸ್.ಪುಟ್ಟಸುಬ್ಬಪ್ಪ, ಜೈನ್ ಮಿಲನ್ ಗ್ರೂಪ್‌ನ ಹೇಮಂತಕುಮಾರ್ ಬನ್ನಾಲಿ, ಆಸರೆ ಗ್ರೂಪ್‌ನ ನಿತಿನ್, ಆಸ್ಪತ್ರೆ ಸಂದರ್ಶಕ ಸಮಿತಿ ಸದಸ್ಯ ಡಾ.ಹೆಚ್. ಬಸವನಗೌಡಪ್ಪ, ಅಂಗ ಸಂಸ್ಥೆಗಳ ಅಧಿಕಾರಿಗಳು, ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆಯ ವೈದ್ಯರು, ಕೆ.ಎಂ. ಭಗವಾನ್ ಹಾಗೂ ಸಿಬ್ಬಂದಿ ಪಾಲ್ಗೊಂಡಿದ್ದರು. ಡಾ.ಸಿ.ಪಿ.ಮಧು ಸ್ವಾಗತಿಸಿದರು.

ಡಾ.ಮಂಜುನಾಥ್ ವಂದನಾರ್ಪಣೆ ಮಾಡಿದರು. ಜಾನೆಟ್ ಮಥಾಯಿಸ್ ಕಾರ್ಯಕ್ರಮ ನಿರೂಪಿಸಿದರು.

ರಾಜೇಂದ್ರ ಶ್ರೀಗಳ ಭಾವಚಿತ್ರ ಮೆರವಣಿಗೆಗೆ ಚಾಲನೆ



ಸುತ್ತೂರು ಮಠದ ಶ್ರೀ ಶಿವರಾತ್ರಿ ರಾಜೇಂದ್ರ ಶ್ರೀಗಳ ಜಯಂತಿ ಅಂಗವಾಗಿ ಭಾನುವಾರ ಸುತ್ತೂರು ಗ್ರಾಮದಲ್ಲಿ ಆಯೋಜಿಸಿದ್ದ ರಾಜೇಂದ್ರ ಶ್ರೀಗಳ ಭಾವಚಿತ್ರ ಮೆರವಣಿಗೆಗೆ ಸುತ್ತೂರಿನ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ ಆಡಳಿತಾಧಿಕಾರಿ ಎಸ್.ಪಿ.ಉದಯ್‌ಶಂಕರ್ ಚಾಲನೆ ನೀಡಿದರು. ಈ ವೇಳೆ ಗ್ರಾಪಂ ಸದಸ್ಯ ಮಹೇಶ್, ಮಾಜಿ ಸದಸ್ಯ ರಾಜೇಂದ್ರ, ಮುಖಂಡರಾದ ನಾಗರಾಜಪ್ಪ, ಪುನೀತ್, ಮಹದೇಶ್, ಕುಮಾರ್, ಸುನೀಲ್, ಗುರುಪ್ರಸಾದ್ ಇನ್ನಿತರರು ಉಪಸ್ಥಿತರಿದ್ದರು.

ಮೀಸಲಾತಿಯ 105ನೇ ಸಂಭ್ರಮಾಚರಣೆ: ಸಾಧಕರಿಗೆ ನಾನಾ ಪ್ರಶಸ್ತಿ ಪ್ರದಾನ

ಮೈಸೂರು,ಸೆ.29(ಎಂಕೆ)–ಕರ್ನಾಟಕ ರಾಜ್ಯ ಒಕ್ಕಲಿಗರ ವಿಕಾಸ ವೇದಿಕೆ ವತಿಯಿಂದ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಮೀಸಲಾತಿ ಜಾರಿಗೊಳಿಸಿದ 105ನೇ ವರ್ಷದ ಸಂಭ್ರಮಾಚರಣೆ ಹಾಗೂ ವಿವಿಧ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದವರಿಗೆ 'ಯಶೋಧರಮ್ಮ ದಾಸಪ್ಪ', 'ಆದರ್ಶ ಪುರುಷ' ಹಾಗೂ 'ಸೇವಾಭೂಷಣ ಪ್ರಶಸ್ತಿ' ನೀಡಿ ಅಭಿನಂದಿಸಲಾಯಿತು.

ಸಮಾಜ ಸೇವಕಿ ಲಕ್ಷ್ಮಿ ಅಶ್ವಿನ್ ಗೌಡ, ಗಾಯಕಿ ಅನಿತಾ ಸಾರಾ ಮಹೇಶ್, ಉಪನ್ಯಾಸಕಿ ಡಾ.ಸುಮಿತ್ರ, ಸಮಾಜ ಸೇವಕಿರಾದ ಯಶೋಧರಾಜಣ್ಣ, ಸುಜಾತ ಕೃಷ್ಣ, ಕಮಲಮ್ಮ, ಟಿ.ಸಿ.ವಸಂತ, ಪದ್ಮ ಶ್ರೀನಿವಾಸ್, ಜಯಮ್ಮ, ಲೇಖಕಿ ಎಸ್.ಜಿ. ನಯನತಾರ, ಹೆಚ್.ಎಸ್.ಪ್ರತಿಮಾ ಹಾಸನ್, ಶಿಕ್ಷಕಿ ಬಿ.ಆರ್.ಸುಮಿತ್ರ, ವೈದ್ಯರಾದ ಡಾ.ರಮ್ಯ ಏತಡ್ಕ ಡಾ.ಎಸ್. ಸಿಂಚನ ಹಾಗೂ ಲೇಖಕಿ ಎನ್.ಶಾಂತಕುಮಾರಿ ಅವರಿಗೆ 'ಯಶೋಧರಮ್ಮ ದಾಸಪ್ಪ ಪ್ರಶಸ್ತಿ' ನೀಡಲಾಯಿತು.



ಕರ್ನಾಟಕ ರಾಜ್ಯ ಒಕ್ಕಲಿಗರ ವಿಕಾಸ ವೇದಿಕೆ ವತಿಯಿಂದ ಸಾಧಕರಿಗೆ ವಿವಿಧ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಹಾಗೆಯೇ ಕಲಾವಿದ ಗ್ಯಾರಂಟಿ ರಾಮಣ್ಣ, ಅಕ್ಷಯ ಆಹಾರ ಫೌಂಡೇಷನ್‌ನ ರಾಜೇಂದ್ರ, ವೈದ್ಯ ಡಾ.ರುದ್ರೇಶ್, ಸಿ.ರಾಜು, ಸಹಜ ಕೃಷಿಕ ಪ್ರಶಾಂತ್ ಜಯರಾಮ್, ದೇವಾಲಯ ಸಂರಕ್ಷಕ ಖಲೀಮ್ ಉಲ್ಲಾ, ಸಂಘಟಕ ಗೋವಿಂದರಾಜು, ಇಂಜಿನಿಯರ್ ಪಿ.ಚಿಕ್ಕಸಿದ್ದೇಗೌಡ, ಸಾಮಾಜಿಕ ಹೋರಾಟಗಾರ ಬಿ.ಎಸ್. ಫೈರೋಜ್ ಹಾಗೂ ಪರಿಸರ ಸಂರಕ್ಷಕ ಶ್ರೀಕಂಠೇಶ್ ಅವರಿಗೆ 'ಆದರ್ಶ ಪುರುಷ ಪ್ರಶಸ್ತಿ ನೀಡಿ ಅಭಿನಂದಿಸಲಾಯಿತು. ಹಾಗೆಯೇ 20ಕ್ಕೂ ಹೆಚ್ಚು ಮಂದಿಗೆ 'ಸೇವಾಭೂಷಣ ಪ್ರಶಸ್ತಿ' ನೀಡಿ ಸನ್ಮಾನಿಸಲಾಯಿತು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ವೈದ್ಯ ಸಾಹಿತಿ ಡಾ.ಎಸ್.ಪಿ.ಯೋಗಣ್ಣ ಮಾತನಾಡಿ, ನಾಡುಕಂಡ ಅತ್ಯಂತ ಜನಪ್ರಿಯ ಸಮಾಜ ಸೇವಕರಲ್ಲಿ ಪದ್ಮಶ್ರೀ ಯಶೋಧರಮ್ಮ ದಾಸಪ್ಪ ಅವರ ಕೊಡುಗೆ ಸದಾ ಕಾಲಕ್ಕೂ ಅವಿಸ್ಮರಣೀಯ. ಮಹಾತ್ಮ ಗಾಂಧಿಯವರೊಂದಿಗೆ ಸ್ವಾತಂತ್ರ್ಯ ಹೋರಾಟದಲ್ಲಿ ಭಾಗಿಯಾಗಿದ್ದ ಅವರು, ಹಲವಾರು ಸಂಘ–ಸಂಸ್ಥೆಗಳನ್ನು ಕಟ್ಟಿ ಸಮಾಜಕ್ಕೆ ಮಾದರಿಯಾಗಿದ್ದಾರೆ. ಅವರ ಹೆಸರಿನಲ್ಲಿ ಪ್ರಶಸ್ತಿ ನೀಡುತ್ತಿರುವುದು ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಇದೇ ವೇಳೆ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಲಾಯಿತು. ಜೆಡಿಎಸ್ ಮುಖಂಡ ಹೆಚ್.ಕೆ.ರಾಮು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಅಬಕಾರಿ ನಿರೀಕ್ಷಕ ನಾರಾಯಣ ತಿರುಮಲಾಪುರ, ಮೀಸಲಾತಿ ಕುರಿತು ಮಾತನಾಡಿದರು. ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್, ಸುಗಮ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ.ನಾಗರಾಜ್ ವಿ.ಬೈರಿ, ಮೈಸೂರು ವಿವಿ ಪ್ರಸಾರಂಗದ ನಿವೃತ್ತ ಉಪ ನಿರ್ದೇಶಕ ಸ.ರ.ಸುದರ್ಶನ, ಗೌಡತಿಯರ ಸೇನೆ ರಾಜ್ಯಾಧ್ಯಕ್ಷೆ ರೇಣುಕಾ ಟಿ.ಭಕ್ತರಹಳ್ಳಿ, ಕರ್ನಾಟಕ ರಾಜ್ಯ ಒಕ್ಕಲಿಗರ ವಿಕಾಸ ವೇದಿಕೆ ರಾಜ್ಯಾಧ್ಯಕ್ಷೆ ಹೆಚ್.ಎಲ್.ಯಮುನಾ, ಉದ್ಯಮಿ ಚನ್ನಪ್ಪಾಜಿ, ನಿಖಿಲ್‌ಕುಮಾರಸ್ವಾಮಿ ಅಭಿಮಾನಿ ಬಳಗದ ಅಧ್ಯಕ್ಷ ಪ್ರದೀಪ್ ಕೃಷ್ಣೇಗೌಡ, ಡಾ.ಬಲ್ಲೇನಹಳ್ಳಿ ವಿಜಯ ಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

ಬಿಜೆಪಿ ಸದಸ್ಯತ್ವ ಅಭಿಯಾನ



ಮೈಸೂರು ಬಿಜೆಪಿ ವತಿಯಿಂದ ಚಾಮರಾಜ ಕ್ಷೇತ್ರದ ವಾರ್ಡ್ ನಂ.23ರ ಪಾಲಿಕೆ ಮಾಜಿ ಸದಸ್ಯೆ ಪ್ರಮೀಳಾ ಭರತ್ ನೇತೃತ್ವದಲ್ಲಿ ನಾರಾಯಣ ಶಾಸ್ತ್ರಿ ರಸ್ತೆಯಲ್ಲಿರುವ ಶ್ರೀ ರಾಘವೇಂದ್ರ ಸ್ವಾಮಿ ಮಠದ ಸಮೀಪ ಬಿಜೆಪಿ ಸದಸ್ಯತ್ವ ಅಭಿಯಾನ ನಡೆಯಿತು. ಈ ವೇಳೆ ಬಿಜೆಪಿ ನಗರ ಉಪಾಧ್ಯಕ್ಷ ಜೋಗಿ ಮಂಜು, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಅಪೂರ್ವ ಸುರೇಶ್, ವಿಘ್ನೇಶ್ವರ ಭಟ್, ಸುದರ್ಶನ್, ಚರಣ್, ಶ್ರೀನಿವಾಸ್, ರಾಮು, ಸುಚೇಂದ್ರ ಇನ್ನಿತರರಿದ್ದರು.

ಆದರ್ಶ ಶಿಕ್ಷಕ ಪ್ರಶಸ್ತಿ




ರೋಟರಿ ಮೈಸೂರು ಉತ್ತರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಶಿಕ್ಷಕರಾದ ವೇದವಲ್ಲಿ ಇಂದುಮತಿ, ಬೆಟ್ಟಸ್ವಾಮಿ, ನಿಶಾಂತ್ ಎ.ನಾಯ್ಡು, ಸತೀಶ್ ಅವರಿಗೆ ಆದರ್ಶ ಶಿಕ್ಷಕ ಪ್ರಶಸ್ತಿ ನೀಡಿ ಗೌರವಿಸಲಾಯಿತು. ನಿವೃತ್ತ ಪ್ರಾಧ್ಯಾಪಕ ರೊ.ಡಾ.ಎಂ.ಎನ್.ಭೀಮೇಶ್, ರೋಟರಿ ಉತ್ತರದ ಅಧ್ಯಕ್ಷ ಪಿ.ಪ್ರಭಾಕರ್, ಸದಸ್ಯರಾದ ರಾಜಶೇಖರ ಕದಂಬ, ಚಿನ್ನಸ್ವಾಮಿ, ರಾಮಾರಾಧ್ಯ, ಚಂದ್ರಶೇಖರ್, ಚನ್ನಬಸವರಾಜ್ ಉಪಸ್ಥಿತರಿದ್ದರು.

ರಾಮಣ್ಣ ನಿಧನ



ಮೈಸೂರು, ಸೆ.29– ಮೈಸೂರಿನ ಕನಕಗಿರಿ ನಿವಾಸಿ, ಸಿವಿಲ್ ಕಂಟ್ರಾಕ್ಟರ್ ರಾಮಣ್ಣ(65) ಭಾನುವಾರ ನಿಧನರಾದರು. ಮೃತರು ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸೋಮವಾರ ಮಧ್ಯಾಹ್ನ ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ರುದ್ರಭೂಮಿಯಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...




ಇಂದಿನ ಪಂಚಾಂಗ

30.09.2024 ಸೋಮವಾರ, ಮಳೆ ನಕ್ಷತ್ರ: ಹಸ್ತ, 27.09.2024ರಿಂದ 09.10.2024
ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ವರ್ಷ ಋತು, ಭಾದ್ರಪದ ಮಾಸ, ಕೃಷ್ಣ ಪಕ್ಷ,
ತಿಥಿ: ತ್ರಯೋದಶಿ, ನಕ್ಷತ್ರ: ಮಖ, ರಾಹುಕಾಲ : ಬೆಳಗ್ಗೆ 7.30ರಿಂದ 9ರವರೆಗೆ

- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಸಂಧಿವಾತ, ಮಂಡಿ ನೋವು, ಕೀಲು ನೋವು ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಆಲನಹಳ್ಳಿ, ಬೆಳಗ್ಗೆ 9 ಗಂಟೆಯಿಂದ.
- **ರಾಮ್‌ಸನ್ಸ್ ಪ್ರತಿಷ್ಠಾನ :** ಬೊಂಬೆ ಮನೆ, ದಸರೆಯ ಬೊಂಬೆ ಪ್ರದರ್ಶನದ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ಆಮ್ರಪಾಲಿ ಸೀರೆ ಮಳಿಗೆಯ ಮೇಲೆ, ನಜರ್‌ಬಾದ್, ಬೆಳಗ್ಗೆ 10ರಿಂದ ಸಂಜೆ 7 ರವರೆಗೆ.
- **ಅನ್ವೇಷಣಾ ಸೇವಾ ಟ್ರಸ್ಟ್:** ವಿಧಾನಪರಿಷತ್ ಸದಸ್ಯರಾದ ಡಾ. ಡಿ.ತಿಮ್ಮಯ್ಯ ಸಂಪಾದಿಸಿರುವ ಅರಸು ಚುಟುಕು ಸ್ಪರ್ಶಗಳು ಕೃತಿ ಲೋಕಾರ್ಪಣೆ ಮತ್ತು ಸಾಧಕರಿಗೆ ಧ್ವನಿ ಕೊಟ್ಟ ಧಣಿ ಪ್ರಶಸ್ತಿ ಪ್ರದಾನ ಸಮಾರಂಭ, ಉದ್ಘಾಟನೆ: ಮಾಜಿ ಸಚಿವ ಪಿಜಿಆರ್ ಸಿಂಧ್ಯಾ, ದೇವರಾಜು ಅರಸು ಭಾವಚಿತ್ರಕ್ಕೆ ಪುಷ್ಪಾರ್ಚನೆ: ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ, ಕೃತಿ ಲೋಕಾರ್ಪಣೆ ಮತ್ತು ಧ್ವನಿ ಕೊಟ್ಟ ಧಣಿ ಪ್ರಶಸ್ತಿ ಪ್ರದಾನ: ವಿಶ್ರಾಂತ ಕುಲಪತಿ ಡಾ.ಕೆ.ಚಿದಾನಂದಗೌಡ, ಅಧ್ಯಕ್ಷತೆ: ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್, ಸ್ಥಳ: ದಿ ಇನ್‌ಸ್ಟಿಟ್ಯೂಟ್ ಆಫ್ ಇಂಜಿನಿಯರ್ಸ್, ಜೆಎಲ್‌ಬಿ ರಸ್ತೆ, ಬೆಳಗ್ಗೆ 9.30ಕ್ಕೆ.
- **ಕರ್ನಾಟಕ ಸೇನಾ ಪಡೆ:** ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಜಯಂತಿ ಅಂಗವಾಗಿ ವಿವಿಧ ಕ್ಷೇತ್ರಗಳ ಸಾಧಕರಿಗೆ ಡಿ.ದೇವರಾಜ ಅರಸು ಸೇವಾ ರತ್ನ ಪ್ರಶಸ್ತಿ ಪ್ರದಾನ, ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು (ಸ್ವಾಯತ್ತ) ವಿದ್ಯಾರ್ಥಿನಿಯರಿಗೆ ಪ್ರತಿಭಾ ಪುರಸ್ಕಾರ, ದಿವ್ಯ ಸಾನ್ನಿಧ್ಯ: ಮೈಸೂರಿನ ಯೋಗ ನರಸಿಂಹಸ್ವಾಮಿ ಸಂಸ್ಥಾಪಕರಾದ ಡಾ.ಭಾಷ್ಯಂ ಸ್ವಾಮೀಜಿ, ಉದ್ಘಾಟನೆ: ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ, ಸ್ಥಳ: ರೋಟರಿ ಶಾಲೆ ಆವರಣ, ಜೆಎಲ್‌ಬಿ ರಸ್ತೆ, ಬೆಳಗ್ಗೆ 11.30ಕ್ಕೆ.
- **ಹಾ.ಮಾ.ನಾ ಪ್ರತಿಷ್ಠಾನ (ಮೈಸೂರು), ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ, ಮೈಸೂರು ವಿಶ್ವವಿದ್ಯಾನಿಲಯ:** ಡಾ.ಹಾ.ಮಾ.ನಾಯಕ ಸ್ಮಾರಕ ಉಪನ್ಯಾಸ, ಖ್ಯಾತ ವಿಜ್ಞಾನಿ ಡಾ.ಕೆ.ಜೆ.ರಾವ್ ಅವರಿಂದ 'ಮೆದುಳೇ ಜೀವಜಾತದ ಪ್ರಧಾನಾಂಗ' ವಿಷಯ ಕುರಿತು ಉಪನ್ಯಾಸ, ಅಧ್ಯಕ್ಷತೆ: ಹಾ.ಮಾ.ನಾ ಪ್ರತಿಷ್ಠಾನದ ಅಧ್ಯಕ್ಷರಾದ ಎಸ್.ಎಲ್. ಭೈರಪ್ಪ, ಸ್ಥಳ: ಐನ್‌ಸ್ಟೈನ್ ಸಭಾಂಗಣ, ಭೌತವಿಜ್ಞಾನ ವಿಭಾಗ, ಮಾನಸಗಂಗೋತ್ರಿ. ಸಂಜೆ 4 ಗಂಟೆಗೆ.
- **ಹಳೇ ಬೇರು ಹೊಸ ಚಿಗುರು ಕಲ್ಚರಲ್ ಟ್ರಸ್ಟ್, ಮೈಸೂರು:** ನುರಿತ ಕಲಾವಿದರಿಂದ ಕನ್ನಡ–ಹಿಂದಿ ಹಾಡುಗಳ SOMಗೀತಾ ಸಮ್ಮಿಲನ ಕಾರ್ಯಕ್ರಮ, ಉದ್ಘಾಟನೆ: ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಅಧ್ಯಕ್ಷತೆ: ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್, ಸ್ಥಳ: ನಾದಬ್ರಹ್ಮ ಸಂಗೀತಾ ಸಭಾ, ಜೆಎಲ್‌ಬಿ ರಸ್ತೆ, ಸಂಜೆ 5 ಗಂಟೆಗೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10–ಚಿಂತನ, ಗುಡಿಹಳ್ಳಿ ನಾಗರಾಜ್, 6.15–ಗೀತಾರಾಧನ, 6.35 ಮತ್ತು ಸಂಜೆ 6.10: "ಅಂಚೆ– ಅಂಕನ", ಆಕಾಶವಾಣಿ ಅಂಕಣ ಪ್ರಸ್ತುತಿ: ಡಾ.ಅಮ್ಮಸಂದ್ರ ಸುರೇಶ ಹಾಗೂ ಎಂ.ಎನ್. ವಿಜಯಲಕ್ಷ್ಮಿ, ಪ್ರಾಯೋಜಕರು: ಭಾರತೀಯ ಅಂಚೆ, ಮೈಸೂರು ವಿಭಾಗ, 6.40–ಅರಿವಿನ ಶಿಖರ: ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ: ಕೆ.ಶ್ರೇಯಾ, ವ್ಯಾಖ್ಯಾನ: ಡಾ.ಹೆಚ್.ಎಂ.ಕಲಾಶ್ರೀ, 6.50–ರೈತರಿಗೆ ಸಲಹೆ, 7.15– ನಮ್ಮ ಆರೋಗ್ಯ–ರಾಷ್ಟ್ರೀಯ ಸ್ವಯಂಪ್ರೇರಿತ ರಕ್ತದಾನ ದಿನದ ಸಂದರ್ಭದಲ್ಲಿ "ರಕ್ತದಾನ ಮಹಾದಾನ" ಕುರಿತು ಮೈಸೂರು ಜಿಲ್ಲಾ ಆಸ್ಪತ್ರೆಯ ರಕ್ತನಿಧಿ ಅಧಿಕಾರಿ ಡಾ.ಬಿ.ಎಸ್.ಮಂಜುನಾಥ್ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ: ಬೇದ್ರೆ ಮಂಜುನಾಥ್, 8.30–ಕನ್ನಡ ಚಿತ್ರಗೀತೆಗಳು, 9.00–ನೆನಪಿನಂಗಳ–ಧ್ವನಿ ಭಂಡಾರದಿಂದ ಗಾನರಸೋಲ್ಲಾಸ ಕುರಿತ ಹಿರಿಯ ಸಂಗೀತ ಶಾಸ್ತ್ರಜ್ಞೆ ಟಿ.ಎಸ್.ಸತ್ಯವತಿ ಅವರ ಉಪನ್ಯಾಸದ ಧ್ವನಿಮುದ್ರಣ, 10.00–ಕರ್ನಾಟಕ ಶಾಸ್ತ್ರೀಯ ಸಂಗೀತ: ವಿ.ವಂಶೀಧರ್–ಕೊಳಲು ವಾದನ, 11.00–ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ನೇರ ಫೋನ್ ಇನ್ ಕಾರ್ಯಕ್ರಮ, ಗೇಮ್ ಶೋ, ಪ್ರಸ್ತುತಿ: ದಿಗ್ವಿಜಯ್. ಬಿ ಮತ್ತು ಕೀರ್ತನಾ. ವಿ, 12.05–ವನಿತಾ ವಿಹಾರ, 1. ಕಾಶಿಯಾತ್ರೆ–ಕಥೆ ಬರೆದು ಪ್ರಸ್ತುತಪಡಿಸುತ್ತಾರೆ ಪಾರ್ವತಿ ಪಿಟಗಿ. 2. ಭಾವಗೀತೆ, 12.30–ದೇವರನಾಮ–ಶ್ರೀಲಕ್ಷ್ಮೀ. ಬಿ, 12.45–ನಮ್ಮ ಆರೋಗ್ಯ: ವಿಶ್ವ ಹಿರಿಯರ ದಿನದ ಸಂದರ್ಭದಲ್ಲಿ "ಹಿರಿಯ ನಾಗರಿಕರ ಆರೋಗ್ಯ ರಕ್ಷಣೆ" ಕುರಿತು ಮೈಸೂರಿನ ಪೀಪಲ್ಸ್ ಅಸೋಸಿಯೇಷನ್ ಫಾರ್ ಜೀರಿಯಾಟ್ರಿಕ್ ಎಂಪವರ್ಮೆಂಟ್ ಸಂಸ್ಥೆಯ ಅಧ್ಯಕ್ಷ ಡಾ. ಹನುಮಂತಾಚಾರ್ ಜೋಷಿ. ಕೆ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ: ಬೇದ್ರೆ ಮಂಜುನಾಥ್, 1.00–ಚಿತ್ರಗೀತೆಗಳು, 1.20–ಭಾವಗೀತೆಗಳು, ಕೆ.ಶ್ರೇಯಾ ಭಟ್, 2.40–ಚಿತ್ರಗೀತೆಗಳು, 3.00–ಕರ್ನಾಟಕ ಶಾಸ್ತ್ರೀಯ ಸಂಗೀತ: ಆರ್.ಮೋಹನ್, ಕ್ಲಾರಿಯೋನೆಟ್ ವಾದನ, 4.00–ಮಹಿಳಾರಂಗ: "ನಾನು ನನ್ನ ಕಂಪನಿ" ಬೋಂಡ ಬಜ್ಜಿ ಮಾರಿ ಬದುಕುತ್ತಿರುವ ಕುಸುಮಾ ಅವರೊಂದಿಗೆ ಮಾತುಕತೆ, ಪ್ರಸ್ತುತಿ: ಸಹನ, 4.45–ಹಿಂದಿ ಪಾಠ–ಎಸ್.ಈಶ್ವರಭಟ್, 6.50–ಕೃಷಿರಂಗ: ಮದ್ದೂರು ತಾಲೂಕು, ಕೊಪ್ಪ ಹೋಬಳಿ, ಕೋಣಸಾಲೆ ಶಿವಾರ ಕಾಲೋನಿ ಸಮೀಪದ ಸಂಧ್ಯಾಕೃಷ್ಣ ನೈಸರ್ಗಿಕ ತೋಟದಲ್ಲಿ ನಡೆದ ಬಾನುಲಿ ಕೃಷಿ ಬೆಳಗು ಕಾರ್ಯಕ್ರಮದ ಬಾನುಲಿ ವರದಿ. ಪ್ರಸ್ತುತಿ: ಆರ್.ಲೋಕೇಶ್ವರಿ ನಿರ್ವಹಣೆ: ಎನ್.ಕೇಶವಮೂರ್ತಿ, 7.45–ಕನ್ನಡದಲ್ಲಿ ಭಾಷಣ, 9.30–ಕರ್ನಾಟಕ ಶಾಸ್ತ್ರೀಯ ಸಂಗೀತ: ವಿ.ವಿ.ಸುಬ್ರಹ್ಮಣ್ಯಂ–ವಯೋಲಿನ್, 10.00–ನಾಟಕ, 10.30–ಸವಿನೆನಪು

ಮೈಸೂರಲ್ಲಿ ನಿಷೇಧಾಜ್ಞೆ ನಡುವೆಯೂ ಮಹಿಷಾ ಮಂಡಲೋತ್ಸವ


ಯಾವ ರೀತಿ ದಸರಾ ಆಚರಿಸುತ್ತೀರೋ ನೋಡೋಣ

ಜಿಲ್ಲಾಡಳಿತಕ್ಕೆ ಮಾಜಿ ಮೇಯರ್ ಪುರುಷೋತ್ತಮ್ ಸವಾಲು

ಮೈಸೂರು, ಸೆ.29(ಎಂಟಿವೈ)– ಮಹಿಷ ದಸರಾ ಆಚರಿಸಲು ಅವಕಾಶ ನೀಡದಿರುವ ಹಿನ್ನೆಲೆಯಲ್ಲಿ ಈ ಬಾರಿಯ ನಾಡಹಬ್ಬ ದಸರಾ ಉತ್ಸವಕ್ಕೆ ಅಡ್ಡಿಪಡಿಸುವುದಾಗಿ ಮಹಿಷ ದಸರಾ ಆಚರಣಾ ಸಮಿತಿ ಅಧ್ಯಕ್ಷ, ಮಾಜಿ ಮೇಯರ್ ಪುರುಷೋತ್ತಮ್ ಎಚ್ಚರಿಕೆ ನೀಡಿದ್ದಾರೆ.

ಮೈಸೂರಿನ ಪುರಭವನದ ಆವರಣದಲ್ಲಿ ಮಹಿಷ ದಸರಾ ಆಚರಣಾ ಸಮಿತಿ ವತಿಯಿಂದ ಭಾನುವಾರ ಆಯೋಜಿಸಿದ್ದ ಮಹಿಷ ಮಂಡಲೋತ್ಸವ (ಮಹಿಷ ದಸರಾ) ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಹಿಷಾ ದಸರಾ ಕಾರ್ಯಕ್ರಮವನ್ನು ಆಚರಿಸಲು ನಮಗೆ ಈ ಬಾರಿಯೂ ಅವಕಾಶ ನೀಡಿಲ್ಲ. ಮಹಿಷಾ ದಸರಾ ಆಚರಣೆಗೆ ಅವಕಾಶ ನೀಡದೇ ಇದ್ದರೆ, ದಸರಾ ಉತ್ಸವಕ್ಕೆ ಅಡ್ಡಿಪಡಿಸಬೇಕಾಗುತ್ತದೆ. ನೀವು ಯಾವ ರೀತಿ ದಸರಾ ಆಚರಿಸುತ್ತಿರೋ ನಾವು ನೋಡುತ್ತೇವೆ. ದಸರಾ ಉದ್ಘಾಟನೆ ಹೇಗೆ ಮಾಡುತ್ತಿರೋ ನೋಡೋಣ. ಈ ವಿಚಾರವಾಗಿ ಜಿಲ್ಲಾಡಳಿತಕ್ಕೆ ಸವಾಲು ಹಾಕುತ್ತೇವೆ. ದಸರಾವನ್ನು ನಾವು ಧಿಕ್ಕರಿಸಬೇಕು. ಅಗತ್ಯ ಬಿದ್ದರೆ ಪ್ರಾಣ ತ್ಯಾಗ್ಯ ಮಾಡಲು ಸಿದ್ಧರಿರುತ್ತೇವೆ ಎಂದು ಗುಡುಗಿದರು.

ದಸರಾ ಉದ್ಘಾಟನೆ ಹಾಗೂ ಜಂಬೂ ಸವಾರಿ ಮೆರವಣಿಗೆಯನ್ನು ಹೇಗೆ ಮಾಡುತ್ತೀರೋ ನಾವು ನೋಡುತ್ತೇವೆ. ದಸರಾ ವೀಕ್ಷಣೆಗೆ ವಿವಿಧೆಡೆಯಿಂದ ಬರುವವರನ್ನು ತಡೆಯುತ್ತೇವೆ. ಪೊಲೀಸರು ಹಾಗೂ ಜಿಲ್ಲಾಡಳಿತದಿಂದ ನಮ್ಮ ಮೇಲೆ ದೌರ್ಜನ್ಯ ನಡೆಯುತ್ತಿದೆ. ಹಾಗಾಗಿ ಈ ಬಾರಿ ದಸರಾ ಉತ್ಸವ ನಡೆಸಲು ಬಿಡುವುದಿಲ್ಲ ಎಂಬ ಸಂದೇಶ ನೀಡೋಣ. ದಸರಾ ಉತ್ಸವಕ್ಕೆ ಬರುವ ಬಸ್, ರೈಲುಗಳನ್ನು ತಡೆಯಬೇಕು ಎಂದು ಕರೆ ನೀಡಿದರು.


ಮೈಸೂರಿನ ಪುರಭವನದ ಆವರಣದಲ್ಲಿ ನಡೆದ ಮಹಿಷ ದಸರಾ ಕಾರ್ಯಕ್ರಮದಲ್ಲಿ ಗೌತಮ ಬುದ್ಧರ ವಿಗ್ರಹಕ್ಕೆ ಪುಷ್ಪಾರ್ಚನೆ ಮಾಡುತ್ತಿರುವುದು.

ಮಹಿಷಾ ದಸರಾ ಕಾರ್ಯಕ್ರಮ ಬಹಳ ದೊಡ್ಡ ಮಟ್ಟದಲ್ಲಿ ನಡೆಯಬೇಕಾಗಿತ್ತು. ಆದರೆ, ಸರ್ಕಾರ ಅವಕಾಶ ಮಾಡಿಕೊಡಲಿಲ್ಲ. ನಮ್ಮ ಭಾವನೆಗಳಿಗೆ ಧಕ್ಕೆ ತರಲಾಗಿದೆ. ಮಹಿಷನನ್ನು ಗೌರವಿಸಲು ದೊಣ್ಣೆ ನಾಯಕರ ಅಪ್ಪಣೆ ಬೇಕಾಗಿಲ್ಲ. ನಾವು ಯಾವುದೇ ಧರ್ಮದ ವಿರುದ್ಧ ಮಾತನಾಡುವುದಿಲ್ಲ, ಶಾಂತಿ ಪ್ರಿಯರಾದ ಬುದ್ಧ ಹಾಗೂ ಡಾ.ಅಂಬೇಡ್ಕರ್ ಅವರ ಅನುಯಾಯಿಗಳು ನಾವು. ಹಾಗಂತ ನಮ್ಮ ತಾಳ್ಮೆ ಪರೀಕ್ಷೆ ಮಾಡಬೇಡಿ. ದಸರಾ ಜಂಬೂಸವಾರಿ ನಡೆಯುವ ಅ.12ರಂದು ಅಶೋಕ ಚಕ್ರವರ್ತಿಯ ಭಾವಚಿತ್ರ ಇಟ್ಟು ಅಶೋಕಪುರಂ ಉದ್ಯಾನದಿಂದ ಪುರಭವನದವರೆಗೆ ಜಂಬೂಸವಾರಿಗೆ ಪರ್ಯಾಯವಾಗಿ ಮೆರವಣಿಗೆ ನಡೆಸಲಾಗುವುದು. ಈ ಮೆರವಣಿಗೆಗೆ ಜಿಲ್ಲಾಡಳಿತ ಅನುಮತಿ ನೀಡಬೇಕು. ಇಲ್ಲದಿದ್ದರೆ ಜಂಬೂಸವಾರಿ ಮೆರವಣಿಗೆ ನಿಲ್ಲಿಸಬೇಕು. ವಿಜಯ ದಶಮಿ ಅಶೋಕನ ವಿಜಯದಶಮಿ. ಹಾಗಾಗಿ ವಿಜಯದಶಮಿ ದಿನದಂದು ಅಶೋಕ ಚಕ್ರವರ್ತಿಯ ಭಾವಚಿತ್ರದೊಂದಿಗೆ ಮೆರವಣಿಗೆ ನಡೆಸೋಣ ಎಂದು ಕರೆ ನೀಡಿದರು.

ಮೈಸೂರಿನ ಗಾಂಧಿನಗರದ ಉರಿಲಿಂಗಿ ಪೆದ್ದಿ ಮಠದ ಶ್ರೀ ಜ್ಞಾನ ಪ್ರಕಾಶ ಸ್ವಾಮೀಜಿ ಮಾತನಾಡಿ, ನಮ್ಮ ಚರಿತ್ರೆ ಹಾಗೂ ಇತಿಹಾಸ ಮರೆತರೆ ನಮಗೆ ಎಂತಹ ಶಿಕ್ಷೆ ಆಗುತ್ತದೆ ಎಂಬುದಕ್ಕೆ ಮಹಿಷ ದಸರಾ ಸಾಕ್ಷಿಯಾಗಿದೆ. ನಾವು ಇತಿಹಾಸ ಹಾಗೂ ಚರಿತ್ರೆ ಮರೆತ ಹಿನ್ನೆಲೆಯಲ್ಲಿ ನಾವು ಬೇಡುವ ಸ್ಥಿತಿಯಲ್ಲಿ ಇದ್ದೇವೆ. ಜಿಲ್ಲಾಡಳಿತ ಮಹಿಷ ದಸರಾಗೆ ಅಡ್ಡಿಪಡಿಸಿದೆ. ಇದು ಮಹಿಷನ ಸಮಸ್ಯೆಯಲ್ಲ. ಬದಲಾಗಿ ಇದು ರಾಜಕೀಯ ಪಕ್ಷಗಳ ಮತದ ಸಮಸ್ಯೆಯಾಗಿದೆ ಹಿಂದುತ್ವ ಹಾಗೂ ಜಾತ್ಯತೀತ ಎಂಬುದು ಓಟ್ ಬ್ಯಾಂಕ್ ಆಗಿದೆ ಈ ಕಾರಣಕ್ಕೆ ಮಹಿಷ ದಸರಾಗೆ ಅಡ್ಡಿ ಪಡಿಸಲಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮಹಿಷನನ್ನು ದೆವ್ವ ಅಂದವನಿಗೆ ಶಾಪ ತಟ್ಟಿದೆ. ಮಹಿಷನನ್ನು ಪ್ರಾರ್ಥಿಸುವವರಿಗೆ ಮಹಿಷನಂತಹ ಮಕ್ಕಳು ಹುಟ್ಟಲಿ ಎಂದು ಹಾರೈಸಿದ್ದಾರೆ. ಅವರ ಹಾರೈಕೆಯಂತೆ ನಮಗೆ ಮಹಿಷನಂತಹ ಮಕ್ಕಳೇ ಹುಟ್ಟಲಿ. ಆದರೆ, ಅವರು ಗಣಪತಿ, ಆಂಜನೇಯನನ್ನು ಪೂಜಿಸುತ್ತಾರೆ. ಒಂದು ವೇಳೆ ಗಣಪತಿ ಹಾಗೂ ಆಂಜನೇಯನಂತಹ ಮಕ್ಕಳು ಅವರಿಗೆ ಹುಟ್ಟಿದರೆ ಆ ಮಕ್ಕಳನ್ನು ಕರೆದುಕೊಂಡು ವಾಕಿಂಗ್ ಹೋಗಲು ಸಾಧ್ಯವೇ ಎಂದು ವಾಗ್ದಾಳಿ ನಡೆಸಿದರು.

ಮಹಿಷಾಸುರ ಅತ್ಯಂತ ಶೂರನಾದ ವ್ಯಕ್ತಿ. ಹರಿಹರ, ಬ್ರಹ್ಮನನ್ನೇ ಅಟ್ಟಾಡಿಸಿಕೊಂಡು ಹೊಡೆದಿದ್ದಾನೆ. ಮಹಿಷನನ್ನು ಕಂಡರೆ ಎಲ್ಲರಿಗೂ ಭಯ ಇತ್ತು. ಅಂತಹ ಶೂರ ವ್ಯಕ್ತಿಯನ್ನು ನಾವು ಆರಾಧಿಸುತ್ತಿದ್ದೇವೆ. ಮಹಿಷಾಸುರನ ವಿರುದ್ಧ ಸುಳ್ಳಿಯ ಇತಿಹಾಸವನ್ನು ಸೃಷ್ಟಿಸಲಾಗುತ್ತಿದ್ದು, ನಾವು ಜನತೆಗೆ ಸತ್ಯ ತಿಳಿಸಬೇಕು ಎಂದರು.

ಲೇಖಕ ಯೋಗೇಶ್ ಮಾಸ್ಟರ್ ಮಾತನಾಡಿ, ಮಹಾರಾಷ್ಟ್ರದಲ್ಲಿ ಮಹಿಷನ ದೇವಸ್ಥಾನ ಇದೆ. ಮಹಿಷನ ಬಗ್ಗೆ ಮರೆಮಾಚಿರುವ ಇತಿಹಾಸ ಹೊರತರುವ ಕಾರ್ಯ ಆಗಬೇಕು. ಜನರನ್ನು ರಕ್ಷಣೆ ಮಾಡುತ್ತಿದ್ದವರನ್ನೇ ರಾಕ್ಷಸರು ಎಂದು ಬಿಂಬಿಸಲಾಗಿದೆ. ಒಂದು ವರ್ಗ ರಾಕ್ಷಸರ ಕುರಿತು ಕೆಟ್ಟದಾಗಿ ಬಿಂಬಿಸಿರುವುದನ್ನು ನಾವು ಗಂಭೀರವಾಗಿ ಪರಿಗಣಿಸುವ ಅವಶ್ಯಕತೆ ಇಲ್ಲ ಎಂದರು.

ಚಂಡ ಮುಂಡರನ್ನು ಕೊಂದವಳು ಚಾಮುಂಡಿ. ಆದರೆ, ಆಕೆ ಮಹಿಷ ಮರ್ಧಿನಿ ಹೇಗೆ ಆದಳು ಎಂಬುದಕ್ಕೆ ಉತ್ತರ ಕಂಡುಕೊಳ್ಳಬೇಕು. ಚಾಮುಂಡಿಬೆಟ್ಟದಲ್ಲಿರುವುದು ಚಾಮುಂಡೇಶ್ವರಿಯೋ ಅಥವಾ ಯಕ್ಷಿಣಿಯೋ ಎಂದು ತಿಳಿದುಕೊಳ್ಳುವ ಪ್ರಯತ್ನ ಮಾಡಬೇಕು ಎಂದು ಹೇಳಿದರು.

ಲೇಖಕ ಶಿವಸುಂದರ್ ಮಾತನಾಡಿ, ನಮ್ಮ ಆಚರಣೆಗಳಿಗೆ ಯಾವುದೇ ಸರ್ಕಾರ ಅಡ್ಡಿಪಡಿಸಬಾರದು. ಇದು ಮೂಲಭೂತ ಹಕ್ಕಿನ ಮೊಟಕಾಗಿದೆ. ನನ್ನ ದೇವರನ್ನು ಪೂಜಿಸಿದರೆ ನಿಮಗೆ ನೋವಾಗುತ್ತದೆ ಎಂದರೆ ನಾವು ಏನು ಮಾಡಲು ಸಾಧ್ಯ? ನಾವು ಮಹಿಷನನ್ನು ಪೂಜೆ ಮಾಡಿದರೆ ಬೇರೆಯವರ ಭಾವನೆಗೆ ಹೇಗೆ ಧಕ್ಕೆ ಉಂಟಾಗಲು ಸಾಧ್ಯ? ನಮ್ಮ ದೇವರನ್ನು ರಾಕ್ಷಸರು ಎಂದು ಬಿಂಬಿಸಿ ನಮ್ಮನ್ನು ಮತ್ತೆ ದಾಸ್ಯಕ್ಕೆ ದೂಡುವ ಪ್ರಯತ್ನ ನಡೆಯುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಬುದ್ಧ ವಿಹಾರದ ಬೋಧಿದತ್ತ ಬಂತೇಜಿ, ಪ್ರಗತಿಪರ ಚಿಂತಕ ಕೆ.ಎಸ್. ಭಗವನಾನ್, ಇತಿಹಾಸ ತಜ್ಞ ಪ್ರೊ.ನಂಜರಾಜೇ ಅರಸ್, ಚಿಂತಕ ಚಿನ್ನಸ್ವಾಮಿ ಹಾಗೂ ಇತರರು ಇದ್ದರು.

ಶೂದ್ರರಿಗೆ ಮಾನ–ಮರ್ಯಾದೆ ಇದ್ರೆ ಬ್ರಾಹ್ಮಣರ ದೇಗುಲಕ್ಕೆ ಹೋಗಬಾರದು

ಮತ್ತೆ ನಾಲಗೆ ಹರಿಬಿಟ್ಟ ಕೆ.ಎಸ್.ಭಗವಾನ್

ಮೈಸೂರು, ಸೆ.29– ಹಿಂದೂ ಧರ್ಮ ಅಂದರೆ ಅದು ಹಿಂದೂಗಳ ಧರ್ಮ ಅಲ್ಲ, ಬ್ರಾಹ್ಮಣರ ಧರ್ಮ. ಹಿಂದೂ ಎಂದರೆ ಹಿಂದಕ್ಕೆ ಹೋಗುವ ಜನ ಎಂದು ಮಹಿಷ ದಸರಾ ಕಾರ್ಯಕ್ರಮದಲ್ಲಿ ಸಾಹಿತಿ ಪ್ರೊ.ಕೆ.ಎಸ್. ಭಗವಾನ್ ಮತ್ತೆ ನಾಲಗೆ ಹರಿಬಿಟ್ಟಿದ್ದಾರೆ.

ಮೈಸೂರಿನ ಟೌನ್‌ಹಾಲ್‌ನಲ್ಲಿ ಆಯೋಜಿಸಿರುವ ಮಹಿಷ ದಸರಾ ವೇದಿಕೆ ಕಾರ್ಯಕ್ರಮದಲ್ಲಿ ಮಾತನಾಡಿದ ಕೆಎಸ್ ಭಗವಾನ್, ಬೌದ್ಧರನ್ನು ಹೊಗಳುವ ಭರದಲ್ಲಿ ಹಿಂದೂ ಧರ್ಮದ ಬಗ್ಗೆ ಮತ್ತೆ ನಾಲಿಗೆ ಹರಿಬಿಟ್ಟರು.

ಜ್ಞಾನದ ಹಸಿವು ಇಲ್ಲದ ಕಾರಣ ಹಲವರು ಬ್ರಾಹ್ಮಣರ ಗುಲಾಮರಾಗಿದ್ದಾರೆ. ಹಿಂದೂಗಳೆಂದರೆ ಹಿಂದಕ್ಕೆ ಹೋಗುವ ಜನ. ತಾವೂ ಮುಂದಕ್ಕೆ ಬಾರದೆ, ಬೇರೆಯವರನ್ನು ಮುಂದಕ್ಕೆ ಬಿಡದ ಜನ. ಗಂಡಸರನ್ನು ಮಾತ್ರ ಬ್ರಾಹ್ಮಣರು ಅಂತಾರೆ. ಹೆಂಗಸರನ್ನು ಬ್ರಾಹ್ಮಣರು ಅನ್ನುವುದಿಲ್ಲ. ಅವರನ್ನು ಸಹ ಶೂದ್ರರು ಅಂತಾರೆ. ದೇವಸ್ಥಾನ ಕಟ್ಟೋದು ಶೂದ್ರರು. ದೇವಸ್ಥಾನದ ಒಳಗೆ ಇರೋರು ಬ್ರಾಹ್ಮಣರು. ದೇವಸ್ಥಾನ ಕಟ್ಟಿದ ಶೂದ್ರರನ್ನೇ ಒಳಗೆ ಬಿಟ್ಟುಕೊಳ್ಳಲ್ಲ. ನಾವು ಶೂದ್ರರಲ್ಲಾ ಎಂದು ಹೇಳಬೇಕು. ಶೂದ್ರರು ಬ್ರಾಹ್ಮಣರ ದೇವಸ್ಥಾನಗಳಿಗೆ ಹೋಗುವುದನ್ನು ಮೊದಲು ನಿಲ್ಲಿಸಬೇಕು ಎಂದು ಕರೆ ನೀಡಿದರು.

ನಾನು 50 ವರ್ಷ ಆಯ್ತು ದೇವಸ್ಥಾನಕ್ಕೆ ಹೋಗಿ. ದೇವಸ್ಥಾನಕ್ಕೆ ಹೋದರೆ ಏನೂ ಆಗುವುದಿಲ್ಲ, ಹೋಗದಿದ್ದರೂ ಏನೂ ಆಗುವುದಿಲ್ಲ. ತಟ್ಟೆಗೆ ದುಡ್ಡು ಹಾಕ್ತೀರಾ. ಒಡೆದ ಕಾಯಿಯ ಅರ್ಧ ಕಾಯಿ ಇಟ್ಟುಕೊಂಡು ಅರ್ಧ ಕೊಡ್ತಾರೆ ಅಷ್ಟೇ. ಶೂದ್ರರಿಗೆ ಮಾನ ಮರ್ಯಾದೆ ಅನ್ನೋದು ಇದ್ದರೆ ದೇವಸ್ಥಾನಕ್ಕೆ ಹೋಗಬಾರದು. ಮನುಸ್ಮೃತಿಯಲ್ಲಿ ಶೂದ್ರರ ಬಗ್ಗೆ ಅವಹೇಳನಕಾರಿಯಾಗಿ ಹೇಳಲಾಗಿದೆ. ಹೇಳಿ ನಾವು ಶೂದ್ರರು ಎಂದು ಒಪ್ಪಿಕೊಳ್ಳಬೇಕಾ? ಎಂದು ಪ್ರಶ್ನಿಸಿದರು.

ಮಹಿಷ ಪ್ರತಿಮೆಗೆ ಪುಷ್ಪಾರ್ಚನೆ ಆತಂಕ: ಚಾಮುಂಡಿಬೆಟ್ಟಕ್ಕೆ ಪ್ರವಾಸಿಗರ ಪ್ರವೇಶ ನಿರ್ಬಂಧ

•ಬಿಕೋ ಎಂದ ಚಾಮುಂಡಿಬೆಟ್ಟ •ಮಹಿಷನ ಪ್ರತಿಮೆ ಬಳಿ ಪೊಲೀಸ್ ಬಂದೋಬಸ್ತ್

ಮೈಸೂರು, ಸೆ.29(ಎಂಟಿವೈ)–ಮಹಿಷ ದಸರಾ ಆಚರಣಾ ಸಮಿತಿ ಮಹಿಷನ ಪ್ರತಿಮೆಗೆ ಮಾಲಾರ್ಪಣೆ ಮಾಡುವ ಆತಂಕ ಮನೆ ಮಾಡಿದ ಹಿನ್ನೆಲೆಯಲ್ಲಿ ಚಾಮುಂಡಿಬೆಟ್ಟಕ್ಕೆ ಭಾನುವಾರ ಸ್ಥಳೀಯರನ್ನು ಹೊರತುಪಡಿಸಿ, ಪ್ರವಾಸಿಗರು ಮತ್ತು ಹೊರಗಿನವರ ಪ್ರವೇಶ ನಿಷೇಧಿಸಲಾಗಿತ್ತು.

ಮಹಿಷ ದಸರಾದ ಅಂಗವಾಗಿ ಕಾನೂನು–ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಮೈಸೂರು ನಗರ ಪೊಲೀಸ್ ಆಯುಕ್ತರ ವ್ಯಾಪ್ತಿಗೆ ಒಳಪಡುವ ಪ್ರದೇಶದಲ್ಲಿ ಸೆ.28ರ ಮಧ್ಯರಾತ್ರಿ 12 ಗಂಟೆಯಿಂದ ಸೆ.30ರ ಬೆಳಗ್ಗೆ 6 ಗಂಟೆಯವರೆಗೆ ಬಿಎನ್‌ಎಸ್‌ಎಸ್ ಕಾಯ್ದೆ–2023ರ ಕಲಂ 163ರ ಅಡಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಲಾಗಿತ್ತು. ಪುರಭವನದ ಆವರಣದಲ್ಲಿ ಮಹಿಷ ಮಂಡಲೋತ್ಸವ ಕಾರ್ಯಕ್ರಮ ನಡೆಸಲು ವಿನಾಯಿತಿ ನೀಡಲಾಗಿತ್ತು. ಉಳಿದಂತೆ ನಗರ ವ್ಯಾಪ್ತಿಯೊಳಗೆ ಬೈಕ್ ರ್‍ಯಾಲಿ, ಪಾದಯಾತ್ರೆ ಮೆರವಣಿಗೆ, ಪಟಾಕಿ ಸಿಡಿಸಿ ಸಂಭ್ರಮಾಚರಣೆ, ಪರ–ವಿರೋಧದ ಘೋಷಣೆ ಕೂಗುವುದನ್ನು ನಿರ್ಬಂಧಿಸಲಾಗಿತ್ತು ಈ ಹಿನ್ನೆಲೆಯಲ್ಲಿ ಚಾಮುಂಡಿಬೆಟ್ಟಕ್ಕೆ ಪ್ರವೇಶ ನಿರ್ಬಂಧಿಸಲಾಗಿತ್ತು.

ನಾಕಾಬಂದಿ: ಚಾಮುಂಡಿಬೆಟ್ಟಕ್ಕೆ ಮಹಿಷ ದಸರಾ ಆಚರಣಾ ಸಮಿತಿ ಸದಸ್ಯರು ಬರಬಹುದೆಂಬ ಮುಂದಾಲೋಚನೆಯಿಂದ ಚಾಮುಂಡಿಬೆಟ್ಟದ ರಸ್ತೆಯಲ್ಲಿ ನಾಕಾಬಂದಿ ಹಾಕಲಾಗಿತ್ತು. ಉತ್ತನಹಳ್ಳಿ ರಸ್ತೆ, ತಾವರೆಕಟ್ಟೆ ರಸ್ತೆ, ನಂದಿ ರಸ್ತೆ, ಮೆಟ್ಟಿಲು ಮಾರ್ಗದಲ್ಲಿ ಪೊಲೀಸರ ಪಹರೆಯನ್ನು ಹಾಕಿ ಬೆಟ್ಟದ ನಿವಾಸಿಗಳನ್ನು ಹೊರತುಪಡಿಸಿ ಬೇರೆ ಯಾರನ್ನೂ ಬಿಡದಂತೆ ಸೂಚನೆ ನೀಡಲಾಗಿತ್ತು. ಆ ಕಾರಣದಿಂದ ಚಾಮುಂಡಿಬೆಟ್ಟಕ್ಕೆ ಆಗಮಿಸುವವರ ಸಂಖ್ಯೆ ಕ್ಷೀಣಿಸಿದ್ದರಿಂದ ಚಾಮುಂಡಿಬೆಟ್ಟದಲ್ಲಿ ಬಿಕೋ ಎನ್ನುವ ವಾತಾವರಣ ಸೃಷ್ಟಿಯಾಗಿತ್ತು. ಅಲ್ಲದೇ ಮಹಿಷನ ಪ್ರತಿಮೆ ಬಳಿ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿತ್ತು.

ವೇದಿಕೆಗೆ ಸೀಮಿತಗೊಂಡ ಕಾರ್ಯಕ್ರಮ: ಮಹಿಷ ದಸರಾ ಆಚರಣಾ ಸಮಿತಿಯು ಭಾನುವಾರ ಮಹಿಷ ದಸರಾದ ಅಂಗವಾಗಿ ಮೈಸೂರಿನಲ್ಲಿ ಬೈಕ್ ರ್‍ಯಾಲಿ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ನಡೆಸುವುದಕ್ಕೆ ಘೋಷಣೆ ಮಾಡಿತ್ತು. ಆದರೆ ನಿಷೇಧಾಜ್ಞೆ ಜಾರಿಗೊಳಿಸಿದ್ದರಿಂದ ಪುರಭವನದ ಆವರಣದಲ್ಲಿ ಕೇವಲ ಸಭಾ ಕಾರ್ಯಕ್ರಮಕ್ಕಷ್ಟೇ ಮಹಿಷ ದಸರಾ ಕಾರ್ಯಕ್ರಮ ಸೀಮಿತಗೊಂಡಿತ್ತು.

ಸಿಎಂ ಬಳಿಗೆ ನಿಯೋಗ: ಚಾಮುಂಡಿಬೆಟ್ಟದಲ್ಲಿರುವ ಮಹಿಷಾಸುರನ ಪ್ರತಿಮೆಗೆ ಪುಷ್ಪಾರ್ಚನೆ ಮಾಡುವುದಕ್ಕೆ ಮಹಿಷ ದಸರಾ ಆಚರಣಾ ಸಮಿತಿ ಪದಾಧಿಕಾರಿಗಳು ಬಿಗಿಪಟ್ಟು ಹಿಡಿದಿದ್ದರು. ಈ ಹಿನ್ನೆಲೆಯಲ್ಲಿ ಪೊಲೀಸರು ಸಮಿತಿಯ ಐವರು ಮುಖಂಡರ ನಿಯೋಗವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬಳಿ ಕರೆದೊಯ್ಯಲು ನಿರ್ಧರಿಸಿದರು. ಸಿಎಂ ಬಳಿ ತೆರಳಿದ ನಿಯೋಗ, ಪುಷ್ಪಾರ್ಚನೆಗೆ ಅವಕಾಶ ನೀಡುವಂತೆ ಮನವಿ ಸಲ್ಲಿಸಿತ್ತು. ಪೊಲೀಸ್ ಅಧಿಕಾರಿಗಳೊಂದಿಗೆ ಚರ್ಚೆ ಮಾಡಿದ ಸಿಎಂ, ಕೆಲವು ಮಾಹಿತಿಯನ್ನು ಪಡೆದುಕೊಂಡರು. ಆದರೂ ಮಹಿಷ ದಸರಾ ಆಚರಣಾ ಸಮಿತಿಗೆ ಪುಷ್ಪಾರ್ಚನೆಗೆ ಅವಕಾಶ ದೊರೆಯಲಿಲ್ಲ.

ರೋಟರಿ ಸೆಂಟ್ರಲ್ ವತಿಯಿಂದ

ಮಾವುತ, ಕಾವಾಡಿಗಳಿಗೆ ಫ್ಲಾಸ್ಕ್ ವಿತರಣೆ



ದಸರಾ ಗಜಪಡೆಯ ಮಾವುತ ಮತ್ತು ಕಾವಾಡಿಗಳಿಗೆ ರೋಟರಿ ಸೆಂಟ್ರಲ್ ಮೈಸೂರು ವತಿಯಿಂದ ಫ್ಲಾಸ್ಕ್ ವಿತರಿಸಲಾಯಿತು.


ಮೈಸೂರು, ಸೆ.29(ಎಂಟಿವೈ)– ಅರಮನೆ ಆವರಣದಲ್ಲಿ ಬೀಡು ಬಿಟ್ಟಿರುವ ದಸರಾ ಮಹೋತ್ಸವದ ಗಜಪಡೆಯ ಮಾವುತ ಮತ್ತು ಕಾವಾಡಿಗಳಿಗೆ ರೋಟರಿ ಸೆಂಟ್ರಲ್ ಸಂಸ್ಥೆಯು ಫ್ಲ್ಯಾಸ್ಕ್ ಕೊಡುಗೆಯಾಗಿ ನೀಡಿತು.

ಕಳೆದ ಕೆಲವು ವರ್ಷಗಳಿಂದ ರೋಟರಿ ಸೆಂಟ್ರಲ್ ಮೈಸೂರು ಸಂಸ್ಥೆ ದಸರಾ ಗಜಪಡೆಯ ಮಾವುತ ಮತ್ತು ಕಾವಾಡಿಗಳಿಗೆ ಉಡುಗೊರೆ ನೀಡಿ ಗೌರವಿಸುವ ಪದ್ಧತಿ ಅನುಸರಿಸುತ್ತಿದ್ದು, ಈ ಬಾರಿ ಆನೆಗಳೊಂದಿಗೆ ಶಿಬಿರಕ್ಕೆ ವಾಪಸ್ಸಾದಾಗ ಮಾವುತ, ಕಾವಾಡಿಗಳು ಆನೆಗಳನ್ನು ಮೇಯಿಸಲು ಕಾಡಿಗೆ ಹೋದಾಗ ಟೀ ಅಥವಾ ಕಾಫಿ ಕೊಂಡೊಯ್ಯಲು ಸಹಕಾರಿಯಾಗುವಂತೆ ಫ್ಲ್ಯಾಸ್ಕ್ ವಿತರಿಸಿದರು. 14 ಆನೆಗಳ ಮಾವುತ, ಕಾವಾಡಿಗಳು, ವಿಶೇಷ ಮಾವುತರು ಹಾಗೂ ಸಹಾಯಕರು ಸೇರಿದಂತೆ 65 ಮಂದಿಗೆ ಗುಣಮಟ್ಟದ ಫ್ಲ್ಯಾಸ್ಕ್ ವಿತರಿಸಲಾಯಿತು.

ರೋಟರಿ ಸೆಂಟ್ರಲ್ ಮೈಸೂರು ಸಂಸ್ಥೆ ಆಯೋಜಿಸಿದ್ದ ಸರಳ ಕಾರ್ಯಕ್ರಮದಲ್ಲಿ ವನ್ಯಜೀವಿ ವಿಭಾಗದ ಡಿಸಿಎಫ್ ಡಾ. ಐ.ಬಿ.ಪ್ರಭುಗೌಡ ಅವರು ಮಾವುತ, ಕಾವಾಡಿಗಳಿಗೆ ಫ್ಲ್ಯಾಸ್ಕ್ ವಿತರಿಸಿದರು. ಈ ಸಂದರ್ಭದಲ್ಲಿ ಸಂಚಾರಿ ದಳದ ಡಿಸಿಎಫ್ ಡಾ. ಚಂದ್ರಶೇಖರ ಪಾಟೀಲ್, ರೋಟರಿ ಸೆಂಟ್ರಲ್ ಮೈಸೂರು ಅಧ್ಯಕ್ಷ ರೋ. ಸುಬ್ರಹ್ಮಣ್ಯ ಆರ್.ತಂತ್ರಿ, ಕಾರ್ಯದರ್ಶಿ ರೋ. ಸಮರ್ಥ್ ವೈದ್ಯ, ಸಮಾಜ ಸೇವಾ ವಿಭಾಗದ ನಿರ್ದೇಶಕ ರೋ. ಎಸ್.ಆರ್.ಸ್ವಾಮಿ, ಮೆಂಟರ್ ರೋ. ವಿವೇಕ್ ಅತಾವರ್, ಸೌಜನ್ಯ ಅತಾವರ್, ಪ್ರಿಯಾ ತಂತ್ರಿ, ಅಂಜಲಿ ಸಮರ್ಥ್, ಪ್ರತಿಭಾ, ರೋ. ವಿಜೇಂದ್ರ ಶ್ರೀನಿವಾಸನ್, ಪ್ರದ್ಯುಮ್ನ ಬಿ.ಭಟ್, ವಿಶ್ರುತ ವಿ.ಭಟ್, ಅರ್ಣ ಸಮರ್ಥ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಸಿಎಂ ಸಿದ್ದರಾಮಯ್ಯ ಬೆಂಗಳೂರಿಗೆ

ಮೈಸೂರು, ಸೆ.29(ಎಂಕೆ)– ಮುಡಾ ನಿವೇಶನ ಹಂಚಿಕೆ ಪ್ರಕರಣದಲ್ಲಿ ಲೋಕಾಯುಕ್ತ ತನಿಖೆ ಎದುರಿಸಬೇಕಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಮೂರು ದಿನಗಳ ಮೈಸೂರು ಪ್ರವಾಸ ಮುಗಿಸಿ ಭಾನುವಾರ ಸಂಜೆ ಬೆಂಗಳೂರಿಗೆ ಮರಳಿದರು.



ಸೆ.27ರಂದು ಬೆಳಗ್ಗೆ ವಿಶೇಷ ವಿಮಾನದ ಮೂಲಕ ತಮ್ಮ ತವರು ಜಿಲ್ಲೆಗೆ ಆಗಮಿಸಿದ್ದ ಅವರು, ವಿಶ್ವ ಪ್ರವಾಸೋದ್ಯಮ ದಿನಾಚರಣೆಯಲ್ಲಿ ಭಾಗವಹಿಸಿದ್ದರು. ಕೆಡಿಪಿ ಸಭೆ, ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಶತಮಾನೋತ್ಸವ ಸಂಭ್ರಮಾಚರಣೆ ಸಮಾರೋಪ ಸೇರಿದಂತೆ ಹಲವು ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಮುಖ್ಯಮಂತ್ರಿಗಳು, ಭಾನುವಾರ ಸಂಜೆ ಅಶೋಕಪುರಂನಲ್ಲಿ 85 ವೀಳ್ಯದೆಲೆ ಬೆಳೆಗಾರರಿಗೆ ತಲಾ 0.5 ಗುಂಟೆ ಜಾಗ ನೀಡುವುದು, ದೊಡ್ಡಗರಡಿ, ಚಿಕ್ಕಗರಡಿ ಆವರಣಗಳಲ್ಲಿ ವ್ಯಾಯಾಮ ಶಾಲೆ, ಸಭಾ ಭವನ, ವಾಣಿಜ್ಯ ಸಂಕೀರ್ಣ ನಿರ್ಮಾಣ, ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯ ದುರಸ್ತಿ ಸೇರಿದಂತೆ ವಿವಿಧ ಕಾರ್ಯಗಳನ್ನು ಉದ್ಘಾಟಿಸಿದ ಬಳಿಕ ವಿಶೇಷ ವಿಮಾನದಲ್ಲಿ ಕೇಂದ್ರ ಸ್ಥಾನಕ್ಕೆ ಪ್ರಯಾಣ ಬೆಳೆಸಿದರು.

ದರಪಟ್ಟಿ ಆಹ್ವಾನ

ಮೈಸೂರು.ಸೆ.29– ಕೇಂದ್ರ ಕಾರಾಗೃಹದ ಮುಖ್ಯ ಅಧೀಕ್ಷಕರ ಕಾರ್ಯಾಲಯದಲ್ಲಿ ಸಿಸಿಟಿವಿ ಮಾನಿಟರ್ ಹಾಗೂ ಪೂರಕ ಉಪಕರಣಗಳನ್ನು ಸ್ಥಳೀಯ ಸಾರ್ವಜನಿಕ ನೋಂದಾಯಿತ ವರ್ತಕರಿಗೆ ಹಾಗೂ ನೋಂದಾಯಿತ ಸಂಸ್ಥೆಗಳಿಂದ ಜಿಎಸ್‌ಟಿ ಸಹಿತ ದರಪಟ್ಟಿಗೆ ಅರ್ಜಿ ಆಹ್ವಾನಿಸಲಾಗಿದೆ. ಇಚ್ಛೆಯುಳ್ಳ ಸಂಸ್ಥೆ ಹಾಗೂ ವರ್ತಕರು ಜಿಎಸ್‌ಟಿ ಸಹಿತ ದರ ಪಟ್ಟಿಯನ್ನು ಅ.3 ರೊಳಗೆ ಮೈಸೂರಿನ ಕೇಂದ್ರ ಕಾರಾಗೃಹದ ಮುಖ್ಯ ಅಧಿಕ್ಷಕರ ಕಚೇರಿಗೆ ಸಲ್ಲಿಸಬೇಕು ಎಂದು ಕೇಂದ್ರ ಕಾರಾಗೃಹದ ಮುಖ್ಯ ಅಧಿಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಬ್ಬರದ ಮಳೆಯ ನಡುವೆಯೂ ಯುವ ಸಂಭ್ರಮದಲ್ಲಿ ಕುಗ್ಗದ ಉತ್ಸಾಹ

ಮಾರ್ದನಿಸಿದ ಏಕತೆ ಕೂಗು–ಕೊಡವ ನಾಡಿನ ಸಾಂಪ್ರದಾಯಿಕ ನೃತ್ಯ ವೈಭವ


ಶ್ರೀರಂಗಪಟ್ಟಣ ನಗುವನಹಳ್ಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ವಿದ್ಯಾರ್ಥಿಗಳಿಂದ ಜಾನಪದ ನೃತ್ಯ ಕಲಾ ಪ್ರಕಾರಗಳ ಪ್ರದರ್ಶನ


ರಕ್ತದಾನದ ಮಹತ್ವ ಕುರಿತು ನೃತ್ಯ ಪ್ರದರ್ಶನ ನೀಡಿದ ನಂಜನಗೂಡು ಮೊರಾರ್ಜಿ ದೇಸಾಯಿ ವಸತಿ ಶಾಲೆ ಮತ್ತು ಕಾಲೇಜು ತಂಡ

ಮೈಸೂರು, ಸೆ.29(ಎಂಕೆ)– ಅಬ್ಬರದ ಮಳೆಯ ನಡುವೆಯೂ ಕುಂದದ ಅತ್ಯುತ್ಸಾಹ.. ಜಾನಪದ ಝಲಕ್‌ನೊಂದಿಗೆ ಮೊಳಗಿದ 'ಜೈ ಹಿಂದ್' ಘೋಷಣೆ... ಜಾತಿ–ಮತಕ್ಕಿಂತ ಮನುಷ್ಯತ್ವ ದೊಡ್ಡದೆಂದು ಸಾರಿದ ಯುವ ಮನಸುಗಳು...!

ವಿಶ್ವ ಪ್ರಸಿದ್ಧ ಮೈಸೂರು ದಸರಾ ಮಹೋತ್ಸವದ ಅಂಗವಾಗಿ ಮೈಸೂರು ವಿವಿ ಮಾನಸ ಗಂಗೋತ್ರಿ ಬಯಲು ರಂಗಮಂದಿರ ಸಾಂಸ್ಕೃತಿಕ ವೇದಿಕೆಯಲ್ಲಿ ನಡೆಯುತ್ತಿರುವ ದಸರಾ ಯುವ ಸಂಭ್ರಮದಲ್ಲಿ ಭಾನುವಾರ ಜೋರು ಮಳೆಯ ನಡುವೆಯೂ ಮಾರ್ದನಿಸಿದ ಏಕತೆ ಕೂಗು. ರಾಷ್ಟ್ರ ಲಾಂಛನಗಳ ಸ್ಮರಣೆಯೊಂದಿಗೆ ಕೊಡವ ನಾಡಿನ ಸಾಂಪ್ರದಾಯಿಕ ನೃತ್ಯ ವೈಭವದ ಕಂಪನ ಆವರಿಸಿತು.

ಕನ್ನಡ ಭಾಷಾಭಿಮಾನ, ಸಂವಿಧಾನ ಶಿಲ್ಪಿ ಅಂಬೇಡ್ಕರ್ ಕೊಡುಗೆ ಸ್ಮರಣೆ, ಜಾನಪದ ಸೊಬಗು, ಶಕ್ತಿ ದೇವತೆಗಳ ಆರಾಧನೆ ಹಾಗೂ ರಾಷ್ಟ್ರೀಯ ಭಾವೈಕ್ಯತೆಯುಳ್ಳ ನೃತ್ಯ ಪ್ರದರ್ಶನ ನೀಡಿದ ವಿವಿಧ ಕಾಲೇಜು ವಿದ್ಯಾರ್ಥಿಗಳು, ಮೈಸೂರು ದಸರಾ ಮಹೋತ್ಸವದ ಸಡಗರ–ಸಂಭ್ರಮವನ್ನು ಇಮ್ಮಡಿಗೊಳಿಸಿದರು.

ಅರಳುವ ಮುನ್ನವೇ ಚಿವುಟ ಬೇಡಿ...!

ಮೈಸೂರಿನ ಕಾವೇರಿ ಆಯುರ್ವೇದಿಕ್ ಮೆಡಿಕಲ್ ಕಾಲೇಜ್ ಮತ್ತು ಹಾಸ್ಪಿಟಲ್‌ನ ವಿದ್ಯಾರ್ಥಿಗಳು ಅಪ್ಪನ ಪ್ರೀತಿಯಲ್ಲಿ ಬೆಳೆದ ಹೆಣ್ಣು ಮಕ್ಕಳೆಂಬ ಹೂಗಳು ಅರಳುವ ಮುನ್ನವೇ ಚಿವುಟಬೇಡಿ ಎಂಬ ಮನ ಮಿಡಿಯುವ ನೃತ್ಯ ರೂಪಕವನ್ನು ಪ್ರಸ್ತುತಪಡಿಸಿ ಅಪಾರ ಮೆಚ್ಚುಗೆ ಪಡೆದರು. ಹಾಗೆಯೇ ಬೆಂಗಳೂರಿನ ರಾಮನ್ ಪಾಲಿಟೆಕ್ನಿಕ್ ಕಾಲೇಜು ವಿದ್ಯಾರ್ಥಿಗಳು ಹೆಣ್ಣು–ಗಂಡೆಂಬ ಭೇದ ಮಾಡದೆ ಸಮಾನತೆಯಿಂದ ಕಾಣುವಂತೆ ನೃತ್ಯದ ಮೂಲಕ ಮನವಿ ಮಾಡಿದರು.

ಮಳವಳ್ಳಿಯ ಭಾರತಿ ಪ್ರಥಮ ದರ್ಜೆ ಕಾಲೇಜು ವಿದ್ಯಾರ್ಥಿಗಳು ಸೈನಿಕರ ತ್ಯಾಗ ಬಲಿದಾನ ಗೌರವಿಸುವ ನೃತ್ಯ ರೂಪಕದ ಮೂಲಕ 'ಜಗ್ಗದು ಜಗ್ಗದು ಯಾರಿಗೂ ನಮ್ ಇಂಡಿಯಾ', 'ಜೈ ಹಿಂದ್' ಘೋಷಣೆ ಮೊಳಗಿಸಿದರೆ, ಶೇಷಾದ್ರಿಪುರಂ ಪದವಿ ಕಾಲೇಜು ವಿದ್ಯಾರ್ಥಿಗಳು ರಾಷ್ಟ್ರೀಯ ಹೂ ಕಮಲ, ರಾಷ್ಟ್ರೀಯ ಪಕ್ಷಿ ನವಿಲು, ರಾಷ್ಟ್ರೀಯ ಪ್ರಾಣಿ ಹುಲಿ ಹಾಗೂ ರಾಷ್ಟ್ರ ಲಾಂಛನ ಕುರಿತ ಅತ್ಯದ್ಭುತ ನೃತ್ಯ ಪ್ರದರ್ಶನದೊಂದಿಗೆ 'ವಂದೇ ಮಾತರಂ' ಸಂದೇಶ ಸಾರಿದರು.

ಹುಣಸೂರಿನ ಶ್ರೀ ಸತ್ಯ ಸಾಯಿ ಕೈಗಾರಿಕಾ ತರಬೇತಿ ಸಂಸ್ಥೆ ವಿದ್ಯಾರ್ಥಿಗಳು ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಸ್ಮರಣೆಯೊಂದಿಗೆ ಸಮಾನತೆಯ ಮಹತ್ವ ತಿಳಿಸಿದರೆ, ನಂಜನಗೂಡು ಮೊರಾರ್ಜಿ ದೇಸಾಯಿ ವಸತಿ ಶಾಲೆ ಮತ್ತು ಕಾಲೇಜು ವಿದ್ಯಾರ್ಥಿಗಳು 'ರಕ್ತದಾನ' ಕುರಿತು ನೃತ್ಯ ಸಂಯೋಜನೆ ಮೂಲಕ ಜಾತಿ–ಮತಕ್ಕಿಂತ ಮನುಷ್ಯತ್ವ ದೊಡ್ಡದು ಎಂಬುದನ್ನು ಮನೋಜ್ಞವಾಗಿ ತಿಳಿಸಿದರು.


ಕೊಡವ ನೃತ್ಯ: ವಿರಾಜಪೇಟೆ ತಾಲೂಕಿನ ಸಿದ್ದಾಪುರ ಸಂಯುಕ್ತ ಪದವಿ ಪೂರ್ವ ಕಾಲೇಜು ಹಾಗೂ ಗೋಣಿಕೊಪ್ಪ ಕಾವೇರಿ ಕಾಲೇಜು ವಿದ್ಯಾರ್ಥಿಗಳು ವಿವಿಧ ನೃತ್ಯ ಕಲಾ ಪ್ರಕರಗಳ ನಡುವೆ ಕಪ್ಪು ಕೋಟು, ಕೆಂಪು ಸೀರೆಯನ್ನು ಧರಿಸಿ ಕೊಡವ ಸಾಂಪ್ರದಾಯಿಕ ನೃತ್ಯ ಪ್ರದರ್ಶನದ ಮೂಲಕ ಕೊಡವ ನಾಡಿನ ನೃತ್ಯ ವೈಭವವನ್ನು ಪಸರಿಸಿದರು.

ನಟ–ನಟಿಯರ ಮಿಂಚು...

ಯುವ ಸಂಭ್ರಮದಲ್ಲಿ ಮಿಂಚು ಹರಿಸಿದ ಸ್ಯಾಂಡಲ್‌ವುಡ್ ನಟ–ನಟಿಯರು ಪಂಚಿಂಗ್ ಡೈಲಾಗ್ ಹೊಡೆದು ಗಮನ ಸೆಳೆದರು. ಭೀಮಾ ಚಿತ್ರದಲ್ಲಿ ಪೊಲೀಸ್ ಅಧಿಕಾರಿ 'ಗಿರಿಜಾ' ಪಾತ್ರದ ನಟಿ ಪ್ರಿಯಾ, ನಟ ರಿಷಿ, ಹಾಸ್ಯ ನಟರಾದ ಶಿವರಾಜ್ ಕೆಆರ್ ಪೇಟೆ ನೆರೆದಿದ್ದ ಯುವ ಸಮೂಹವನ್ನು ರಂಜಿಸಿದರು.

ಜಾನಪದ ಝಲಕ್: ಮಂಡ್ಯದ ಅಭಿನಯ ಭಾರತಿ ಪ್ರೀ ಯುನಿವರ್ಸಿಟಿ ಕಾಲೇಜು ವಿದ್ಯಾರ್ಥಿ ಬಂಜಾರ ಸಮುದಾಯದ ವೇಷಭೂಷಣದಲ್ಲಿ ವಿಶಿಷ್ಟ ಜಾನಪದ ನೃತ್ಯದೊಂದಿಗೆ ಗಮನ ಸೆಳೆದರೆ, ಗುಂಡ್ಲುಪೇಟೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬಿಳಿಕೆರೆ ಜಿಪಿಯುಎಸ್ ಕಾಲೇಜು, ಶ್ರೀರಂಗಪಟ್ಟಣ ನಗುವನಹಳ್ಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ನಂಜನಗೂಡಿನ ಜಗದ್ಗುರು ಶ್ರೀ ಶಿವರಾತ್ರೀಶ್ವರ ಪದವಿ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳು ಜಾನಪದ ನೃತ್ಯ ಕಲಾ ಪ್ರಕಾರಗಳ ಪ್ರದರ್ಶನದ ಮೂಲಕ ಯುವ ಸಂಭ್ರಮ ವೇದಿಕೆ ಜಾನಪದ ಝಲಕ್ ಸೃಷ್ಟಿಸಿದರು.

ಕನ್ನಡ ಮತ್ತು ಶಕ್ತಿ ಆರಾಧನೆ: ಬೆಂಗಳೂರು ಆರ್.ಕೆ.ಕಾಲೇಜ್ ಆಫ್ ನರ್ಸಿಂಗ್, ಮಂಡ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಜೆಎಸ್‌ಎಸ್ ಪಾಲಿಟೆಕ್ನಿಕ್ ಕಾಲೇಜು ವಿದ್ಯಾರ್ಥಿಗಳು ಕರ್ನಾಟಕ ಏಕೀಕರಣ ಇತಿಹಾಸದ ಜೊತೆಗೆ ಕನ್ನಡಾಭಿಮಾನ ಮೆರೆದರೆ, ಬೆಂಗಳೂರಿನ ಮತ್ತಿಕೆರೆಯ ರಾಯಲ್ ಪಿಯು ಕಾಲೇಜ್ ವಿದ್ಯಾರ್ಥಿಗಳು ಶ್ರೀ ರಾಮನ ಚರಿತೆ ತಿಳಿಸಿದರೆ, ಹೊಳೆನರಸೀಪುರ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು, ಮೈಸೂರು ಕ್ರೈಸ್ಟ್ ಕಾಲೇಜು ಹಾಗೂ ಜೆಎಸ್‌ಎಸ್ ಇನ್ಸ್ಟಿಟ್ಯೂಟ್ ಆಫ್ ಸ್ಪೀಚ್ ಅಂಡ್ ಹಿಯರಿಂಗ್ ಸಂಸ್ಥೆಯ ವಿದ್ಯಾರ್ಥಿಗಳ ತಂಡ ನವದುರ್ಗೆ, ಆಂಜನೇಯ ನೃತ್ಯದ ಮೂಲಕ ಶಕ್ತಿ ದೇವರುಗಳ ಆರಾಧನೆ ಮಾಡಿದರು.


ಮಳವಳ್ಳಿ ಭಾರತೀ ಪ್ರಥಮ ದರ್ಜೆ ಕಾಲೇಜು ತಂಡದಿಂದ ಭಾರತೀಯ ಯೋಧರ ಸ್ಮರಣೆ


ರಾಷ್ಟ್ರ ಲಾಂಛನಗಳನ್ನು ಕುರಿತು ನೃತ್ಯ ಪ್ರದರ್ಶಿಸಿದ ಶೇಷಾದ್ರಿಪುರಂ ಪದವಿ ಕಾಲೇಜು ತಂಡ

ನಕ್ಕರೆ ಅದೇ ಸ್ವರ್ಗ

ಗಂಡ : ಟಿವೀಲಿ ಏನ್ ನೋಡ್ತಿದ್ಯಾ?
ಹೆಂಡತಿ : ಅಡುಗೆ ಕಾರ್ಯಕ್ರಮ
ಗಂಡ : ದಿನವಿಡೀ ಅಡುಗೆ ಕಾರ್ಯಕ್ರಮ ನೋಡಿದ್ರೂ ಒಂದು ದಿನವೂ ಅದನ್ನು ಮಾಡಿದ್ದು ನೋಡೆ ಇಲ್ವಲ್ಲೆ?
ಹೆಂಡತಿ : ನೀವು ದಿನ ಕೌನ್ ಬನೇಗಾ ಕರೋಡ್ ಪತಿ ನೋಡ್ತಾ ಇರ್ತೀರಿ... ನಾನೇನಾದ್ರೂ ಕೇಳಿದ್ನಾ ನೀವು ಕೋಟಿ ದುಡ್ಡು ತರ್ಲಿಲ್ಲ ಅಂತ.

ಮೈಸೂರು ಮಿತ್ರ

ಸೋಮವಾರ, 30 ಸೆಪ್ಟೆಂಬರ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ..........

ಒಳಗಿರುವವರು ಸಜ್ಜನರೋ... ದುರ್ಜನರೋ ಹೊತ್ತು ಸಾಗುವುದಷ್ಟೆ ವಾಹನದ ನಿರ್ಲಿಪ್ತ ಕೆಲಸ... ಬದುಕಿನ ಬಂಡಿಯೂ ಹಾಗೇ ಅಲ್ಲವೆ, ಕೋಪ, ತಾಪ, ಮದ, ಮತ್ಸರ, ನೋವು-ನಲಿವು ಎಲ್ಲವನ್ನೂ ಹೊತ್ತು ಪಯಣಿಸಬೇಕು. ನಮ್ಮ ಗಮ್ಯ ಸೇರಬೇಕು.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಚಿಂತೆಯೇ ಮುಪ್ಪು, ಸಂತೋಷವೇ ಯೌವನ

ನಿಮ್ಮ ಪತ್ರಗಳು

ರಾಜಭವನ ಮತ್ತು ಪೊಲೀಸ್ ಠಾಣೆ!

ಮಾನ್ಯರೆ,

ರಾಜ್ಯಪಾಲರ ನಡೆಯನ್ನು ಖಂಡಿಸುವ ಭರದಲ್ಲಿ ಸಚಿವದ್ವಯರಾದ ದಿನೇಶ್ ಗುಂಡೂರಾವ್ ಮತ್ತು ಎಂ.ಬಿ.ಪಾಟೀಲರು ಪೊಲೀಸ್ ಠಾಣೆ ಹಾಗೂ ಮಾಹಿತಿ ಹಕ್ಕು ಅಧಿನಿಯಮವನ್ನು ಹೀಯಾಳಿಸಿದ್ದಾರೆ.

'ಪ್ರತಿಯೊಂದು ದೂರಿಗೂ ರಾಜ್ಯಪಾಲರು ಸ್ಪಂದಿಸಿದರೆ ಆ ಸ್ಥಾನಕ್ಕೆ ಗೌರವವೇ ಇರುವುದಿಲ್ಲ. ಜನರು ಪೊಲೀಸ್ ಠಾಣೆ ಬದಲು ರಾಜಭವನಕ್ಕೆ ದೂರು ನೀಡುವ ದಂಧೆ ಶುರುವಾಗಬಹುದು' ಎಂದು ಸಚಿವ ದಿನೇಶ್ ಗುಂಡೂರಾವ್ ಮತ್ತು ಎಂ.ಬಿ ಪಾಟೀಲ್ ಎಚ್ಚರಿಕೆ ನೀಡುವ ಮೂಲಕ ಕರ್ನಾಟಕ ರಾಜ್ಯದ ಪೊಲೀಸ್ ಠಾಣೆಗಳನ್ನು ಬೆತ್ತಲಾಗಿಸಿದ್ದಾರೆ. ಪೊಲೀಸ್ ಠಾಣೆಯಲ್ಲಿ ದೂರು ನೀಡುವ ದಂಧೆ ಅವ್ಯಾಹತವಾಗಿ ನಡೆಯುತ್ತಿದೆ. ಇಂತಹ ದಂಧೆಕೋರರೊಂದಿಗೆ ಪೊಲೀಸರು ಕೈಜೋಡಿಸಿ ಕಾನೂನು ಮತ್ತು ಸುವ್ಯವಸ್ಥೆಯನ್ನು ಗಾಳಿಗೆ ತೂರುತ್ತಿದ್ದಾರೆ ಎಂಬುದನ್ನು ಈ ಸಚಿವದ್ವಯರು ಬಹಿರಂಗಪಡಿಸಿದ್ದಾರೆ.

ಪೊಲೀಸ್ ಠಾಣೆಯಲ್ಲಿ ದೂರು ನೀಡುವ ದಂಧೆ ಇದೆ ಎನ್ನುವುದಾದರೆ ಅದನ್ನು ತಡೆಗಟ್ಟುವುದು ಈ ಸಚಿವದ್ವಯರ ಕರ್ತವ್ಯವಲ್ಲವೇ? ಪೊಲೀಸ್ ಠಾಣೆಯಲ್ಲಿ ನಡೆಯುವ ದಂಧೆಯನ್ನು ತಡೆಯುವುದು ಸರಕಾರದ ಭಾಗವಾಗಿರುವ ಈ ಸಚಿವದ್ವಯರ ಕರ್ತವ್ಯವಲ್ಲವೇ? ಪೊಲೀಸ್ ಠಾಣೆಯಲ್ಲಿ ನಡೆಯುವ ದಂಧೆಯನ್ನು ನಿಯಂತ್ರಿಸುವುದು ರಾಜ್ಯ ಸರಕಾರದ ಕರ್ತವ್ಯ. ಈ ಕರ್ತವ್ಯವನ್ನು ನಿರ್ವಹಿಸುವಲ್ಲಿ ರಾಜ್ಯ ಸರಕಾರ ವಿಫಲವಾಗಿದೆಯೆಂದು ಈ ಸಚಿವದ್ವಯರೇ ಒಪ್ಪಿಕೊಂಡಂತಾಗಿದೆ. 'ರಾಜ್ಯದಲ್ಲಿ ರಾಜ್ಯಪಾಲರು ಮಾಹಿತಿ ಹಕ್ಕು ಕಾರ್ಯಕರ್ತರ ರೀತಿ ವರ್ತಿಸುತ್ತಿದ್ದಾರೆ' ಎನ್ನುವ ಮೂಲಕ ಈ ಸಚಿವದ್ವಯರು ಮಾಹಿತಿ ಹಕ್ಕು ಅಧಿನಿಯಮವನ್ನೂ ಅವಮಾನಿಸಿದ್ದಾರೆ. ಜೊತೆಗೆ ಮಾಹಿತಿ ಹಕ್ಕು ಅಧಿನಿಯಮದನ್ವಯ ಮಾಹಿತಿ ಪಡೆಯುವ ಪ್ರಜೆಗಳನ್ನೂ ಅವಮಾನಿಸಿದ್ದಾರೆ. ಒಟ್ಟಿನಲ್ಲಿ ರಾಜ್ಯದ ರಾಜಭವನವು ಪೊಲೀಸ್ ಠಾಣೆಯಂತಾಗಿದೆ ಎನ್ನುವ ಮೂಲಕ ಈ ಸಚಿವದ್ವಯರು ಪೊಲೀಸ್ ಠಾಣೆಯನ್ನು ರಾಜಭವನದೆತ್ತರಕ್ಕೆ ಕೊಂಡೊಯ್ಯುತ್ತಿದ್ದಾರೋ ಅಥವಾ ರಾಜಭವನವನ್ನು ಪೊಲೀಸ್ ಠಾಣೆಯ ಮಟ್ಟಕ್ಕಿಳಿಸುತ್ತಿದ್ದಾರೋ ಎಂಬುದನ್ನು ಅವರೇ ಅರ್ಥೈಸಬೇಕಾಗಿದೆ!

ಮಾಹಿತಿ ಹಕ್ಕು ಅಧಿನಿಯಮವು ಸಂವಿಧಾನದ ಮೂಲಭೂತ ಹಕ್ಕುಗಳ ಪ್ರತಿಬಿಂಬ. ಸರಕಾರದಿಂದ ಹಾಗೂ ಸರಕಾರಿ ಕಚೇರಿಗಳಿಂದ ಮಾಹಿತಿ ಪಡೆಯುವುದು ಪ್ರಜೆಗಳ ಹಕ್ಕು. ಮಾಹಿತಿ ಹಕ್ಕು ಅಧಿನಿಯಮದ ಅನ್ವಯ ಅರ್ಜಿ ಸಲ್ಲಿಸಿ, ಸರಕಾರ ಹಾಗೂ ಸರಕಾರಿ ಕಚೇರಿಗಳಲ್ಲಿ ನಡೆಯುವ ಅಕ್ರಮಗಳನ್ನು ಪತ್ತೆಹಚ್ಚಿ ಅಕ್ರಮಾದಿತ್ಯರ ಅಕ್ರಮಗಳನ್ನು ಸಾರ್ವಜನಿಕರ ಎದುರು ಬಹಿರಂಗಪಡಿಸುವ ಸಾಮಾಜಿಕ ಹೋರಾಟಗಾರರನ್ನು 'ಮಾಹಿತಿ ಹಕ್ಕು ಹೋರಾಟಗಾರರು' ಎಂದು ಕರೆಯುವುದು ಮೂರ್ಖತನ! ಮಾಹಿತಿ ಹಕ್ಕು ಅಧಿನಿಯಮದ ಅಡಿಯಲ್ಲಿ ಅರ್ಜಿ ಸಲ್ಲಿಸಿ ಸರಕಾರ ಹಾಗೂ ಸರಕಾರಿ ಕಚೇರಿಗಳಿಂದ ಪಡೆದಿರುವ ಅಧಿಕೃತ ದಾಖಲೆಗಳಿಗೆ ಗೌರವವಿಲ್ಲವೇ?

ಇಂತಹ ಹೋರಾಟಗಾರರನ್ನು ಸಾಮಾಜಿಕ ಹೋರಾಟಗಾರರು,ಸಮಾಜ ಸೇವಕರು, ಎಂದೆನ್ನಬಹುದೇ ಹೊರತು 'ಮಾಹಿತಿ ಹಕ್ಕು ಕಾರ್ಯಕರ್ತರು' ಎನ್ನಲಾಗದು. ಮಾಹಿತಿ ಹಕ್ಕು ಅಧಿನಿಯಮದನ್ವಯ ಅರ್ಜಿ ಸಲ್ಲಿಸಿ ಪಡೆದ ಮಾಹಿತಿಗಳಿಗೆ ಘನತೆಯಿದೆ. ಸರಕಾರ ಹಾಗೂ ಸರಕಾರಿ ಕಚೇರಿಗಳಿಂದ ಪಡೆಯುವ ಅಧಿಕೃತ ಮಾಹಿತಿಗಳನ್ನು ಅನುಮಾನಿಸುವುದು ಅಕ್ಷಮ್ಯ! ಇಂತಹ ಹೋರಾಟಗಾರರನ್ನು ಹೀಗಳೆಯುವ ಮೂಲಕ ಈ ಸಚಿವದ್ವಯರು ಮಾಹಿತಿ ಹಕ್ಕು ಅಧಿನಿಯಮವನ್ನೇ ಹೀಯಾಳಿಸಿದ್ದಾರೆ.

ರಾಜಭವನವನ್ನು ಕೇಂದ್ರ ಸರಕಾರದ ಕೈಗೊಂಬೆಯೆಂದು ಟೀಕಿಸುವ ಭರದಲ್ಲಿ ರಾಜ್ಯದ ಪೊಲೀಸ್ ಠಾಣೆಗಳನ್ನು ರಾಜ್ಯಸರಕಾರದ ಕೈಗೊಂಬೆಯೆಂದು ಹೀಯಾಳಿಸಿದಂತಾಗಿದೆ! ಶಾಸನವನ್ನು ರೂಪಿಸುವ ಶಾಸಕರೇ ತಾವು ರೂಪಿಸಿದ ಶಾಸನವನ್ನು ಹೀಯಾಳಿಸುವ ಮೂಲಕ ತಮ್ಮನ್ನು ತಾವೇ ಹೀಯಾಳಿಸಿಕೊಂಡಿರುವುದು ವಿಪರ್ಯಾಸ! –ಪಿ.ಜೆ.ರಾಘವೇಂದ್ರ, ನ್ಯಾಯವಾದಿ, ಮೈಸೂರು.

ಚೈಲ್ಡ್ ಪೋರ್ನ್ ಬಗ್ಗೆ ಸುಪ್ರೀಂ ತೀರ್ಪು: ಸ್ವಾಗತಾರ್ಹ

ಮಾನ್ಯರೆ,

ಮಕ್ಕಳ ಅಶ್ಲೀಲ ಚಿತ್ರಗಳನ್ನು ಡೌನ್‌ಲೋಡ್ ಮಾಡುವುದು, ವೀಕ್ಷಿಸುವುದು, ಹಂಚಿಕೊಳ್ಳುವುದು ಮಾತ್ರವಲ್ಲದೆ, ಅವುಗಳನ್ನು ಯಾವುದೇ ಡಿಜಿಟಲ್ ಸಾಧನಗಳಲ್ಲಿ ಇರಿಸಿಕೊಂಡಿರುವುದು ಕೂಡ ಪೋಕ್ಸೊ ಕಾಯಿದೆ ಹಾಗೂ ಮಾಹಿತಿ ತಂತ್ರಜ್ಞಾನ ಕಾಯಿದೆ ಅಡಿ ಅಪರಾಧ ಎಂದು ಸುಪ್ರೀಂಕೋರ್ಟ್ ನೀಡಿರುವ ಮಹತ್ವದ ತೀರ್ಪು ಸ್ವಾಗತಾರ್ಹ. ಮಕ್ಕಳ ಬಾಲ್ಯದಲ್ಲಿ ಆಘಾತಕಾರಿ ಲೈಂಗಿಕ ಅನುಭವಗಳು, ಲೈಂಗಿಕ ಆಸಕ್ತಿಗಳನ್ನು ಅವರಲ್ಲಿ ಬಿಂಬಿಸಿ ಚಿತ್ರಿಸಿ ಪ್ರದರ್ಶಿಸಿ ಹಾಗೂ ಅವುಗಳನ್ನು ಎಲ್ಲೆಡೆ ಹಂಚುವುದು ನಿಜಕ್ಕೂ ಅಪರಾಧವೇ ಸರಿ. ಮಕ್ಕಳ ಲೈಂಗಿಕ ದುರುಪಯೋಗವು ಅವರ ನಂತರದ ಜೀವನದಲ್ಲಿ ಸೈಕೋಪಾಥಾಲಜಿ ಸೇರಿದಂತೆ ಅಲ್ಪಾವಧಿಯ ಮತ್ತು ದೀರ್ಘಾವಧಿಯ ಹಾನಿಗೆ ಕಾರಣವಾಗಬಹುದು. ಖಿನ್ನತೆ, ಆತಂಕ, ಅಸ್ವಸ್ಥತೆ, ನಿದ್ರಾಭಂಗ ಸೇರಿದಂತೆ ಆಘಾತಕಾರಿ ಆತಂಕದ ನಡವಳಿಕೆಗಳು ಬೇರೂರಬಹುದು. ಮಗು ತನ್ನ ಶಾಲೆ ಮತ್ತು ಸಾಮಾಜಿಕ ಚಟುವಟಿಕೆಗಳಿಂದ ಹಿಂದೆ ಸರಿಯಬಹುದು ಮತ್ತು ಪ್ರಾಣಿಗಳ ಮೇಲಿನ ಕ್ರೌರ್ಯ ಸೇರಿದಂತೆ ವಿವಿಧ ಕಲಿಕೆ ಮತ್ತು ನಡವಳಿಕೆಯ ಸಮಸ್ಯೆಗಳನ್ನು ಪ್ರದರ್ಶಿಸಬಹುದು. ಅಲ್ಲದೇ ಮಕ್ಕಳು ಲೈಂಗಿಕವಾಗಿ ಹರಡುವ ಸೋಂಕುಗಳಿಗೆ ತುತ್ತಾಗಬಹುದು ಅಥವಾ ಸೋಂಕಿನ ಸಾಧ್ಯತೆಗಳು ಹೆಚ್ಚಾಗಬಹುದು. ಹೀಗಾಗಿ ಮಕ್ಕಳನ್ನು ಲೈಂಗಿಕವಾಗಿ ಬಳಸುವ ದುರುಳರಿಗೆ ಕಾನೂನಡಿ ತಕ್ಕ ಶಿಕ್ಷೆ ಆಗಲೇಬೇಕಿದೆ. ಈ ನಿಟ್ಟಿನಲ್ಲಿ ಸುಪ್ರೀಂಕೋರ್ಟ್ ಉತ್ತಮವಾದ ತೀರ್ಪನ್ನೇ ನೀಡಿದೆ.

–ಹರಳಹಳ್ಳಿ ಪುಟ್ಟರಾಜು, ಪಾಂಡವಪುರ.

ಅಂತರ್ಜಾಲ ಮಾರುಕಟ್ಟೆಯ ಪ್ರಾಮುಖ್ಯತೆ

ಮಾನ್ಯರೆ,

ಇತ್ತೀಚಿನ ದಿನಗಳಲ್ಲಿ ಅಂತರ್ಜಾಲದಿಂದ ಎಲ್ಲಾ ರೀತಿಯ ಸರಕು ಸೇವೆಗಳನ್ನು ಖರೀದಿಸುವುದರಿಂದ ಮಾನವನಿಗೆ ಕೆಲಸವಿಲ್ಲದಂತಾಗಿದೆ. ಎಲ್ಲಾ ಕ್ಷೇತ್ರದಲ್ಲೂ ಅಂತರ್ಜಾಲದ ಪ್ರಾಮುಖ್ಯತೆ ಹೆಚ್ಚಾಗುತ್ತಿದೆ. ನಾವು ಯಾವುದೇ ರೀತಿಯ ತರಕಾರಿ, ಹಣ್ಣು ತರಲು ಮಾರುಕಟ್ಟೆಗೆ ಹೋಗುವ ಅವಶ್ಯಕತೆ ಇಲ್ಲ. ಅಂಗೈಯಲ್ಲಿ ಕನ್ನಡಿಯಿದ್ದಂತೆ ಅಂತರ್ಜಾಲದ ಮೂಲಕ ಸ್ವಿಗ್ಗಿ, ಜೊಮೆಟೊ ಇವುಗಳ ಮೂಲಕ ಎಲ್ಲಾ ರೀತಿಯ ಸೇವೆ ನಡೆಯುತ್ತಿರುವುದರಿಂದ ಮಾರುಕಟ್ಟೆಗೆ ಹೋಗಿ ಖರೀದಿಸುವ ಪ್ರವೃತ್ತಿಯೇ ಹೊರಟು ಹೋಗಿದೆ. ಯಾವುದಾದರೂ ಬಟ್ಟೆ ಖರೀದಿಸಲೂ ಸಹ ಹಾಗೂ ಹಣವನ್ನು ಕೂಡ ಕೈಯಿಂದ ಕೈಗೆ ಕೊಡುವುದು ಹೊರಟು ಹೋಗಿ ಫೋನ್ ಪೇ, ಗೂಗಲ್ ಪೇ ಈ ರೀತಿ ಅಂತರ್ಜಾಲದಲ್ಲೇ ಎಲ್ಲಾ ಆಗುತ್ತಿರುವ ಕಾರಣ ಮನುಷ್ಯ ಯಾವುದೇ ಕೆಲಸ ಕಾರ್ಯಗಳಲ್ಲಿ ಗಮನ ಹರಿಸುತ್ತಿಲ್ಲ. ಮುಂದಿನ ದಿನಗಳಲ್ಲಿ ಇದು ಹೀಗೆ ಮುಂದುವರೆದರೆ ಮಾನವನಿಗೆ ವಿವೇಕ, ವಿವೇಚನೆ ಕಡಿಮೆಯಾಗುತ್ತದೆ ಎಂಬುದರಲ್ಲಿ ಅನುಮಾನವಿಲ್ಲ. –ಬಿ. ಪೃಥ್ವಿರಾಜ್, ಮಹಾರಾಜ ಕಾಲೇಜು, ಮೈಸೂರು.


ನಮ್ಮ ಮೈಸೂರಿನ ಅಸಾಮಾನ್ಯರು...



ಮಹಾರಾಜ ಮುಮ್ಮಡಿ ಕೃಷ್ಣರಾಜ ಒಡೆಯರಿಂದ ಹಿಡಿದು ಯದುವಂಶದ ಕೊನೆಯ ಮಹಾರಾಜರಾದ ಜಯಚಾಮರಾಜ ಒಡೆಯರ್ ಆಡಳಿತದ ಅವಧಿಯವರೆಗೆ ಅನೇಕ ಶ್ರೇಷ್ಠ ಮಹನೀಯರು ಮೈಸೂರು ರಾಜ್ಯದಲ್ಲಿ ಗಣನೀಯ ಸೇವೆ ಸಲ್ಲಿಸಿದ್ದಾರೆ. ಅಂತಹ ಕೆಲವರ ಹೆಸರುಗಳನ್ನು ಮೈಸೂರು ಚರಿತ್ರೆಗೆ ಸಂಬಂಧಪಟ್ಟ ಇತಿಹಾಸದ ಪುಸ್ತಕಗಳಲ್ಲಿ ಪ್ರಸ್ತಾಪಿಸಿರುವುದನ್ನು ನಾವು ಕಾಣುತ್ತೇವೆ. ಆಡಳಿತದ ಪ್ರಮುಖ ಹುದ್ದೆಯಲ್ಲಿದ್ದು, ಗಣನೀಯ ಸೇವೆ ಸಲ್ಲಿಸಿದ್ದ ಕೆಲವರ ಹೆಸರುಗಳು ಅವುಗಳಲ್ಲಿ ಕಂಡು ಬಂದರೂ, ಅವರಂತೆಯೇ ಅಪೂರ್ವ ಸೇವೆ ಸಲ್ಲಿಸಿರುವ ಇತರ ನೂರಾರು ಮಂದಿ ಎಲ್ಲಿಯೂ ಪ್ರಸ್ತಾಪಗೊಳ್ಳದೆ ಎಲೆಮರೆಕಾಯಿಯಾಗಿ ಉಳಿದು ಹೋಗಿದ್ದಾರೆ. ನೆನಪಿನ ಅಂಗಳದಿಂದ ಜಾರಿ ಹೋಗಿದ್ದಾರೆ. ಹಾಗೆ ಸೇವೆ ಸಲ್ಲಿಸಿದರಲ್ಲಿ ಹಲವಾರು ಮಂದಿ ಅಂದಿಗೆ ಖ್ಯಾತನಾಮರಾಗಿದ್ದರೂ ಇಂದು ಅವರ ಬಗ್ಗೆ ನಮಗೆ ಹೆಚ್ಚು ತಿಳಿಯದೆ ಹೋಗಿದೆ. ನೆನಪಿನಿಂದ ಅಳಿಸಿಹೋಗಿದ್ದಾರೆ. ಕೆಲವರ ಸೇವೆಯನ್ನಾದರೂ ಇಲ್ಲಿ ಗುರುತಿಸುವ ಪ್ರಯತ್ನ ನನ್ನದು. ಇಂತಹ ಪ್ರಯತ್ನ ಬಹಳ ಹಿಂದೆಯೇ ಪ್ರಾರಂಭಿಸುವ ಉದ್ದೇಶ ಹೊಂದಿದ್ದರೂ, ಅದು ಈಗ ಸಾಧ್ಯವಾಗುತ್ತಿದೆ. ನೆನಪಿನಂಗಳದಿಂದ ಮರೆಯಾದ ಮಹನೀಯರ ಪರಿಚಯ ಒಂದು ಮಾಲಿಕೆಯಾಗಿ ಪ್ರಕಟಗೊಳ್ಳಲಿದೆ. ಅವು 'ಮೈಸೂರು ಮಿತ್ರ' ಓದುಗರಿಗೆ ಮೆಚ್ಚುಗೆಯಾದರೆ, ಅದೇ ನನಗೆ ಬರೆದ ತೃಪ್ತಿ.



37. ಎಲ್.ಕೃಷ್ಣರಾವ್



ಗೌರಿ ಸತ್ಯ
ಹಿರಿಯ ಪತ್ರಕರ್ತರು
ಮೊ. 87627 88685

ಸುಮಾರು 1903ರಲ್ಲಿ ಭಾರತದಲ್ಲಿನ ಬ್ರಿಟಿಷ್ ವೈಸ್ರಾಯ್ ಮೈಸೂರಿಗೆ ಭೇಟಿ ನೀಡಿದಾಗ ಅತ್ಯುತ್ತಮವಾಗಿ ಪೊಲೀಸ್ ಬಂದೋಬಸ್ತ್ ಮಾಡಿ ಪ್ರಶಂಸೆ ಗಳಿಸಿದ ಪೊಲೀಸ್ ಅಧಿಕಾರಿ ನಮ್ಮ ಬೆಂಗಳೂರಿನವರು. ಅಷ್ಟೇ ಅಲ್ಲದೆ, ರಾಜ್ಯದಲ್ಲಿನ ಎರಡು ಪ್ರಮುಖ ಪ್ರಕರಣಗಳನ್ನು ಪತ್ತೆ ಹಚ್ಚಿ ಸರ್ಕಾರದ ತಲೆನೋವು ತಪ್ಪಿಸಿದ ಕೀರ್ತಿಯೂ ಈ ಅಧಿಕಾರಿಯದೇ.

ಈ ದಕ್ಷ ಪೊಲೀಸ್ ಅಧಿಕಾರಿ ಹುಟ್ಟಿದ್ದು ಶಿವಮೊಗ್ಗದಲ್ಲಿ, 1862ರ ಡಿಸೆಂಬರ್ 15ರಂದು. ಅಲ್ಲಿನ ಕಾಲೇಜಿನಲ್ಲಿ ಶಿಕ್ಷಣ ಮುಗಿಸಿದ ಮೇಲೆ 1879ರಲ್ಲಿ ಮೈಸೂರು ಸರ್ಕಾರದ ಸೇವೆಗೆ ಸೇರಿದರು. ಅವರ ಮೊದಲ ಹುದ್ದೆ ಮುನ್ಶಿ. 1890 ರವರೆಗೂ ಕ್ರಮೇಣ ಉನ್ನತಿಗೇರುತ್ತಾ ಕೋಲಾರ ಜಿಲ್ಲೆಯ ಕೇಂದ್ರಸ್ಥಳದ ಪೊಲೀಸ್ ಇನ್ಸ್‌ಪೆಕ್ಟರ್ ಆದರು. ಎರಡು ವರ್ಷಗಳ ನಂತರ ನಗರ ಪೊಲೀಸ್ ಇನ್ಸ್‌ಪೆಕ್ಟರ್ ಹುದ್ದೆಗೆ ಏರಿದರು.

ನಾಲ್ಕು ವರ್ಷಗಳ ತರುವಾಯ ಸರ್ಕಾರ ಅವರನ್ನು ಬೆಂಗಳೂರಿಗೆ ವರ್ಗಾವಣೆ ಮಾಡಿ ಬೆಂಗಳೂರು ನಗರದ ಉಸ್ತುವಾರಿ ಪೊಲೀಸ್ ಇನ್ಸ್‌ಪೆಕ್ಟರ್ ಹುದ್ದೆಗೆ ನೇಮಿಸಿತು. ನಂತರ ಇವರು ಪ್ರೋಟೆಮ್ ಅಸಿಸ್ಟೆಂಟ್ ಪೊಲೀಸ್ ಸೂಪರಿಂಟೆಂಡೆಂಟ್ ಆಗಿದ್ದು, ಅವರನ್ನು 1898ರಲ್ಲಿ ಅದೇ ಹುದ್ದೆಯಲ್ಲಿ ಖಾಯಂಗೊಳಿಸಲಾಯಿತು. ಆ ವರ್ಷ ರಾಜ್ಯದ ಇತರ ಕಡೆಗಳಲ್ಲಂತೆ ಬೆಂಗಳೂರಿನಲ್ಲಿಯೂ ಪ್ಲೇಗ್ ಅಂಟು ಜಾಡ್ಯ ಹಬ್ಬಿ ಕೃಷ್ಣರಾವ್ ಅವರನ್ನು ಪ್ಲೇಗ್ ನಿವಾರಣಾ ಕಾರ್ಯಕ್ಕಾಗಿ ನೇಮಿಸಲಾಯಿತು. ಕ್ರಮೇಣ ಅಧಿಕಾರದಲ್ಲಿ ಉನ್ನತಿಗೇರುತ್ತಾ ಬಂದ ಇವರು ಎರಡು ವರ್ಷಗಳ ನಂತರ ಪೊಲೀಸ್ ಸೂಪರಿಂಟೆಂಡೆಂಟ್ ಶ್ರೇಣಿ ತಲುಪಿದರು. ಈ ಹುದ್ದೆಯಲ್ಲಿದ್ದಾಗ ಕೃಷ್ಣರಾವ್ ಅವರ ಕೀರ್ತಿ ಶಿಖರಕ್ಕೇರಿತು.

ಅವರ ಮೊದಲ ಸಾಧನೆ ಎಂದರೆ ಕುಖ್ಯಾತಿ ಪಡೆದಿದ್ದ ಗೌರಿಬಿದನೂರು-ಮದ್ದಗಿರಿ ಡಕಾಯಿತಿಯನ್ನು ಪತ್ತೆ ಹಚ್ಚಿದ್ದು. ಆ ಪ್ರಕರಣದಲ್ಲಿನ ಡಕಾಯಿತರನ್ನು ಪತ್ತೆ ಹಚ್ಚಿ ಅವರಿಗೆ ಶಿಕ್ಷೆ ಸಿಗುವಂತೆ ಮಾಡಿದರು. ಮದ್ದಗಿರಿ ಈಗ ಮಧುಗಿರಿಯಾಗಿದ್ದು, ಗೌರಿಬಿದನೂರು ಮತ್ತು ಮಧುಗಿರಿ ನಡುವಿನ 33 ಕಿಲೋಮೀಟರ್ ದೂರ. 3,930 ಅಡಿ ಎತ್ತರದ ಮಧುಗಿರಿಯ ಬೆಟ್ಟದ ಕೋಟೆ ಇಂದಿಗೂ ಪ್ರಸಿದ್ಧಿಯಾಗಿದೆ. ಈ ಪ್ರದೇಶದಲ್ಲಿ ಹಲವಾರು ಕೋಟೆ ಕೊತ್ತಲಗಳಿದ್ದು ಡಕಾಯಿತರಿಗೆ ಪ್ರಶಸ್ತ್ಯವಾದ ಸ್ಥಳವಾಗಿ ಅವರ ಹಾವಳಿ ವಿಪರೀತವಾಗಿತ್ತು. ಅಂತಹ ಒಂದು ದೊಡ್ಡ ಡಕಾಯಿತಿ ಪ್ರಕರಣವನ್ನು ಪತ್ತೆ ಹಚ್ಚಿ, ಸರ್ಕಾರಕ್ಕೆ ದೊಡ್ಡ ತಲೆನೋವಾಗಿದ್ದ ಈ ಡಕಾಯಿತರಿಗೆ ಶಿಕ್ಷೆಯಾಗುವಂತೆ ಮಾಡಿ ಸರ್ಕಾರದ ಮೆಚ್ಚುಗೆ ಗಳಿಸಿದರು.

1903ರಲ್ಲಿ ವೈಸ್ರಾಯ್ ಲಾರ್ಡ್ ಕರ್ಜನ್ ಮೈಸೂರಿಗೆ ಬಂದಿದ್ದಾಗ ಮೈಸೂರು ನಗರದಲ್ಲಿ ಬಂದೋಬಸ್ತ್ ಕಾರ್ಯವನ್ನು ಕೃಷ್ಣರಾವ್ ಯಾವುದೇ ಲೋಪವಾಗದಂತೆ ಅಚ್ಚುಕಟ್ಟಾಗಿ ನಿರ್ವಹಿಸಿ ಅದಕ್ಕೂ ಪ್ರಶಂಸೆ ಪಡೆದರು. ಭಾರತದಲ್ಲಿ ಬ್ರಿಟಿಷ್ ಅಧಿಪತ್ಯದ ಗಣ್ಯವ್ಯಕ್ತಿ ಭೇಟಿ ಕೊಡುತ್ತಾನೆ ಎಂದರೆ ಅದೇನು ಸಾಮಾನ್ಯವಲ್ಲ. ಅವನಿಗಾಗಿ ವಿಶೇಷ ವ್ಯವಸ್ಥೆಗಳು ಜರುಗುತ್ತಿದ್ದವು. ವ್ಯವಸ್ಥೆಗಳಲ್ಲಿ ಯಾವುದೇ ಲೋಪವಿಲ್ಲದೆ ಅಚ್ಚುಕಟ್ಟಾಗಿದ್ದು, ಅವನನ್ನು ಸಂತೋಷಪಡಿಸಬೇಕು. ಇದು ಎಲ್ಲ ರಾಜ ಮಹಾರಾಜರ ಆದ್ಯ ಕೆಲಸವಾಗಿತ್ತು. ಎಲ್ಲ ಕಾರ್ಯಗಳೂ ಅತಿ ಎಚ್ಚರಿಕೆಯಿಂದ ಜರುಗುತ್ತಿದ್ದವು. ಅದೂ ಮೈಸೂರಿಗೆ ಲಾರ್ಡ್ ಕರ್ಜನ್ ಭೇಟಿ ಅತ್ಯಂತ ಮಹತ್ವದ್ದಾಗಿತ್ತು. ಅವನನ್ನು ಎಲ್ಲ ರೀತಿಯಲ್ಲಿ ಮೆಚ್ಚಿಸುವುದು ಅವಶ್ಯಕವಾಗಿತ್ತು. ಅದರಲ್ಲಿ ಪೊಲೀಸ್ ಬಂದೋಬಸ್ತ್ ಕೂಡ ಸೇರಿತ್ತು.

ಮೈಸೂರಿಗೆ ಲಾರ್ಡ್ ಕರ್ಜನ್ ಭೇಟಿ ಎರಡು ಬಾರಿ ಜರುಗಿತ್ತು. 1900ರ ನವೆಂಬರ್ 30ರಂದು ಆತನ ಮೊದಲ ಭೇಟಿ. ಆ ಭೇಟಿಯಲ್ಲಿ ಆಗ ತಾನೇ ಕಾಲವಾಗಿದ್ದ ಮಹಾರಾಜ ಚಾಮರಾಜ ಒಡೆಯರ ಪ್ರತಿಮೆಯನ್ನು ಲಾರ್ಡ್ ಕರ್ಜನ್ ಅನಾವರಣ ಮಾಡಿದರು. ಕರ್ಜನ್ನಿನ ಎರಡನೆಯ ಭೇಟಿ 1902ರ ಆಗಸ್ಟ್ 4ರಂದು. ಇದಂತೂ ಹೆಚ್ಚು ಮಹತ್ವದ್ದಾಗಿತ್ತು. ಆಗಸ್ಟ್ 8ರಂದು ಜಗನ್ಮೋಹನ ಅರಮನೆಯಲ್ಲಿ ಮಹಾರಾಜ ನಾಲ್ವಡಿ ಕೃಷ್ಣರಾಜ ಒಡೆಯರನ್ನು ಸಿಂಹಾಸನದ ಮೇಲೆ ಕೂರಿಸಿ ಅವರಿಗೆ ರಾಜ್ಯದ ಆಡಳಿತವನ್ನು ಅಧಿಕೃತವಾಗಿ ವಹಿಸಿದ್ದು ಲಾರ್ಡ್ ಕರ್ಜನ್.

ಮಹಾರಾಜ ಚಾಮರಾಜ ಒಡೆಯರು ಬೇಗನೇ ಕಾಲವಾಗಿ ಕೃಷ್ಣರಾಜ ಒಡೆಯರು ಇನ್ನೂ ಚಿಕ್ಕವರಾಗಿದ್ದರಿಂದ ರಾಜ್ಯಾಡಳಿತವನ್ನು ಅವರಿಗೆ ವಹಿಸಿಕೊಟ್ಟಿರಲಿಲ್ಲ. ಅವರ ಬದಲಿಗೆ ಚಾಮರಾಜ ಒಡೆಯರ ಪತ್ನಿ ವಾಣೀವಿಲಾಸ ಸನ್ನಿಧಾನದವರು ರೀಜೆಂಟ್ ಆಗಿ ನೇಮಕಗೊಂಡು ಅಧಿಕಾರ ನಿರ್ವಹಿಸಿದರು. ಕೃಷ್ಣರಾಜ ಒಡೆಯರಿಗೆ 18 ವರ್ಷಗಳಾಗಿ ಪ್ರಾಪ್ತ ವಯಸ್ಸಿನವರಾದ ಮೇಲೆ ಅವರಿಗೆ 1902ರ ಆಗಸ್ಟ್ 8ರಂದು ಪಟ್ಟಾಭಿಷೇಕ ಜರುಗಿ ಆಡಳಿತದ ಅಧಿಕಾರವನ್ನು ಅಧಿಕೃತವಾಗಿ ವಹಿಸಿಕೊಡಲಾಯಿತು. ಆ ಪಟ್ಟಾಭಿಷೇಕ ಕಾರ್ಯಕ್ಕೆ ಲಾರ್ಡ್ ಕರ್ಜನ್ ಎರಡನೆಯ ಬಾರಿ ಮೈಸೂರಿಗೆ ಭೇಟಿ ಕೊಟ್ಟಿದ್ದುದು. ಈ ಮಹತ್ವದ ಸಂದರ್ಭದಲ್ಲಿ ಪೊಲೀಸ್ ಸೂಪರಿಂಟೆಂಡೆಂಟ್ ಕೃಷ್ಣರಾವ್ ಬಂದೋಬಸ್ತ್ ವ್ಯವಸ್ಥೆಯನ್ನು ಅಚ್ಚುಕಟ್ಟಾಗಿ ಮಾಡಿ ಪ್ರಶಂಸೆ ಪಡೆದುಕೊಂಡರು. ಅವರ ಇನ್ನೂ ಒಂದು ಸಾಧನೆಯೆಂದರೆ ದನಕರುಗಳನ್ನು ಕದಿಯುತ್ತಿದ್ದ ಕೊರಚರ ತಂಡಗಳನ್ನು ಪತ್ತೆ ಹಚ್ಚಿ ಅವರಿಗೆ ಶಿಕ್ಷೆ ಸಿಗುವಂತೆ ಮಾಡಿದ್ದು.

1904ರಲ್ಲಿ ಕೃಷ್ಣರಾವ್ ಅವರನ್ನು ತುಮಕೂರಿನ ಅಸಿಸ್ಟೆಂಟ್ ಕಮೀಷನರನ್ನಾಗಿ ನೇಮಿಸಲಾಯಿತು. ಆ ವರ್ಷ ಸರ್ಕಾರ ಮದ್ರಾಸಿನಲ್ಲಿ ವಿಶೇಷ ಕರ್ತವ್ಯದ ಮೇಲೆ ಹೋಗಿದ್ದ ಪೊಲೀಸ್ ಡೆಪ್ಯೂಟಿ ಇನ್ಸ್‌ಪೆಕ್ಟರ್ ಜನರಲ್ ಎಫ್. ಫಾಸೆಟ್ ಕೃಷ್ಣರಾವ್ ಅವರ ಬಗ್ಗೆ ವ್ಯಕ್ತಪಡಿಸಿದ ಪ್ರಶಂಸನಾ ನುಡಿಗಳನ್ನು ಸರ್ಕಾರ ಗಮನಕ್ಕೆ ತೆಗೆದುಕೊಂಡು ಅದನ್ನು ದಾಖಲು ಮಾಡಿತು. ಈ ಬ್ರಿಟಿಷ್ ಮೇಲಧಿಕಾರಿ ಕೃಷ್ಣರಾವ್ ವಿಶೇಷ ಕರ್ತವ್ಯದಲ್ಲಿ ಮಾಡಿದ್ದ ದಕ್ಷ ಸೇವೆಯನ್ನು ಮೆಚ್ಚಿ ಅವರ ಕಾರ್ಯದ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿದ್ದ. 1905ರಲ್ಲಿ ಕೃಷ್ಣರಾವ್ ಅವರಿಗೆ ಎರಡನೇ ದರ್ಜೆಯ ಅಸಿಸ್ಟೆಂಟ್ ಕಮೀಷನರ್ ಹಾಗೂ ಪೊಲೀಸ್ ಸೂಪರಿಂಟೆಂಡೆಂಟ್ ಸ್ಥಾನವನ್ನು ನೀಡಿತು. ಹೀಗೆ ದಕ್ಷತೆಯಿಂದ ಕರ್ತವ್ಯ ನಿರ್ವಹಿಸಿ ಬರುತ್ತಿದ್ದ ಕೃಷ್ಣರಾವ್ ಕೆಲ ಕಾಲದ ನಂತರ ನಿವೃತ್ತರಾದರು.

ಎಡಿಜಿಪಿ ಚಂದ್ರಶೇಖರ್ ಒಬ್ಬ ಕ್ರಿಮಿನಲ್, ಬ್ಲ್ಯಾಕ್‌ಮೇಲರ್

ಬೆಂಗಳೂರು: ಎಡಿಜಿಪಿ ಚಂದ್ರಶೇಖರ್ ಒಬ್ಬ ಬ್ಲ್ಯಾಕ್‌ಮೇಲರ್, ಕ್ರಿಮಿನಲ್ ಎಂದು ಕೇಂದ್ರದ ಭಾರಿ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಗುಡುಗಿದರು. ಆತ ತನ್ನ ಸಹೋದ್ಯೋಗಿಗಳಿಗೆ ಬರೆದಿರುವ ಪತ್ರವನ್ನು ಚೆನ್ನಾಗಿ ತಯಾರು ಮಾಡಿದ್ದಾರೆ. ಆ ಪತ್ರವನ್ನು ಯಾರು, ಎಲ್ಲಿ ತಯಾರು ಮಾಡಿಕೊಟ್ಟರು ಎನ್ನುವುದು ನನಗೂ ಚೆನ್ನಾಗಿ ಗೊತ್ತಿದೆ. ಉತ್ತರ ಕೊಡುವ ಜಾಗದಲ್ಲಿ, ಸಂದರ್ಭದಲ್ಲಿ ಇದಕ್ಕೆ ಉತ್ತರ ಕೊಡುತ್ತೇನೆ ಎಂದು ಅವರು ಹೇಳಿದರು.

ಅಧಿಕಾರಿ ತನ್ನ ಸಹೋದ್ಯೋಗಿಗಳಿಗೆ ಬರೆದಿರುವ ಪತ್ರದ ಬಗ್ಗೆ ಮಾಧ್ಯಮಗಳು ಕೇಳಿದ ಪ್ರಶ್ನೆಗಳಿಗೆ ಉತ್ತರಿಸಿದ ಸಚಿವರು, ಆತ ಹೇಳಿರುವಂತೆ ನಾನು ಪ್ರಕರಣದಲ್ಲಿ ಆರೋಪಿ ಇರಬಹುದು. ಆದರೆ, ಆತ ಅಧಿಕಾರಿ ಸೋಗಿನಲ್ಲಿರುವ ಕ್ರಿಮಿನಲ್. ಆತನ ವಿರುದ್ಧ ಸರಣಿ ಅಪರಾಧ ಕೃತ್ಯಗಳನ್ನು ಎಸಗಿರುವ ಆರೋಪಗಳಿವೆ ಎಂದು ಕಿಡಿಕಾರಿದರು.

ಲೋಕಾಯುಕ್ತರಿಗೆ ರಾಜ್ಯಪಾಲರು ಬರೆದ ಪತ್ರವು ಸರಕಾರಿ ಪ್ರಾಯೋಜಿತ ಒಂದು ನಿರ್ದಿಷ್ಟ ಸುದ್ದಿ ವಾಹಿನಿಗೆ ಸೋರಿಕೆ ಆಗಿತ್ತು. ಅದನ್ನು ಸೋರಿಕೆ ಮಾಡಿದ್ದು ಯಾರು ಎನ್ನುವುದು ಎಲ್ಲರಿಗೂ ಗೊತ್ತಿದೆ. ಆದರೆ, ಅದು ರಾಜಭವನದಿಂದಲೇ ಸೋರಿಕೆ ಆಗಿರಬೇಕೆಂದು ಕಥೆ ಕಟ್ಟಿ, ರಾಜಭವನ ಸಿಬ್ಬಂದಿಯನ್ನೇ ತನಿಖೆ ಮಾಡಬೇಕು, ಅನುಮತಿ ಕೊಡಿ ಎಂದು ಅಧಿಕಾರಿ ಚಂದ್ರಶೇಖರ್ ತನ್ನ ಉನ್ನತ ಅಧಿಕಾರಿಗೆ ಪತ್ರ ಬರೆದಿದ್ದರು. ಹೀಗಾಗಿ ಆ ಅಧಿಕಾರಿಯ ದರ್ಪ ಹಾಗೂ ಆತನ ಹಿನ್ನೆಲೆ ಬಗ್ಗೆ ನಾನು ದಾಖಲೆಗಳ ಸಮೇತ ಮಾತನಾಡಿದ್ದೇನೆ ಎಂದರು.



ನಾನು ಕೇಳಿರುವ ಪ್ರಶ್ನೆಗಳಿಗೆ ಆತ ಉತ್ತರ ನೀಡಿಲ್ಲ. ಬದಲಿಗೆ ಕ್ರಿಮಿನಲ್ ಮನಃಸ್ಥಿತಿಯ ಕೊಳಕು ಭಾಷೆಯನ್ನು ಬಳಸಿ, ಒಬ್ಬ ಕೇಂದ್ರ ಸಚಿವರ ಬಗ್ಗೆ ಕೆಟ್ಟದ್ದಾಗಿ ಪತ್ರದಲ್ಲಿ ಪದ ಬಳಕೆ ಮಾಡಿದ್ದಾರೆ. ಇದಕ್ಕೆ ಏನು ಮಾಡಬೇಕು, ಎಲ್ಲಿ ಉತ್ತರ ಕೊಡಬೇಕು ಎನ್ನುವುದು ನನಗೆ ಗೊತ್ತಿದೆ ಎಂದು ಅವರು ಹೇಳಿದರು.

ನಾನು ದಾಖಲೆ, ವಿಷಯ ಇಲ್ಲದೆ ಮಾತನಾಡುವುದಿಲ್ಲ. ಅಧಿಕಾರಿ ಬರೆದಿರುವ ಪತ್ರವನ್ನು ಚೆನ್ನಾಗಿ ಸಿದ್ಧ ಮಾಡಿಕೊಟ್ಟಿದ್ದಾರೆ. ನಾನು ಶನಿವಾರ ಬೆಳಗ್ಗೆ ಮಾಧ್ಯಮಗೋಷ್ಠಿ ಮಾಡಿದ ಮೇಲೆ, ಸಂಜೆ ಆ ಅಧಿಕಾರಿ ಎಲ್ಲಿ ಹೋಗಿದ್ದ ಎನ್ನುವುದು ಗೊತ್ತಿದೆ. ಅವರ ಪತ್ರವನ್ನು ಅಲ್ಲಿ ಯಾವ ಕಾನೂನು ಪಂಡಿತರು ರೆಡಿ ಮಾಡಿಕೊಟ್ಟರು, ಅವರೊಂದಿಗೆ ಇನ್ನೊಬ್ಬರು ಯಾರಿದ್ದರು ಎನ್ನುವುದು ನನಗೆ ಗೊತ್ತಿದೆ ಎಂದು ಸಚಿವರು ಹೇಳಿದರು.

ನಾನು ದಾಖಲೆ ಇಟ್ಕೊಂಡೇ ನಿನ್ನೆ ಮಾತಾಡಿದ್ದೇನೆ. ಈತ ಆಂಧ್ರ ಪ್ರದೇಶ ಮೂಲದವನು, ಹಿಮಾಚಲ ಪ್ರದೇಶ ಕೇಡರ್ ಅಧಿಕಾರಿ 25 ವರ್ಷಗಳಿಂದ ಇಲ್ಲಿದ್ದಾರೆ. ಯಾರನ್ನು ಹಿಡಿದುಕೊಂಡು ಇಲ್ಲಿಗೆ ಬಂದಿದ್ದೀರಿ? ಆತ ಬಳಕೆ ಮಾಡಿರುವ ಭಾಷೆ ಆತನ ಸಂಸ್ಕೃತಿಯನ್ನು ತೋರಿಸುತ್ತದೆ. ಯಾರು ಯಾರ ಜತೆ ಈತನ ಕ್ರಿಮಿನಲ್ ನಂಟಿದೆ ಎನ್ನುವುದನ್ನು ಶನಿವಾರವೇ ದಾಖಲೆ ಸಮೇತ ಹೇಳಿದ್ದೇನೆ. ಒಬ್ಬ ಕೇಂದ್ರ ಮಂತ್ರಿ ಬಗ್ಗೆ ಯಾವ ಭಾಷೆ ಬಳಸಿದ್ದಾನೆ ಎನ್ನುವುದು ಎಲ್ಲರಿಗೂ ಗೊತ್ತಾಗಿದೆ ಎಂದು ಸಚಿವರು ಹೇಳಿದರು.

ಪತ್ರದಲ್ಲಿ ಸತ್ಯಮೇವ ಜಯತೆ ಎಂದು ಆತ ಬರೆದಿದ್ದಾರೆ. ನಾನು ಹೋರಾಟ ಮಾಡುತ್ತಿರುವುದು ಕೂಡ ಅದೇ ಉದ್ದೇಶಕ್ಕೆ. ಶನಿವಾರ ಅಷ್ಟು ದಾಖಲೆಗಳ ಸಮೇತ ಈ ವ್ಯಕ್ತಿ ಬಗ್ಗೆ ಹೇಳಿದ್ದು ಕೂಡ ಸತ್ಯಮೇವ ಜಯತೇ ಕಾರಣಕ್ಕಾಗಿಯೇ ಎಂದು ಅವರು ಹೇಳಿದರು.

ಪೊಲೀಸ್ ಠಾಣೆಗೆ ಈ ಅಧಿಕಾರಿ ವಿರುದ್ಧ ನಾನು ದೂರು ಕೊಟ್ಟಿದ್ದೀನಾ? ಅವರ ಕೈ ಕೆಳಗೆ ಕೆಲಸ ಮಾಡುವ ಇನ್ಸ್‌ಪೆಕ್ಟರ್‌ಗೆ 20 ಕೋಟಿ ಡಿಮ್ಯಾಂಡ್ ಇಟ್ಟು ಸಿಕ್ಕಿಬಿದ್ದಿದ್ದಾನೆ. ಆ ಇನ್ಸ್‌ಪೆಕ್ಟರ್ ಈ ಅಧಿಕಾರಿ ವಿರುದ್ಧ ದೂರು ನೀಡಿದ್ದಾರೆ. ತಕ್ಷಣ 2 ಕೋಟಿ ತಂದು ಕೊಡಬೇಕು ಎಂದು ಬ್ಲಾಕ್‌ಮೇಲ್ ಮಾಡಿದ್ದು ಈತನೇ ಅಲ್ಲವೇ? ಎಫ್‌ಐಆರ್ ಹಾಕಿದ ನಂತರ ಕೇಸ್ ಕೋರ್ಟ್ ಮುಂದೆ ಇದೆಯಲ್ಲ. ಇದೇನಾ ಆತನ ಸತ್ಯಮೇವ ಜಯತೆ? ಎಂದು ಕಿಡಿಕಾರಿದರು. ಸಿಎಂ ಸಿದ್ದರಾಮಯ್ಯ ಹಾಗೂ ಅವರ ಪಟಾಲಂಗೆ ನನ್ನ ರಾಜೀನಾಮೆ ಕೇಳುವ ನೈತಿಕತೆ ಇಲ್ಲ. ಸಿದ್ದರಾಮಯ್ಯ ಮೆಚ್ಚಿಸಲು ನಾನು ರಾಜೀನಾಮೆ ಕೊಡಬೇಕಾ? ನಾನು ತಪ್ಪು ಮಾಡಿಲ್ಲ, ತಪ್ಪು ಮಾಡಿಲ್ಲ ಅಂದ್ಮೇಲೆ ರಾಜೀನಾಮೆ ಯಾಕೆ ಕೊಡಲಿ? ಸುಳ್ಳು ಹೇಳ್ತಿರೋದು ನಾನಲ್ಲ ಎಂದು ಟೀಕಾ ಪ್ರಹಾರ ನಡೆಸಿದರು.

ಜಾತಿ-ಧರ್ಮದ ದ್ವೀಪಗಳನ್ನು ದಾಟಿ ಮತ್ತೊಂದು ಸಂಸ್ಕೃತಿ-ಬದುಕು ಅರಿಯಲು ಕನ್ನಡಕ್ಕೆ ಭಾಷಾಂತರ ಅಗತ್ಯ

'ದಿ ಸಾಯ್ಲ್' ಫ್ರೆಂಚ್ ಕಾದಂಬರಿ ಅನುವಾದಿತ ಕನ್ನಡ ಕೃತಿ 'ಭೂಮಿ' ಬಿಡುಗಡೆಗೊಳಿಸಿದ ಹಿರಿಯ ಸಾಹಿತಿ ಪ್ರೊ.ಬರಗೂರು ರಾಮಚಂದ್ರಪ್ಪ ಅಭಿಮತ



ಮೈಸೂರಿನ ರಂಗಾಯಣದ ವನರಂಗದಲ್ಲಿ 'ಭೂಮಿ' ಕೃತಿಯನ್ನು ಬಿಡುಗಡೆ ಮಾಡಲಾಯಿತು.

ಸರ್ಕಾರ ಪುಸ್ತಕ ಖರೀದಿಗೆ ವಾರ್ಷಿಕ 20 ಕೋಟಿ ಮೀಸಲಿಡಬೇಕು...

"ಸರ್ಕಾರ ಕಳೆದ ಏಳೆಂಟು ವರ್ಷಗಳಿಂದ ಪುಸ್ತಕಗಳನ್ನು ಖರೀದಿ ಮಾಡುತ್ತಿಲ್ಲ. 2020ರಲ್ಲಿ ಖರೀದಿ ಮಾಡಿದ ಪುಸ್ತಕಗಳಿಗೆ ಹಣ ಸಂದಾಯ ಮಾಡಿಲ್ಲ. ಪುಸ್ತಕೋದ್ಯಮ ಚಿಂತಾಜನಕ ಸ್ಥಿತಿಯಲ್ಲಿದೆ. ಇಂತಹ ಸಂದರ್ಭದಲ್ಲಿ ಸೃಷ್ಟಿ ನಾಗೇಶ್ ಅತ್ಯುತ್ತಮ ರೀತಿಯಲ್ಲಿ 'ಭೂಮಿ' ಪುಸ್ತಕ ಪ್ರಕಟಿಸಿದ್ದಾರೆ. ಸರ್ಕಾರ ಪುಸ್ತಕೋದ್ಯಮದ ಬಗ್ಗೆ ಗಮನ ನೀಡಬೇಕು. ವರ್ಷಕ್ಕೆ ಸುಮಾರು 20 ಕೋಟಿ ರೂ. ಅನ್ನು ಪುಸ್ತಕ ಖರೀದಿಗೆ ಮೀಸಲಿಡಬೇಕು. ಇದು ಸರ್ಕಾರಕ್ಕೆ ಕಷ್ಟವೇನಲ್ಲ. ಜೊತೆಗೆ ಗ್ರಂಥಾಲಯ ಸೆಸ್‌ನಲ್ಲಿ ಅರ್ಧ ಭಾಗವನ್ನು ಪುಸ್ತಕೋದ್ಯಮಕ್ಕೆ ಮೀಸಲಿರಿಸಬೇಕು. ಪುಸ್ತಕ ಮತ್ತು ಸಾಹಿತ್ಯ ಪ್ರಿಯ ಸರ್ಕಾರ ಈಗ ಇರುವ ಹಿನ್ನೆಲೆಯಲ್ಲಿ ಈ ಮಾತುಗಳನ್ನು ಹೇಳುತ್ತಿದ್ದೇನೆ. –ಕುಂ.ವೀರಭದ್ರಪ್ಪ

ಮೈಸೂರು,ಸೆ.29(ಪಿಎಂ)– ಇಂದು ಜಾತಿ-ಧರ್ಮದ ದ್ವೀಪಗಳು ಹೆಚ್ಚು ರೂಪುಗೊಳ್ಳುತ್ತಿದ್ದು, ಅವುಗಳನ್ನು ದಾಟಲು ಮತ್ತೊಂದು ಸಂಸ್ಕೃತಿ-ಬದುಕು ಅರಿಯಬೇಕು. ಈ ಹಿನ್ನೆಲೆಯಲ್ಲಿ ಕನ್ನಡಕ್ಕೆ ಭಾಷಾಂತರ ಕೃತಿಗಳು ಅಗತ್ಯ ಎಂದು ಹಿರಿಯ ಸಾಹಿತಿ ನಾಡೋಜ ಪ್ರೊ.ಬರಗೂರು ರಾಮಚಂದ್ರಪ್ಪ ಹೇಳಿದರು.

ಮೈಸೂರಿನ ರಂಗಾಯಣದ ವನರಂಗದಲ್ಲಿ ಬೆಂಗಳೂರಿನ ಸೃಷ್ಟಿ ಪಬ್ಲಿಕೇಷನ್ಸ್, ಹಸಿರು ಆರ್ಗ್ಯಾನಿಕ್ಸ್ ಮತ್ತು ರಂಗಾಯಣದ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಸಮಾರಂಭದಲ್ಲಿ ಡಾ.ಬಂಜಗೆರೆ ಜಯಪ್ರಕಾಶ್ ಅವರ 'ಭೂಮಿ' ಕೃತಿ (ಎಮಿಲ್ ಜೋಲಾ ಅವರ 'ದಿ ಸಾಯ್ಲ್' ಫ್ರೆಂಚ್ ಕಾದಂಬರಿಯ ಅನುವಾದ) ಬಿಡುಗಡೆಗೊಳಿಸಿ ಮಾತನಾಡಿದರು.

ಇಂದು ಜಾತಿ-ಧರ್ಮದ ದ್ವೀಪಗಳು ಹೆಚ್ಚು ರೂಪುಗೊಳ್ಳುವ ಸಂದರ್ಭದಲ್ಲಿದ್ದೇವೆ. ಈ ದ್ವೀಪಗಳನ್ನು ದಾಟಲು ನಾವು ಇನ್ನೊಂದು ಸಂಸ್ಕೃತಿ ಮತ್ತು ಬದುಕನ್ನು ಅರ್ಥ ಮಾಡಿಕೊಳ್ಳಬೇಕು. ಆಗ ಮಾತ್ರ ಇಂತಹ ದ್ವೀಪಗಳನ್ನು ದಾಟಿ ಮನುಷ್ಯರಾಗಲು ಸಾಧ್ಯ. ಹಾಗಾಗಿ ಮನಸ್ಸುಗಳು ಹಾಗೂ ಭೂಗೋಳವನ್ನು ಬೆಸೆಯುವ ಭಾಷಾಂತರದ ಕೃತಿಗಳು ಕನ್ನಡಕ್ಕೆ ಅಗತ್ಯ ಎಂದರು.

ಉತ್ತಮ ಭಾಷಾಂತರಕ್ಕೆ 'ಭೂಮಿ' ಕೃತಿ ನಿದರ್ಶನವಾಗಲಿದೆ. ಭಾಷಾಂತರ ಅಂದರೆ ಅದು ಕೇವಲ ಅರ್ಥಾಂತರವಲ್ಲ. ನಿಘಂಟಿನ ಅರ್ಥಕ್ಕೆ ಅದಕ್ಕನುಗುಣವಾಗಿ ಭಾಷಾಂತರ ಮಾಡುವುದು ಉತ್ತಮ ಭಾಷಾಂತರವಲ್ಲ. ಏಕೆಂದರೆ ಭಾಷೆ ಸಂವಹನದ ಸಾಧನವೂ ಹೌದು, ಸಾಮಾಜಿಕವೂ ಹೌದು, ಸಾಂಸ್ಕೃತಿಕವೂ ಹೌದು. ಒಬ್ಬ ಭಾಷಾಂತರಕಾರನಿಗೆ ಅನುವಾದಕ್ಕೆ ಆಯ್ಕೆ ಮಾಡಿದ ಕೃತಿಯ ಮೂಲದ ಸಾಮಾಜಿಕ ಮತ್ತು ಸಾಂಸ್ಕೃತಿಕ ಸಂದರ್ಭದ ಅರಿವಿರಬೇಕು. ಭಾಷೆ ಕೇವಲ ಭಾಷೆ ಮಾತ್ರವಲ್ಲ, ಅದರೊಳಗೆ ಒಂದು ಬದುಕು ಇರುತ್ತದೆ ಎಂದರು.

ಭಾರತದಲ್ಲೇ ನೂರಾರು ರೀತಿಯ ಜೀವನ ವಿಧಾನಗಳನ್ನು ಕಾಣಬಹುದು. ಅದಕ್ಕಾಗಿಯೇ ಬಹುತ್ವ ಭಾರತ ಎನ್ನುತ್ತೇವೆ. ಎಷ್ಟೋ ಸಂದರ್ಭದಲ್ಲಿ ಸ್ವಂತ ಕೃತಿ ಬರೆಯುವುದಕ್ಕಿಂತಲೂ ಭಾಷಾಂತರವೇ ಕ್ಲಿಷ್ಟಕರ. ಒಂದು ಕಾಲಮಾನದ ತಿಳುವಳಿಕೆ ಮೂಲಕವೇ ಭಾಷಾಂತರ ನಡೆಯಬೇಕಿರುತ್ತದೆ. ಇದರ ಜೊತೆಗೆ ಭಾಷಾಂತರ ಎನ್ನುವುದು ಭೂಗೋಳದ ಭಾವ ಸಂಬಂಧವಾಗಲಿದೆ. ಒಂದು ಭೂಗೋಳದಲ್ಲಿ ಜನರ ಬದುಕು, ಪ್ರಕೃತಿ ಸೇರಿದಂತೆ ಹಲವು ಅಂಶಗಳು ಇರುತ್ತವೆ. ಈ ಅಂಶಗಳ ಜೊತೆಗಿನ ಭಾವ ಸಂಬಂಧ ಯಾರಿಗೆ ಸಾಧ್ಯವಾಗುತ್ತದೋ ಅವರು ಯಶಸ್ವಿಯಾಗಿ ಭಾಷಾಂತರ ಮಾಡಲು ಸಾಧ್ಯ. ಹಾಗಾಗಿ ಭಾಷಾಂತರ ಎನ್ನುವುದು ಭೂಗೋಳದ ಒಂದು ಭಾವ ಸಂಬಂಧ ಎಂದು ನಾನು ಭಾವಿಸುತ್ತೇನೆ ಎಂದರು.

ಎಮಿಲ್ ಜೋಲಾ ಅವರು ಫ್ರೆಂಚ್‌ನ ವಿಶಿಷ್ಟ ಲೇಖಕರು. ಅವರು ವಿಶೇಷವಾದ ವಸ್ತುಗಳನ್ನು ಇಟ್ಟುಕೊಂಡು ಕಾದಂಬರಿ ರಚನೆ ಮಾಡಿದವರು. ಆ ಮೂಲಕ ಅಜ್ಞಾತ ವಲಯಗಳನ್ನು ಅನಾವರಣ ಮಾಡಿದವರು. ಅವರು ಕೊಳಗೇರಿ ಬದುಕು, ಕಾರ್ಮಿಕರ ಬವಣೆ, ಮೇಲ್ವರ್ಗದವರ ಆತ್ಮವಂಚನೆ ಮತ್ತು ಅನ್ಯವಂಚನೆ ಕುರಿತು ಬರೆದಿದ್ದಾರೆ. ಒಟ್ಟಾರೆ ಬದುಕಿನ ಕಟು ವಾಸ್ತವಗಳನ್ನು ತಮ್ಮದೇ ಆದ ಶೈಲಿಯಲ್ಲಿ ಕೊಟ್ಟಿದ್ದಾರೆ. ಭೂಮಿ ಅವರ ಕೃತಿಗಳಲ್ಲೇ ಬಹಳ ಮುಖ್ಯವಾದ ಕೃತಿ. ಇದನ್ನು ಕನ್ನಡಕ್ಕೆ ಕೊಡುವ ಮೂಲಕ ಬಂಜಗೆರೆ ಜಯಪ್ರಕಾಶ್ ಕನ್ನಡ ಓದುಗರಿಗೆ ಉತ್ತಮ ಕೊಡುಗೆ ನೀಡಿದ್ದಾರೆ ಎಂದು ಪ್ರಶಂಸೆ ವ್ಯಕ್ತಪಡಿಸಿದರು.

ಪರಂಪರೆ ಮತ್ತು ಸಮಕಾಲೀನ ಪ್ರಜ್ಞೆಯ ಬೆಸುಗೆಯನ್ನು ಬಂಜಗೆರೆ ಜಯಪ್ರಕಾಶ್ ಅವರ ಬರಹ, ಭಾಷಣ ಹಾಗೂ ಕ್ರಿಯೆಗಳಲ್ಲಿ ಕಾಣಬಹುದು. ಪರಂಪರೆಯ ಪ್ರಜ್ಞೆ ಇಲ್ಲದೇ ಸಮಕಾಲೀನ ಪ್ರಜ್ಞೆಗೆ ಅರ್ಥವಿಲ್ಲ. ಸಮಕಾಲೀನ ಪ್ರಜ್ಞೆ ಎನ್ನುವುದು ತಂತಾನೆ ಈ ಕ್ಷಣದಲ್ಲಿ ಹುಟ್ಟಿದ್ದಲ್ಲ. ಅದಕ್ಕೊಂದು ಚರಿತ್ರೆ ಹಾಗೂ ಚಲನಶೀಲತೆ ಇರುತ್ತದೆ. ಪರಂಪರೆ ಬೇರೆ ಹಾಗೂ ಸಂಪ್ರದಾಯ ಬೇರೆ. ಸಂಪ್ರದಾಯ ಜಢವಾದರೆ, ಪರಂಪರೆ ಚಲನಶೀಲವಾಗಿರುತ್ತದೆ. ಹಾಗಾಗಿ ಪರಂಪರೆಯು ಸಂಸ್ಕೃತಿಯಲ್ಲಿ ಮುಖ್ಯ ಎಂದರು.

ಖ್ಯಾತ ಕಾದಂಬರಿಕಾರ ಕುಂ.ವೀರಭದ್ರಪ್ಪ ಅಧ್ಯಕ್ಷತೆ ವಹಿಸಿದ್ದರು. ಕೃತಿ ಕುರಿತು ಲೇಖಕ ಅಗ್ರಹಾರ ಕೃಷ್ಣಮೂರ್ತಿ ಮಾತನಾಡಿದರು. ರಂಗಾಯಣ ನಿರ್ದೇಶಕ ಸತೀಶ್ ತಿಪಟೂರು, ಕೃತಿ ಕರ್ತೃ ಡಾ.ಬಂಜಗೆರೆ ಜಯಪ್ರಕಾಶ, ಸೃಷ್ಟಿ ಪಬ್ಲಿಕೇಷನ್ಸ್‌ನ ಸೃಷ್ಟಿ ನಾಗೇಶ್, ಆರ್.ಸ್ವಾಮಿ ಆನಂದ್ ಮತ್ತಿತರರು ಹಾಜರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಮೈಸೂರು ಗುಜರಾತಿ ಸಮಾಜದ ಅಧ್ಯಕ್ಷರಾಗಿ ಮೆಹುಲ್ ಜೆ.ಪಟೇಲ್ ಆಯ್ಕೆ



2024–26ನೇ ಸಾಲಿಗೆ ಆಯ್ಕೆಯಾದ ಮೈಸೂರು ಗುಜರಾತಿ ಸಮಾಜದ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಕಾರ್ಯಕಾರಿ ಸದಸ್ಯರ ತಂಡ

ಮೈಸೂರು, ಸೆ.29(ಎಸ್‌ಪಿಎನ್)– ಮೈಸೂರು ಗುಜರಾತಿ ಸಮಾಜದ ಅಧ್ಯಕ್ಷರಾಗಿ ಮೆಹುಲ್ ಜೆ.ಪಟೇಲ್, ಉಪಾಧ್ಯಕ್ಷರಾಗಿ ಭರತ್ ಎಂ.ಪಟೇಲ್, ಕಾರ್ಯದರ್ಶಿಯಾಗಿ ಕಮಲೇಶ್ ಎನ್.ಮೋದ 2024–26ನೇ ಸಾಲಿಗೆ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಜಂಟಿ ಕಾರ್ಯದರ್ಶಿಯಾಗಿ ಎಚ್.ವಿಶಾಲ್ ಷಾ, ಖಜಾಂಚಿಯಾಗಿ ಜೆ.ಜತಿನ್ ಷಾ, ಕಾರ್ಯಕಾರಿ ಸಮಿತಿಯ ಸದಸ್ಯರಾಗಿ ಸಿ.ಮಿತೇಶ್ ಶಾ, ಬಾಲದತ್ತೇಶ್ ಸೋನಿ, ಲೋಕೇಶ್ ಸೋನಿ, ಗೌರವ್ ಮಾಳವೀಯ, ಬಿಪಿನ್ ಡೆಟ್ರೋಜಾ, ಮನೋಜ್ ಬಾಯಿ ಹರ್ಖ್ಜಿಬಾಯಿ, ಬಿಪಿನ್ ಬಾಥಿಯ, ಮಯಾಂಕ್ ದೋಷಿ, ಜೆ.ನಿರ್ಮಲ್ ಶಾ, ಮೋನಿಲ್ ಶಾ ಹಾಗೂ ವಿಶೇಷ ಆಹ್ವಾನಿತರಾಗಿ ಜೆ.ಕರಣ್ ಶಾ ಅವರು ಭಾನುವಾರ ನಡೆದ ಚುನಾವಣೆಯಲ್ಲಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಎಚ್.ಜಿತೀಂದ್ರ ಷಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಅಲ್ಲದೆ, ನನ್ನ ಅಧಿಕಾರಾವಧಿಯಲ್ಲಿ ಮೈಸೂರು ಗುಜರಾತಿ ಸಮಾಜದ ಅಭಿವೃದ್ಧಿಗೆ ಶ್ರಮಿಸುವುದಾಗಿ ನೂತನ ಅಧ್ಯಕ್ಷ ಮೆಹುಲ್ ಜೆ.ಪಟೇಲ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಒಂದನೇ ಪುಟದಿಂದ

ಜಾತಿ ಗಣತಿ ವರದಿ ಶಿಫಾರಸು ಜಾರಿ

ಕೆಲವು ಪಟ್ಟಭದ್ರ ಹಿತಾಸಕ್ತಿಗಳು ಈಗಲೂ ಸಮಾಜದಲ್ಲಿ ಜಾತಿ ಶ್ರೇಣಿಯನ್ನು ಮುಂದುವರೆಸಲು ಪ್ರಯತ್ನಿಸುತ್ತಿದ್ದಾರೆ. ಅವರು ಈ ಸಮಾಜದಲ್ಲಿ ದಲಿತರು, ಹಿಂದುಳಿದವರು ಮತ್ತು ಅಲ್ಪಸಂಖ್ಯಾತರು ಮುಂದೆ ಬರುವುದನ್ನು ಇಚ್ಛೆ ಪಡುವುದಿಲ್ಲ. ಈ ಹಿನ್ನೆಲೆಯಲ್ಲಿ ಹಿಂದೆ ಮುಖ್ಯಮಂತ್ರಿಯಾಗಿದ್ದಾಗ ಬಡವರಿಗೆ ಆರ್ಥಿಕವಾಗಿ ಸಾಮಾಜಿಕವಾಗಿ ಶಕ್ತಿ ನೀಡಲು ಭಾಗ್ಯ ಯೋಜನೆ ಗಳನ್ನು ಜಾರಿಗೊಳಿಸಿದ್ದೆ. ಈಗ ಐದು ಗ್ಯಾರಂಟಿ ಯೋಜನೆಗಳ ಮೂಲಕ ಸಮಾಜದ ಎಲ್ಲಾ ಜಾತಿಯ ದುರ್ಬಲ ವರ್ಗಕ್ಕೆ ಆರ್ಥಿಕ ವಾಗಿ ಶಕ್ತಿ ತುಂಬುವ ಕಾರ್ಯವನ್ನು ಮಾಡಲಾಗಿದೆ ಎಂದರು.

ಹಿಂದುಳಿದ ವರ್ಗ , ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ, ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಗೆ ಶಿಕ್ಷಣ ಕಡ್ಡಾಯ ವಾಗಿ ದೊರೆಯಬೇಕು. ಈ ನಿಟ್ಟಿನಲ್ಲಿ ವಿದ್ಯಾರ್ಥಿ ನಿಲಯಗಳು ಅತ್ಯಾವಶ್ಯಕ. ಜಾತಿ ವ್ಯವಸ್ಥೆ ಆರ್ಥಿಕ, ಸಾಮಾಜಿಕ ಅಸಮಾನತೆಗೆ ಕಾರಣವಾಗಿದ್ದು, ದುರ್ಬಲ ವರ್ಗದ ಜನರು ಅವಕಾಶದಿಂದಲೂ ವಂಚಿತರಾಗುತ್ತಿದ್ದಾರೆ. ಸಮಾನ ಅವಕಾಶಗಳು ದೊರೆಯುವ ಮೂಲಕ ತುಳಿಕ್ಕೊಳಗಾದವರು ಜೀವನದಲ್ಲಿ ಅಭಿವೃದ್ಧಿ ಹೊಂದು ವಂತಾಗಬೇಕು. ಯಾವುದೇ ಜಾತಿ, ಧರ್ಮಗಳು ಕರ್ಮ ಸಿದ್ಧಾಂತವನ್ನು ಪ್ರತಿಪಾದಿಸುವುದಿಲ್ಲ. ಇತಿಹಾಸ ತಿಳಿದವರು ಮಾತ್ರ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯ ಎಂಬುದನ್ನು ಡಾ.ಬಿ.ಆರ್.ಅಂಬೇಡ್ಕರ್ ರವರು ತಿಳಿಸಿದ್ದಾರೆ. ಎಲ್ಲರೂ ಸರಿಸಮಾನರಾಗಿ ಬಾಳಿದಾಗ ಮಾತ್ರ ಸಮಸಮಾಜ ನಿರ್ಮಾಣ ಸಾಧ್ಯ ಎಂದು ಬುದ್ಧ ಬಸವಾದಿ ಶರಣರು ಹಾಗೂ ಅಂಬೇಡ್ಕರ್, ಗಾಂಧಿಜೀ ಅವರ ಪ್ರತಿಪಾದನೆಯಾಗಿತ್ತು ಎಂದು ಸ್ಮರಿಸಿದರು.

ಸಂವಿಧಾನ ಜಾರಿಯಾಗುವ ಮೊದಲೇ ಮೈಸೂರು ರಾಜ್ಯದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಆಡಳಿತದಲ್ಲಿ ಮೀಸಲಾತಿಯನ್ನು ಜಾರಿಗೆ ತರಲಾಗಿತ್ತು. 1960ರಲ್ಲಿ ನಾಗೇಗೌಡ ಸಮಿತಿ ರಚನೆ ಯಾಯಿತು. ದೇವರಾಜ ಅರಸು ಮುಖ್ಯಮಂತ್ರಿಯಾಗಿದ್ದ ಸಂದರ್ಭ ದಲ್ಲಿ ಹಾವನೂರು ಆಯೋಗ ರಚಿಸಲಾಯಿತು. ವರದಿಗೆ ವಿರೋಧದ ನಡುವೆಯೂ ಜಾರಿಗೆ ತರಲಾಯಿತು. 1977 ರಲ್ಲಿ ಹಿಂದುಳಿದ ವರ್ಗಗಳ ಮಕ್ಕಳಿಗೆ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸಲಾಯಿತು. ವಿದ್ಯಾರ್ಥಿನಿಲಯಗಳಲ್ಲಿ ಶೇ.75 ರಷ್ಟು ಹಿಂದುಳಿದ ಜಾತಿಗಳ ಮಕ್ಕಳಿದ್ದರೆ, ಶೇ.25 ರಷ್ಟು ಪರಿಶಿಷ್ಠ ಜಾತಿ ಹಾಗೂ ಪರಿಶಿಷ್ಠ ಪಂಗಡದ ಮಕ್ಕಳಿದ್ದಾರೆ. 1,87,000 ವಿದ್ಯಾರ್ಥಿಗಳು ಇಂದು ವಿದ್ಯಾರ್ಥಿನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ ಎಂದರು. ನಾನು ಓದುವಾಗ ಮೀಸಲಾತಿ ವ್ಯವಸ್ಥೆ ಇಲ್ಲದಿದ್ದ ಕಾರಣ, ಉನ್ನತ ಶಿಕ್ಷಣಕ್ಕೆ ಅವಕಾಶ ದೊರಕಲಿಲ್ಲ. ಪಿಯುಸಿ, ಪದವಿ ಮಾಡುವ ಸಂದರ್ಭದಲ್ಲಿ ವಸತಿ ವ್ಯವಸ್ಥೆ ಇಲ್ಲದೇ, ನಾನೇ ಒಂದು ರೂಂ ಮಾಡಿಕೊಂಡು ಓದುತ್ತಿದ್ದೆ. ಆದ್ದರಿಂದ ವಿದ್ಯಾರ್ಥಿಗಳ ಕಷ್ಟಗಳ ಬಗ್ಗೆ ಅರಿತಿದ್ದ ನಾನು ವಿದ್ಯಾಸಿರಿ ಯೋಜನೆಯನ್ನು ಜಾರಿಗೆ ತಂದಿರುವುದಾಗಿ ತಿಳಿಸಿ, ತಮ್ಮ ವಿದ್ಯಾರ್ಥಿ ಜೀವನವನ್ನು ಮೆಲಕು ಹಾಕಿದರು. ವಿದ್ಯಾರ್ಥಿ ನಿಲಯಗಳಲ್ಲಿ ಪೌಷ್ಟಿಕ ಆಹಾರ ದೊರಕಿಸುವ ಉದ್ದೇಶದಿಂದ ಪ್ರೀ ಮೆಟ್ರಿಕ್ ವಿದ್ಯಾರ್ಥಿಗಳಿಗೆ ನೀಡುವ ವಿದ್ಯಾರ್ಥಿ ವೇತನವನ್ನು ಹೆಚ್ಚಳ ಮಾಡಿದೆ. ಹೀಗೆ ಐದು ವರ್ಷವೂ ಕೂಡ ವಿದ್ಯಾರ್ಥಿ ವೇತನವನ್ನು ಹಂತ ಹಂತವಾಗಿ ಹೆಚ್ಚಿಸಲಾಗಿ, ಮುಂಚೆ ಇದ್ದ 750 ರೂ ವಿದ್ಯಾರ್ಥಿ ವೇತನವನ್ನು 1750 ರೂ.ಗಳಿಗೆ ಹೆಚ್ಚಿಸಲಾಗಿದೆ. ಹಾಸ್ಟೆಲ್ ಗಳಲ್ಲಿ ಇರುವ ವಿದ್ಯಾರ್ಥಿಗಳಿಗೆ ಪೌಷ್ಟಿಕ ಆಹಾರ ಲಭಿಸಿದಾಗ ಮಾತ್ರ ಉತ್ತಮ ಜ್ಞಾನಾರ್ಜನೆ ಮಾಡಲು ಸಾಧ್ಯ. 2024–25 ರಲ್ಲಿಯೂ ಕೂಡ ವಿದ್ಯಾರ್ಥಿ ವೇತನವನ್ನು 1850 ರೂ.ಗಳಿಗೆ ಪುನಃ ಹೆಚ್ಚಿಸಲಾಗಿದೆ ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಸಿ.ಮಹದೇವಪ್ಪ, ಶಾಸಕರಾದ ತನ್ವೀರ್ ಸೇಠ್, ಅನಿಲ್ ಚಿಕ್ಕಮಾದು, ದರ್ಶನ್ ಧ್ರುವನಾರಾಯಣ್, ರವಿಶಂಕರ್, ಕೆ.ಹರೀಶ್‌ಗೌಡ, ಎಂಎಲ್‌ಸಿ ಡಾ.ಡಿ.ತಿಮ್ಮಯ್ಯ, ಸಂಘದ ಅಧ್ಯಕ್ಷ ಬಿ.ಶಿವಸ್ವಾಮಿ, ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ, ಜಿಪಂ ಸಿಇಓ ಕೆ.ಎಂ.ಗಾಯತ್ರಿ, ಮಂಡ್ಯ ಜಿಲ್ಲಾಧಿಕಾರಿ ಹಾಗೂ ಸಂಘದ ಕಾರ್ಯಾಧ್ಯಕ್ಷ ಡಾ.ಕುಮಾರ್, ಎಂ.ರಾಮಯ್ಯ, ಆರ್.ಮಹದೇವ, ರಾಜೇಶ್, ರುಕ್ಮಾಂಗದ, ಜೆ.ಕೆ.ರಮೇಶ್‌ಗೌಡ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಅಸ್ವಸ್ಥರಾದ ಮಲ್ಲಿಕಾರ್ಜುನ ಖರ್ಗೆ

ರಾಜ್ಯ ಸ್ಥಾನಮಾನ ಮರುಸ್ಥಾಪಿಸಲು ಹೋರಾಟ ಮಾಡುತ್ತೇವೆ. ನನಗೆ ಈಗ 83 ವರ್ಷ, ನಾನು ಅಷ್ಟು ಬೇಗ ಸಾಯು ವುದಿಲ್ಲ. ಪ್ರಧಾನಿ ಮೋದಿ ಅವರನ್ನು ಅಧಿಕಾರದಿಂದ ಕೆಳಗಿಳಿಸುವವರೆಗೂ ನಾನು ಜೀವಂತವಾಗಿರುತ್ತೇನೆ ಎಂದು ಗುಡುಗಿದ್ದಾರೆ. ಕೇಂದ್ರದಲ್ಲಿ ಅಧಿಕಾರದ ಲ್ಲಿರುವ ಬಿಜೆಪಿ ಮನಸ್ಸು ಮಾಡಿದ್ದರೆ ಒಂದೆರಡು ವರ್ಷಗಳ ಹಿಂದೆಯೇ ಚುನಾ ವಣೆ ಮಾಡಬಹುದಿತ್ತು. ಆದರೆ, ಬಿಜೆಪಿಗರು ಎಂದಿಗೂ ಚುನಾವಣೆ ನಡೆಸಲು ಬಯಸುವುದಿಲ್ಲ. ಸುಪ್ರೀಂ ಕೋರ್ಟ್ ಆದೇಶದ ನಂತರ ಅವರು ಚುನಾವಣೆಗೆ ತಯಾರಿ ಆರಂಭಿಸಿದರು ಎಂದಿದ್ದಾರೆ. ಬಿಜೆಪಿಗರು ರಾಜ್ಯಪಾಲರದ ಮೂಲಕ ರಿಮೋಟ್–ಕಂಟ್ರೋಲ್ ಸರ್ಕಾರವನ್ನು ನಡೆಸಲು ಬಯಸಿದ್ದರು. ಪ್ರಧಾನಿ ಮೋದಿ ಕಳೆದ 10 ವರ್ಷಗಳಲ್ಲಿ ಭಾರತದ ಯುವಕ ರಿಗೆ ಏನನ್ನೂ ನೀಡಿಲ್ಲ. 10 ವರ್ಷಗಳಲ್ಲಿ ನಿಮ್ಮ ಸಮೃದ್ಧಿಯನ್ನು ಮರಳಿ ತರಲು ಸಾಧ್ಯವಾಗದ ವ್ಯಕ್ತಿಯನ್ನು ನೀವು ನಂಬಬಹುದೇ? ಯಾವುದೇ ಬಿಜೆಪಿ ನಾಯಕರು ನಿಮ್ಮ ಮುಂದೆ ಬಂದರೆ, ಅವರು ಪ್ರಗತಿ ತಂದಿದ್ದಾರೋ ಇಲ್ಲವೋ ಕೇಳಿ ಎಂದು ಖರ್ಗೆ ಕರೆ ನೀಡಿದ್ದಾರೆ.



ಮಂಡ್ಯದಲ್ಲಿ ನಡೆದ ಪತ್ರಿಕಾ ದಿನಾಚರಣೆ ಕಾರ್ಯಕ್ರಮವನ್ನು ಸಚಿವ ಚಲುವರಾಯಸ್ವಾಮಿ ಉದ್ಘಾಟಿಸಿದರು.

ಪತ್ರಕರ್ತರು ಸತ್ಯದ ದರ್ಶನ ಮಾಡಿಸಲಿ

ಮಂಡ್ಯ: ಪತ್ರಿಕೋದ್ಯಮ ಇಂದು ಮಾನವೀಯ ಮೌಲ್ಯಗಳನ್ನು ಉಳಿಸಿ, ಸಾರ್ವಜನಿಕರಿಗೆ ಸತ್ಯದ ದರ್ಶನ ಮಾಡಿಸುವ ಕೆಲಸ ಮಾಡಬೇಕು ಎಂದು ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಎನ್.ಚಲುವರಾಯಸ್ವಾಮಿ ಅಭಿಪ್ರಾಯ ವ್ಯಕ್ತಪಡಿಸಿದರು.

ಭಾನುವಾರ ನಗರದ ಕರ್ನಾಟಕ ಸಂಘದ ಕೆ.ವಿ.ಶಂಕರೇಗೌಡ ಭವನದಲ್ಲಿ ನಡೆದ ಪತ್ರಿಕಾ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಯಾವ ಸರ್ಕಾರಗಳು ಏನೇ ತಪ್ಪು ಮಾಡಿದರೂ ಅದರ ಬಗ್ಗೆ ಸಮಾಜಕ್ಕೆ ತಪ್ಪು, ಸರಿ ತಿಳಿಸುವುದರ ಜೊತೆಗೆ ಸಮಾಜಮುಖಿ ಕೆಲಸದಲ್ಲಿ ತೊಡಗಿಕೊಂಡಿರುವವರ ಬಗ್ಗೆ ದಿನನಿತ್ಯ ವರದಿ ಮಾಡುತ್ತಿರುವುದು ಶ್ಲಾಘನೀಯ ಎಂದರು.

ಪತ್ರಕರ್ತರು ಪತ್ರಿಕಾ ಜೀವನದಲ್ಲಿ ಸಮಾಜದ ವ್ಯವಸ್ಥೆಯನ್ನು ಸರಿ ಮಾಡಲು ಪ್ರಯತ್ನಿಸಬೇಕು. ಪ್ರಜಾಪ್ರಭುತ್ವದಲ್ಲಿ ಯಾರು ಸಹ ತಪ್ಪು ಮಾಡದೇ ಇರಲಾರರು. ಅವರಲ್ಲಿ ಯಾವುದು ಸರಿ ಅಥವಾ ಯಾವುದು ತಪ್ಪು ಎಂಬ ಅಂಶಗಳನ್ನು ಮಾತ್ರ ತೆಗೆದುಕೊಂಡು ಜನರಿಗೆ ಸತ್ಯಾಸತ್ಯತೆ ತಿಳಿಸಬೇಕಿದೆ ಎಂದು ಹೇಳಿದರು.

ಯಾರದೋ ಒತ್ತಡದಲ್ಲಿ ಇಂದಿನ ಪತ್ರಿಕೋದ್ಯಮದ ನೈಜತೆಗೆ ಕೆಟ್ಟ ಪರಿಣಾಮ ಬೀರಿದೆ. ಜನತೆಗೆ ಹೆಚ್ಚು ಆಘಾತಕಾರಿ ವಿಷಯಗಳನ್ನು ತಿಳಿಸದೆ, ಸತ್ಯಗಳನ್ನು ತಿಳಿಸುವ ಪ್ರಯತ್ನ ಮಾಡಬೇಕು ಎಂದು ತಿಳಿಸಿದರು.

ಸಾರ್ವಜನಿಕ ಹಿತಾಸಕ್ತಿ ಪತ್ರಿಕೋದ್ಯಮದಲ್ಲಿ ದುಡಿದು ಸಂಕಷ್ಟದಲ್ಲಿರುವ ಪತ್ರಕರ್ತರಿಗೆ 12 ಸಾವಿರ ರೂ. ಮಾಸಿಕ ಪಿಂಚಣಿ ನೀಡಲಾಗುತ್ತಿದೆ. ಮೊನ್ನೆಯಷ್ಟೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗ್ರಾಮೀಣ ಭಾಗದ ಪತ್ರಕರ್ತರಿಗೂ ಉಚಿತ ಬಸ್ ಪಾಸ್ ಸೇವೆ ನೀಡಿದ್ದಾರೆ. ಪತ್ರಿಕೆ ಮತ್ತು ಪತ್ರಕರ್ತರು ನೆರವಿಗೆ ಸರ್ಕಾರ ಸದಾ ಬದ್ಧವಾಗಿದೆ ಎಂದರು.

ರಾಜ್ಯ ಹಾಗೂ ಜಿಲ್ಲೆಯ ಒಳಿತಿಗೆ ಪತ್ರಕರ್ತರು ಸಲಹೆ ನೀಡಬೇಕು. ನಾವು ನಿಮ್ಮಿಂದ ಬಯಸುವುದಿಷ್ಟೆ. ನಾನೂ ಕೂಡ ವೈಯಕ್ತಿಕವಾಗಿ ನಿಮ್ಮ ನೆರವಿಗೆ ಇರುತ್ತೇನೆ. ಇತ್ತೀಚೆಗಷ್ಟೆ, ಜಿಲ್ಲೆಯ ಪತ್ರಕರ್ತ ನಾಗಮಂಗಲ ಮೋಹನ್‌ಕುಮಾರ್ ಅಪಘಾತದಲ್ಲಿ ಸಾವನ್ನಪ್ಪಿರುವುದು ದುರಂತ. ಸರ್ಕಾರ ಹಾಗೂ ವೈಯಕ್ತಿಕವಾಗಿಯೂ ಕುಟುಂಬಕ್ಕೆ ನೆರವು ನೀಡಲಾಗುವುದು ಎಂದು ಹೇಳಿದರು.

ವಿಧಾನಪರಿಷತ್ ಸದಸ್ಯ ಸಿ.ಪಿ.ಯೋಗೇಶ್ವರ್ ಮಾತನಾಡಿ, ಪತ್ರಕರ್ತರು ಸಮಾಜದ ತಪ್ಪು, ಸಮಸ್ಯೆಗಳನ್ನು ಎತ್ತಿ ಹಿಡಿಯುವ ಕೈಗನ್ನಡಿಗಳಿದ್ದಂತೆ. ಪ್ರಜಾಪ್ರಭುತ್ವದ ನಾಲ್ಕನೇ ಅಂಗವಾಗಿದ್ದು, ಸಮಾಜದ ಅಂಕುಡೊಂಕುಗಳನ್ನು ತಿದ್ದುತ್ತಾ ದಿನದ 24 ಗಂಟೆಯೂ ಶ್ರಮಿಸುವ ಪತ್ರಕರ್ತರ ಸೇವೆ ಸಮಾಜಕ್ಕೆ ಅಗತ್ಯಗತ್ಯವಾಗಿದೆ ಎಂದು ಹೇಳಿದರು.

ರಾಜಕಾರಣಿಗಳು, ಸಾರ್ವಜನಿಕರು, ಸರ್ಕಾರದ ಜೊತೆ ಕೆಲಸ ಮಾಡುತ್ತಾ ಬಂದಿದ್ದಾರೆ. ರಾಜಕಾರಣಿಗಳನ್ನು ಸಮಯೋಚಿತವಾಗಿ ದಾರಿಗೆ ತಂದು ಉತ್ತಮವಾಗಿ ಕರೆದುಕೊಂಡು ಹೋಗುವ ಕೆಲಸ ಮಾಡುತ್ತಿದ್ದಾರೆ. ನಿಮ್ಮ ಧ್ವನಿ ಕನ್ನಡಿಗರ ಧ್ವನಿಯಾಗಿ ಸಮಾಜ ಒಳಿತಿಗಾಗಿ ನಿಮ್ಮ ಸೇವೆ ಮುಂದುವರೆಯಲಿ ಎಂದು ತಿಳಿಸಿದರು.

ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಮಾತನಾಡಿ, ಮನುಷ್ಯನ ಕಷ್ಟಸುಖಗಳನ್ನು ಕಣ್ಣಾರೆ ಕಂಡಿದ್ದರೆ ಅದು ಪತ್ರಕರ್ತರು ಮಾತ್ರ. ಉತ್ತಮ ಜವಾಬ್ದಾರಿಯುತವಾಗಿ ಪತ್ರಕರ್ತರು ಕೆಲಸ ಮಾಡುತ್ತಿದ್ದಾರೆ. ಹಿರಿಯ ಪತ್ರಕರ್ತರು ನನ್ನ ರಾಜಕೀಯ ಜೀವನದಲ್ಲೂ ಹೆಜ್ಜೆ ಹಾಕಿದ್ದಾರೆ. ವೈಯಕ್ತಿಕ ಕಾರಣಗಳನ್ನು ಮುಂದಿಟ್ಟು ರಾಜಕಾರಣ ಮಾಡುತ್ತಿದ್ದಾರೆ ಎಂದರು.

ಪತ್ರಕರ್ತರು ಜಿಲ್ಲೆಯಲ್ಲಿ ಉತ್ತಮವಾಗಿ ಕೆಲಸ ಮಾಡುತ್ತಿದ್ದಾರೆ. ಕೊರೊನಾ ಸಂದರ್ಭದಲ್ಲಿ ಜೀವದ ಹಂಗು ತೊರೆದು ಕೆಲಸ ಮಾಡಿದ್ದಾರೆ. ಪತ್ರಕರ್ತರ ವಿಚಾರದಲ್ಲಿ ನಾವು ಜೊತೆ ಜೊತೆಯಾಗಿ ನಡೆದುಕೊಂಡು ಬಂದಿದ್ದೇವೆ. ನಾವು ರಾಜಕೀಯ ಬಂದಾಗ ರಾಜಕೀಯ ಮಾಡುತ್ತೇವೆ. ಪತ್ರಕರ್ತರ ವಿಚಾರಕ್ಕೆ ಬಂದಾಗ ಒಂದು ಕುಟುಂಬದಂತೆ ನಡೆದುಕೊಳ್ಳುತ್ತೇವೆ ಎಂದು ತಿಳಿಸಿದರು.

ಸಮಾರಂಭದಲ್ಲಿ ಜೀವಮಾನ ಸಾಧನೆ ಹಾಗೂ ವಾರ್ಷಿಕ ಪ್ರಶಸ್ತಿ ಪ್ರದಾನ ಮಾಡಲಾಯಿತು. ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮಾಡಲಾಯಿತು. ನಂತರ ಕ್ರೀಡಾಕೂಟದಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು. ಅಪಘಾತದಲ್ಲಿ ನಿಧನರಾದ ಪತ್ರಕರ್ತರ ಕುಟುಂಬಕ್ಕೆ ಪರಿಹಾರ ವಿತರಿಸಲಾಯಿತು. ವೇದಿಕೆಯಲ್ಲಿ ಶಾಸಕ ಪಿ.ರವಿಕುಮಾರ್‌ಗೌಡ ಗಣಿಗ, ವಿಧಾನ ಪರಿಷತ್ ಮಾಜಿ ಸದಸ್ಯ ಅಪ್ಪಾಜಿಗೌಡ, ನಗರಸಭೆ ಅಧ್ಯಕ್ಷ ಎಂ.ವಿ.ಪ್ರಕಾಶ್, ಮೂಡಾ ಅಧ್ಯಕ್ಷ ನಹೀಮ್, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬಿ.ಪಿ.ಪ್ರಕಾಶ್, ರಾಜ್ಯ ಸಮಿತಿ ಕಾರ್ಯದರ್ಶಿಗಳಾದ ಮತ್ತೀಕೆರೆ ಜಯರಾಂ, ಸೋಮಶೇಖರ್ ಕೆರಗೋಡು, ಮಾಜಿ ಅಧ್ಯಕ್ಷರಾದ ಕೆ.ಸಿ.ಮಂಜುನಾಥ್, ಕೆ.ಎನ್.ರವಿ, ಪ್ರಧಾನ ಕಾರ್ಯದರ್ಶಿ ಆನಂದ್, ಉಪಾಧ್ಯಕ್ಷ ನವೀನ್‌ಕುಮಾರ್ ಸೇರಿದಂತೆ ಮತ್ತಿತರರಿದ್ದರು.ನಗರದ ಕರ್ನಾಟಕ ಸಂಘದ ಕೆವಿಎಸ್ ಭವನದಲ್ಲಿ ನಡೆದ ಪತ್ರಿಕಾ ದಿನಾಚರಣೆಯಲ್ಲಿ ಜೀವಮಾನ ಸಾಧನೆ ಮಾಡಿದ ಕೆ.ಎನ್.ರವಿ ಅವರನ್ನು ಅಭಿನಂದಿಸಲಾಯಿತು.

ರಾಜಕಾರಣದಲ್ಲಿ ಏನೂ ಬೇಕಾದರೂ ಆಗಬಹುದು

ಚನ್ನಪಟ್ಟಣ ಮೈತ್ರಿ ಟಿಕೆಟ್ ತಪ್ಪಿದರೆ ಕೈ ಹಿಡಿಯುವ ಸುಳಿವು ಕೊಟ್ಟ ಯೋಗೇಶ್ವರ್

ಮಂಡ್ಯ: ರಾಜಕಾರಣದಲ್ಲಿ ಏನು ಬೇಕಾದರೂ ಆಗಬಹುದು. ಆದರೆ ನಾನು ಪಕ್ಷಾಂತರ ಮಾಡುವ ಯೋಚನೆ ಮಾಡಿಲ್ಲ ಎಂದಿರುವ ವಿಧಾನಪರಿಷತ್ ಸದಸ್ಯ ಸಿ.ಪಿ.ಯೋಗೇಶ್ವರ್ ಚನ್ನಪಟ್ಟಣದಲ್ಲಿ ಮೈತ್ರಿ ಟಿಕೆಟ್ ಕೈತಪ್ಪಿದರೆ ಕಾಂಗ್ರೆಸ್ ಸೇರುವ ಬಗ್ಗೆ ಸುಳಿವು ನೀಡಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ ಸೇರುವ ಬಗ್ಗೆ ನಾನು ಯೋಚನೆ ಮಾಡಿಲ್ಲ. ರಾಜಕಾರಣದಲ್ಲಿ ಏನು ಬೇಕಾದರೂ ಆಗಬಹುದು ಎಂದು ಹೇಳುವ ಮೂಲಕ ಪರೋಕ್ಷವಾಗಿ ಬಿಜೆಪಿ–ಜೆಡಿಎಸ್ ನಾಯಕರಿಗೆ ಎಚ್ಚರಿಕೆ ಕೊಟ್ಟರು.

ಕಾಂಗ್ರೆಸ್‌ನಿಂದ ಯಾರೂ ನನ್ನನ್ನು ಭೇಟಿ ಮಾಡಿಲ್ಲ. ಸ್ಪರ್ಧೆ ಮಾಡುವಂತೆ ಒತ್ತಡವಿದೆ. ಮುಂದೆ ನೋಡುತ್ತೇನೆ. ರಾಜಕಾರಣದಲ್ಲಿ ನಾವು ನೀವು ಯಾರೂ ಊಹೆ ಮಾಡದ ಘಟನೆಗಳು ನಡೆಯುತ್ತಿವೆ. ಪಕ್ಷಾಂತರ ಮಾಡುವ ಯಾವುದೇ ಆಲೋಚನೆ ಇಲ್ಲ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪ್ರಕರಣದಲ್ಲಿ ಕಾನೂನು ಪ್ರಕ್ರಿಯೆ ಪ್ರಾರಂಭವಾಗಿದೆ. ಕಾನೂನು ಹೋರಾಟ ಮಾಡುತ್ತಿದ್ದಾರೆ. ನನಗೆ ಸ್ಪಷ್ಟ ಚಿತ್ರಣ ಇಲ್ಲ. ಮುಖ್ಯಮಂತ್ರಿಗಳು ಬಹಳ ಸೂಕ್ಷ್ಮಮತಿಯಿಂದ ಇದ್ದಾರೆ. ಏನು ಮಾಡುತ್ತಾರೆ ಎಂಬುದನ್ನು ಕಾದು ನೋಡಬೇಕು ಎಂದು ಹೇಳಿದರು.

ಚುನಾವಣಾ ಬಾಂಡ್ ಪ್ರಕರಣ ಕೇಂದ್ರ ಸಚಿವರ ಮೇಲೆ ಎಫ್‌ಐಆರ್ ಆಗಿರುವ ಬಗ್ಗೆ ನನಗೆ ಗೊತ್ತಿಲ್ಲ. ನಾನು ನೋಡಿಲ್ಲ ಎಂದ ಅವರು, ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆ ಮುಂದಿನ ತಿಂಗಳು 10ರಂದು ಘೋಷಣೆಯಾಗುವ ಸಾಧ್ಯತೆ ಇದೆ. ಎರಡೂ ಪಕ್ಷದ ತೀರ್ಮಾನಕ್ಕೆ ಬದ್ಧರಾಗಿರಬೇಕಿರುತ್ತೆ. ಬಿಜೆಪಿ–ಜೆಡಿಎಸ್ ರಾಷ್ಟ್ರಮಟ್ಟದಲ್ಲಿ ಹೊಂದಾಣಿಕೆ ಮಾಡಿಕೊಂಡಿವೆ. ನಮ್ಮ ವರಿಷ್ಠರ ತೀರ್ಮಾನ ಕಾದು ನೋಡಬೇಕು ಎಂದರು.

ಉಪಚುನಾವಣೆ ಸ್ಪರ್ಧೆಗೆ ಜನರ ಒತ್ತಾಯ ಇದೆ. ನಾನು ಪಕ್ಷದ ಕಾರ್ಯಕರ್ತನಾಗಿ ಪಕ್ಷದ ಮಾತನ್ನು ಕೇಳಬೇಕು. ಚನ್ನಪಟ್ಟಣಕ್ಕೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಚುನಾವಣೆ ಸಂದರ್ಭ ಬಂದಿರುವುದರಿಂದ ಪದೇ ಪದೆ ಭೇಟಿ ನೀಡುತ್ತಿದ್ದಾರೆ. ಅದು ಸಹಜ ಎಂದ ಅವರು, ಉಪಚುನಾವಣೆ ಬಂದಾಗ ಘೋಷಣೆ ಮಾಡುವುದು ಸಾಮಾನ್ಯ. ಬಜೆಟ್‌ಗೂ ಉಪಚುನಾವಣೆ ಘೋಷಣೆಗೂ ವ್ಯತ್ಯಾಸ ಇದೆ. ಇಂಥ ಕಾರ್ಯಕ್ರಮಗಳಿಗೆ ಅಷ್ಟೊಂದು ಮಹತ್ವ ಇಲ್ಲ ಎಂದರು.

ಅ.5ರಿಂದ ದಸರಾ ಕವಿ ಗೋಷ್ಠಿ

ಶ್ರೀರಂಗಪಟ್ಟಣ: ಐತಿಹಾಸಿಕ ನಾಡಹಬ್ಬ ಶ್ರೀರಂಗಪಟ್ಟಣ ದಸರಾ ಅಂಗವಾಗಿ ಅ.5 ಮತ್ತು 6ರಂದು ಯುವ ಕವಿಗೋಷ್ಠಿ ಹಾಗೂ ಪ್ರಧಾನ ಕವಿಗೋಷ್ಠಿ ನಡೆಯಲಿದೆ ಎಂದು ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಸಿದ್ದಲಿಂಗು ತಿಳಿಸಿದರು.

ತಾಲೂಕಿನ ಗಂಜಾಂ ಅನ್ನಪೂರ್ಣೇಶ್ವರಿ ಭವನದಲ್ಲಿ ಆಯೋಜನೆ ಮಾಡಿದ್ದ ದಸರಾ ಕವಿಗೋಷ್ಠಿ ಪೂರ್ವಭಾವಿ ಸಭೆಯಲ್ಲಿ ಮಾತನಾಡಿ, ಕನ್ನಡ ನಾಡು ನುಡಿ ಪರಂಪರೆಯನ್ನು ಬಿಂಬಿಸುವಂತಹ ಯುವ ಕವಿಗಳಲ್ಲಿ ಸಾಹಿತ್ಯ ಆಸಕ್ತಿಯನ್ನು ಬೆಳೆಸುವ ಉದ್ದೇಶದಿಂದ ಶಾಸಕರಾದ ರಮೇಶ್‌ಬಾಬು ಬಂಡಿಸಿದ್ದೇಗೌಡ ಮಾರ್ಗದರ್ಶನದಲ್ಲಿ ಅ.5 ಹಾಗೂ 6 ರಂದು ಶ್ರೀರಂಗಪಟ್ಟಣ ತಾಲೂಕು ಹೊರತುಪಡಿಸಿ ಉಳಿದ ತಾಲೂಕಿನ ಒಬ್ಬರು ಯುವ ಕವಿ ಗೋಷ್ಠಿಗೆ ಹಾಗೂ ಇಬ್ಬರು ಪ್ರಧಾನ ಕವಿಗೋಷ್ಠಿಗೆ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದ್ದು, ಕವಿಗಳ ಆಯ್ಕೆಯ ಜವಾಬ್ದಾರಿಯನ್ನು ಆಯಾ ತಾಲೂಕು ಕಸಾಪಗೆ ನೀಡಲಾಗಿದೆ ಎಂದು ತಿಳಿಸಿದರು.

ಸ್ವಾಮಿಗೌಡ, ಮುಖಂಡರಾದ ದೊಡ್ಡಪಾಳ್ಯ ಪುರುಷೋತ್ತಮ್, ಗಂಜಾಂ ಸುರೇಶ್, ಕೂಡಲಕುಪ್ಪೆ ಲೋಕೇಶ್, ಚಂದಗಾಲು ಶಂಕರ್, ಅರಕೆರೆ ರಾಮಕೃಷ್ಣ ಬಸವರಾಜು, ರವಿ, ಉಮಾಶಂಕರ್, ಸೋಮಶೇಖರ್ ಹಲವರಿದ್ದರು.

ಪಾಂಡವಪುರದಲ್ಲಿ ಪೌರಕಾರ್ಮಿಕರ ಕ್ರೀಡಾಕೂಟಕ್ಕೆ ಚಾಲನೆ

ಪಾಂಡವಪುರ,ಸೆ.29– ಪೌರಕಾರ್ಮಿಕರು ಕ್ರೀಡೆಯಲ್ಲಿ ಖುಷಿಯಿಂದ ಭಾಗವಹಿಸಬೇಕು. ಜೊತೆಗೆ ಪುರಸಭೆ ಆಡಳಿತ ಮಂಡಳಿ ಪೌರಕಾರ್ಮಿಕರಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂಬ ಉದ್ದೇಶ ಹೊಂದಿದೆ ಅದಕ್ಕೆ ಪೌರಕಾರ್ಮಿಕರು ಹೆಚ್ಚಿನ ಸಹಕಾರ ನೀಡಬೇಕು ಎಂದು ಪುರಸಭೆ ಅಧ್ಯಕ್ಷೆ ಜ್ಯೋತಿಲಕ್ಷ್ಮಿ ಬಾಬು ಹೇಳಿದರು.

ಪೌರಕಾರ್ಮಿಕರ ದಿನಾಚರಣೆ ಹಿನ್ನೆಲೆಯಲ್ಲಿ ಪಟ್ಟಣದ ಪಾಂಡವ ಕ್ರೀಡಾಂಗಣದಲ್ಲಿ ಪೌರಕಾರ್ಮಿಕರಿಗಾಗಿ ಆಯೋಜಿಸಿದ್ದ ಕ್ರೀಡಾಕೂಟವನ್ನು ಗುಂಡು ಎಸೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು. ಸೋಲು ಗೆಲುವು ಎಂಬುದನ್ನು ಲೆಕ್ಕಾಚಾರ ಹಾಕದೆ ಪ್ರತಿಯೊಬ್ಬ ಪೌರಕಾರ್ಮಿಕರು ಕ್ರೀಡಾಕೂಟದಲ್ಲಿ ಭಾಗವಹಿಸಬೇಕು. ಸಣ್ಣ ಸ್ಪರ್ಧೆಯಾದರೂ ಕ್ರೀಡೆಯಲ್ಲಿ ಭಾಗವಹಿಸುವುದು ಅತಿಮುಖ್ಯ ಎಂದರು.

ಪೌರಕಾರ್ಮಿಕರು ಮಳೆ, ಚಳಿ, ಬಿಸಿಲು, ಲೆಕ್ಕಿಸದೆ ಸ್ವಚ್ಛತಾ ಕಾರ್ಯ ನಿರ್ವಹಿಸುತ್ತಾರೆ. ಪ್ರತಿದಿನ ಸ್ವಚ್ಛತೆ ಕಾರ್ಯಗಳಲ್ಲಿ ತಲ್ಲೀನರಾಗುವ ಪೌರಕಾರ್ಮಿಕರಿಗೆ ಕ್ರೀಡೆ ಮನೋಲ್ಲಾಸ ನೀಡುತ್ತದೆ. ಜತೆಗೆ ಆರೋಗ್ಯ ದೃಷ್ಟಿಯಿಂದಲೂ ಕ್ರೀಡೆ ಸಹಕಾರಿಯಾಗಿದೆ. ಪ್ರತಿವರ್ಷದಂತೆ ಈ ವರ್ಷವೂ ಪೌರಕಾರ್ಮಿಕರಿಗೆ ಕ್ರಿಕೆಟ್, ಗುಂಡು ಎಸೆತ, ಓಟದ ಸ್ಪರ್ಧೆ, ವಾಲಿಬಾಲ್, ಮಹಿಳೆಯರಿಗೆ ಲೆಮನ್ ಅಂಡ್ ಸ್ಪೂನ್, ಬಾಲ್ ಇನ್ ಬಾಸ್ಕೆಟ್ ಇತ್ಯಾದಿ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ ಎಂದು ಅವರು ಹೇಳಿದರು.

ಪುರಸಭೆ ಮುಖ್ಯಾಧಿಕಾರಿ ಸತೀಶ್‌ಕುಮಾರ್ ಮಾತನಾಡಿ ಸೋಲು, ಗೆಲುವು ಯಾವುದನ್ನು ಲೆಕ್ಕಿಸದೆ ಸಣ್ಣ, ಪುಟ್ಟ ಕ್ರೀಡೆಯಾದರೂ ಹಿಂಜರಿಯದೆ ಅದರಲ್ಲಿ ಭಾಗವಹಿಸುವ ಉತ್ಸಾಹ ತೋರಬೇಕು. ಜೊತೆಗೆ ಪೌರಕಾರ್ಮಿಕರು ಆರೋಗ್ಯವಾಗಿದ್ದರೆ ಮಾತ್ರ ನಗರ ವಾಸಿಗಳು ಆರೋಗ್ಯಕರ ಜೀವನ ನಡೆಸಲು ಸಾಧ್ಯ ಎಂದು ಹೇಳಿದರು. ಕ್ರೀಡೆಯಲ್ಲಿ ವಿಜೇತರಾದವರಿಗೆ ಪೌರಕಾರ್ಮಿಕ ದಿನಾಚರಣೆ ದಿನದಂದು ಬಹುಮಾನ ವಿತರಿಸಲಾಗುವುದು ಎಂದರು. ಈ ವೇಳೆ ಪುರಸಭೆ ಅಧಿಕಾರಿಗಳಾದ ಆರೋಗ್ಯಾಧಿಕಾರಿ ಮೂರ್ತಿ, ಮಣಿಪ್ರಸಾದ್, ನಾಗೇಶ್, ಶಫಿನಾಜ್, ಕೃಷ್ಣ ಶ್ರೀನಾಥ್, ಲಕ್ಷ್ಮೀನಾರಾಯಣ, ನಾರಾಯಣಪ್ಪ, ಸಂತೋಷ್ ಪೌರಕಾರ್ಮಿಕರಾದ ಗಣೇಶ್, ಸುಬ್ರಹ್ಮಣ್ಯ, ರಮೇಶ್, ಶಿವರಾಜು, ಈಶ್ವರ, ಸುರೇಶ್ ಉಪಸ್ಥಿತರಿದ್ದರು.

ಕರೀಗೌಡರು ನಿಧನ



ಕೆ.ಆರ್.ಪೇಟೆ,ಸೆ.29– ತಾಲೂಕಿನ ಅಗ್ರಹಾರ ಬಾಚಹಳ್ಳಿ ಗ್ರಾಮದ ನಿವೃತ್ತ ಶಿಕ್ಷಕರಾದ ಕರೀಗೌಡರು(75) ಭಾನುವಾರ ಬೊಮ್ಮನಾಯನಹಳ್ಳಿ ಬಳಿ ಇರುವ ತಮ್ಮ ತೋಟದ ಮನೆಯಲ್ಲಿ ನಿಧನ ಹೊಂದಿದ್ದಾರೆ.

ಮೃತರು ಇಬ್ಬರು ಪುತ್ರರು, ಸೊಸೆಯಂದಿರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ಬೊಮ್ಮನಾಯಕನಹಳ್ಳಿ ಬಳಿ ಇರುವ ತೋಟದಲ್ಲಿ ಭಾನುವಾರ ನಡೆಯಿತು.

ಕೆ.ಆರ್.ಪೇಟೆ ಬಳಿ 116 ಲೀಟರ್ ಗೋವಾ ಮದ್ಯ ವಶ

ಕೆ.ಆರ್.ಪೇಟೆ,ಸೆ.29– ಕಾರಿನಲ್ಲಿ ಅಕ್ರಮವಾಗಿ ಸಾಗಿಸುತ್ತಿದ್ದ 116 ಲೀಟರ್ ಗೋವಾ ಮದ್ಯವನ್ನು ಕೆ.ಆರ್.ಪೇಟೆ ಅಬಕಾರಿ ಅಧಿಕಾರಿಗಳು ವಶಪಡಿಸಿಕೊಂಡು ಓರ್ವನನ್ನು ಬಂಧಿಸಿರುವ ಘಟನೆ ಕೆ.ಆರ್.ಪೇಟೆ ತಾಲೂಕಿನ ಲಕ್ಷ್ಮೀಪುರ ಗೇಟ್ ಬಳಿ ಶುಕ್ರವಾರ ರಾತ್ರಿ ನಡೆದಿದೆ.

ಹೊರರಾಜ್ಯದ ಮದ್ಯದ ಬಾಟಲಿಗಳನ್ನು ಟಾಟಾ ಇಂಡಿಕಾ ಕಾರಿನಲ್ಲಿ ಸಾಗಿಸುತ್ತಿರುವ ಬಗ್ಗೆ ಖಚಿತ ಮಾಹಿತಿ ಮೇರೆಗೆ ತಾಲೂಕಿನ ಕಸಬಾ ಹೋಬಳಿಯ ಲಕ್ಷ್ಮೀಪುರ ಗೇಟ್ ಬಳಿ ದಾಳಿ ನಡೆಸಿದ ತಾಲೂಕು ಅಬಕಾರಿ ಇನ್ಸ್‌ಪೆಕ್ಟರ್ ದೀಪಕ್ ಮತ್ತು ಸಿಬ್ಬಂದಿಗಳು ಕಾರನ್ನು ವಶಕ್ಕೆ ಪಡೆದು ಓರ್ವ ಆರೋಪಿಯನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

750 ಮಿಲಿಯ ಎಂ.ಹೆಚ್.(ಮ್ಯಾನ್ಸನ್ ಹೌಸ್) 59 ಬಾಟಲಿಗಳು, 750 ಮಿಲಿಯ (ರಾಯಲ್ ಸ್ಟಾಗ್) ವಿಸ್ಕಿ 60 ಬಾಟಲಿಗಳು, 750 ಮಿಲಿ ರಾಯಲ್ ಚಾಲೆಂಜ್ ವಿಸ್ಕಿ 36 ಬಾಟಲಿ ಸೇರಿ 116 ಲೀಟರ್ ಗೋವಾ ಮದ್ಯವನ್ನು ವಶಪಡಿಸಿಕೊಂಡಿದ್ದು ಅಬಕಾರಿ ನಿರೀಕ್ಷಕ ದೀಪಕ್ ಪ್ರಕರಣ ದಾಖಲು ಮಾಡಿಕೊಂಡಿದ್ದು ಆರೋಪಿ ದರ್ಶನ್ ಕುಮಾರ್‌ನನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.



ಕಾರ್ಯಾಚರಣೆಯಲ್ಲಿ ಅಬಕಾರಿ ಸಬ್ ಇನ್ಸ್‌ಪೆಕ್ಟರ್ ರಾಜಪ್ಪಾಜಿ, ಅಬಕಾರಿ ಹೆಡ್ ಕಾನ್ಸ್‌ಟೆಬಲ್ ದಿನೇಶ್, ಸಂದೀಪ್, ಅಬಕಾರಿ ಕಾನ್ಸ್‌ಟೇಬಲ್ ನಾಗಪ್ಪ, ಕಿರಣ್, ಚಾಲಕ ಸೈಯದ್ ಜಮೀರ್ ಇದ್ದರು.

ಒಂದನೇ ಪುಟದಿಂದ

ಮೈಸೂರಿನ ಹೊರವಲಯದಲ್ಲಿ ರೇವ್ ಪಾರ್ಟಿ

ಕರೆಸಲಾಗಿತ್ತು ಎಂದು ಮೂಲಗಳು ತಿಳಿಸಿವೆಯಾದರೂ, ಇಸ್ರೇಲ್ ರ‍್ಯಾಪರ್ ಬಂದಿದ್ದ ಬಗ್ಗೆ ಖಚಿತ ಮಾಹಿತಿ ಇಲ್ಲ. ಆದರೆ ವಿದೇಶಿಯರು ಪಾರ್ಟಿಯಲ್ಲಿ ಭಾಗವಹಿಸಿರುವ ಬಗ್ಗೆ ಮಾಹಿತಿ ಇದೆ ಎಂದು ಜಿಲ್ಲಾ ಎಸ್ಪಿ ವಿಷ್ಣುವರ್ಧನ್ ತಿಳಿಸಿದ್ದಾರೆ. ಇಲವಾಲ ಬಳಿ ರೇವ್ ಪಾರ್ಟಿ ನಡೆಯುತ್ತಿರುವ ಬಗ್ಗೆ ಸ್ಥಳೀಯ ಸುದ್ದಿವಾಹಿನಿಯ ವರದಿಗಾರರೊಬ್ಬರು ಹಾಗೂ ಗ್ರಾಮಸ್ಥರು ನೀಡಿದ ಮಾಹಿತಿ ಮೇರೆಗೆ ಜಿಲ್ಲಾ ಎಸ್ಪಿ ವಿಷ್ಣುವರ್ಧನ್ ಅವರ ಸೂಚನೆಯಂತೆ ಅಡಿಷನಲ್ ಎಸ್ಪಿ ನಾಗೇಶ್, ಮೈಸೂರು ಗ್ರಾಮಾಂತರ ಡಿವೈಎಸ್ಪಿ ಕರೀಂ ರಾವುತ್ತರ್, ಇಲವಾಲ ಠಾಣೆಯ ಇನ್ಸ್‌ಪೆಕ್ಟರ್ ಶಿವಾನಂದ ಶೆಟ್ಟಿ, ಮಹಿಳಾ ಠಾಣೆ ಇನ್ಸ್‌ಪೆಕ್ಟರ್ ಯೋಗಾ ನಂಜಪ್ಪ, ಸಬ್ ಇನ್ಸ್‌ಪೆಕ್ಟರ್ ಶಾಂತಲಾ ನೇತೃತ್ವದಲ್ಲಿ ಪೊಲೀಸರ ತಂಡ ಶನಿವಾರ ಮಧ್ಯರಾತ್ರಿ 12.45ರ ಸುಮಾರಿನಲ್ಲಿ ದಾಳಿ ನಡೆಸಿದೆ. ರೇವ್ ಪಾರ್ಟಿ ಆಯೋಜಕರು ಚಾಲಾಕಿಗಳಾಗಿದ್ದು, ರಸ್ತೆಯುದ್ದಕ್ಕೂ ಮಾಹಿತಿದಾರರನ್ನು ಇರಿಸಿದ್ದರು ಎಂದು ಹೇಳಲಾಗಿದ್ದು, ಪೊಲೀಸ್ ವಾಹನಗಳು ಬರುವ ಸೂಚನೆ ಸಿಗುತ್ತಿದ್ದಂತೆಯೇ ರೇವ್ ಪಾರ್ಟಿಯ ಮ್ಯೂಸಿಕ್ ಅನ್ನು ಆಫ್ ಮಾಡಿದ್ದಾರೆ. ಆದರೆ ಖಚಿತ ಮಾಹಿತಿ ಇದ್ದ ಪೊಲೀಸರ ತಂಡ ಸ್ಥಳಕ್ಕೆ ದಾಳಿ ಇಟ್ಟಿದೆ. ಈ ವೇಳೆ 150 ರಿಂದ 200 ಯುವಕ–ಯುವತಿಯರು ಪಾರ್ಟಿಯಲ್ಲಿದ್ದರು ಎಂದು ಹೇಳಲಾಗಿದ್ದು, ಪೊಲೀಸರನ್ನು ಕಂಡೊಡನೆ ಎಲ್ಲರೂ ಪರಾರಿಯಾಗಿದ್ದಾರೆ. ಈ ಸಂದರ್ಭದಲ್ಲಿ ಹಿಡಿಯಲು ಬಂದ ಪೊಲೀಸರ ಮೇಲೆಯೇ ಕೆಲವರು ಹಲ್ಲೆ ನಡೆಸಿ ಕತ್ತಲೆಯಲ್ಲಿ ಮರೆಯಾಗಿದ್ದಾರೆ ಎಂದು ಹೇಳಲಾಗಿದೆ. ಕೊನೆಗೂ 64 ಮಂದಿಯನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ರೇವ್ ಪಾರ್ಟಿ ಸ್ಥಳದಲ್ಲಿ ನಶೆ ಬರುವ ವಸ್ತುಗಳು, ದುಬಾರಿ ಬೆಲೆಯ ಸಿಗರೇಟ್ ಮುಂತಾದವು ಪೊಲೀಸರಿಗೆ ದೊರೆತಿವೆ. ಈ ಸಂಬಂಧ ಇಲವಾಲ ಠಾಣೆಯಲ್ಲಿ ಬಿಎನ್‌ಎಸ್ ಸೆಕ್ಷನ್‌ಗಳಾದ 221, 223, 121(2), 15(ಎ), 32, 34, 38(2) ಕೆಇ ಅನ್ವಯ ಪ್ರಕರಣ ದಾಖಲಾಗಿದೆ. ಈ ಪಾರ್ಟಿಯಲ್ಲಿ ತಮಿಳುನಾಡು, ಮಡಿಕೇರಿ, ಬೆಂಗಳೂರು ಹಾಗೂ ಇತರೆಡೆಯಿಂದ ಆಗಮಿಸಿದ್ದವರು ಭಾಗವಹಿಸಿದ್ದರು ಎಂದು ಹೇಳಲಾಗಿದೆ. ಈ ಫಾರಂ ಹೌಸ್‌ನಲ್ಲಿ ಇದೇ ಮೊದಲ ಬಾರಿಗೆ ರೇವ್ ಪಾರ್ಟಿ ನಡೆದಿಲ್ಲ. ಇಲ್ಲಿ ಹಲವಾರು ದಿನಗಳಿಂದ ವಾರಾಂತ್ಯಗಳಲ್ಲಿ ರೇವ್ ಪಾರ್ಟಿ ನಡೆಯುತ್ತಿತ್ತು ಎಂದು ಹೇಳಲಾಗಿಲ್ಲ. ಆಯೋಜಕರು ಸಾಮಾಜಿಕ ಜಾಲ ತಾಣದ ಮೂಲಕ ಗ್ರಾಹಕರನ್ನು ವ್ಯವಸ್ಥಿತವಾಗಿ ಇಲ್ಲಿಗೆ ಕರೆತರುತ್ತಿದ್ದರು ಎಂದು ಪ್ರಾಥಮಿಕ ತನಿಖೆಯಿಂದ ಗೊತ್ತಾಗಿದೆ.

ಸೋಷಿಯಲ್ ಮೀಡಿಯಾ ಮೂಲಕ ಯುವಕ, ಯುವತಿಯರ ಆಕರ್ಷಣೆ

ಸೋಷಿಯಲ್ ಮೀಡಿಯಾದ ವಿವಿಧ ಪ್ಲಾಟ್ ಫಾರಂಗಳು ರೇವ್ ಪಾರ್ಟಿಗೆ ಯುವಕ, ಯುವತಿಯರನ್ನು ಆಕರ್ಷಿಸಲು ಮೂಲ ಮಾರ್ಗವಾಗಿತ್ತು. ವಾಟ್ಸಾಪ್, ಫೇಸ್‌ಬುಕ್, ಇನ್ಸ್ಟಾಗ್ರಾಂ ಸೇರಿದಂತೆ ಹಲವು ಸಾಮಾಜಿಕ ಜಾಲ ತಾಣಗಳಲ್ಲಿ ರೇವ್ ಪಾರ್ಟಿ ಬಗ್ಗೆ ಆಯೋಜಕರು ಮಾಹಿತಿ ನೀಡುತ್ತಿದ್ದರು. ರೇವ್ ಪಾರ್ಟಿ ಸ್ಥಳ, ದೂರವಾಣಿ ಸಂಖ್ಯೆ, ರೇವ್ ಪಾರ್ಟಿಯ ಸುತ್ತಲಿನ ವಾತಾವರಣ ಸೇರಿದಂತೆ ಹಲವು ಮಾಹಿತಿಯನ್ನು ನೀಡುತ್ತಿದ್ದರು. ಇದಕ್ಕೆ ಆಕರ್ಷಿತರಾಗುತ್ತಿದ್ದ ಯುವಕ ಯುವತಿಯರು ನೂರಾರು ಸಂಖ್ಯೆಯಲ್ಲಿ ರೇವ್ ಪಾರ್ಟಿಗೆ ಬರುತ್ತಿದ್ದರು. ಮೈಸೂರು, ಬೆಂಗಳೂರು ಮಾತ್ರವಲ್ಲದೆ ವಿವಿಧ ಸ್ಥಳಗಳ ಯುವಕ, ಯುವತಿಯರು ಇಲ್ಲಿ ಸೇರುತ್ತಿದ್ದರು. ಇದರಲ್ಲಿ ವಿದೇಶಿ ಪ್ರಜೆಗಳು ಇರುತ್ತಿದ್ದರು ಎಂಬ ಮಾಹಿತಿ ಇದೆ. ಶನಿವಾರ, ಭಾನುವಾರ ಹಾಗೂ ರಜಾ ದಿನಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಯುವಕ ಯುವತಿಯರು ಸೇರುತ್ತಿದ್ದರು.

ರೇವ್ ಪಾರ್ಟಿ ಬಗ್ಗೆ ಸಿದ್ದರಾಮಯ್ಯ ಸ್ಪಷ್ಟನೆ

ಮೈಸೂರಿನಲ್ಲಿ ನಡೆದಿರುವ ರೇವ್ ಪಾರ್ಟಿ ಪ್ರಕರಣದ ಬಗ್ಗೆ ಪೊಲೀಸರು ಕ್ರಮ ಕೈಗೊಳ್ಳುತ್ತಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ರೇವ್ ಪಾರ್ಟಿ ಪ್ರಕರಣದ ಬಗ್ಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ನನಗೆ ಮಾಹಿತಿ ನೀಡಿದ್ದಾರೆ ಎಂದರು. ರೇವ್ ಪಾರ್ಟಿ ನಡೆದಿರುವ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಸಿದ್ದರಾಮಯ್ಯ ಭರವಸೆ ನೀಡಿದರು.

ಅಡಿಷನಲ್ ಎಸ್ಪಿ ನೇತೃತ್ವದಲ್ಲಿ ವಿಶೇಷ ತಂಡ ರಚನೆ

ರೇವ್ ಪಾರ್ಟಿ ಪ್ರಕರಣದ ಬಗ್ಗೆ ತನಿಖೆ ನಡೆಸಲು ಅಡಿಷನಲ್ ಎಸ್ಪಿ ನಾಗೇಶ್ ನೇತೃತ್ವದಲ್ಲಿ ವಿಶೇಷ ತಂಡ ರಚನೆ ಮಾಡಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಷ್ಣುವರ್ಧನ್ ತಿಳಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ರಾಮಕೃಷ್ಣನಗರದ ಮನೆ ಬಳಿ ಪತ್ರಕರ್ತರಿಗೆ ಈ ಬಗ್ಗೆ ಮಾಹಿತಿ ನೀಡಿದ ಅವರು, ರೇವ್ ಪಾರ್ಟಿಯಲ್ಲಿ ಸ್ಥಳಿಯರು ಮಾತ್ರವಲ್ಲದೆ ವಿದೇಶಿ ಪ್ರಜೆಗಳು ಭಾಗವಹಿಸಿದ್ದ ಬಗ್ಗೆ ಮಾಹಿತಿ ಇದೆ ಎಂದು ಹೇಳಿದರು. ಆದರೆ ದಾಳಿ ನಡೆದ ಸ್ಥಳದಲ್ಲಿ ಯಾವುದೇ ರೀತಿಯ ಡ್ರಗ್ಸ್ ಪತ್ತೆಯಾಗಿಲ್ಲ. ಆದರೂ ಈಗ ವಶದಲ್ಲಿರುವವರನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಲಾಗಿದೆ. ಈ ಸಂಬಂಧ ಎಫ್‌ಎಸ್‌ಎಲ್ ವರದಿ ಪಡೆಯುತ್ತೇವೆ. ತರುವಾಯ ಡ್ರಗ್ಸ್ ತೆಗೆದುಕೊಂಡಿರುವುದು ದೃಢಪಟ್ಟರೆ ಕಾನೂನಾತ್ಮಕ ಕ್ರಮ ಕೈಗೊಳ್ಳಲಾಗುವುದು ಎಂದರು. ಪಾರ್ಟಿ ಆಯೋಜಕರು ಸೋಷಿಯಲ್ ಮೀಡಿಯಾ ಮೂಲಕ ಸಂಪರ್ಕ ಮಾಡಿ ಆಕರ್ಷಿಸುತ್ತಿದ್ದರು. ಪಾರ್ಟಿ ನಡೆಸುತ್ತಿದ್ದ ಮೂಲ ಆಯೋಜಕರು, ಜಮೀನು ಮಾಲೀಕರು ಯಾರು ಎಂಬುದು ಸೇರಿದಂತೆ ಹಲವು ವಿಚಾರಗಳ ಬಗ್ಗೆ ತನಿಖೆ ಚುರುಕುಗೊಳಿಸಲಾಗಿದೆ ಎಂದು ವಿಷ್ಣುವರ್ಧನ್ ಮಾಹಿತಿ ನೀಡಿದರು.

ನಶೆಯಲ್ಲಿ ಕಂಟ್ರೋಲ್ ಇಲ್ಲದ ಯುವಕ, ಯುವತಿಯರ ಪಜೀತಿ

ಪೊಲೀಸರು ರೇವ್ ಪಾರ್ಟಿ ಮೇಲೆ ದಾಳಿ ಮಾಡಿದಾಗ ಅವರನ್ನು ಹಿಡಿದು ವಾಹನದೊಳಗೆ ಕೂರಿಸುವಷ್ಟರಲ್ಲಿ ಪೊಲೀಸರಿಗೆ ಸಾಕು ಸಾಕಾಗಿದೆ. ಒಟ್ಟು 64 ಜನರಲ್ಲಿ 8 ಯುವತಿಯರಿದ್ದರು. ಡ್ರಗ್ಸ್, ಮದ್ಯಪಾನ ಸೇವಿಸಿ ಪ್ರಜ್ಞೆ ಇಲ್ಲದ ಇವರೆಲ್ಲಾ ಮೈ ಮೇಲೆ ನಿಯಂತ್ರಣ ಕಳೆದುಕೊಂಡಿದ್ದರು. ನಶೆಯಲ್ಲಿದ್ದ ಇವರೆಲ್ಲಾ ಎದ್ದು ಓಡಲು ಪ್ರಯತ್ನಿಸುತ್ತಿದ್ದರು. ಮತ್ತಿನಲ್ಲಿದ್ದ ಇವರನ್ನು ನಿಯಂತ್ರಿಸಿ ವಾಹನದೊಳಗೆ ಕೂರಿಸಲು ಪೊಲೀಸರು ಹರಸಾಹಸ ಪಟ್ಟರು ಎಂದು ಮೂಲಗಳು ತಿಳಿಸಿವೆ.

ಸ್ಥಳೀಯ ಪೊಲೀಸರಿಗೆ ಮಾಹಿತಿ ಇತ್ತೆ?

ಕಾವೇರಿ ನದಿಯ ಹಿನ್ನೀರಿನಲ್ಲಿ ನಡೆಯುತ್ತಿದ್ದ ರೇವ್ ಪಾರ್ಟಿ ಬಗ್ಗೆ ಸ್ಥಳೀಯ ಪೊಲೀಸ್ ಅಧಿಕಾರಿಗಳಿಗೆ ಮಾಹಿತಿ ಇತ್ತೇ ಎಂಬುದರ ಬಗ್ಗೆ ಅನುಮಾನ ಉಂಟಾಗಿದೆ. ಪೊಲೀಸರು ಹಳ್ಳಿ ಹಳ್ಳಿಗೂ ಗಸ್ತು ತಿರುಗುತ್ತಿರುತ್ತಾರೆ. ರಾತ್ರಿಯಾದರೆ ಕಿವಿಗಡಚಿಕ್ಕುವ ಮ್ಯೂಜಿಕ್ ಶಬ್ಧ ಪೊಲೀಸರಿಗೆ ಕೇಳಿಸುತ್ತಿರ ಲಿಲ್ಲವೇ ಎಂಬ ಸಹಜ ಅನುಮಾನವಿದೆ ಆದರೆ ರೇವ್ ಪಾರ್ಟಿ ಬಗ್ಗೆ ಪೊಲೀಸರಿಗೆ ತಿಳಿದಿತ್ತು ಆದರೆ ಮಾಮೂಲು ಕೈ ಸೇರುತ್ತಿದ್ದ ಕಾರಣ ಯಾವುದೇ ಕ್ರಮಕ್ಕೆ ಮುಂದಾಗದೆ ಮೌನವಹಿಸಿದ್ದರು ಎಂಬ ಆರೋಪವೂ ಕೇಳಿ ಬಂದಿದೆ.

ರೇವ್ ಪಾರ್ಟಿ ಸ್ಥಳಕ್ಕೆ ಹೊಸ ರಸ್ತೆ ನಿರ್ಮಾಣ

ಮೈಸೂರು, ಸೆ.29–ರೇವ್ ಪಾರ್ಟಿ ಮಾಡುವ ಫಾರಂ ಹೌಸ್‌ಗೆ ಸರಾಗವಾಗಿ ಬರಲು ಹೊಸ ರಸ್ತೆ ನಿರ್ಮಾಣ ಮಾಡಲಾಗಿತ್ತು.

ಸಂತೋಷ್ ಎಂಬಾತ ಫಾರಂ ಹೌಸ್ ಮಾಲೀಕನಾಗಿದ್ದರೆ, ಅರ್ಜುನ್ ಎಂಬಾತ ಫಾರಂ ಹೌಸ್ ಅನ್ನು ಬಾಡಿಗೆಗೆ ಪಡೆದು ರೇವ್ ಪಾರ್ಟಿ ಆಯೋಜಿಸುತ್ತಿದ್ದ ಎಂದು ಮೂಲಗಳು ತಿಳಿಸಿವೆ.

ಬೆಂಗಳೂರು, ಮುಂಬೈ ಸೇರಿದಂತೆ ಇತರೆ ನಡೆಯುತ್ತಿದ್ದ ರೇವ್ ಪಾರ್ಟಿ ಆಯೋಜಕರ ಸಂಪರ್ಕ ಹೊಂದಿದ್ದ ವ್ಯಕ್ತಿಗಳು ವ್ಯವಸ್ಥಿತವಾಗಿ ಈ ಸ್ಥಳದಲ್ಲಿ ರೇವ್ ಪಾರ್ಟಿ ಆಯೋಜಿಸಿದ್ದರು ಎಂದು ಹೇಳಲಾಗಿದೆ. ಕಾವೇರಿ ನದಿಯ ಹಿನ್ನೀರಿನ ತಣ್ಣನೆ ನಿಶ್ಶಬ್ಧ ವಾತಾವರಣ ನಶೆ ಏರಿಸಿಕೊಳ್ಳುವವರಿಗೆ ಮುದ ನೀಡುತ್ತದೆ. ಆದ ಕಾರಣದಿಂದ ನೂರಾರು ಯುವಕ, ಯುವತಿಯರು ಇಲ್ಲಿನ ರೇವ್ ಪಾರ್ಟಿಗೆ ಮಾಮೂಲಿ ಗಿರಾಕಿಯಾಗಿದ್ದರು.

ರೇವ್ ಪಾರ್ಟಿಗೆ ದುಬಾರಿ ಪ್ರವೇಶ ಶುಲ್ಕ ನಿಗದಿ ಮಾಡಲಾಗಿತ್ತು ಜೊತೆಗೆ ಅಲ್ಲಿ ದೊರೆಯುವ ಡ್ರಗ್ಸ್, ಮದ್ಯ, ಸಿಗರೇಟ್, ತಿಂಡಿ ತಿನಿಸುಗಳಿಗೆ ಕೂಡ ದುಬಾರಿ ದರವಿತ್ತು. ಹಣವುಳ್ಳ ಉದ್ಯಮಿ, ಶ್ರೀಮಂತರ ಮಕ್ಕಳು ಹಾಗೂ ದುಬಾರಿ ವೇತನ ಪಡೆಯುವ ಉದ್ಯೋಗಿಗಳಿಗೆ ಈ ಖರ್ಚು ವೆಚ್ಚ ಏನೇನು ಅಲ್ಲ. ಆದರೆ ಇಂತಹ ಪಾರ್ಟಿ ನಡೆಯುವ ಸ್ಥಳ ಅವರಿಗೆ ಬೇಕಿತ್ತು. ಇದರಿಂದ ರೇವ್ ಪಾರ್ಟಿಯ ಈ ಸ್ಥಳ ಅವರನ್ನು ಆಕರ್ಷಿಸುತ್ತಿತ್ತು.

ಇದರಿಂದ ರೇವ್ ಪಾರ್ಟಿ ಆಯೋಜಕ ಹಾಗೂ ಫಾರಂ ಹೌಸ್ ಮಾಲೀಕ ಲಕ್ಷಾಂತರ ರೂಪಾಯಿ ಲಾಭ ಮಾಡುತ್ತಿದ್ದರು. ಇದರಲ್ಲಿ ತಮಗೆ ರಕ್ಷಣೆ ನೀಡುತ್ತಿದ್ದ ಪೊಲೀಸರಿಗೆ ಮಾಮೂಲು ಕೊಟ್ಟು ನಿರಾಂತಕವಾಗಿ ರೇವ್ ಪಾರ್ಟಿ ನಡೆಸುತ್ತಿದ್ದರು ಎನ್ನಲಾಗಿದೆ. ವಿದ್ಯುತ್ ಸಂಪರ್ಕ ಪಡೆಯಲು ಮುಂದಾದರೆ ಚೆಸ್ಕಾಂ ಸೇರಿದಂತೆ ಇತರೆ ಅಧಿಕಾರಿಗಳ ಗಮನಕ್ಕೆ ಬರುತ್ತದೆ ಎಂದು ಜನರೇಟರ್ ಬಳಸುತ್ತಿದ್ದರು.

ಯಾವುದಕ್ಕೂ ಜಗ್ಗೋದು ಇಲ್ಲ, ಬಗ್ಗೋದು ಇಲ್ಲ...

56 ಸಾವಿರ ಕೋಟಿ ರೂ. ಖರ್ಚು ಮಾಡಿದ್ದೇವೆ. ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಾಧ್ಯವಿಲ್ಲ, ಹಣ ಹೊಂದಿಸಲು ಆಗುವುದಿಲ್ಲ, ಲೋಕಸಭೆ ಚುನಾವಣೆ ಬಳಿಕ ಸ್ಥಗಿತಗೊಳಿಸುತ್ತಾರೆ ಎಂದೆಲ್ಲಾ ಟೀಕೆ ಮಾಡಿದರು. ಈಗಲೂ ಟೀಕೆ ಮುಂದುವರೆದಿದೆ. ಯಾವುದೇ ಕಾರಣಕ್ಕೂ, ಎಷ್ಟೇ ಕಷ್ಟವಾದರೂ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಕೇಂದ್ರ ಸರ್ಕಾರಕ್ಕೆ ಟಾಂಗ್: ನಾನು ಮೊದಲ ಬಾರಿ ಮುಖ್ಯಮಂತ್ರಿಯಾಗಿದ್ದಾಗ 2013ರಲ್ಲಿ ರಾಜ್ಯದ ಜನಸಂಖ್ಯೆಗೆ ಅನುಗುಣವಾಗಿ ಬಜೆಟ್‌ನಲ್ಲಿ ಅಭಿವೃದ್ಧಿಗೆ ಬಳಸುವ ಅನುದಾನದಲ್ಲಿ ಶೇ.24.1 ರಷ್ಟು ಹಣವನ್ನು ಪರಿಶಿಷ್ಟರ ಅಭಿವೃದ್ಧಿಗೆ ಮೀಸಲಿಡಬೇಕೆಂಬ ಕಾನೂನು ಮಾಡಲಾಯಿತು. ಈ ಐತಿಹಾಸಿಕ ನಿರ್ಧಾರ ಕೈಗೊಂಡಿತು ಕಾಂಗ್ರೆಸ್ ಸರ್ಕಾರ. ದೇಶದ ಬಜೆಟ್ ಗಾತ್ರ 48 ಲಕ್ಷ ಕೋಟಿ. ಇದರಲ್ಲಿ ಅಭಿವೃದ್ಧಿಗೆ 28 ಕೋಟಿ ಖರ್ಚಾಗಬಹುದು. ಇದರಲ್ಲಿ ಶೇ.24ರಷ್ಟು ಹಣವನ್ನು ಪರಿಶಿಷ್ಟರ ಅಭಿವೃದ್ಧಿಗೆ ಮೀಸಲಿಡಬೇಕಿತ್ತು. ಆದರೆ 60 ಸಾವಿರ ಕೋಟಿ ರೂ. ಮಾತ್ರ ನೀಡಿದ್ದಾರೆ ಎಂದು ಕೇಂದ್ರ ಸರ್ಕಾರಕ್ಕೆ ಟಾಂಗ್ ನೀಡಿದ ಸಿದ್ದರಾಮಯ್ಯನವರು, ವೇದಿಕೆಯಲ್ಲಿದ್ದ ಬಿಜೆಪಿ ಶಾಸಕ ಟಿ.ಎಸ್.ಶ್ರೀವತ್ಸ ಹಾಗೂ ಜೆಡಿಎಸ್ ಎಂಎಲ್‌ಸಿ ಸಿ.ಎನ್.ಮಂಜೇಗೌಡರ ಹೆಸರೇಳಿ ಗೊತ್ತಾಯ್ತು ಎಂದು ಕೇಳಿದರು.

ಶ್ರೀನಿವಾಸ ಪ್ರಸಾದ್ ನೆನೆದರು: ರಾಜ್ಯದಲ್ಲಿ ಒಂದೇ ಕಡೆ ದಲಿತರು ಹೆಚ್ಚಿರುವ ಪ್ರದೇಶ ಅಶೋಕಪುರಂ. ಶೇ.90ಕ್ಕಿಂತ ಹೆಚ್ಚು ಜನ ಅಂಬೇಡ್ಕರ್ ವಾದಿಗಳು. ನಾನು, ಮಹದೇವಪ್ಪ ಹಾಗೂ ಶ್ರೀನಿವಾಸ ಪ್ರಸಾದ್ ಒಟ್ಟಿಗಿದ್ದೆವು. ಅಂಬೇಡ್ಕರ್ ವಿಚಾರವಾದದಲ್ಲಿ ಭಿನ್ನಾಭಿಪ್ರಾಯವಿರಲಿಲ್ಲ. ಚುನಾವಣೆ ವೇಳೆ ಹಲವು ಬಾರಿ ಇಲ್ಲಿಗೆ ಬಂದಿದ್ದೇನೆ. ಇಲ್ಲಿನ ಅಭಿವೃದ್ಧಿ ನಮ್ಮ ಕರ್ತವ್ಯ. 85 ಮಂದಿ ವೀಳ್ಯದೆಲೆ ಬೆಳೆಗಾರರಿಗೆ ಜಮೀನು ಮಂಜೂರಾತಿ ಹಕ್ಕು ಪತ್ರ ಕೊಟ್ಟಿದ್ದು, ಉಳಿದವರಿಗೂ ಕೊಡುತ್ತೇವೆ. ನಿಮ್ಮೆಲ್ಲಾ ಬೇಡಿಕೆಗಳನ್ನು ನಾನು, ಸಚಿವ ಮಹದೇವಪ್ಪ ಹಾಗೂ ಮಾಜಿ ಮೇಯರ್ ಪುರುಷೋತ್ತಮ್ ಜೊತೆ ಮಾತನಾಡಿ ಬಗೆ ಈಡೇರಿಸುತ್ತೇವೆ ಎಂದು ಭರವಸೆ ನೀಡಿದರು.

ನಿಮ್ಮೊಂದಿಗೆ ನಾವಿದ್ದೇವೆ: ಮುಖ್ಯಮಂತ್ರಿ ಸಿದ್ದರಾಮಯ್ಯ ಭಾಷಣ ಮಾಡಲು ಮೈಕ್ ಬಳಿ ಬರುತ್ತಿದ್ದಂತೆ ಶಿಳ್ಳೆ–ಜೈಕಾರ ಮುಗಿಲು ಮುಟ್ಟಿತ್ತು. ಈ ವೇಳೆ ಹಲವು ಸಭಿಕರು 'ನಿಮ್ಮೊಂದಿಗೆ ನಾವಿದ್ದೇವೆ' ಘೋಷಣೆಯುಳ್ಳ ಸಿದ್ದರಾಮಯ್ಯನವರ ಭಾವಚಿತ್ರ ಪ್ರದರ್ಶಿಸಿದರು. ಕಾರ್ಯಕ್ರಮದಲ್ಲಿ ಉರಿಲಿಂಗಪೆದ್ದಿ ಮಠದ ಶ್ರೀ ಜ್ಞಾನಪ್ರಕಾಶ ಸ್ವಾಮೀಜಿ, ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಶಾಸಕ ಟಿ.ಎಸ್.ಶ್ರೀವತ್ಸ, ವಿಧಾನಪರಿಷತ್ ಸದಸ್ಯರಾದ ಡಾ.ಡಿ.ತಿಮ್ಮಯ್ಯ, ಸಿ.ಎನ್.ಮಂಜೇಗೌಡ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಉಪಾಧ್ಯಕ್ಷೆ ಪುಷ್ಪಾ ಅಮರನಾಥ್, ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್, ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತ ರೆಡ್ಡಿ, ಜಿಪಂ ಸಿಇಓ ಕೆ.ಎಂ.ಗಾಯತ್ರಿ, ಡಿಐಜಿ ಡಾ.ಬೋರಲಿಂಗಯ್ಯ, ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್, ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್, ಮಾಜಿ ಮೇಯರ್ ಪುರುಷೋತ್ತಮ್, ಮಾಜಿ ಉಪಮೇಯರ್ ಸಿದ್ದರಾಜು, ಮುಖಂಡ ವಿ.ರಾಮಸ್ವಾಮಿ, ಆದಿ ಕರ್ನಾಟಕ ಮಹಾ ಸಂಸ್ಥೆ ಪದಾಧಿಕಾರಿಗಳು ಮತ್ತಿತರರು ಉಪಸ್ಥಿತರಿದ್ದರು.

ಹಕ್ಕು ಪತ್ರ ವಿತರಣೆ; ಶಂಕುಸ್ಥಾಪನೆ

ಸಾಂಪ್ರದಾಯಿಕ ವೀಳ್ಯದೆಲೆ ಬೆಳೆಯುತ್ತಿದ್ದ 245 ಜನರಲ್ಲಿ ಸದ್ಯ 85 ಬೆಳೆಗಾರರಿಗೆ ತಲಾ 5 ಗುಂಟೆ ಭೂಮಿ ಮಂಜೂರಾಗಿದ್ದು, ಇವರಲ್ಲಿ ಐವರಿಗೆ ಮಂಜೂರಾತಿ ಹಕ್ಕುಪತ್ರವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ವಿತರಣೆ ಮಾಡಿದರು. ಇದೇ ವೇಳೆ ಅಶೋಕಪುರಂನಲ್ಲಿನ ದೊಡ್ಡ ಗರಡಿ ಹಾಗೂ ಚಿಕ್ಕ ಗರಡಿ ಆವರಣದಲ್ಲಿ ಯುವಕರಿಗೆ ವ್ಯಾಯಾಮ ಶಾಲೆ, ಸಭಾ ಭವನ ಮತ್ತು ವಾಣಿಜ್ಯ ಸಂಕೀರ್ಣ ನಿರ್ಮಾಣ, ಡಾ.ಬಿ.ಆರ್. ಅಂಬೇಡ್ಕರ್ ಉದ್ಯಾನವನ ಆಧುನೀಕರಣ, ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯ ಅಭಿವೃದ್ಧಿ ಹಾಗೂ ಡಾ.ಬಿ.ಆರ್. ಅಂಬೇಡ್ಕರ್ ಭವನ ನವೀಕರಣ ಕಾಮಗಾರಿ ಸೇರಿದಂತೆ ಸುಮಾರು 10 ಕೋಟಿ ರೂ. ಅಂದಾಜು ಮೊತ್ತದ ವಿವಿಧ ಕಾಮಗಾರಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಅವರೊಂದಿಗೆ ಶಂಕುಸ್ಥಾಪನೆ ನೆರವೇರಿಸಿದರು. ಬಳಿಕ ಆದಿ ಕರ್ನಾಟಕ ಮಹಾ ಸಂಸ್ಥೆ ಇನ್ನಿತರ ಸಂಘಟನೆಗಳ ವತಿಯಿಂದ ಮುಖ್ಯಮಂತ್ರಿಗಳನ್ನು ಅಭಿನಂದಿಸಲಾಯಿತು.

ರೆಡಿ ಮಾಡಿದ್ದಾರೆ

ಸಿಎಂ ಆಗಬೇಕೆಂದು ಎಲ್ಲರಿಗೂ ಇಷ್ಟವಿರುತ್ತದೆ. ಆದರೆ, ಅದೃಷ್ಟ ಇದ್ದವರಿಗಷ್ಟೇ ಆಗುತ್ತೆ ಎಂದು ಮಾತು ಆರಂಭಿಸಿದ ಅವರು, ರಾಜ್ಯದಲ್ಲಿ ಇದೇ ವರ್ಷ ಡಿಸೆಂಬರ್‌ನಲ್ಲಿ ದೊಡ್ಡದಾದ ರಾಜಕೀಯ ಕ್ರಾಂತಿಯೊಂದನ್ನು ಮಾಡಲು ಹಲವಾರು ಬಿಜೆಪಿಗರು ಪ್ರಯತ್ನಿಸುತ್ತಿದ್ದಾರೆ. ಆಪರೇಷನ್ ಕಮಲ ಮಾಡಿ ಕಾಂಗ್ರೆಸ್ ಸರ್ಕಾರವನ್ನು ಕೆಡವಿ ತಾವು ಮುಖ್ಯಮಂತ್ರಿಯಾಗಲು ಬಿಜೆಪಿಯ ಒಬ್ಬ ನಾಯಕರು 1000 ಕೋಟಿ ರೂ.ಗಳನ್ನು ಕೂಡಿಟ್ಟುಕೊಂಡಿಟ್ಟುಕೊಂಡಿದ್ದಾರೆ ಎಂದು ಹೇಳಿದ್ದಾರೆ. ಆದರೆ, ಆಪರೇಷನ್ ಕಮಲಕ್ಕೆ ನನ್ನ ಸಮ್ಮತಿಯಿಲ್ಲ ಎಂದು ಹೇಳಿದ ಅವರು, ಕಳೆದ ಬಾರಿ ಆಪರೇಷನ್ ಕಮಲ ಮಾಡಿದಾಗ ಬಂದಿದ್ದ 17 ಮಂದಿಯಿಂದಲೇ ಬಿಜೆಪಿಯು ಅವಸಾನವಾಗಿದ್ದು. ಈಗ ಮತ್ತೆ ಅಂಥ ಪರಿಸ್ಥಿತಿ ಬರುವುದು ಬೇಡ ಎಂದರು. ಕಾಂಗ್ರೆಸ್ ಸರ್ಕಾರ ಬಿದ್ದ ಸಂದರ್ಭದಲ್ಲಿ ನಾವು ಚುನಾವಣೆಗೆ ಹೋಗಬೇಕು. ಜನರ ಆಶೀರ್ವಾದ ಪಡೆದು ಗೆದ್ದು ಅಧಿಕಾರಕ್ಕೆ ಬರಬೇಕು. ಆ ಮೂಲಕ ಆಪರೇಷನ್ ಕಮಲ ಮುಂತಾದ ಭ್ರಷ್ಟಾಚಾರ ವ್ಯವಸ್ಥೆಯನ್ನು ಕೊನೆಗಾಣಿಸಬೇಕು ಎಂದು ಅವರು ಗುಡುಗಿದರು.

ಶ್ರೀ ಕಾವೇರಿ ಕೊಡವ ಅಸೋಸಿಯೇಷನ್ ಪದಾಧಿಕಾರಿಗಳ ಆಯ್ಕೆ



ಶ್ರೀ ಕಾವೇರಿ ಕೊಡವ ಅಸೋಸಿಯೇಷನ್ (ಮೈಸೂರು ಪೂರ್ವ)ನ ನೂತನ ಪದಾಧಿಕಾರಿಗಳನ್ನು ಚಿತ್ರದಲ್ಲಿ ಕಾಣಬಹುದು.

ಮೈಸೂರು,ಸೆ.29– ಮೈಸೂರಿನ ವಿದ್ಯಾಶಂಕರ ಬಡಾವಣೆಯಲ್ಲಿರುವ ಶ್ರೀ ಕಾವೇರಿ ಕೊಡವ ಅಸೋಸಿಯೇಷನ್ (ಮೈಸೂರು ಪೂರ್ವ)ದ 2024–26ನೇ ಸಾಲಿನ ಪದಾಧಿಕಾರಿಗಳನ್ನು ಭಾನುವಾರ ಆಯ್ಕೆ ಮಾಡಲಾಯಿತು.

ಸಂಘದ ಅಧ್ಯಕ್ಷ ಪುಲಿಯಂಡ ದೇವಯ್ಯ ಅಧ್ಯಕ್ಷತೆಯಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ನೂತನ ಅಧ್ಯಕ್ಷರಾಗಿ ಕಡೇಮಾಡ ಜಯ ಬೆಳ್ಳಿಯಪ್ಪ, ಉಪಾಧ್ಯಕ್ಷರಾಗಿ ಶ್ರೀಮತಿ ಪಂದಿಯಂಡ ಪದ್ಮ, ಕಾರ್ಯದರ್ಶಿ ಯಾಗಿ ಪಟ್ಟಡ ಸಚಿನ್ ದೇವಯ್ಯ, ಜಂಟಿ ಕಾರ್ಯದರ್ಶಿಯಾಗಿ ನರವೆಂಡ ಸುನಿಲ್ ಮುತ್ತಪ್ಪ, ಖಜಾಂಚಿಯಾಗಿ ಪಟ್ಟಮಾಡ ಅರುಣ್ ಚೆರಮಣ ಅವರು ಆಯ್ಕೆಯಾದರು.

ಕಾರ್ಯಕಾರಿ ಸಮಿತಿ ಸದಸ್ಯರಾಗಿ ಪೋಕಚಂಡ ನರೇಂದ್ರ, ಪುದಿಯೊಕ್ಕಡ ಪ್ರವೀಣ್ ಚೆಂಗಪ್ಪ, ಕಂಜಿತಂಡ ಮನು ಅಯ್ಯಪ್ಪ, ಚೊಕ್ಕೀರ ಸೋಮಯ್ಯ, ಪಾಲೆಂಗಡ ವಿನು ಚೆಂಗಪ್ಪ, ಚೊಕ್ಕೀರ ಸುದನ್, ಅಜ್ಜಿಕುಟೀರ ಸುಬ್ಬಯ್ಯ, ನಿಡುಮಂಡ ಅಪ್ಪಚ್ಚು, ಶ್ರೀಮತಿ ಮೇದುರ ತಾವರೆ ಸೀತಮ್ಮ, ಶ್ರೀಮತಿ ಅಜ್ಜಮಕ್ಕಡ ಬೀನಾ, ಅಮ್ಮಣಿಚಂಡ ಶೋಭಾ, ಸುಳಿಮಾಡ ರಜಿನಿ ಅವರು ಆಯ್ಕೆಗೊಂಡರು.

ಮಡಿಕೇರಿಯಲ್ಲಿ ಹೃದ್ರೋಗ ಕೇಂದ್ರ ಸ್ಥಾಪನೆಗೆ ಚಿಂತನೆ

ಎಂಆರ್‌ಐ ಸ್ಕ್ಯಾನಿಂಗ್ ಕೇಂದ್ರ ಉದ್ಘಾಟಿಸಿ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ ಹೇಳಿಕೆ



ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಬೋಧಕ ಆಸ್ಪತ್ರೆಯಲ್ಲಿ ಎಂಆರ್‌ಐ ಸ್ಕ್ಯಾನಿಂಗ್ ಕೇಂದ್ರವನ್ನು ಸಚಿವ ಡಾ.ಶರಣಪ್ರಕಾಶ್ ಪಾಟೀಲ ಉದ್ಘಾಟಿಸಿದರು.

ಮಡಿಕೇರಿ, ಸೆ.29–ನಗರದ ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಬೋಧಕ ಆಸ್ಪತ್ರೆ ಸಮುಚ್ಛಯದಲ್ಲಿ ಮುಂದಿನ ದಿನಗಳಲ್ಲಿ 'ಹೃದ್ರೋಗ' ಚಿಕಿತ್ಸಾ ಕೇಂದ್ರ ತೆರೆಯಲು ಉದ್ದೇಶಿಸಲಾಗಿದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ ತಿಳಿಸಿದರು.

ನಗರದ ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಬೋಧಕ ಆಸ್ಪತ್ರೆಯಲ್ಲಿ 10.70 ಕೋಟಿ ರೂ ವೆಚ್ಚದಲ್ಲಿ ಅಳವಡಿಸಿರುವ ಎಂಆರ್‌ಐ ಸ್ಕ್ಯಾನಿಂಗ್ ಕೇಂದ್ರ ಉದ್ಘಾಟಿಸಿ ಮಾತನಾಡಿದ ಅವರು, ಆರ್ಥಿಕವಾಗಿ ಹಿಂದುಳಿದ ಬಡವರ್ಗದವರಿಗೆ ಚಿಕಿತ್ಸಾ ಸೌಲಭ್ಯ ಕೈಗೆಟುಕಬೇಕೆನ್ನುವ ಉದ್ದೇಶದಿಂದ ಸರ್ಕಾರ ವಿವಿಧೆಡೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ತೆರೆಯುತ್ತಿದೆ. ಇದರಿಂದ ಪ್ರಸ್ತುತ ಅತ್ಯಂತ ದುಬಾರಿಯಾಗಿದ್ದ ಹೃದ್ರೋಗ ಚಿಕಿತ್ಸಾ ಸೌಲಭ್ಯಗಳು ಜನಸಾಮಾನ್ಯರಿಗೆ ಕಡಿಮೆ ವೆಚ್ಚಕ್ಕೆ ದೊರಕುವಂತಾಗಿದೆ. ರಾಜ್ಯ ಸರ್ಕಾರ ಈ ಉದ್ದೇಶದಿಂದ ಆರೋಗ್ಯ ಮತ್ತು ವೈದ್ಯಕೀಯ ಕ್ಷೇತ್ರಕ್ಕೆ ಹೆಚ್ಚಿನ ಒತ್ತು ನೀಡುತ್ತಿದೆ ಎಂದರು.

ಸ್ಥಳೀಯ ಇಬ್ಬರು ಶಾಸಕರು ಜಿಲ್ಲೆಯ ಆರೋಗ್ಯ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ. ಹಿಂದೆ ಕೊಡಗು, ಕಾರವಾರ, ಗದಗ ಮತ್ತು ಕೊಪ್ಪಳ ಜಿಲ್ಲೆಗಳನ್ನು ಹೊರತುಪಡಿಸಿದಂತೆ ಉಳಿದ ಜಿಲ್ಲೆಗಳಲ್ಲಿ ವೈದ್ಯಕೀಯ ಕಾಲೇಜುಗಳಿದ್ದವು. ಪ್ರಸ್ತುತ ರಾಜ್ಯದಲ್ಲಿ 24 ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ತೆರೆಯಲಾಗಿದೆ. ಇದರ ಉದ್ದೇಶ, ಆಸಕ್ತಿಹೊಂದಿರುವ ಬಡವರ ಮಕ್ಕಳು ವೈದ್ಯಕೀಯ ಶಿಕ್ಷಣ ಪಡೆದುಕೊಳ್ಳಬೇಕು ಎನ್ನುವುದೇ ಆಗಿದೆ ಎಂದು ಹೇಳಿದರು.

ಕೊಡಗಿನಿಂದ ಹೊರ ಹೋಗುವಂತಿಲ್ಲ: ಕೊಡಗು ಸೇರಿದಂತೆ ಕಾರವಾರ ವಿಭಾಗಗಳಲ್ಲಿ ವೈದ್ಯಕೀಯ ವೃತ್ತಿಗೆ ಬರುವವರು ಬೇಗನೆ ಹಿಂದಕ್ಕೆ ತೆರಳುವ ಪರಿಸ್ಥಿತಿ ಇದೆ. ಈ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸಲು ಬರುವ ವೈದ್ಯರನ್ನು ಸ್ವಾಗತಿಸಲಾಗುವುದು. ಆದರೆ, ಮತ್ತೆ ಜಿಲ್ಲೆಯಿಂದ ಹೊರ ಹೋಗುವಂತಿಲ್ಲ ಎಂದು ಹಾಸ್ಯದ ಧಾಟಿಯಲ್ಲಿ ಹೇಳಿದರು.

ಸಂಶಯ ಬೇಡ: ರಾಜ್ಯ ಸರ್ಕಾರ ಆರೋಗ್ಯ ಮತ್ತು ವೈದ್ಯಕೀಯ ಕ್ಷೇತ್ರವನ್ನು ಮೇಲೆತ್ತಲು ಹಾಗೂ ಅದಕ್ಕೆ ಪೂರಕ ನೀತಿಗಳನ್ನು ರೂಪಿಸಿ ಶ್ರಮಿಸುತ್ತಿದೆ. ರಾಜ್ಯದ ಆಯವ್ಯಯದಲ್ಲೂ ಈ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಆರೋಗ್ಯ ಕ್ಷೇತ್ರಗಳ ಬೆಳವಣಿಗೆ ಬಗ್ಗೆ ಯಾವುದೇ ಸಂಶಯ ಬೇಡ ಎಂದು ಶಾಸಕ ಎ.ಎಸ್.ಪೊನ್ನಣ್ಣ ತಿಳಿಸಿದರು.

ತಾಂತ್ರಿಕ ತಜ್ಞರನ್ನು ನೇಮಿಸಿ: ಶಾಸಕ ಡಾ.ಮಂತರ್ ಗೌಡ ಮಾತನಾಡಿ, ಅಭಿವೃದ್ಧಿಯಲ್ಲಿ ಎಂದಿಗೂ ರಾಜಕೀಯವಿಲ್ಲ. ಜನಸಾಮಾನ್ಯರ ಅನುಕೂಲಕ್ಕಾಗಿ ಎಂಆರ್‌ಐ ಕೇಂದ್ರ ತೆರೆಯಲಾಗಿದೆ ಎಂದರು.

ಎಂಆರ್‌ಐ ಸ್ಕ್ಯಾನಿಂಗ್ ಕ್ಯಾನ್ಸರ್, ಹೃದಯಾಘಾತ ಮೊದಲಾದ ಗಂಭೀರ ಕಾಯಿಲೆಗಳನ್ನು ಆರಂಭಿಕ ಹಂತದಲ್ಲೇ ಗುರುತಿಸಲು ಸಹಕಾರಿಯಾಗಿದೆ. ಇದು ಗರ್ಭಿಣಿರಿಗೂ ಅತ್ಯಂತ ಸುರಕ್ಷಿತ. ಪ್ರಸ್ತುತ ಆಸ್ಪತ್ರೆಯಲ್ಲಿ ಎಂಆರ್‌ಐ ಸ್ಕ್ಯಾನಿಂಗ್ ಆರಂಭವಾಗಿದ್ದು, ಇದಕ್ಕೆ ಪೂರಕವಾಗಿ ಇಬ್ಬರು ತಾಂತ್ರಿಕ ತಜ್ಞರನ್ನು ನೇಮಿಸುವಂತೆ ಸಚಿವರಲ್ಲಿ ಮನವಿ ಮಾಡಿದರು.


ಆರಂಭಿಕ ರೋಗ ಪತ್ತೆಗೆ ಅತ್ಯಂತ ಉಪಯುಕ್ತವಾದ ಎಂಎಆರ್‌ಐ ಸ್ಕ್ಯಾನಿಂಗ್ ಅನ್ನು ವೈದ್ಯರು, ವೈದ್ಯಕೀಯ ವಿದ್ಯಾರ್ಥಿಗಳು ಸದುಪಯೋಗ ಪಡಿಸಿಕೊಳ್ಳಬೇಕು. ಆಸ್ಪತ್ರೆ ನಿರ್ಮಾಣಕ್ಕೆ ಹಿಂದೆ ಜಾಗ ಒದಗಿಸಿದ ಕೊರವಂಡ ತಿಮ್ಮಯ್ಯ ಹೆಸರನ್ನು ಶಾಶ್ವತವಾಗಿಸುವ ನಿಟ್ಟಿನ ಕಾರ್ಯ ಆಸ್ಪತ್ರೆಯಲ್ಲಿ ನಡೆಯಬೇಕೆಂದು ತಿಳಿಸಿದರು.

ವೈದ್ಯಕೀಯ ಶಿಕ್ಷಣ ಇಲಾಖೆ ಮುಖ್ಯ ಕಾರ್ಯದರ್ಶಿ ಮೊಹಮ್ಮದ್ ಮೊಸಿನ್ ಮಾತನಾಡಿ, ಮಡಿಕೇರಿಯ ಈ ಆಸ್ಪತ್ರೆಯಲ್ಲಿ ತುರ್ತು ನಿಗಾ ಘಟಕ (ಕ್ರಿಟಿಕಲ್ ಕೇರ್ ಯೂನಿಟ್) ಆರಂಭಕ್ಕೆ ಒಂದಷ್ಟು ಸಮಸ್ಯೆಗಳಿವೆ. ಇಲ್ಲಿನ ಆಸ್ಪತ್ರೆಯನ್ನು ಹಂತ ಹಂತವಾಗಿ ಅಭಿವೃದ್ಧಿಪಡಿಸಲಾಗುವುದು ಎಂದು ತಿಳಿಸಿದರು.

ಸನ್ಮಾನ: ಇದೇ ಸಂದರ್ಭ ವೈದ್ಯಕೀಯ ಕಾಲೇಜು ಶಿಕ್ಷಕರ ಸಂಘದಿಂದ ಸಚಿವ ಡಾ.ಶರಣ ಪ್ರಕಾಶ್ ಪಾಟೀಲ, ಶಾಸಕರಾದ ಎ.ಎಸ್.ಪೊನ್ನಣ್ಣ, ಡಾ.ಮಂತರ್‌ಗೌಡ, ಮುಖ್ಯ ಕಾರ್ಯದರ್ಶಿ ಮೊಹಮ್ಮದ್ ಮೊಸಿನ್ ಅವರನ್ನು ಸನ್ಮಾನಿಸಲಾಯಿತು. ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಧರ್ಮಜ ಉತ್ತಪ್ಪ, ಎಡಿಸಿ ಐಶ್ವರ್ಯ, ಮೆಡಿಕಲ್ ಕಾಲೇಜು ಡೀನ್ ವಿಶಾಲ್ ಕುಮಾರ್ ಉಪಸ್ಥಿತರಿದ್ದರು.

ಅತ್ಯಾಚಾರಿಗೆ 11 ವರ್ಷ ಜೈಲು

ಮಡಿಕೇರಿ, ಸೆ.29–ಅಪ್ರಾಪ್ತೆ ಮೇಲೆ ಅತ್ಯಾಚಾರ ಎಸಗಿದ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಅಪರಾಧಿಗೆ 11 ವರ್ಷ ಕಠಿಣ ಜೈಲು ಶಿಕ್ಷೆ ಮತ್ತು 25 ಸಾವಿರ ರೂ. ದಂಡ ವಿಧಿಸಿ ಮಡಿಕೇರಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ತೀರ್ಪು ನೀಡಿದೆ.



ಶಿವಪ್ರಕಾಶ್

ಕೆದಕಲ್ ಗ್ರಾಮದ ನೆಗೆದಾಳ್ ನಿವಾಸಿ ಶಿವಪ್ರಕಾಶ್ ಅಲಿಯಾಸ್ ಶಶಿ ಶಿಕ್ಷೆಗೆ ಒಳಗಾದ ಅಪರಾಧಿ. ಈತ ವಿರುದ್ಧ 2022ರ ಮಾ.8ರಂದು ಮಡಿಕೇರಿ ಮಹಿಳಾ ಪೊಲೀಸ್ ಠಾಣೆಯಲ್ಲಿ ಅಪ್ರಾಪ್ತೆ ಅತ್ಯಾಚಾರ ಎಸಗಿದ ಪ್ರಕರಣ ದಾಖಲಾಗಿತ್ತು. ಅಂದು ತನಿಖಾಧಿಕಾರಿಯಾಗಿದ್ದ ಮುದ್ದುಮಾದೇವ ಹಾಗೂ ಅಚ್ಚಮ್ಮ ಅವರು ತನಿಖೆ ನಡೆಸಿ, ಈತನ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಾಧೀಶ ಹೊಸಮನಿ ಪುಂಡಲೀಕ, ಆರೋಪಿಗೆ 11 ವರ್ಷ ಕಠಿಣ ಜೈಲು ಶಿಕ್ಷೆ, 25 ಸಾವಿರ ರೂ. ದಂಡ ಹಾಗೂ ನೊಂದ ಬಾಲಕಿಗೆ 4 ಲಕ್ಷ ರೂ. ಪರಿಹಾರ ಒದಗಿಸುವಂತೆ ತೀರ್ಪು ನೀಡಿದ್ದಾರೆ. ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕ ರುದ್ರಪ್ರಸನ್ನ ವಾದ ಮಂಡಿಸಿದರು.

ಕಾರ್ಮಿಕ ಇಲಾಖೆಗೆ ಛಾಯಾಗ್ರಾಹಕರ ಸೇರ್ಪಡೆ



ಕ್ಯಾಮರಾ ಕಾರ್ಯಾಗಾರವನ್ನು ಪಶು ಸಂಗೋಪನಾ ಮತ್ತು ರೇಷ್ಮೆ ಸಚಿವ ಕೆ.ವೆಂಕಟೇಶ್ ಕ್ಯಾಮರಾ ಕ್ಲಿಕ್ಕಿಸುವ ಮೂಲಕ ಉದ್ಘಾಟಿಸಿದರು.

ಕುಶಾಲನಗರ: ಸರ್ಕಾರ ಛಾಯಾಗ್ರಾಹಕರನ್ನು ಕಾರ್ಮಿಕ ಇಲಾಖೆ ವ್ಯಾಪ್ತಿಗೆ ಸೇರಿಸಿ ಎಲ್ಲಾ ಸೌಲಭ್ಯ ಕಲ್ಪಿಸುತ್ತಿದೆ ಎಂದು ಪಶು ಸಂಗೋಪನಾ ಮತ್ತು ರೇಷ್ಮೆ ಸಚಿವ ಕೆ.ವೆಂಕಟೇಶ್ ಹೇಳಿದರು.

ಪಟ್ಟಣದ ರೈತ ಸಹಕಾರ ಭವನದಲ್ಲಿ ಕೊಡಗು ಜಿಲ್ಲಾ ಛಾಯಾಗ್ರಾಹಕರ ಕ್ಷೇಮಾಭಿವೃದ್ಧಿ ಸಂಘದ ಆಶ್ರಯದಲ್ಲಿ ಏರ್ಪಡಿಸಿದ್ದ ಕ್ಯಾಮರಾ ಕಾರ್ಯಾಗಾರ ಮತ್ತು ಛಾಯಾ ಕುಟುಂಬ ಸಮ್ಮಿಲನ ಕಾರ್ಯಕ್ರಮವನ್ನು ಕ್ಯಾಮರಾ ಕ್ಲಿಕ್ಕಿಸುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಛಾಯಾಚಿತ್ರ ಅದ್ಭುತ ವೃತ್ತಿ, ಕಲೆಯಾಗಿದೆ. ಆಧುನಿಕ ತಂತ್ರಜ್ಞಾನಕ್ಕೆ ತಕ್ಕಂತೆ ಛಾಯಾಗ್ರಾಹಕರು ಪರಿಣಿತರಾಗಬೇಕು. ಛಾಯಾಗ್ರಾಹಕ ಕಚೇರಿ ನಿರ್ಮಾಣಕ್ಕೆ ಅಗತ್ಯ ಸಹಕಾರ ಹಾಗೂ ಜಿಲ್ಲೆಯ ಶಾಸಕರೊಂದಿಗೆ ಚರ್ಚಿಸಿ ನೆರವು ಕೊಡಿಸುವುದಾಗಿ ಭರವಸೆ ನೀಡಿದರು.

ಖ್ಯಾತ ವಾಗ್ಮಿ ಪ್ರೊ.ಎಂ.ಕೃಷ್ಣೇಗೌಡ ಮಾತನಾಡಿ, ಟೆಕ್ನಾಲಜಿ ಮತ್ತು ಕಲೆ ಬಗ್ಗೆ ಜ್ಞಾನ ಹೊಂದಿರುವ ವೃತ್ತಿಪರ ಛಾಯಾಗ್ರಾಹಕ ಮಾತ್ರ ಉತ್ತಮ ಛಾಯಾಗ್ರಾಹಕ ಆಗಲು ಸಾಧ್ಯ. ಮೊಬೈಲ್ ಬಂದ ಮೇಲೆ ಛಾಯಾಗ್ರಾಹಕರು ಉಳಿಯೋದು ಕಷ್ಟವಾಗಿತ್ತು ಆದರೆ, ಛಾಯಾಗಾರಕರು ತಮ್ಮ ಅಸ್ತಿತ್ವ ಮತ್ತು ವೃತ್ತಿ ಉಳಿಸಿಕೊಂಡಿದ್ದಾರೆ ಎಂದರು.

ಛಾಯಾಗ್ರಾಹಕ ಸಂಘದ ರಾಜ್ಯಾಧ್ಯಕ್ಷ ಎಚ್.ಎಸ್.ನಾಗೇಶ್ ಮಾತನಾಡಿ, ಸರ್ಕಾರ ಪ್ರತ್ಯೇಕವಾದ ಛಾಯಾಗ್ರಾಹಕರ ಅಕಾಡೆಮಿ ಸ್ಥಾಪಿಸಬೇಕು. ರಾಜ್ಯದಲ್ಲಿ ಎರಡು ಲಕ್ಷ ಛಾಯಾಗ್ರಾಹಕರು ಫೋಟೋಗ್ರಾಫರ್ ವೃತ್ತಿಯಲ್ಲಿ ತೊಡಗಿಸಿಕೊಂಡಿದ್ದಾರೆ. ಮೊಬೈಲ್ ಬಂದ ಮೇಲೆ ಛಾಯಾಗ್ರಾಹಕರ ಬದುಕು ಅಸ್ಥಿರವಾಗಿದೆ. ಉದ್ಯಮಕ್ಕೆ ದೊಡ್ಡ ಹೊಡೆತ ಬಿದ್ದಿದೆ. ಆದ್ದರಿಂದ ಛಾಯಾಗ್ರಾಹಕರ ಕ್ಷೇಮಾಭಿವೃದ್ಧಿಗೆ ವಿಶೇಷ ಒತ್ತು ನೀಡಬೇಕು. ಜೊತೆಗೆ ಪಿಂಚಣಿ ವ್ಯವಸ್ಥೆ ಜಾರಿಗೆ ತರಬೇಕು ಎಂದು ಒತ್ತಾಯಿಸಿದರು.

ಇದೇ ವೇಳೆ ರಂಗಭೂಮಿ ಕಲಾವಿದ ಶೀನುಮಿತ್ರ ಅವರನ್ನು ಸನ್ಮಾನಿಸಲಾಯಿತು. ಕ್ರಿಕೆಟ್ ಪಂದ್ಯಾವಳಿಯಲ್ಲಿ ವಿಜೇತ ತಂಡಗಳಿಗೆ ಬಹುಮಾನ ವಿತರಿಸಲಾಯಿತು.

ಸಂಘದ ಕೊಡಗು ಜಿಲ್ಲಾಧ್ಯಕ್ಷ ಆವರ್ತಿ ಆರ್.ಮಹದೇವಪ್ಪ, ಎಸ್‌ಎಲ್‌ಎನ್ ಸಂಸ್ಥೆ ವ್ಯವಸ್ಥಾಪಕ ನಿರ್ದೇಶಕ ವಿಶ್ವನಾಥನ್, ಮೆಸ್ಕೊ ಜಲನಿ ಕಾಫಿ ಕ್ಯೂರರ್ಸ್ ಮಹಮದ್ ಸಾಧಿಕ್, ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ವಿ.ಪಿ.ಶಶಿಧರ್, ರಾಜೇಶ್ವರಿ ಎಜುಕೇಶನ್ ಟ್ರಸ್ಟ್ ಕಾರ್ಯದರ್ಶಿ ಸಚಿನ್ ವಾಸುದೇವ್, ಛಾಯಾಗ್ರಾಹಕರ ಸಂಘದ ಉಪಾಧ್ಯಕ್ಷ ರೋಷನ್ ಮಡಿಕೇರಿ, ಪ್ರಧಾನ ಕಾರ್ಯದರ್ಶಿ ಬಿ.ವೈಲವಕುಮಾರ್, ಸಹ ಕಾರ್ಯದರ್ಶಿ ವಿರಾಜಪೇಟೆ ಕೆ.ಬಿ.ಸುನೀಲ್, ಖಜಾಂಚಿ ಮಡಿಕೇರಿ ಪ್ರಕಾಶ ಕುಂಜಿಲನ, ಸಂಘಟನಾ ಕಾರ್ಯದರ್ಶಿ ಸೋಮವಾರಪೇಟೆ ಸುಬ್ರಮಣಿ, ಸಾಂಸ್ಕೃತಿಕ ಕಾರ್ಯದರ್ಶಿ ಡೇವಿಡ್ ಸೊಲೋಮನ್, ಕ್ರೀಡಾ ಕಾರ್ಯದರ್ಶಿ ಡಾಡು ಜೋಸೆಫ್, ನಿರ್ದೇಶಕ ಗೋಣಿಕೊಪ್ಪ ದೀಪಕ್, ಮರಗೋಡು ಪ್ರದೀಪ್, ವಸಂತ, ಭರತ್, ಶಿವಕುಮಾರ್, ರಂಜಿತ್, ಅಶ್ರಫ್, ಕೂರನ ಪ್ರವೀಣ್, ಅಭಿಲಾಷ್, ನವೀನ್, ದೀಪಕ್, ರವೀಂದ್ರ ಭಾವೆ, ರಾಜೇಶ್, ಮಾಜಿ ಅಧ್ಯಕ್ಷರಾದ ಮೂಕಾಳೇರ ಲಕ್ಷ್ಮಣ್, ಸುರೇಶ್ ಮಾವಟ್ಕರ್, ಕೆ.ಎಸ್.ನಾಗೇಶ್, ಗುಡ್ಡೆಮನೆ ವಿಶ್ವ ಕುಮಾರ್, ಎಸ್.ಆರ್.ವಸಂತ ಪಾಲ್ಗೊಂಡಿದ್ದರು.

ವಿ.ಪೇಟೆಯಲ್ಲಿ ವಿಜೃಂಭಣೆಯ ಓಣಂ ಆಚರಣೆ



ವಿರಾಜಪೇಟೆಯಲ್ಲಿ ಮುತ್ತಪ್ಪನ್ ಮಲಯಾಳಿ ಸಮಾಜದ ವತಿಯಿಂದ ಮಹಾಬಲಿ ಮೆರವಣಿಗೆ ನಡೆಸಲಾಯಿತು.

ವಿರಾಜಪೇಟೆ, ಸೆ.29–ಪಟ್ಟಣದ ಮೀನುಪೇಟೆಯ ಶ್ರೀ ಮುತ್ತಪ್ಪ ದೇವಾಲಯದಲ್ಲಿ ಮುತ್ತಪ್ಪನ್ ಮಲಯಾಳಿ ಸಮಾಜದ ವತಿಯಿಂದ 16ನೇ ವರ್ಷದ ಓಣಂ ಹಬ್ಬವನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

ಸಿಂಗಾರಗೊಂಡ ಕಲಾ ಮಂಟಪದಿಂದ ಚಂಡೆವಾದ್ಯ ಮೇಳದೊಂದಿಗೆ ಮಹಾಬಲಿ(ಮಾವೇಲಿ)ಯನ್ನು, ಛದ್ಮವೇಷ ಧರಿಸಿದ ಮಕ್ಕಳು, ಸೆಟ್ಟು ಸ್ಯಾರಿಯನ್ನುಟ್ಟ ಮಹಿಳೆಯರು ಮೀನುಪೇಟೆಯಿಂದ ಖಾಸಗಿ ಬಸ್ ನಿಲ್ದಾಣ, ಸುಣ್ಣದ ಬೀದಿ, ಗೋಣಿಕೊಪ್ಪ ರಸ್ತೆ, ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ಮಾರ್ಗವಾಗಿ ದೊಡ್ಡಟ್ಟಿ ಚೌಕಿ, ಗಡಿಯಾರ ಕಂಬ, ಮುಖ್ಯ ರಸ್ತೆಯಲ್ಲಿ ಮೆರವಣಿಗೆ ನಡೆಸಿದರು.

ಮಲಯಾಳಿ ಸಮಾಜದವರು ಮತ್ತು ಸಾರ್ವಜನಿಕರಿಗೆ ಓಣಂ ಸದ್ಯ ಏರ್ಪಡಿಸಲಾಗಿತ್ತು. ನಂತರ ಕಲಾ ವೇದಿಕೆಯಲ್ಲಿ ನಡೆದ ಸಭಾ ಕಾರ್ಯಕ್ರಮದಲ್ಲಿ ತಿರುವಾದಿರ ನೃತ್ಯ, ಮೆಗಾ ಶೋ ನಡೆಯಿತು. ಇದಕ್ಕೂ ಮೊದಲು ಓಣಂ ಆಚರಣೆ ಪ್ರಯುಕ್ತ ಹೂವಿನ ರಂಗೋಲಿ (ಪೊಕಳಂ) ಸ್ಪರ್ಧೆ ಆಯೋಜಿಸಲಾಗಿತ್ತು.

ದೇವಸ್ಥಾನಗಳ ಮಹಾಸಂಘದಿಂದ ಎಡಿಸಿಗೆ ಮನವಿ ಸಲ್ಲಿಕೆ

ಮಡಿಕೇರಿ: ಕೋಟ್ಯಾಂತರ ಭಕ್ತರ ಧಾರ್ಮಿಕ ನಂಬಿಕೆಯ ಕ್ಷೇತ್ರ ತಿರುಪತಿ ಲಡ್ಡು ಪ್ರಸಾದದಲ್ಲಿ ಪ್ರಾಣಿಗಳ ಕೊಬ್ಬಿನಾಂಶ ಬೆರೆಸಿರುವ ಪ್ರಕರಣ ಸಂಬಂಧ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ಕರ್ನಾಟಕ ದೇವಸ್ಥಾನಗಳ ಮಹಾಸಂಘದ ಕೊಡಗು ಶಾಖೆ ವತಿಯಿಂದ ಅಪರ ಜಿಲ್ಲಾಧಿಕಾರಿ ಆರ್.ಐಶ್ವರ್ಯ ಅವರಿಗೆ ಮನವಿ ಸಲ್ಲಿಸಲಾಯಿತು.

ಪ್ರಸಾದದಲ್ಲಿ ಪ್ರಾಣಿಗಳ ಕೊಬ್ಬಿನಾಂಶ ಬೆರೆಸಿರುವುದು ಹಿಂದೂಗಳನ್ನು ಧರ್ಮಭ್ರಷ್ಟರನ್ನಾಗಿ ಮಾಡುವ ಷಡ್ಯಂತ್ರ ಮತ್ತು ಹಿಂದೂಗಳ ಧರ್ಮಶ್ರದ್ಧೆ ಮೇಲಿನ ದಾಳಿಯಾಗಿದೆ. ಹಿಂದೂಗಳ ಧಾರ್ಮಿಕ ಭಾವನೆ ವಿರುದ್ಧವಾಗಿ ಲಡ್ಡು ಪ್ರಸಾದದಲ್ಲಿ ಪ್ರಾಣಿಗಳ ಕೊಬ್ಬಿನಾಂಶ ಬೆರೆಸಿದವರ ವಿರುದ್ಧ ಪ್ರಕರಣ ದಾಖಲಿಸಿ, ಕಠಿಣ ಶಿಕ್ಷೆ ವಿಧಿಸಬೇಕು.



ಆಂಧ್ರ ಸಿಎಂ ಚಂದ್ರಬಾಬು ನಾಯ್ಡು ಹಿಂದಿನ ಸರ್ಕಾರ ರೂಪಿಸಿರುವ ಹಿಂದೂ ವಿರೋಧಿ ನೀತಿಗಳನ್ನು ತಕ್ಷಣ ರದ್ದುಗೊಳಿಸಬೇಕು ಎಂದು ಮಹಾಸಂಘದ ರಾಜ್ಯ ಸಂಯೋಜಕ ಪವನ್ ಬಿದ್ದಪ್ಪ ಒತ್ತಾಯಿಸಿದರು.

ವಿಶ್ವದಲ್ಲೇ ಭಾರತ ತೆಂಗು ಬೆಳೆಯಲ್ಲಿ ಮುಂಚೂಣಿ

ರಾಜ್ಯ ಮಟ್ಟದ ಕಾರ್ಯಾಗಾರದಲ್ಲಿ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಎಸ್.ಪಾಟೀಲ



ಚಾಮರಾಜನಗರದ ಮುಣಚನಹಳ್ಳಿ ತೆಂಗು ಸಂಸ್ಕರಣ ಘಟಕದ ಆವರಣದಲ್ಲಿ ಆಯೋಜಿಸಿದ್ದ ತೆಂಗು ಬೆಳೆಗಾರರ ರಾಜ್ಯ ಮಟ್ಟದ ಕಾರ್ಯಾಗಾರವನ್ನು ಸಚಿವರಾದ ಶಿವಾನಂದ ಎಸ್.ಪಾಟೀಲ, ಕೆ.ವೆಂಕಟೇಶ್ ಉದ್ಘಾಟಿಸಿದರು.

> ಭೌಗೋಳಿಕವಾಗಿ ವಿಸ್ತಾರವಾಗಿರುವ ಚಾಮರಾಜನಗರ ಜಿಲ್ಲೆಯ 12 ಸಾವಿರ ಹೆಕ್ಟೇರ್‌ನಲ್ಲಿ ತೆಂಗು ಬೆಳೆಯಲಾಗುತ್ತಿದ್ದು, 12 ಸಾವಿರ ಕೋಟಿ ಕಾಯಿ ಉತ್ಪಾದನೆಯಾಗುತ್ತಿದೆ. ಜಿಲ್ಲೆಗೆ ಬರಗಾಲದ ಪರಿಸ್ಥಿತಿಯಲ್ಲಿ ತೆಂಗು ಬೆಳೆ ಒಣಗಿ ರೈತರು ಸಂಕಷ್ಟಕ್ಕೀಡಾಗಿದ್ದರು. ಇದನ್ನು ಮನಗಂಡ ಸರ್ಕಾರ ಜಿಲ್ಲೆಯ ಕೆರೆಗಳನ್ನು ತುಂಬಿಸುವ ಮೂಲಕ ಕೃಷಿ ಹಾಗೂ ತೋಟಗಾರಿಕೆ ಬೆಳೆಗಳ ಪುನಶ್ಚೇತನಕ್ಕೆ ನೆರವಾಗಿದೆ.
>
> –ಕೆ.ವೆಂಕಟೇಶ್, ಜಿಲ್ಲಾ ಉಸ್ತುವಾರಿ ಸಚಿವ.

ಚಾಮರಾಜನಗರ, ಸೆ.29–ವಿಶ್ವದಲ್ಲೇ ಭಾರತ ತೆಂಗು ಬೆಳೆಯಲ್ಲಿ ಮುಂಚೂಣಿಯಲ್ಲಿದೆ ಎಂದು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಎಸ್.ಪಾಟೀಲ ಹೇಳಿದರು.

ಚಾಮರಾಜನಗರ ಬಳಿಯ ಕಾಳನಹುಂಡಿ ರಸ್ತೆಯ ಮುಣಚನಹಳ್ಳಿ ತೆಂಗು ಸಂಸ್ಕರಣ ಘಟಕದ ಆವರಣದಲ್ಲಿ ಭಾನುವಾರ ತಾಲೂಕು ತೆಂಗು ಬೆಳೆಗಾರರ ಸಂಸ್ಕರಣ ಮತ್ತು ಮಾರಾಟ ಸಹಕಾರ ಸಂಘದ ವತಿಯಿಂದ ಆಯೋಜಿಸಿದ್ದ 'ವಿಶ್ವ ತೆಂಗು ದಿನಾಚರಣೆ ಮತ್ತು ತೆಂಗು ಬೆಳೆಗಾರರ ರಾಜ್ಯ ಮಟ್ಟದ ಕಾರ್ಯಾಗಾರದಲ್ಲಿ ತೆಂಗು ಕೈಪಿಡಿ ಬಿಡುಗಡೆಗೊಳಿಸಿ ಮಾತನಾಡಿದ ಅವರು, ದೇಶದಲ್ಲೇ ಹೆಚ್ಚಾಗಿ ಕೇರಳದಲ್ಲಿ 7 ಲಕ್ಷದ 60 ಸಾವಿರ ಹೆಕ್ಟೇರ್‌ನಲ್ಲಿ ತೆಂಗು ಬೆಳೆಯುತ್ತಿದೆ. 7 ಲಕ್ಷದ 4 ಸಾವಿರ ಹೆಕ್ಟೇರ್‌ನಲ್ಲಿ ತೆಂಗು ಬೆಳೆಯುವ ಮೂಲಕ ಕರ್ನಾಟಕ ನಂತರದ ಸ್ಥಾನದಲ್ಲಿದೆ ಎಂದರು.

ಉತ್ಪಾದನೆಯಲ್ಲಿ ಕೇರಳಕ್ಕಿಂತ ಕರ್ನಾಟಕ ಮುಂದಿದೆ. ತೆಂಗು ದರ ಅನೇಕ ಬಾರಿ ಏರಿಳಿತ ಕಂಡಿದೆ. ಇದರಿಂದ ರೈತರು ತೊಂದರೆಗೊಳಗಾಗಿದ್ದಾರೆ. ಇದನ್ನು ಪರಿಹರಿಸಲು ಸರ್ಕಾರ ಕನಿಷ್ಠ ಬೆಂಬಲ ಬೆಲೆ ಯೋಜನೆ ಜಾರಿಗೊಳಿಸಿದೆ. ಈ ಭಾಗದ ರೈತರು ಕಬ್ಬು, ದಾಳಿಂಬೆ ಹಾಗೂ ಮುಸುಕಿನ ಜೋಳ ಬೆಳೆಯಲು ಮುಂದಾಗಬೇಕು ಎಂದು ತಿಳಿಸಿದರು.

ರೈತರು ವೈಜ್ಞಾನಿಕ ಕೃಷಿ ಪದ್ಧತಿ ಅಳವಡಿಸಿದರೆ ಉತ್ತಮ ಬದುಕು ಕಟ್ಟಿಕೊಳ್ಳಲು ನೆರವಾಗಲಿದೆ. ಜೊತೆಗೆ ಒಂದೇ ಬೆಳೆಯನ್ನು ಆಶ್ರಯಿಸದೆ, ಬಹುಬೆಳೆ ಬೆಳೆಯುವಂತಾಗಬೇಕು. ಕೃಷಿಯಲ್ಲಿ ಸ್ಪರ್ಧಾತ್ಮಕತೆ ಅಳವಡಿಸಿಕೊಳ್ಳಬೇಕು. ಕೊಟ್ಟಿಗೆ ಗೊಬ್ಬರ ಬಳಸಬೇಕು. ಹಾಲು ಉತ್ಪಾದನೆಯಲ್ಲಿ ಕರ್ನಾಟಕ ಮುಂದಿದ್ದು, ರೈತರಿಗೆ ಪ್ರೋತ್ಸಾಹಧನ ನೀಡಲಾಗುತ್ತಿದೆ. ಸಹಕಾರ ಕ್ಷೇತ್ರದಲ್ಲಿ ಕರ್ನಾಟಕ ಅಭಿವೃದ್ಧಿ ಕ್ರಾಂತಿಯನ್ನೇ ಮಾಡಿದೆ. ತಾಲೂಕು ತೆಂಗು ಬೆಳೆಗಾರರ ಸಂಸ್ಕರಣ ಮತ್ತು ಮಾರಾಟ ಸಹಕಾರ ಸಂಘ ರೈತರ ನೆರವಿಗೆ ಮುಂದಾಗಬೇಕು ಎಂದರು.

ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್, ರೈತರು ಕೃಷಿ ಹಾಗೂ ತೋಟಗಾರಿಕೆ ಬೆಳೆ ಬೆಳೆಯಲು ಅನುಕೂಲವಾಗುವಂತೆ ಜಿಲ್ಲೆಯಲ್ಲಿ ನೀರಾವರಿ ಯೋಜನೆಗಳನ್ನು ಅನುಷ್ಠಾನಗೊಳಿಸುವ ಮೂಲಕ ಸರ್ಕಾರ ರೈತರ ಹಿತ ರಕ್ಷಣೆಗೆ ಬದ್ಧವಾಗಿದೆ ಎಂದು ತಿಳಿಸಿದರು.

ತೆಂಗು ಬೆಳೆ ರೈತರಿಗೆ ಹೆಚ್ಚು ಆದಾಯ ತರುವ ಹಾಗೂ ಬಹು ಉಪಯುಕ್ತ ಬೆಳೆಯಾಗಿದೆ. ತೆಂಗಿನ ದರಗಳಲ್ಲಿ ವ್ಯತ್ಯಾಸ, ಏರುಪೇರಾಗುವುದು ಸಹಜ. ತೆಂಗು ಬೆಳೆಗಾರರಿಗೆ ನಿರಂತರವಾಗಿ ಸಮಸ್ಯೆಗಳು ಎದುರಾಗುತ್ತಲೇ ಇದ್ದು, ಪರಿಹಾರೋಪಾಯ ಕಂಡುಕೊಳ್ಳುವ ಜೊತೆಗೆ ರೈತರು ಬದುಕು ಕಟ್ಟಿಕೊಳ್ಳಬೇಕಾಗಿದೆ. ರೈತರು ಎದೆಗುಂದಬಾರದು. ಸರ್ಕಾರ ರೈತರ ಪರವಾಗಿದೆ ಎಂದರು.

ಶಾಸಕ ಎ.ಆರ್.ಕೃಷ್ಣಮೂರ್ತಿ ಮಾತನಾಡಿ, ಜಿಲ್ಲೆಯ ಪ್ರಮುಖ ತೋಟಗಾರಿಕೆ ಬೆಳೆಗಳಲ್ಲಿ ತೆಂಗು ಒಂದಾಗಿದೆ. ಚುಂದಕವಾಡಿ ಮಾರ್ಗದಲ್ಲಿ ಹರಿಯುವ ಸುವರ್ಣಾವತಿ ಹಾಗೂ ಹೊನ್ನಹೊಳೆ ಭಾಗದ ಎಳನೀರು ಬಹಳ ಸಿಹಿಯಾಗಿದೆ. ಸರ್ಕಾರ ಜಿಲ್ಲೆಯ ಸಂತೆಮರಹಳ್ಳಿಯಲ್ಲಿ ಎಳನೀರು ಮಾರುಕಟ್ಟೆ ಸ್ಥಾಪಿಸಿ, ರೈತರ ಬದುಕು ಹಸನು ಮಾಡಬೇಕು ಎಂದರು.

ಶಾಸಕ ಸಿ.ಪುಟ್ಟರಂಗಶೆಟ್ಟಿ ಮಾತನಾಡಿದರು. ಸುತ್ತೂರು ಮಠಾಧ್ಯಕ್ಷ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಶಾಸಕ ಎಚ್.ಎಂ.ಗಣೇಶ್ ಪ್ರಸಾದ್, ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ, ಚುಡಾ ಅಧ್ಯಕ್ಷ ಮಹಮ್ಮದ್ ಅಸ್ಗರ್ ಮುನ್ನಾ, ಜಿಲ್ಲಾಧಿಕಾರಿ ಶಿಲ್ಪನಾಗ್, ಚಾಮರಾಜನಗರ ತಾಲೂಕು ತೆಂಗು ಬೆಳೆಗಾರರ ಸಂಸ್ಕರಣ ಮತ್ತು ಮಾರಾಟ ಸಹಕಾರ ಸಂಘದ ಅಧ್ಯಕ್ಷ ಎ.ಎಂ.ಮಹೇಶ್‌ಪ್ರಭು, ಕೊಚ್ಚಿನ್‌ನ ತೆಂಗು ಅಭಿವೃದ್ಧಿ ಮಂಡಳಿ ಅಧಿಕಾರಿ ಡಾ.ಬಿ.ಹನುಮಂತೇಗೌಡ ಹಾಗೂ ರಾಜ್ಯ ರೈತ ಸಂಘ ಅಧ್ಯಕ್ಷ ಬಡಗಲಪುರ ನಾಗೇಂದ್ರ, ಜಿಪಂ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಮೋನಾ ರೋತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ.ಕವಿತಾ, ತಾಲೂಕು ತೆಂಗು ಬೆಳೆಗಾರರ ಸಂಸ್ಕರಣ ಮತ್ತು ಮಾರಾಟ ಸಹಕಾರ ಸಂಘದ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಡಾ.ಬಸವರಾಜ ತಳವಾರ ಇದ್ದರು. ಕಾರ್ಯಕ್ರಮಕ್ಕೂ ಮೊದಲು ರೈತ ನಾಯಕ ಪ್ರೊ.ನಂಜುಂಡಸ್ವಾಮಿ ಅವರು ಪ್ರತಿಮೆಗೆ ಗಣ್ಯರು ಪುಷ್ಪಾರ್ಚನೆ ಮಾಡಿದರು.

ಬಿಜೆಪಿ 5 ವರ್ಷವೂ ಕಪ್ಪು ಬಾವುಟ ಪ್ರದರ್ಶಿಸಲಿ

ಬಿಜೆಪಿಯವರು ಇಡೀ 5 ವರ್ಷವೂ ಕಪ್ಪು ಬಾವುಟ ಪ್ರದರ್ಶಿಸುವ ಕೆಲಸ ಮಾಡಿಕೊಂಡಿರಲಿ, ನಾವು ನಮ್ಮ ಕೆಲಸ ಮಾಡುತ್ತೇವೆ ಎಂದು ಸಚಿವ ಶಿವಾನಂದ ಪಾಟೀಲ್ ಲೇವಡಿ ಮಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡದಿದ್ದರೆ ಕಪ್ಪು ಬಾವುಟ ಪ್ರದರ್ಶಿಸುವುದಾಗಿ ಬಿಜೆಪಿಯವರು ಎಚ್ಚರಿಸಿರುವ ಬಗ್ಗೆ ನಗರದಲ್ಲಿ ಪ್ರತಿಕ್ರಿಯಿಸಿದ ಅವರು, ನಾವು ಸರ್ಕಾರ ನಡೆಸುವ ಕೆಲಸ ಮಾಡುತ್ತೇವೆ. ಬಿಜೆಪಿಯವರು 5 ವರ್ಷವೂ ಕಪ್ಪು ಬಾವುಟ ತೋರಿಸುವುದಾದರೆ ಅದೇ ಕೆಲಸ ಮಾಡಿಕೊಂಡು ಇರಲಿ ಎಂದರು.

ಮುಡಾ ಹಗರಣದ ಬಗ್ಗೆ ಸಿದ್ದರಾಮಯ್ಯ ವಿರುದ್ಧ ಸಿಬಿಐ ತನಿಖೆ ನಡೆಸಬೇಕೆಂಬ ಆಗ್ರಹಕ್ಕೆ ಪ್ರತಿಕ್ರಿಯಿಸಿದ ಅವರು, ಯಾವ ತನಿಖೆ ಮಾಡಬೇಕೆಂಬ ವಿಚಾರವನ್ನು ನ್ಯಾಯಾಲಯ ಹೇಳಬೇಕೇ ಹೊರತು ಬಿಜೆಪಿಯವರಲ್ಲ. ನ್ಯಾಯಾಲಯದ ಆದೇಶದ ಪ್ರಕಾರ ತನಿಖೆ ನಡೆಯುತ್ತದೆ. ಪ್ರತಿಯೊಂದು ವಿಚಾರಕ್ಕೂ ಸಿಬಿಐ ಎಳೆದು ತರುವುದು ಸರಿಯಲ್ಲ ಎಂದರು.

ಪರೀಕ್ಷಾ ಕೇಂದ್ರಗಳಿಗೆ ಜಿಲ್ಲಾಧಿಕಾರಿ ಭೇಟಿ, ಪರಿಶೀಲನೆ



ಚಾ.ನಗರದಲ್ಲಿ ನಡೆದ ಗ್ರಾಮ ಆಡಳಿತಾಧಿಕಾರಿ ಹುದ್ದೆಗಳ ಪರೀಕ್ಷಾ ಕೇಂದ್ರಗಳಿಗೆ ಜಿಲ್ಲಾಧಿಕಾರಿ ಶಿಲ್ಪನಾಗ್ ಭೇಟಿ ನೀಡಿ, ಪರಿಶೀಲಿಸಿದರು.

ಚಾಮರಾಜನಗರ: ಕಂದಾಯ ಇಲಾಖೆಯ ಖಾಲಿ ಗ್ರಾಮ ಆಡಳಿತಾಧಿಕಾರಿ ಹುದ್ದೆಗಳ ನೇರ ನೇಮಕಾತಿಗೆ ಭಾನುವಾರ ನಡೆದ ಪರೀಕ್ಷಾ ಕೇಂದ್ರಗಳಿಗೆ ಜಿಲ್ಲಾಧಿಕಾರಿ ಶಿಲ್ಪನಾಗ್ ಭೇಟಿ ನೀಡಿ, ಪರಿಶೀಲಿಸಿದರು.

ಕರ್ನಾಟಕ ಪರೀಕ್ಷಾ ಪ್ರಾಧಿಕಾರ ವತಿಯಿಂದ ನಡೆದ ಜಿಲ್ಲೆಯ 28 ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿದ ಅವರು, ಪ್ರತಿ ಕೇಂದ್ರಗಳಲ್ಲೂ ಪಾರದರ್ಶಕ ಹಾಗೂ ಕಟ್ಟುನಿಟ್ಟಾಗಿ ಪರೀಕ್ಷೆ ನಡೆಸಲು ಕೈಗೊಳ್ಳಲಾಗಿದ್ದ ವ್ಯವಸ್ಥೆ, ಮಾರ್ಗಸೂಚಿ ಮತ್ತು ನಿರ್ದೇಶನ ಪರಿಶೀಲಿಸಿ, ಪರೀಕ್ಷಾ ಕೇಂದ್ರಗಳ ನಿಯೋಜಿತ ಮುಖ್ಯಸ್ಥರಿಂದ ಮಾಹಿತಿ ಪಡೆದರು.

ಜಿಲ್ಲೆಯಲ್ಲಿ ಒಟ್ಟು 8771 ಅಭ್ಯರ್ಥಿಗಳಿಗೆ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಲಾಗಿತ್ತು ಈ ಪೈಕಿ 7360 ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. 1411 ಅಭ್ಯರ್ಥಿಗಳು ಗೈರಾಗಿದ್ದರು. ಚಾ.ನಗರ ತಾಲೂಕಿನಲ್ಲಿ 10, ಗುಂಡ್ಲುಪೇಟೆಯಲ್ಲಿ 4, ಯಳಂದೂರಿನಲ್ಲಿ 2, ಕೊಳ್ಳೇಗಾಲದಲ್ಲಿ 9 ಹಾಗೂ ಹನೂರು ತಾಲೂಕಿನಲ್ಲಿ 3 ಪರೀಕ್ಷಾ ಕೇಂದ್ರ ತೆರೆಯಲಾಗಿತ್ತು.

ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಯಳಂದೂರು: ಪ್ರಸಕ್ತ ಸಾಲಿನ ಎಸ್ಸೆಸ್ಸೆಲ್ಸಿ, ಪಿಯುಸಿ, ಬಿಎ, ಬಿಎಸ್ಸಿ ಇತರೆ ಪದವಿಯಲ್ಲಿ ಪ್ರಥಮ ದರ್ಜೆಯಲ್ಲಿ ತೇರ್ಗಡೆಯಾದ ತಾಲೂಕಿನ ವಿದ್ಯಾರ್ಥಿಗಳಿಂದ ತಾಲೂಕು ನಾಯಕ ಮಂಡಳಿ ವತಿಯಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಜಾತಿ ಪ್ರಮಾಣ ಪತ್ರ, ಅಂಕಪಟ್ಟಿ ಪ್ರತಿ, ಎರಡು ಭಾವಚಿತ್ರದೊಂದಿಗೆ ಯಳಂದೂರಿನ ದೊಡ್ಡ ಅಂಗಡಿ ಬೀದಿಯಲ್ಲಿರುವ ಹರ್ಷ ಕ್ಲಾತ್ ಸೆಂಟರ್‌ಗೆ ಆಸಕ್ತರು ಅ.10 ರೊಳಗೆ ಅರ್ಜಿ ಸಲ್ಲಿಸಬೇಕು. ಮಾಹಿತಿಗಾಗಿ ತಾಲೂಕು ನಾಯಕ ಮಂಡಳಿ ಕಾರ್ಯದರ್ಶಿ ವೆಂಕಟಚಲ ಮೊಬೈಲ್ ನಂಬರ್ : 9986939828 ಮತ್ತು ಖಜಾಂಚಿ ಉಮೇಶ್ ಮೊ.ಸಂ:9945659052 ಅನ್ನು ಸಂಪರ್ಕಿಸಬಹುದು ಎಂದು ಮಂಡಳಿ ಅಧ್ಯಕ್ಷ ಮುರಳಿ ಕೃಷ್ಣ ತಿಳಿಸಿದ್ದಾರೆ.

ಸ್ವಚ್ಛತೆ ಕಾಪಾಡುವುದು ಪ್ರತಿಯೊಬ್ಬರ ಜವಾಬ್ದಾರಿ



ಚಾಮರಾಜನಗರದ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ನಡೆದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಈಶ್ವರ್ ಸ್ವಚ್ಛತಾ ಅಭಿಯಾನಕ್ಕೆ ಚಾಲನೆ ನೀಡಿದರು.

ಚಾಮರಾಜನಗರ, ಸೆ.29–ಆರೋಗ್ಯದ ಹಿತದೃಷ್ಟಿಯಿಂದ ಸ್ವಚ್ಛತೆ ಕಾಪಾಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಈಶ್ವರ್ ತಿಳಿಸಿದರು.

ನಗರದ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ನಗರಸಭೆ, ನೆಹರು ಯುವ ಕೇಂದ್ರ, ಜಿಲ್ಲಾ ವಕೀಲರ ಸಂಘ ಹಾಗೂ ವರಮಹಾಲಕ್ಷ್ಮೀ ಕ್ರೀಡಾ ಸೇವಾ ಸಂಸ್ಥೆ ಸಹಯೋಗದಲ್ಲಿ ಆಯೋಜಿಸಿದ್ದ ಸ್ವಚ್ಛತಾ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಸ್ವಚ್ಛತೆ ಎನ್ನುವುದು ಒಬ್ಬರಿಗೆ ಅಥವಾ ಒಂದು ವರ್ಗಕ್ಕೆ ಸೀಮಿತವಾದ ಕಾರ್ಯವಲ್ಲ. ಸ್ವಚ್ಛತೆಯಿಂದ ಮಾತ್ರ ಗಾಂಧೀಜಿಯವರ ಸ್ವಚ್ಛತಾ ಆಂದೋಲನಕ್ಕೆ ಸಾರ್ಥಕತೆ ಸಿಗಲಿದೆ ಎಂದರು.

ಸುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ಪರಿಸರ ಮಾಲಿನ್ಯದಿಂದ ಸಾಕಷ್ಟು ರೋಗರುಜಿನಗಳು ಉಂಟಾಗುತ್ತವೆ. ಸ್ವಚ್ಛ ಪರಿಸರಕ್ಕಾಗಿ ಪ್ರತಿಯೊಬ್ಬರೂ ಮರಗಿಡಗಳನ್ನು ಬೆಳೆಸಬೇಕು ಎಂದರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ನಂಜಯ್ಯ ಮಾತನಾಡಿ, ಜನರು ತಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛತೆ, ನೈರ್ಮಲ್ಯದಿಂದ ಇಟ್ಟುಕೊಳ್ಳಬೇಕು. ಇದು ಮನಸ್ಸಿನಲ್ಲಿ ಒಳ್ಳೆಯ ಮತ್ತು ಸಕಾರಾತ್ಮಕ ಆಲೋಚನೆಗಳನ್ನು ತರುತ್ತದೆ ಹಾಗೂ ರೋಗಗಳ ಹರಡುವಿಕೆ ತಡೆಗಟ್ಟುತ್ತದೆ ಎಂದು ಹೇಳಿದರು.

ಜಿಲ್ಲಾ ಬಾಲನ್ಯಾಯ ಮಂಡಳಿ ಸದಸ್ಯ ಟಿ.ಜೆ.ಸುರೇಶ್ ಮಾತನಾಡಿ, ಇಂದಿನ ವಿದ್ಯಾರ್ಥಿಗಳು ಸಂಸ್ಕಾರ ಮತ್ತು ಒಳ್ಳೆಯ ಸ್ವಭಾವ ಹೊಂದಿರಬೇಕು. ಆಗ ವಿದ್ಯಾರ್ಥಿಗಳ ಭವಿಷ್ಯ ಉಜ್ವಲವಾಗುತ್ತದೆ ಎಂದರು.


ಕಾರ್ಯಕ್ರಮದಲ್ಲಿ ವರಮಹಾಲಕ್ಷ್ಮಿ ಕ್ರೀಡಾ ಸೇವಾ ಸಂಸ್ಥೆ ಅಧ್ಯಕ್ಷ ಜಿ.ಬಂಗಾರು, ಪ್ರಾಂಶುಪಾಲ ಡಾ.ಮಹದೇವಸ್ವಾಮಿ, ನೆಹರು ಯುವ ಕೇಂದ್ರ ಸಹನಾ, ಎನ್‌ಎಸ್‌ಎಸ್ ಸಂಯೋಜಕ ಮಹೇಶ್, ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಇದ್ದರು.

ಶಾಸಕರ ಮಧ್ಯಪ್ರವೇಶದಿಂದ ಮುಷ್ಕರ ಅಂತ್ಯ

ಕೊಳ್ಳೇಗಾಲ: ಪಟ್ಟಣದ ಕಬಿನಿ ಜಲಾಶಯ ಕಚೇರಿ ಎದುರು ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಗುಂಡಾಲ್ ಅಚ್ಚುಕಟ್ಟು ಹಿತರಕ್ಷಣಾ ಸಮಿತಿ ರೈತರು ನಡೆಸುತ್ತಿದ್ದ ಮುಷ್ಕರ ಶಾಸಕ ಎಂ.ಆರ್.ಮಂಜುನಾಥ್ ಮಧ್ಯಪ್ರವೇಶದಿಂದ ಭಾನುವಾರ ಅಂತ್ಯಗೊಂಡಿದೆ.

ನಾಲೆ ಹೂಳೆತ್ತಲು, ಕೆರೆ ಒತ್ತುವರಿ ತೆರವು, ಗುಂಡಾಲ್‌ನಿಂದ ರೈತರಿಗೆ ಸಮರ್ಪಕವಾಗಿ ನೀರು ಬಿಡುಗಡೆ ಸೇರಿದಂತೆ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ರೈತರು 42 ದಿನಗಳಿಂದ ಮುಷ್ಕರ ನಡೆಸುತ್ತಿದ್ದರು. ಧರಣಿ ಸ್ಥಳಕ್ಕೆ ಶಾಸಕರು, ರೈತರೊಂದಿಗೆ ಮಾತುಕತೆ ನಡೆಸಿ, ಮನವೊಲಿಸಿದರು. ನಂತರ ಶಾಸಕರ ಮನವಿ ಮೇರೆಗೆ ತಂಪು ಪಾನೀಯ ಸೇವಿಸುವ ಮೂಲಕ ಮುಷ್ಕರ ಅಂತ್ಯಗೊಳಿಸಿದರು.

ಈ ವೇಳೆ ಶಾಸಕ ಮಂಜುನಾಥ್ ಮಾತನಾಡಿ, ಗುಂಡಾಲ್ ಅಚ್ಚುಕಟ್ಟು ಪ್ರದೇಶ ವ್ಯಾಪ್ತಿಯಲ್ಲಿ ಕೈಗೊಳ್ಳಬೇಕಾದ ಅಭಿವೃದ್ಧಿ ಕೆಲಸಗಳ ಬಗ್ಗೆ ಈಗಾಗಲೇ ಅಧಿಕಾರಿಗಳೊಂದಿಗೆ ಚರ್ಚಿಸಲಾಗಿದೆ. ಮುಂದಿನ 6 ರಿಂದ 9 ತಿಂಗಳೊಳಗೆ ನಾಲೆಗಳ ಹೂಳು ತೆರವುಗೊಳಿಸುವುದು, ನೀರು ಪೋಲಾಗುವುದನ್ನು ತಡೆದು ಸರಾಗವಾಗಿ ರೈತರ ಜಮೀನುಗಳಿಗೆ ನೀರು ಹರಿಸಲಾಗುವುದು ಎಂದರು. ರೈತ ಸಂಘದ ದಶರಥ್ ಮತ್ತಿತರರಿದ್ದರು.



ಮೈಸೂರು ಮಿತ್ರ ಸೋಮವಾರ 30 ಸೆಪ್ಟೆಂಬರ್ 2024

ಪಿ.ಪಟ್ಟಣ ತಾಲೂಕಿನಲ್ಲಿ ಮಕ್ಕಳನ್ನು ಕಾಡುತ್ತಿರುವ ಡೆಂಗ್ಯೂ ಜ್ವರ



ಬೆಟ್ಟದಪುರ, ಸೆ.29– ಪಿರಿಯಾಪಟ್ಟಣ ತಾಲೂಕಿನಲ್ಲಿ ಡೆಂಗ್ಯೂ ಪ್ರಕರಣಗಳು ಹೆಚ್ಚಾಗುತ್ತಿದ್ದು, ಸಣ್ಣ ಮಕ್ಕಳು ಡೆಂಗ್ಯೂ ಜ್ವರದಿಂದ ಬಳಲುತ್ತಿದ್ದಾರೆ.

ಪಿರಿಯಾಪಟ್ಟಣ ತಾಲೂಕಿನ ಹಲವಾರು ಗ್ರಾಮಗಳು ಸ್ವಚ್ಛತೆ ಕೊರತೆ ಹಾಗೂ ಗ್ರಾಮಾಂತರ ಪ್ರದೇಶಗಳ ಖಾಲಿ ನಿವೇಶನಗಳಲ್ಲಿ ಕೊಳೆತು ನಾರುತ್ತಿರುವ ತ್ಯಾಜ್ಯಗಳಿಂದ ಹಾಗೂ ಅಲ್ಲಲ್ಲಿ ನೀರು ನಿಂತಿರುವುದರಿಂದ ಸೊಳ್ಳೆಗಳ ಕಾಟ ಹೆಚ್ಚಾಗಿ ಡೆಂಗ್ಯೂ ಜ್ವರ ಹೆಚ್ಚಾಗಲು ಕಾರಣವಾಗಿದೆ.

ತಾಲೂಕಿನ ಬೆಟ್ಟದಪುರ ಸಮೀಪದ ಸಾಲುಕೊಪ್ಪಲು ಗ್ರಾಮದ ಕಾಂಗ್ರೆಸ್ ಮುಖಂಡ ಪುಟ್ಟರಾಜು ಅವರ ಎರಡು ವರ್ಷದ ಮೊಮ್ಮಗಳು ಡೆಂಗ್ಯೂ ಜ್ವರದಿಂದ ಬಳಲುತ್ತಿದ್ದು ಮೈಸೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಚೇತರಿಸಿಕೊಳ್ಳುತ್ತಿದ್ದಾರೆ. ಇದೇ ರೀತಿ ತಾಲೂಕಿನ ಹಲವೆಡೆ ಮಕ್ಕಳಲ್ಲಿ ಡೆಂಗ್ಯೂ ಜ್ವರ ಕಾಣಿಸಿಕೊಂಡಿದ್ದು, ಚಿಕಿತ್ಸೆಗಾಗಿ ಆಸ್ಪತ್ರೆಗೆ ಅಲೆದಾಡುವಂತಾಗಿದೆ.

ಸಾಲ ಮರುಪಾವತಿಯಿಂದ ಸಹಕಾರ ಸಂಘ ಬಲಿಷ್ಠ

ತಿ.ನರಸೀಪುರ, ಸೆ.29– ಸಹಕಾರ ಸಂಘದಿಂದ ಸಾಲ ಪಡೆದ ರೈತರು ಸುಸ್ತಿದಾರರಾಗದೇ ಸಕಾಲದಲ್ಲಿ ಬಡ್ಡಿ ಸಮೇತ ಸಾಲದ ಹಣ ಪಾವತಿ ಮಾಡುತ್ತಿರುವುದರಿಂದ ಸಂಘವು ಹೆಚ್ಚಿನ ಲಾಭಾಂಶ ಗಳಿಸಲು ಸಾಧ್ಯವಾಗಿದೆ ಎಂದು ಸೋಮನಾಥಪುರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಷಡಕ್ಷರಿ ಹೇಳಿದರು.

ಸೋಮನಾಥಪುರ ಗ್ರಾಮದ ಸಹಕಾರ ಸಂಘದ ಆವರಣದಲ್ಲಿ ಏರ್ಪಡಿಸಿದ್ದ ಸಂಘದ 2023–24ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಹಕಾರ ಸಂಘಗಳ ಅಭಿವೃದ್ಧಿಯು ರೈತರು ಪಡೆದ ಸಾಲವನ್ನು ಪ್ರಾಮಾಣಿಕವಾಗಿ ಮರುಪಾವತಿ ಮಾಡುವ ಆಧಾರದ ಮೇಲೆ ನಿರ್ಧಾರವಾಗಲಿದೆ.ನಮ್ಮ ಸಹಕಾರ ಸಂಘದಲ್ಲಿ ಶೇ 100 ರಷ್ಟು ಸಾಲ ಮರುಪಾವತಿಯಾದ ಹಿನ್ನೆಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಸಂಘವು 3,51,228 ಲಕ್ಷ ರೂ.ಗಳ ನಿವ್ವಳ ಲಾಭಗಳಿಸಿ ಯಶಸ್ವಿಯಾಗಿ ಮುನ್ನಡೆದಿದೆ ಎಂದರು.

ಸಂಘವು ರೈತರಿಗೆ ಕೆಸಿಸಿ ಬೆಳೆ ಸಾಲವಾಗಿ 3,87,72,000 ಕೋಟಿ ರೂ.ಗಳನ್ನು ವಿತರಿಸಿದೆ. ಟ್ರಾಕ್ಟರ್ ಸಾಲವಾಗಿ 7 ಲಕ್ಷ ರೂ.ಗಳು, ಹೈನುಗಾರಿಕೆ ಸಾಲವಾಗಿ 93,52000 ರೂ.ಗಳು ಹಾಗೂ ಮಹಿಳಾ ಸಂಘಕ್ಕೆ 78 ಲಕ್ಷ 20 ಸಾವಿರ ರೂ.ಗಳನ್ನು ವಿತರಿಸಲಾಗಿದ್ದು 2024–25ನೇ ಸಾಲಿನಲ್ಲಿ ಮಹಿಳಾ ಸಂಘಗಳು ಹಾಗೂ ಬೆಳೆ ಸಾಲಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಕೊಡಿಸಬೇಕೆಂಬ ಉದ್ದೇಶ ಹೊಂದಲಾಗಿದೆ.ರೈತರು ಈಗ ನೀಡುತ್ತಿರುವ ಸಹಕಾರವನ್ನು ಹೀಗೆ ಮುಂದುವರೆಸಿದಲ್ಲಿ ಇನ್ನೂ ಹೆಚ್ಚಿನ ಅನುಕೂಲತೆಗಳನ್ನು ಕಲ್ಪಿಸಿಕೊಡಲಾಗುತ್ತದೆ ಎಂದು ತಿಳಿಸಿದರು.

ಸಂಘದ ಉಪಾಧ್ಯಕ್ಷ ಎಸ್.ವಿ.ದಿನೇಶ್ ಕುಮಾರ್, ನಿರ್ದೇಶಕರಾದ ಎಂ.ಗಿರೀಶ್ ಗೌಡ, ಎಂ.ಶೇಖರ್, ಎಂ.ಮಹದೇವ್ರು, ಬೋರೇಗೌಡ, ಎಂ.ಸಿದ್ದರಾಜು, ರಮೇಶ, ರಾಜಮ್ಮ, ನೀಲಮ್ಮ, ಸುಂದರಮ್ಮ, ಮರಮ್ಮ, ಜಿಲ್ಲಾ ಬ್ಯಾಂಕ್ ಪ್ರತಿನಿಧಿ ರಾಜಪ್ಪ, ಸಂಘದ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಎನ್.ಪ್ರದೀಪ್, ಜಿ.ಜಗದೀಶ್, ವಿ.ಕಾವ್ಯ, ಮಾಜಿ ಅಧ್ಯಕ್ಷ ಪುಟ್ಟಸ್ವಾಮಿ, ಶಿವಣ್ಣ, ಗುತ್ತಿಗೆದಾರ ಮಧು ಕುಮಾರ್, ನ್ಯಾಯಬೆಲೆ ಅಂಗಡಿ ನಾಗೇಂದ್ರ, ಉಕ್ಕಲಗೆರೆ ಮಂಜುನಾಥ್, ಶಿವಸ್ವಾಮಿ, ತಾಪಂ ಮಾಜಿ ಸದಸ್ಯ ರಾಮಲಿಂಗಯ್ಯ, ಸೋಮನಾಥಪುರ ಗ್ರಾ.ಪಂ.ಮಾಜಿ ಅಧ್ಯಕ್ಷ ರಾಜೇಶ್ ಸೇರಿದಂತೆ ಗ್ರಾಮಸ್ಥರು, ರೈತರು ಸಭೆಯಲ್ಲಿ ಹಾಜರಿದ್ದರು.



ತಿ.ನರಸೀಪುರ ತಾಲೂಕು ಸೋಮನಾಥಪುರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಆವರಣದಲ್ಲಿ ಏರ್ಪಡಿಸಿದ್ದ ಸಂಘದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯಲ್ಲಿ ಸಂಘದ ಅಧ್ಯಕ್ಷ ಷಡಕ್ಷರಿ ಮಾತನಾಡಿದರು.

ಹಂದಿ ಫಾರ್ಮ್‌ನಲ್ಲಿ ಮ್ಯಾನೇಜರ್‌ನನ್ನು ಇರಿದು ಕೊಂದ ಕಾರ್ಮಿಕ

ಹುಣಸೂರು, ಸೆ.29– ಕ್ಷುಲ್ಲಕ ಕಾರಣಕ್ಕೆ ಹಂದಿಫಾರ್ಮ್ ಕಾರ್ಮಿಕನೊಬ್ಬ ಕೇರಳ ಮೂಲದ ಮ್ಯಾನೇಜರ್‌ನನ್ನೇ ಚಾಕುವಿನಿಂದ ಇರಿದು ಕೊಲೆ ಮಾಡಿರುವ ಘಟನೆ ಶುಕ್ರವಾರ ತಡರಾತ್ರಿ ತಾಲೂಕಿನ ಹನಗೋಡಿಗೆ ಸಮೀಪದ ಹೆಬ್ಬಳ್ಳ ಗ್ರಾಮದಲ್ಲಿ ನಡೆದಿದೆ.



ಕೇರಳದ ವಯನಾಡ್ ಜಿಲ್ಲೆಯ ಗಿರೀಶ್ ಅಬ್ರಹಂ(38)ಕೊಲೆಯಾದ ವ್ಯಕ್ತಿ. ಕೇರಳದವನೇ ಆದ ಶಂಸುದ್ದೀನ್ ಕೊಲೆ ಆರೋಪಿಯಾಗಿದ್ದು, ಆತನನ್ನು ಬಂಧಿಸಿರುವ ಪೊಲೀಸರು ನ್ಯಾಯಾಂಗ ಬಂಧನಕ್ಕೊಪ್ಪಿಸಿದ್ದಾರೆ. ಗಿರೀಶ್ ಅಬ್ರಹಂ ಮತ್ತು ಆರೋಪಿ ಶಂಸುದ್ದೀನ್ ಕೇರಳ ಮೂಲದ ಹನೀಫ್‌ರಿಗೆ ಸೇರಿದ ಹುಣಸೂರು ತಾಲೂಕಿನ ಹೆಬ್ಬಳ್ಳದ ಹಂದಿಫಾರ್ಮ್‌ನಲ್ಲಿ ಕೆಲಸ ಮಾಡುತ್ತಿದ್ದರು. ಆರೋಪಿ ಶಂಸುದ್ದೀನ್ ತನಗೆ ಹೆಚ್ಚಿನ ಕೆಲಸ ಹೇಳುವುದು, ತನ್ನ ವಿರುದ್ಧ ಮಾಲೀಕರಿಗೆ ಚಾಡಿ ಹೇಳುತ್ತಾನೆಂಬ ಕಾರಣಕ್ಕೆ ಶುಕ್ರವಾರ ರಾತ್ರಿ ಶೆಡ್‌ನಲ್ಲಿ ಇಬ್ಬರ ನಡುವೆ ಗಲಾಟೆ ನಡೆದಿದೆ. ಈ ವೇಳೆ ಶಂಸುದ್ದೀನ್ ಚಾಕುವಿನಿಂದ ಗಿರೀಶ್ ಬೆನ್ನಿಗೆ ಇರಿದಿದ್ದಾನೆ. ಗಂಭೀರವಾಗಿ ಗಾಯಗೊಂಡಿದ್ದ ಗಾಯಾಳುವನ್ನು ಸಹಕಾರ್ಮಿಕರು ಆಸ್ಪತ್ರೆಗೆ ಸಾಗಿಸುವ ವೇಳೆ ಮಾರ್ಗಮಧ್ಯೆ ಸಾವನ್ನಪ್ಪಿದ್ದಾರೆ. ಗಿರೀಶ್ ಅಬ್ರಹಾಂ ಕೊಲೆ ಸಂಬಂಧ ಸಹೋದರ ವಿನೋದ್ ಅಬ್ರಹಂ ಗ್ರಾಮಾಂತರ ಠಾಣೆಗೆ ದೂರು ನೀಡಿದ್ದು, ಸ್ಥಳಕ್ಕೆ ಎಸ್.ಪಿ.ವಿಷ್ಣುವರ್ಧನ್, ಅಡಿಷನಲ್ ಎಸ್‌ಪಿ ನಾಗೇಶ್, ಡಿವೈಎಸ್‌ಪಿ ಗೋಪಾಲಕೃಷ್ಣ, ಇನ್‌ಸ್ಪೆಕ್ಟರ್ ಮುನಿಯಪ್ಪ ಭೇಟಿ ನೀಡಿದ್ದಾರೆ.. ಪ್ರಕರಣ ದಾಖಲಾಗಿದ್ದು, ಆರೋಪಿಯನ್ನು ಶನಿವಾರ(ಸೆ28) ನೇರಳಕುಪ್ಪೆಯ ಬಾರ್ ಬಳಿ ಪೊಲೀಸ್ ಸಿಬಂದಿಗಳಾದ ರವಿ,ಇಮ್ರಾನ್ ಬಂಧಿಸಿದ್ದಾರೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

ಸ್ವಾಸ್ಥ್ಯ ಸಂಕಲ್ಪದಿಂದ ವಿದ್ಯಾರ್ಥಿಗಳ ಮನಸ್ಸುಗಳ ದುರ್ಬಲತೆಗೆ ಕಡಿವಾಣ



ಹೆಚ್.ಡಿ.ಕೋಟೆಯ ವಿಶ್ವಭಾರತಿ ವಿದ್ಯಾ ಸಂಸ್ಥೆಯ ಪದವಿಪೂರ್ವ ಕಾಲೇಜಿನಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್ ವತಿಯಿಂದ ಏರ್ಪಡಿಸಿದ್ದ ಸ್ವಾಸ್ಥ್ಯ ಸಂಕಲ್ಪ ಕಾರ್ಯಕ್ರಮವನ್ನ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಬೋರಮ್ಮ ಅಂಗಡಿ ಉದ್ಘಾಟಿಸಿದರು.

ಹೆಚ್.ಡಿ.ಕೋಟೆ, ಸೆ.29– ವಿದ್ಯಾರ್ಥಿಗಳ ಮನಸ್ಸು ದುರ್ಬಲವಾಗಿದ್ದ ಸಂದರ್ಭದಲ್ಲಿ ದುಶ್ಚಟಗಳ ಕಡೆ ಹೆಚ್ಚು ಆಕರ್ಷಿತರಾಗುವುದನ್ನು ತಡೆಗಟ್ಟಲು ಸ್ವಾಸ್ಥ್ಯ ಸಂಕಲ್ಪ ಕಾರ್ಯಕ್ರಮಗಳು ಉಪಯುಕ್ತವಾಗಿವೆ ಎಂದು ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಬೋರಮ್ಮ ಅಂಗಡಿ ತಿಳಿಸಿದರು.

ಪಟ್ಟಣದ ವಿಶ್ವಭಾರತಿ ವಿದ್ಯಾ ಸಂಸ್ಥೆಯ ಪದವಿಪೂರ್ವ ಕಾಲೇಜಿನಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್ ವತಿಯಿಂದ ಏರ್ಪಡಿಸಿದ್ದ ಸ್ವಾಸ್ಥ್ಯ ಸಂಕಲ್ಪ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿ ಜೀವನದಲ್ಲಿ ಯಾವುದೇ ದುಶ್ಚಟಗಳಿಂದ ದೂರವಿದ್ದು, ನಿರ್ದಿಷ್ಟ ಗುರಿಯೊಂದಿಗೆ ಶಿಕ್ಷಣ ಪಡೆಯಬೇಕು. ಕುಟುಂಬದ ಯಾವುದೇ ವ್ಯಕ್ತಿ ದುಶ್ಚಟಕ್ಕೆ ಒಳಗಾದರೆ ಆಗ ಕುಟುಂಬದ ಮೇಲೆ ಆರ್ಥಿಕ, ಸಾಮಾಜಿಕ ಮತ್ತು ಶಿಕ್ಷಣದ ಮೇಲೆ ಪರಿಣಾಮ ಬೀರುತ್ತದೆ. ಹಾಗಾಗಿ ಸ್ವಾಸ್ಥ್ಯ ಸಮಾಜದ ನಿರ್ಮಾಣದಲ್ಲಿ ಪ್ರತಿಯೊಬ್ಬರ ಜವಾಬ್ದಾರಿ ಇದೆ ಎಂದರು.

ಜಿಲ್ಲಾ ಜನಜಾಗೃತಿ ಸಮಿತಿ ಸದಸ್ಯ ಕನ್ನಡ ಪ್ರಮೋದ ಮಾತನಾಡಿ, ರಾಜ್ಯಾದ್ಯಂತ ಶಾಲಾ ಕಾಲೇಜುಗಳಲ್ಲಿ ಸ್ವಾಸ್ಥ್ಯ ಸಂಕಲ್ಪ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಉತ್ತಮ ಸಮಾಜ ನಿರ್ಮಾಣದಲ್ಲಿ ವೀರೇಂದ್ರ ಹೆಗ್ಗಡೆಯವರ ಪಾತ್ರ ಶ್ಲಾಘನೀಯವಾಗಿದೆ. 1900ಕ್ಕೂ ಹೆಚ್ಚು ಮದ್ಯವರ್ಜನ ಶಿಬಿರಗಳನ್ನು ನಡೆಸುವುದರೊಂದಿಗೆ ಲಕ್ಷಾಂತರ ಮದ್ಯ ವ್ಯಸನಿಗಳ ಬಾಳಿಗೆ ಬೆಳಕಾಗಿದ್ದರೆ ಎಂದರು.

ಕಾರ್ಯಕ್ರಮದಲ್ಲಿ ಶ್ರೀ ವಿಶ್ವಭಾರತಿ ವಿದ್ಯಾಸಂಸ್ಥೆಯ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಕಂದಸ್ವಾಮಿ, ಸಂಯೋಜಕರಾದ ಶಿವರಾಜು, ವಲಯ ಮೇಲ್ವಿಚಾರಕರಾದ ರೇಖಾ, ಸೇವಾ ಪ್ರತಿನಿಧಿ ವಿನುತ ಇದ್ದರು.

ಬದನವಾಳುವಿನಲ್ಲಿ ಬಿಜೆಪಿ ಸದಸ್ಯತ್ವ ಅಭಿಯಾನ



ನಂಜನಗೂಡು ತಾಲೂಕಿನ ಬದನವಾಳು ಗ್ರಾಮದಲ್ಲಿ ಭಾನುವಾರ ಬಿಜೆಪಿ ಮುಖಂಡ ಎಸ್.ಎಂ. ಕೆಂಪಣ್ಣ ಸದಸ್ಯತ್ವ ಅಭಿಯಾನ ನಡೆಸಿದರು.

ನಂಜನಗೂಡು, ಸೆ.29– ಬಿಜೆಪಿ ದೇಶದ ಹೆಚ್ಚಿನ ಸದಸ್ಯರನ್ನು ಹೊಂದಿರುವ ರಾಷ್ಟ್ರೀಯ ಪಕ್ಷವಾಗಿದ್ದು, ಕಳೆದ 10 ವರ್ಷಗಳಿಂದ ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ದೇಶವನ್ನು ಅಭಿವೃದ್ಧಿ ಪಥದಲ್ಲಿ ಕೊಂಡೊಯ್ಯುತ್ತಿದೆ ಎಂದು ಬಿಜೆಪಿ ಮುಖಂಡ ಎಸ್ .ಎಂ. ಕೆಂಪಣ್ಣ ಹೇಳಿದರು.

ತಾಲೂಕಿನ ಬದನವಾಳು ಜಿಪಂ ವ್ಯಾಪ್ತಿಯ ಬದನವಾಳು ಗ್ರಾಮದಲ್ಲಿ ಭಾನುವಾರ ತಾಲ್ಲೂಕು ಬಿಜೆಪಿ ನಡೆಸಿದ ಸದಸ್ಯತ್ವ ಅಭಿಯಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ದೂರದೃಷ್ಟಿಯ ಆಡಳಿತದಿಂದ ದೇಶದಲ್ಲಿ ರಸ್ತೆ, ಮೆಟ್ರೋ ವ್ಯವಸ್ಥೆ ಅಭಿವೃದ್ಧಿ ಹೊಂದಿದೆ. ಯುವಕರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಮುದ್ರಾ ಯೋಜನೆಯಲ್ಲಿ ಸಾಲ ದೊರೆಯುತ್ತಿದೆ, ಬಿಜೆಪಿ ಪಕ್ಷದ ಸದಸ್ಯತ್ವ ಹೊಂದುವ ಮೂಲಕ ದೇಶದ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಮುಖಂಡರಾದ ಬಿ.ಎಸ್.ಮಹದೇವಪ್ಪ, ಬದನವಾಳು ಶಕ್ತಿ ಕೇಂದ್ರದ ಅಧ್ಯಕ್ಷ ಕಾಳಪ್ಪ. ಬೂತ್ ಅಧ್ಯಕ್ಷ ಮಹೇಶ್, ಬಸವಟ್ಟಿಗೆ ಮಂಜುನಾಥ್, ದೇವನೂರು ಚಂದ್ರು, ಮಹೇಶ್ ಪ್ರಸಾದ್, ಶರತ್ ಉಪಸ್ಥಿತರಿದ್ದರು.

ಸರ್ವ ಸದಸ್ಯರ ವಾರ್ಷಿಕ ಮಹಾಸಭೆ



ಮೈಸೂರು ತಾಲೂಕು ಸಿದ್ದರಾಮನಹುಂಡಿ ಹಾಲು ಉತ್ಪಾದಕರ ಸಹಕಾರ ಸಂಘದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯನ್ನು ಸಂಘದ ಅಧ್ಯಕ್ಷ ಸಿದ್ದರಾಮ.ಎಸ್ ಉದ್ಘಾಟಿಸಿದರು. ಚಿತ್ರದಲ್ಲಿ ಉಪಾಧ್ಯಕ್ಷ ಮಹಾದೇವ, ಸದಸ್ಯರಾದ ಶಂಕರ, ಶಿವಣ್ಣ, ಉದಯರಾಜ್.ಎಸ್, ದಿನೇಶ್, ಗ್ರಾಪಂ ಮಾಜಿ ಅಧ್ಯಕ್ಷ ಶೇಖರ್, ವಿಸ್ತರಣಾಧಿಕಾರಿ ಶ್ರೀಮತಿ ವಿನುತ, ಕಾರ್ಯದರ್ಶಿ ರಮೇಶ್ ಹಾಗೂ ಮುಂತಾದವರು ಉಪಸ್ಥಿತರಿದ್ದರು.

ಅನಾಥ ಶವಗಳ ಮುಕ್ತಿದಾತ ಮಾದೇಶರಿಂದ ಶ್ಲಾಘನೀಯ ಕಾರ್ಯ

ತಿ.ನರಸೀಪುರ, ಸೆ.29– ಹೆತ್ತವರನ್ನು ಮನೆಯಿಂದ ಹೊರಹಾಕಿ ಅನಾಥಾಶ್ರಮಕ್ಕೆ ಸೇರಿಸುವ ಮಕ್ಕಳಿರುವ ಪ್ರಸಕ್ತ ಕಾಲಘಟ್ಟದಲ್ಲಿ ಅನಾಥ ಶವಗಳ ಮುಕ್ತಿದಾತರೆಂದೇ ಹೆಸರಾದ ಡಾ. ಎಂ. ಮಾದೇಶ್ ಅವರು ತಮ್ಮ ತಂದೆಯವರ 25ನೇ ವರ್ಷದ ಪುಣ್ಯಸ್ಮರಣೆಯ ದಿನದಂದು ಅನ್ನಸಂತರ್ಪಣೆಯಂತಹ ಪುಣ್ಯದ ಕೆಲಸ ಮಾಡುತ್ತಿರುವುದು ಇತರರಿಗೆ ಮಾದರಿಯಾಗಿದೆ ಎಂದು ವಾಟಾಳು ಸೂರ್ಯಸಿಂಹಾಸನ ಮಠದ ಪೀಠಾಧಿಪತಿ ಡಾ. ಶ್ರೀ ಸಿದ್ದಲಿಂಗ ಶಿವಚಾರ್ಯ ಮಹಾಸ್ವಾಮಿಗಳು ಮೆಚ್ಚುಗೆ ವ್ಯಕ್ತಪಡಿಸಿದರು.

ಪಟ್ಟಣದ ಹಳೇ ಮಾರ್ಕೆಟ್ ರಸ್ತೆಯಲ್ಲಿ ಆಯೋಜನೆ ಮಾಡಿದ್ದ ಅನಾಥ ಶವಗಳ ಮುಕ್ತಿದಾತ ಡಾ.ಎಂ. ಮಾದೇಶ್‌ರವರ ತಂದೆ ಹಣ್ಣಿನ ಅಂಗಡಿ ಕೆ.ಮಹದೇವಪ್ಪನವರ 25 ನೇ ವರ್ಷದ ಪುಣ್ಯಸ್ಮರಣೆಯ ಕಾರ್ಯಕ್ರಮದಲ್ಲಿ ಮಹದೇವಪ್ಪರವರ ಅನ್ನಸಂತರ್ಪಣೆಗೆ ಚಾಲನೆ ಮಾಡುವ ಮೂಲಕ ಗೌರವ ಸಲ್ಲಿಸಿ ಶ್ರೀಗಳು ಮಾತನಾಡಿದರು. ಮಾದೇಶ್ ಅವರು ಪ್ರತಿವರ್ಷ ಅವರ ತಂದೆ, ತಾಯಿ, ತಾತ ಅಜ್ಜಿ ಹಾಗೂ ಅಣ್ಣನವರ ಪುಣ್ಯಸ್ಮರಣೆಯ ದಿನದಂದು ಸರ್ಕಾರಿ ಆಸ್ಪತ್ರೆ ರೋಗಿಗಳಿಗೆ ಹಣ್ಣು–ಹಂಪಲು ವಿತರಣೆ,ನದಿಯಲ್ಲಿ ತೆಪ್ಪ ಚಲಾಯಿಸುವವರಿಗೆ ಲೈಫ್ ಜಾಕೆಟ್, ಆಟೋ ಚಾಲಕರಿಗೆ ಸಮವಸ್ತ್ರ ವಿತರಣೆ, ಅನಾಥಾಶ್ರಮದ ಮಕ್ಕಳಿಗೆ ಸ್ಕೂಲ್ ಬ್ಯಾಗ್ ವಿತರಣೆ ಸೇರಿದಂತೆ ಅನೇಕ ಸಮಾಜಮುಖಿ ಕಾರ್ಯಗಳನ್ನು ಮಾಡುವುದರ ಮೂಲಕ ಅವರ ಹಿರಿಯರನ್ನು ನೆನೆಸುವುದರ ಜತೆಗೆ ಸಮಾಜಕ್ಕೆ ಒಳ್ಳೆಯ ಸಂದೇಶ ನೀಡುತ್ತಿದ್ದಾರೆ ಎಂದರು.

ಸಾಲೂರು ಮಠದ ಶ್ರೀ ಶಾಂತ ಮಲ್ಲಿಕಾರ್ಜುನ ಸ್ವಾಮೀಜಿ ಮಾತನಾಡಿ, ಸಮಾಜಕ್ಕೆ ಪರೋಪಕಾರಿಯಾಗಿ ಬದುಕುವುದೇ ಸಾರ್ಥಕ ಜೀವನ. ಆಸೆಯನ್ನು ದಾಸ್ಯತ್ವಕ್ಕೆ ತಳ್ಳಿ ಇರುವುದರಲ್ಲಿಯೇ ತೃಪ್ತಿ ಕಾಣುವ ಮನಸ್ಸು ದೊಡ್ಡದು,ತ್ಯಾಗದ ಮೂಲಕ ಅಮೃತ್ವದ ಅಮರತ್ವವನ್ನು ಸಮಾಜದಲ್ಲಿ ಪಡೆದರೇ ಜೀವನ ಸಾರ್ಥಕವಾಗಲಿದೆ. ಉದಾತ್ತ ಮನೋಭಾವ, ತ್ಯಾಗದ ಮೂಲಕ ವ್ಯಕ್ತಿ ಶಾಶ್ವತವಾಗಿ ಜನಮಾನಸದಲ್ಲಿ ಉಳಿಯುತ್ತಾನೆ ಎಂಬುದಕ್ಕೆ ಸಮಾಜ ಸೇವಕ ಡಾ.ಮಾದೇಶ್ ಸಾಕ್ಷಿ ಎಂದು ಗುಣಗಾನ ಮಾಡಿದರು.

ಪಟ್ಟಣ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಧನಂಜಯ್ ಅನ್ನಸಂತರ್ಪಣೆ ಕಾರ್ಯಕ್ರಮಕ್ಕೆ ಅನ್ನ ಬಡಿಸುವ ಮೂಲಕ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ಉಪನ್ಯಾಸಕ ಮೂಗೂರು ಕುಮಾರಸ್ವಾಮಿ, ಅಕ್ಕಿ ರಾಜೇಶ್, ಪುರಿ ಅಂಗಡಿ ಸ್ವಾಮಿ,ಫ್ಲವರ್ ಪಾಂಡು, ಆಸೀಫ್, ಶಿವಕುಮಾರ್, ಕೆಬ್ಬೇಹುಂಡಿ ಶಿವಕುಮಾರ್, ಬಸವರಾಜ್, ಮಂಡಿ ಮಾದೇಶ್, ಬೈರಾಪುರ ಬಾಲು,ಪೈಲೆಟ್ ಮಾದೇಶ್, ಶಿವುನಾಯಕ್, ಮಹದೇವಪ್ಪ ಮತ್ತಿತರರು ಹಾಜರಿದ್ದರು.



ತಿ.ನರಸೀಪುರ ಪಟ್ಟಣದ ಅನಾಥ ಶವಗಳ ಮುಕ್ತಿದಾತ ಎಂದೇ ಹೆಸರಾದ ಡಾ.ಎಂ.ಮಾದೇಶ್ ರವರು ತಮ್ಮ ತಂದೆಯವರ 25ನೇ ವರ್ಷದ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ವಾಟಾಳು ಮಠದ ಸಿದ್ದಲಿಂಗಶಿವಾಚಾರ್ಯ ಸ್ವಾಮೀಜಿ ಹಾಗೂ ಸರ್ಕಲ್ ಇನ್ಸ್‌ಪೆಕ್ಟರ್ ಧನಂಜಯರವರನ್ನು ಸನ್ಮಾನಿಸಿದರು.

ಪರಿಶಿಷ್ಟ ಪಂಗಡದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾಗಿ ಹೆಮ್ಮಿಗೆ ಸೋಮಣ್ಣ ಆಯ್ಕೆ



ತಿ.ನರಸೀಪುರ ಸೆ.29– ತಿ.ನರಸೀಪುರ ವಿಧಾನಸಭಾ ಕ್ಷೇತ್ರದ ಪರಿಶಿಷ್ಟ ಪಂಗಡದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರನ್ನಾಗಿ ಹೆಮ್ಮಿಗೆ ಗ್ರಾಮದ ನಾಯಕ ಸಮುದಾಯದ ಹಿರಿಯ ಮುಖಂಡ ಸೋಮಣ್ಣ ಅವರನ್ನು ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಹಾಗೂ ಪರಿಶಿಷ್ಟ ಪಂಗಡದ ರಾಜ್ಯ ಅಧ್ಯಕ್ಷ ಎಂ.ವಿಜಯ್ ನಾಯಕ ಅವರ ಆದೇಶದ ಮೇರೆಗೆ ಮೈಸೂರು ಜಿಲ್ಲಾ ಗ್ರಾಮಾಂತರ ಪರಿಶಿಷ್ಟ ಪಂಗಡದ ಜಿಲ್ಲಾಧ್ಯಕ್ಷ ಕೆ. ಮಹೇಶ್ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

ಲೋಕಾಯುಕ್ತ ಎಡಿಜಿಪಿ ಬೆಲೆ ತೆರಬೇಕಾಗುತ್ತೆ

ಕೇಂದ್ರ ಸಚಿವ ಸಚಿವ ಪ್ರಹ್ಲಾದ್ ಜೋಶಿ ಗರಂ



ಹುಬ್ಬಳ್ಳಿ, ಸೆ.29– ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ವಿರುದ್ಧ ಹಂದಿ ಪದ ಬಳಸಿ ಅವಹೇಳನ ಮಾಡಿದ ಲೋಕಾಯುಕ್ತ ಎಡಿಜಿಪಿ ಎಂ.ಚಂದ್ರಶೇಖರ್ ವಿರುದ್ಧ ಕೇಡರ್ ಕಂಟ್ರೋಲ್ ಮೂಲಕ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಕೇಂದ್ರ ಆಹಾರ ಮತ್ತು ಗ್ರಾಹಕ ವ್ಯವಹಾರ ಸಚಿವ ಪ್ರಲ್ಹಾದ ಜೋಶಿ ಎಚ್ಚರಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಭಾನುವಾರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಈ ಲೋಕಾಯುಕ್ತ ಎಡಿಜಿಪಿಗೆ ಏನಾದರೂ ಸರ್ವೀಸ್ ಕಂಡಕ್ಟ್ ರೂಲ್ ಬಗ್ಗೆ ಜ್ಞಾನವಿದ್ದರೆ ತಕ್ಷಣ ಕ್ಷಮಾಪಣೆ ಕೇಳಲಿ ಎಂದು ಸೂಚಿಸಿದರು.

ಒಬ್ಬ ಜನಪ್ರತಿನಿಧಿ, ಅದರಲ್ಲೂ ಕೇಂದ್ರ ಸಚಿವರ ಬಗ್ಗೆ ಹೀಗೆ ಅಸಭ್ಯ ಭಾಷೆಯಲ್ಲಿ, ಕೆಟ್ಟ ಪದ ಬಳಸುವುದನ್ನು ಯಾವುದೇ ಕಾರಣಕ್ಕೂ ಸಹಿಸಲು ಸಾಧ್ಯವಿಲ್ಲ. ಕೇಡರ್ ಕಂಟ್ರೋಲ್ ಇದನ್ನು ಗಂಭೀರವಾಗಿ ಪರಿಗಣಿಸಲಿದೆ ಎಂದು ತಿಳಿಸಿದರು. ಎಚ್.ಡಿ. ಕುಮಾರಸ್ವಾಮಿ ಅವರು ಯಾವತ್ತೂ ಯಾರ ಬಗ್ಗೆಯೂ ಹೀಗೆ ಅಸಭ್ಯ ಭಾಷೆ ಬಳಸಿದವರಲ್ಲ. ಈ ಅಧಿಕಾರಿ ಬಗ್ಗೆಯೂ ಹಾಗೆಲ್ಲ ಏಕವಚನದಲ್ಲಿ ಮಾತನಾಡಿಲ್ಲ ಎಂದು ಪ್ರಹ್ಲಾದ್ ಜೋಶಿ ಸ್ಪಷ್ಟಪಡಿಸಿದರು. ಎಚ್ ಡಿ ಕುಮಾರಸ್ವಾಮಿ ಅವರ ಬಗ್ಗೆ ಕೆಟ್ಟ ಪದದಲ್ಲಿ ಸಂಬೋಧನೆ ಮಾಡಿರುವುದು ಅಧಿಕಾರಿಯ ಅಹಂಕಾರದ ಪರಮಾವಧಿಯಾಗಿದ್ದು, ಮುಂದಿನ ದಿನಗಳಲ್ಲಿ ಇದಕ್ಕೆ ಬೆಲೆ ತೆರಬೇಕಾಗುತ್ತದೆ ಎಂದು ಪ್ರಹ್ಲಾದ್ ಜೋಶಿ ಎಚ್ಚರಿಸಿದರು.

ಆರ್‌ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ವಿರುದ್ಧ ಮಹಿಳೆ ದೂರು

ನಂಜನಗೂಡು : ನಗರದ ಪೊಲೀಸ್ ಠಾಣೆಯಲ್ಲಿ ನಗರದ ಬಸವಣ್ಣ ಬಡಾವಣೆ ನಿವಾಸಿ ಎನ್. ಎಂ. ಲಾವಣ್ಯ ತಾನು ಹಾಗೂ ತನ್ನ ತಾಯಿಯನ್ನು ಕೊಲೆ ಮಾಡುವುದಾಗಿ ಡಾಬಾ ಜಯಕುಮಾರ್ ಹಾಗೂ ಸ್ನೇಹಮಯಿ ಕೃಷ್ಣ ಎಂಬುವವರು ಎಳೆದಾಡಿ ಪ್ರಾಣ ಬೆದರಿಕೆ ಒಡ್ಡಿದ್ದಾರೆ ಎಂದು ದೂರು ನೀಡಿದ್ದಾರೆ.

2016ರಲ್ಲಿ ನನ್ನನ್ನು ಮೈಸೂರಿನ ಗೋಕುಲಂ ನಿವಾಸಿ ಜಯಕುಮಾರ್‌ಗೆ ಕೊಟ್ಟು ಮದುವೆ ಮಾಡಲಾಗಿತ್ತು, ನನಗೆ ಒಂದು ಹೆಣ್ಣು ಮಗುವಿದೆ, 2020 ರಲ್ಲಿ ನನ್ನ ಗಂಡ ಜಯಕುಮಾರ್ ಅಪಘಾತದಲ್ಲಿ ತೀರಿಕೊಂಡ ನಂತರ ನನ್ನ ಅತ್ತೆ ಪ್ರಭ ಹಾಗೂ ಮಾವ ಸಿದ್ದಪ್ಪ ನಿರಂತರ ಕಿರುಕುಳ ನೀಡುತ್ತಿದ್ದರು, ಇವರ ಕಿರುಕುಳ ಸಹಿಸಲಾರದೆ ತವರು ಮನೆಯಲ್ಲಿ ನನ್ನ ತಾಯಿಯ ಜೊತೆಗೆ ವಾಸವಾಗಿದ್ದೇನೆ, ನನ್ನ ಅತ್ತೆ ಮತ್ತು ಮಾವನ ಕುಮ್ಮಕ್ಕಿನಿಂದ ಡಾಬಾ ಜಯಕುಮಾರ್ ಹಾಗೂ ಸ್ನೇಹಮಯಿ ಕೃಷ್ಣ ನನ್ನನ್ನು, ನನ್ನ ತಾಯಿಯನ್ನು ಎಳೆದಾಡಿ ಕೊಲೆ ಬೆದರಿಕೆ ಒಡ್ಡಿದ್ದಾರೆ, ಇವರಿಂದ ನನಗೆ ರಕ್ಷಣೆ ನೀಡಬೇಕು. ಇವರುಗಳ ವಿರುದ್ಧ ಕ್ರಮಕೈಗೊಳ್ಳಬೇಕು ಎಂದು ದೂರಿನಲ್ಲಿ ತಿಳಿಸಿದ್ದಾರೆ.

ಹಂಚೀಪುರ ಕೃಷಿ ಸಹಕಾರ ಸಂಘಕ್ಕೆ 14 ತಿಂಗಳಾದರೂ ಬಾರದ ಸಾಲದ ಹಣ

ಸಾಲದ ಹಣ ಕೊಡಿಸುವ ಭರವಸೆ ನೀಡಿದ ಶಾಸಕರು



ಸರಗೂರು ತಾಲೂಕಿನ ಹಂಚೀಪುರ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘ ನಿಯಮಿತ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯಲ್ಲಿ ಸಂಘದ ಅಧ್ಯಕ್ಷ ಡಿ.ಪಿ.ನಟರಾಜು ಮಾತನಾಡಿದರು.

ಸರಗೂರು, ಸೆ.29– ತಾಲೂಕಿನ ಹಂಚೀಪುರ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘಕ್ಕೆ ಕಳೆದ 14 ತಿಂಗಳುಗಳಿಂದ ಎಂಡಿಸಿಸಿ ಬ್ಯಾಂಕ್‌ನಿಂದ ಸಾಲ ಬಾರದೆ ತೊಂದರೆಯಾಗಿದ್ದು, ಈ ಹಿನ್ನೆಲೆಯಲ್ಲಿ ಪ್ರತಿಭಟನೆಗೆ ಸದಸ್ಯರು ಮುಂದಾಗಿದ್ದರು.

ಈ ವಿಚಾರ ತಿಳಿದ ಶಾಸಕ ಅನಿಲ್ ಚಿಕ್ಕಮಾದು, ಸಹಕಾರ ಸಂಘದಿಂದ ಸೂಕ್ತ ಸಾಲ ಕೊಡಿಸುವುದಾಗಿ ಭರವಸೆ ನೀಡಿದ್ದಾರೆ. ಇಂದು ನಡೆದ ಸಂಘದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯಲ್ಲಿ ಸಂಘದ ಅಧ್ಯಕ್ಷ ಡಿ.ಪಿ.ನಟರಾಜು ಮಾತನಾಡಿ, ಈ ವಿಷಯ ತಿಳಿಸಿದರು.

ಹಂಚೀಪುರ ಗ್ರಾಮದಲ್ಲಿ ವ್ಯವಸಾಯ ಸೇವಾ ಸಹಕಾರ ಸಂಘವು 1976ರಲ್ಲಿ ಪ್ರಾರಂಗೊಂಡು ನಂತರ 1998ರಲ್ಲಿ ಸೂಪರ್ ಸೀಡ್ ಆಗಿತ್ತು. ಹಂಚೀಪುರ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘ ನಿಯಮಿತ ಸಂಘದ ಶ್ರಮದಿಂದ 2022ರಲ್ಲಿ ಪುನಶ್ಚೇತನಗೊಂಡ ಬಳಿಕ ಒಂದೂವರೆ ವರ್ಷದಿಂದ ಎಂಡಿಸಿಸಿ ಬ್ಯಾಂಕ್‌ನಿಂದ ಹಣ ಬಾರದೆ ಸಂಘದಲ್ಲಿನ ಷೇರುದಾರರಿಗೆ ಸಾಲ ವಿತರಿಸಲು ಸಾಧ್ಯವಾಗುತ್ತಿಲ್ಲ ಎಂದರು.

ತಾಲೂಕಿನ ಶಾಸಕರ ಗಮನಕ್ಕೂ ತರಲಾಗಿ ಅವರು ಸಹ ಎಂಡಿಸಿಸಿ ಬ್ಯಾಂಕ್ ಮ್ಯಾನೇಜಿಂಗ್ ಡೈರೆಕ್ಟರ್ ಮಂಜುನಾಥ್ ಜೊತೆ ಮಾತನಾಡಿದ್ದೇನೆ. ಖಂಡಿತವಾಗಿಯೂ ಸಾಲ ವಿತರಣೆ ಮಾಡಲು ಬ್ಯಾಂಕಿನಿಂದ ಹಣ ಕೊಡಿಸುವುದಾಗಿ ಭರವಸೆ ನೀಡಿ, ಯಾವುದೇ ಪ್ರತಿಭಟನೆ ಮಾಡುವುದು ಬೇಡ ಎಂದು ತಿಳಿಸಿದ್ದಾರೆ ಎಂದರು.

ಸಂಬಂಧಪಟ್ಟ ಅಧಿಕಾರಿಗಳು, ಮ್ಯಾನೇಜಿಂಗ್ ಡೈರೆಕ್ಟರ್ ಆದ ಮಂಜುನಾಥ್ ಅವರ ಗಮನಕ್ಕೆ ವಿಷಯ ತರಲಾಗಿತ್ತು. ಎಲ್ಲಾ ಪ್ರಯತ್ನಗಳ ನಂತರ ವಾರ್ಷಿಕ ಮಹಾಸಭೆ ಮುಗಿದ ನಂತರ ಸಾಲ ಮಂಜೂರು ಮಾಡುವುದಾಗಿ ವಾಗ್ದಾನ ನೀಡಿದ್ದರು. ಆದರೂ ಇದುವರೆಗೂ ಸಾಲದ ಹಣ ಬಿಡುಗಡೆಯಾಗದೆ ಸಹಕಾರ ಸಂಘದ ಚಟುವಟಿಕೆಗಳು ಸ್ಥಗಿತಗೊಂಡಿವೆ ಎಂದು ಅವರು ಹೇಳಿದರು. ಇದಕ್ಕೂ ಮೊದಲು ಸಹಕಾರ ಸಂಘದ ಅಧ್ಯಕ್ಷರಾದ ಹರೀಶ್ ಗೌಡರು 5 ಕೋಟಿ ಅನುದಾನವನ್ನು ಹಂಚೀಪುರ ಸೊಸೈಟಿಗೆ ಕೊಡುತ್ತೇವೆ ಎಂದು ವಾಗ್ದಾನ ನೀಡಿದ್ದರು.

ಸಂಘದ ಉಪಾಧ್ಯಕ್ಷ ಚೆನ್ನಯ್ಯ, ನಿರ್ದೇಶಕರಾದ ಎಸ್.ಕೆ.ದೇವಪ್ಪ ಡಿ.ಜಿ.ಶಿವರಾಜು, ಕಮಲಮ್ಮ, ಹೆಚ್.ಕೆ.ಗುರುಸ್ವಾಮಿ, ಚಿನ್ನಪ್ಪ ಚಿಕ್ಕದೇವನಾಯಕ, ಗುರುಮಲ್ಲಮ್ಮ, ಚಿನ್ನಯ್ಯ, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್.ಕೆಂಡಗಣ್ಣಸ್ವಾಮಿ, ಗ್ರಾಮದ ಮುಖಂಡರಾದ, ಹಂಚೀಪುರ ಗಣಪತಿ, ಹೆಚ್.ಸಿ.ಮಹದೇವಸ್ವಾಮಿ, ಪುಟ್ಟಣ್ಣ, ಹಂಚೀಪುರ ಸಿದ್ದಾಪುರ ದಡದಹಳ್ಳಿ ಅಕ್ಕ ಪಕ್ಕದ ಮುಖಂಡರು ಸಂಘದ ಸದಸ್ಯರು ಹಾಜರಿದ್ದರು.

ರೈತರ ಹಿತಕ್ಕಾಗಿ ಸಹಕಾರ ಸಂಘ ಮುಖ್ಯ



ಮಲ್ಕುಂಡಿ, ಸೆ.29– ರೈತರ ಹಿತಕ್ಕಾಗಿ ಸಹಕಾರ ಸಂಘ ಬಹು ಮುಖ್ಯವಾಗಿದೆ ಎಂದು ಸಂಘದ ಅಧ್ಯಕ್ಷ ಮಂಜುನಾಥ್ ಹೇಳಿದರು.

ಸಮೀಪದ ಕುರಿಹುಂಡಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ 2023–24ನೇ ಸಾಲಿನ ವಾರ್ಷಿಕ ಮಹಾಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಹಕಾರ ಸಂಘದಿಂದ ರೈತರಿಗೆ ಶೂನ್ಯ ಬಡ್ಡಿಯಲ್ಲಿ ಸಾಲ ನೀಡಲಾಗುತ್ತಿದೆ. ಪ್ರತಿಯೊಬ್ಬ ರೈತರು ಸಂಘದಲ್ಲಿ ಪಡೆದ ಸಾಲವನ್ನು ಸಕಾಲಕ್ಕೆ ಮರುಪಾವತಿ ಮಾಡುವ ಮೂಲಕ ಸಂಘದ ಅಭಿವೃದ್ಧಿಗೆ ಒತ್ತು ನೀಡಬೇಕು. ಸಂಘದಿಂದ ಸರ್ಕಾರದ ಸೌಲಭ್ಯಗಳನ್ನು ಪ್ರತಿಯೊಬ್ಬರು ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು. ಈ ವೇಳೆ ಉಪಾಧ್ಯಕ್ಷ ಮಹದೇವಯ್ಯ, ನಿರ್ದೇಶಕರುಗಳಾದ ಹೆಚ್.ಪಿ. ಕೆಂಡಗಣ್ಣಪ್ಪ, ಮಲ್ಲಾರಾಧ್ಯ, ಶ್ರೀನಿವಾಸ ಶೆಟ್ಟಿ, ಮಾರ್ಕಾಂಡಯ್ಯ, ಸಿಇಓ ಕೆ ಎಂ ಹರೀಶ್ ಸೇರಿ ಪ್ರಮುಖರು ಹಾಜರಿದ್ದರು.

ನಿಧನ

ರೇವಣ್ಣಮ್ಮ



ತಿ.ನರಸೀಪುರ, ಸೆ.29– ತಾಲೂಕಿನ ಬನ್ನೂರು ಟೌನ್ ನಿವಾಸಿ ದಿ.ಬಿ.ಎಲ್.ಸಿದ್ದೇಗೌಡರ ಪತ್ನಿ ರೇವಣ್ಣಮ್ಮ (86) ಭಾನುವಾರ ನಿಧನರಾದರು. ಮೃತರು ಪುತ್ರ ಬನ್ನೂರು ಪುರಸಭೆ ಮಾಜಿ ಉಪಾಧ್ಯಕ್ಷ ಬಿ.ಎಸ್.ರಾಮಲಿಂಗೇಗೌಡ ಸೇರಿದಂತೆ ನಾಲ್ವರು ಪುತ್ರಿಯರನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸೋಮವಾರ ಮಧ್ಯಾಹ್ನ 12 ಗಂಟೆಗೆ ಬನ್ನೂರು ಕಾವೇರಿ ನದಿ ತೀರದಲ್ಲಿ ನಡೆಯಲಿದೆ ಎಂದು ಕುಟುಂಬ ಮೂಲಗಳು ತಿಳಿಸಿವೆ.

ನಾಗೇಂದ್ರ



ಕಂಪಲಾಪುರ, ಸೆ.29– ಗ್ರಾಮದ ನಿವಾಸಿ ನಾಗಣ್ಣಚಾರ್ ಅವರ ಪುತ್ರ ಕೆ.ಎನ್.ನಾಗೇಂದ್ರ(38) ಭಾನುವಾರ ನಿಧನರಾದರು. ಮೃತರು ಪತ್ನಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸೋಮವಾರ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.


ವೆಂಕಟಮ್ಮ



ಸರಗೂರು: ಬೆಂಗಳೂರಿನ ಆಯುಕ್ತರ ಕಚೇರಿಯ ಅಧಿಕಾರಿ ರಾಮಪ್ರಸಾದ್ ಅವರ ತಾಯಿ ಪಟ್ಟಣದ 10ನೇ ವಾರ್ಡ್ ನಿವಾಸಿ ವೆಂಕಟಮ್ಮ(85) ಶನಿವಾರ ರಾತ್ರಿ ನಿಧನರಾಗಿದ್ದಾರೆ. ಮೃತರು ಮೂವರು ಪುತ್ರರು, ಆರು ಮಂದಿ ಪುತ್ರಿಯರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ, ಮೃತರ ಅಂತ್ಯಕ್ರಿಯೆ ಪಟ್ಟಣದ ತೊಗಟವೀರ ಸಮಾಜದ ರುದ್ರಭೂಮಿಯಲ್ಲಿ ಭಾನುವಾರ ನಡೆಸಲಾಯಿತು.

ಸಿದ್ದರಾಮಯ್ಯ ವಿರುದ್ಧದ ರಾಜಕೀಯ ದಾಳಿಗೆ ಸಂಘಟಿತ ಹೋರಾಟ ಅಗತ್ಯ

ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ



ಮೈಸೂರು ಅಶೋಕಪುರಂನ ಸರ್ಕಾರಿ ಪ್ರಾಥಮಿಕ ಶಾಲಾ ಆವರಣದಲ್ಲಿ ಭಾನುವಾರ ನಡೆದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಸಮಾರಂಭದಲ್ಲಿ ವೀಳ್ಯದೆಲೆ ಬೆಳೆಗಾರರಿಗೆ ಭೂಮಿ ಮಂಜೂರಾತಿ ಹಕ್ಕುಪತ್ರವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ವಿತರಿಸಿದರು. ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಶಾಸಕ ಶ್ರೀವತ್ಸ, ವಿಧಾನಪರಿಷತ್ ಸದಸ್ಯರಾದ ಡಾ.ಡಿ.ತಿಮ್ಮಯ್ಯ, ಸಿ.ಎನ್.ಮಂಜೇಗೌಡ, ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಉಪಾಧ್ಯಕ್ಷೆ ಪುಷ್ಪಾ ಅಮರನಾಥ್, ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತ ರೆಡ್ಡಿ, ನಗರಪಾಲಿಕೆ ಆಯುಕ್ತ ಅಸಾದ್ ಉರ್ ರೆಹಮಾನ್ ಶರೀಫ್ ಮತ್ತಿತರರು ಉಪಸ್ಥಿತರಿದ್ದರು.

ಮೈಸೂರು, ಸೆ.29(ಎಸ್‌ಬಿಡಿ)– ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಆಶಯದಂತೆ ಆಡಳಿತ ನಡೆಸುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ಧ ನಡೆಯುತ್ತಿರುವ ರಾಜಕೀಯ ದಾಳಿಯನ್ನು ತಡೆಯಲು ಪರಿಶಿಷ್ಟರು, ಅಲ್ಪಸಂಖ್ಯಾತರು, ತಳಸಮುದಾಯದವರು ಸಂಘಟಿತ ಹೋರಾಟ ನಡೆಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಹೇಳಿದರು.

ಮೈಸೂರಿನ ಅಶೋಕಪುರಂ ಸರ್ಕಾರಿ ಪ್ರಾಥಮಿಕ ಶಾಲಾ ಆವರಣದಲ್ಲಿ ಆಯೋಜಿಸಿದ್ದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಸಮಾರಂಭದಲ್ಲಿ ರೋಷಾವೇಶದೊಂದಿಗೆ ಭಾಷಣ ಮಾಡಿದ ಅವರು, ನಾನು ಮತ್ತು ಸಿದ್ದರಾಮಯ್ಯನವರು ನಲವತ್ತು ವರ್ಷದಿಂದ ಜೊತೆಯಲ್ಲಿದ್ದೇವೆ. ಅಂಬೇಡ್ಕರ್ ಮಾರ್ಗದಲ್ಲಿ ನಡೆಯುತ್ತಿರುವ ನಮ್ಮಿಬ್ಬರ ಧ್ಯೇಯ, ಗುರಿ, ಉದ್ದೇಶ ಒಂದೇ ಆಗಿದೆ. ಜನರ ಹಿತರಕ್ಷಣೆ, ಸಾಮಾಜಿಕ ನ್ಯಾಯ, ತುಳಿತಕ್ಕೆ ಒಳಗಾದವರು, ಶೋಷಣೆಗೆ ಗುರಿಯಾದವರ ಪರ ನಿಲುವು ಹೊಂದಿರುವುದರಿಂದ ಜೊತೆಯಲ್ಲಿದ್ದೇವೆ. ಅಧಿಕಾರಕ್ಕಾಗಿ ನಾವೆಂದೂ ಜೊತೆಗಿಲ್ಲ. ಆದರೆ ಸಹಿಸಲಾಗದ ಶಕ್ತಿಗಳು ಧ್ವನಿ ಅಡಗಿಸುವ ಪ್ರಯತ್ನ ನಡೆಸಿವೆ. ಯಾವುದೇ ತಪ್ಪು ಮಾಡದಿರುವ ಸಿದ್ದರಾಮಯ್ಯರ ಮೇಲೆ ರಾಜಕೀಯ ದಾಳಿ ನಡೆಸಿದ್ದಾರೆ. ಇದರ ವಿರುದ್ಧ ತಳಸಮುದಾಯ, ಪರಿಶಿಷ್ಟರು, ಅಲ್ಪಸಂಖ್ಯಾತರು, ನೊಂದವರು ಸಂಘಟಿತ ಹೋರಾಟ ನಡೆಸಬೇಕಿದೆ ಎಂದರು.

ಮೊದಲ ಸಿಎಂ: ರಾಜ್ಯದಲ್ಲಿ 30 ಸಾವಿರಕ್ಕೂ ಹೆಚ್ಚು ಒಂದು ವರ್ಗದ ಜನ ಇರುವ ಪ್ರದೇಶ ಅಶೋಕಪುರಂ. ಇತಿಹಾಸದಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳ ಅನುಷ್ಠಾನಕ್ಕೆಂದು ಇಲ್ಲಿಗೆ ಬಂದಿರುವ ಮೊದಲ ಮುಖ್ಯಮಂತ್ರಿ ಸಿದ್ದರಾಮಯ್ಯನವರು. ಇವರು ಮೊದಲ ಬಾರಿ ಸಿಎಂ ಆಗಿದ್ದಾಗ ಲೋಕೋಪಯೋಗಿ ಸಚಿವನಾಗಿದ್ದ ನನ್ನನ್ನು ಕರೆದು ಪರಿಶಿಷ್ಟರು ವಾಸಿಸುವ ಪ್ರದೇಶದಲ್ಲಿ ಒಂದೂ ಮಣ್ಣಿನ ರಸ್ತೆ ಇರಬಾರದು ಎಂದು ಹೇಳಿ, ಎಲ್ಲಾ ಕಡೆ ರಸ್ತೆ ಮಾಡಿಸಿದರು. ಅಶೋಕಪುರಂ ಹಾಗೂ ಗಾಂಧಿನಗರಕ್ಕೆ ಸಂಬಂಧಿಸಿದ ಎಲ್ಲಾ ಸವಲತ್ತು ನೀಡಲು ಸಮ್ಮತಿಸಿದ್ದಾರೆ. 245 ವೀಳ್ಯದೆಲೆ ಬೆಳೆಗಾರರಿಗೂ ಭೂಮಿ ನೀಡಲು ಕ್ರಮ ವಹಿಸಲು ಸೂಚನೆ ನೀಡಿದ್ದಾರೆ. ಟೌನ್‌ಶಿಪ್ ಮಾದರಿಯಲ್ಲಿ ಅಶೋಕಪುರಂ ಸಮಗ್ರ ಅಭಿವೃದ್ಧಿ ಬಗ್ಗೆ ಚಿಂತನೆ ನಡೆಸಲಾಗುವುದು ಎಂದು ಭರವಸೆ ನೀಡಿದರು.

> ದೊಡ್ಡ ಚರಿತ್ರೆ ಹಿನ್ನೆಲೆಯುಳ್ಳ ಅಶೋಕಪುರಂಗೆ ಇಂದು ಮುಖ್ಯಮಂತ್ರಿಗಳೊಂದಿಗೆ ಸರ್ಕಾರವೇ ಬಂದಿದೆ. ಆದಿ ಕರ್ನಾಟಕ ಜನಾಂಗದ ಅಸ್ಮಿತೆ ಅಶೋಕಪುರಂನಲ್ಲಿದೆ. ಇದು ಐತಿಹಾಸಿಕ ದಿನ. ಪ್ರಜಾಪ್ರಭುತ್ವ ಮತ್ತು ಸಂವಿಧಾನದ ಮೌಲ್ಯಗಳ ರಕ್ಷಣೆಯಾಗಬೇಕು. ಈ ನಿಟ್ಟಿನಲ್ಲಿ ಸಿದ್ದರಾಮಯ್ಯನವರು ಆಡಳಿತ ನಡೆಸುತ್ತಿದ್ದಾರೆ.
> - ಶ್ರೀ ಜ್ಞಾನಪ್ರಕಾಶ ಸ್ವಾಮೀಜಿ

> ಅಶೋಕಪುರಂನಲ್ಲಿ ಪಾದಯಾತ್ರೆ ವೇಳೆ ಗಮನಿಸಿದ ಸಮಸ್ಯೆಗಳ ಬಗ್ಗೆ ಸಚಿವ ಮಹದೇವಪ್ಪನವರು ನಂತರ ಜ್ಞಾನಪ್ರಕಾಶ ಸ್ವಾಮೀಜಿ ಅವರ ಗಮನಕ್ಕೆ ತಂದು ಪರಿಹಾರ ಕ್ರಮಕ್ಕೆ ಸಹಕಾರ ಕೋರಿದ್ದೆ. ಅಭಿವೃದ್ಧಿ ಎಲ್ಲರ ಉದ್ದೇಶವಾಗಿದ್ದು, ಮುಖ್ಯಮಂತ್ರಿಗಳ ಗಮನಕ್ಕೆ ತರೋಣವೆಂದಿದ್ದರು. ಇಲ್ಲಿನ ಸರ್ವಾಂಗೀಣ ಅಭಿವೃದ್ಧಿಗೆ ನಾನೂ ಜೊತೆಯಲ್ಲಿರುತ್ತೇನೆ.
> - ಟಿ.ಎಸ್.ಶ್ರೀವತ್ಸ, ಶಾಸಕ

> ಅಶೋಕಪುರಂನಲ್ಲಿ ವಿವಿಧ ಅಭಿವೃದ್ಧಿಗೆ ಕಾಮಗಾರಿಗಳ ಶಂಕುಸ್ಥಾಪನೆಗೆ ಕಾರಣರಾದ ಹೆಚ್.ಸಿ. ಮಹದೇವಪ್ಪ ಅವರಿಗೆ ಧನ್ಯವಾದ. ನಮ್ಮೂರಿಗೆ ನೂರು ಕೋಟಿ ರೂ. ಅನುದಾನ ಬಯಸಿದ್ದೇವೆ. 5 ಸಾವಿರಕ್ಕೂ ಹೆಚ್ಚು ಜನ ಉನ್ನತ ವ್ಯಾಸಂಗ ಮಾಡಿದವರಿದ್ದು, ಅವರು ಬದುಕು ಕಟ್ಟಿಕೊಳ್ಳಲು ಯೋಜನೆ ರೂಪಿಸಬೇಕು. 1961ರಲ್ಲಿ ಮುಡಾ ವತಿಯಿಂದ ಸ್ಮಶಾನಕ್ಕೆಂದು ನೀಡಿರುವ 16.18 ಎಕರೆ ಜಾಗದಲ್ಲಿ 10 ಎಕರೆಯಲ್ಲಿ ಸ್ಮಶಾನ ನಿರ್ಮಾಣಕ್ಕೆ ಪಾಲಿಕೆಯಲ್ಲಿ ನಿರ್ಣಯವಾಗಿದೆ. ಉಳಿದ ಜಾಗದಲ್ಲಿ ಬುದ್ಧವಿಹಾರ, ಮೆಡಿಕಲ್ ಹಾಗೂ ಇಂಜಿನಿಯರಿಂಗ್ ಕಾಲೇಜು ನಿರ್ಮಿಸಿ ಕೊಡಬೇಕು ಎಂಬುದು ಜನರ ಆಶಯವಾಗಿದೆ.
> - ಪುರುಷೋತ್ತಮ್, ಮಾಜಿ ಮೇಯರ್

ಮೈಸೂರಲ್ಲಿ ವೈದ್ಯೆ ಅನುಮಾನಾಸ್ಪದ ಸಾವು

ಮೈಸೂರು, ಸೆ.29(ಎಸ್‌ಪಿಎನ್)– ಸರ್ಕಾರಿ ವೈದ್ಯೆಯೊಬ್ಬರು ಅನುಮಾನಾಸ್ಪದವಾಗಿ ಮೃತಪಟ್ಟಿದ್ದಾರೆ. ಮೈಸೂರು ನಗರದ ಚೆಲುವಾಂಬ ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿ ಡಾ.ವಿದ್ಯಾಧರೆ(42) ಮೃತರು. ಲಕ್ಷ್ಮೀಪುರಂ ಅಪಾರ್ಟ್‌ಮೆಂಟ್ ನಿವಾಸಿಯಾದ ಕೆ.ಆರ್.ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿ ಡಾ.ಷಣ್ಮುಖ ಅವರ ಪತ್ನಿ ಡಾ.ವಿದ್ಯಾಧರೆ. ಈ ದಂಪತಿ ಮೂವರು ಮಕ್ಕಳೊಂದಿಗೆ ವಾಸವಾಗಿವಿದ್ದರು.

ಶನಿವಾರ ರಾತ್ರಿ ಎಂದಿನಂತೆ ಕೆಲಸ ಮುಗಿಸಿಕೊಂಡು ಮನೆಗೆ ಬಂದ ವಿದ್ಯಾಧರೆ ಅವರು, ಮಕ್ಕಳೊಂದಿಗೆ ತಮ್ಮ ಕೊಠಡಿಯಲ್ಲಿ ಮಲಗಿದ್ದಾರೆ. ಭಾನುವಾರ ಬೆಳಗ್ಗೆ 9 ಗಂಟೆಯಾದರೂ ಕೋಣೆಯಿಂದ ಹೊರಬಾರದೇ ಇದ್ದುದರಿಂದ ಅನುಮಾನಗೊಂಡ ಡಾ.ಷಣ್ಮುಖ ಅವರು, ಡಾ.ವಿದ್ಯಾಧರೆ ಅವರು ಮಲಗಿದ್ದ ಕೋಣೆಗೆ ಹೋಗಿ ನೋಡಿದ್ದಾರೆ. ಡಾ.ವಿದ್ಯಾಧರೆ ಮೃತಪಟ್ಟಿರುವುದು ಖಚಿತವಾಗಿದೆ. ವಿದ್ಯಾಧರೆ ಅವರ ಸಾವಿನ ಬಗ್ಗೆ ಅನುಮಾನಗೊಂಡಿರುವ ಡಾ.ವಿದ್ಯಾಧರೆ ಸೋದರ ಶ್ರೀಕಾಂತ್ ದೂರು ನೀಡಿದ್ದಾರೆ. ಘಟನಾ ಸ್ಥಳಕ್ಕೆ ಬೆರಳಚ್ಚು ತಂಡದೊಂದಿಗೆ ವಿಧಿ ವಿಜ್ಞಾನ ಪ್ರಯೋಗಾಲಯದ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಸಂಬಂಧ ಲಕ್ಷ್ಮೀಪುರಂ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಅವಿರೋಧ ಆಯ್ಕೆ



ಮೈಸೂರು ಕನ್ನೇಗೌಡನಕೊಪ್ಪಲಿನ ಶ್ರೀ ಚಾಮುಂಡೇಶ್ವರಿ ದೇವಸ್ಥಾನದ ಸೇವಾ ಸಮಿತಿಯ ಸಭೆಯಲ್ಲಿ ನೂತನ ಖಜಾಂಚಿಯಾಗಿ ಅವಿರೋಧ ಆಯ್ಕೆಯಾದ ಫಾಲ್ಕನ್ ರಾಜು ಅವರನ್ನು ಅಭಿನಂದಿಸಲಾಯಿತು. ಸಮಿತಿಯ ಅಧ್ಯಕ್ಷರಾದ ಗಿರೀಶ್ ಡಿ.ಗೌಡ, ಉಪಾಧ್ಯಕ್ಷ ವಿಕ್ರಾಂತ್ ಪಿ.ದೇವೇಗೌಡ, ಧರ್ಮದರ್ಶಿ ನಿಂಗಪ್ಪ, ಗೌರವಾಧ್ಯಕ್ಷ ನಿಂಗಣ್ಣ, ಕಾರ್ಯದರ್ಶಿ ಮಲ್ಲೇಗೌಡ, ಸಹ ಕಾರ್ಯದರ್ಶಿ ಬಿ.ಲಕ್ಷ್ಮಣ್, ಕಾನೂನು ಸಲಹೆಗಾರ ಸಿ.ಬಸವರಾಜು, ಸದಸ್ಯರಾದ ದೊಡ್ಡಣ್ಣ, ಮಂಜು, ಸುರೇಶ್, ಕೃಷ್ಣಪ್ಪ, ಲಿಂಗೇಗೌಡ, ತಮ್ಮಣ್ಣ, ಮರಿಗೌಡ, ವೆಂಕಟೇಶ್, ಪ್ರತಾಪ್, ರವಿ, ಮ್ಯಾನೇಜರ್ ಬಿ.ಸಣ್ಣೇಗೌಡ ಸಭೆಯಲ್ಲಿ ಭಾಗವಹಿಸಿದ್ದರು.

ನವನಿಧಿ ವಿವಿಧೋದ್ದೇಶ ಸಂಘಕ್ಕೆ ಅಧ್ಯಕ್ಷ, ಉಪಾಧ್ಯಕ್ಷೆ ಆಯ್ಕೆ



ಮೈಸೂರಿನ ನವನಿಧಿ ವಿವಿಧೋದ್ದೇಶ ಸೌಹಾರ್ದ ಸಹಕಾರಿ ನಿಯಮಿತ ಸಂಸ್ಥೆ ನೂತನ ಅಧ್ಯಕ್ಷರಾಗಿ ಕೆ.ಎಸ್.ಮುರುಳಿ ಮತ್ತು ಉಪಾಧ್ಯಕ್ಷರಾಗಿ ಎಸ್.ಶ್ರೀಕಾಂತ್ ಅವಿರೋಧವಾಗಿ ಆಯ್ಕೆಯಾದರು. ನೂತನ ಅಧ್ಯಕ್ಷರು, ಉಪಾಧ್ಯಕ್ಷರನ್ನು ಆಡಳಿತ ಮಂಡಳಿ ನಿರ್ದೇಶಕರು ಅಭಿನಂದಿಸಿದರು.

ವಿಧಾನ ಮಂಡಲ ಸ್ಥಾಯಿ ಸಮಿತಿಗಳಿಗೆ ನಾಮನಿರ್ದೇಶನ

ಬೆಂಗಳೂರು, ಸೆ.29– ವಿಧಾನ ಮಂಡಲದ ವಿವಿಧ ಸ್ಥಾಯಿ ಸಮಿತಿಗಳಿಗೆ 2024–25ನೇ ಸಾಲಿಗೆ ಅಧ್ಯಕ್ಷರು, ಸದಸ್ಯರನ್ನು ವಿಧಾನ ಸಭಾಧ್ಯಕ್ಷ ಯು.ಟಿ. ಖಾದರ್ ಅವರು ನಾಮನಿರ್ದೇಶನ ಮಾಡಿದ್ದಾರೆ.

ವಿವಿಧ ಸ್ಥಾಯಿ ಸಮಿತಿಗಳ ಅಧ್ಯಕ್ಷರು: ಸಿ.ಸಿ.ಪಾಟೀಲ (ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿ), ಬಸವರಾಜ್ ಶಿವಣ್ಣನವರ್ (ಸಾರ್ವಜನಿಕ ಉದ್ದಿಮೆಗಳ ಸಮಿತಿ), ಪಿ.ಎಂ. ನರೇಂದ್ರಸ್ವಾಮಿ (ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ), ಎ.ಆರ್.ಕೃಷ್ಣಮೂರ್ತಿ (ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ), ಬಿ.ಶಿವಣ್ಣ (ಅಧೀನ ಶಾಸನ ರಚನಾ ಸಮಿತಿ), ಎಚ್.ಡಿ.ರೇವಣ್ಣ (ಸಭೆಯ ಮುಂದಿಡಲಾದ ಕಾಗದ ಪತ್ರಗಳ ಸಮಿತಿ), ಎನ್.ಎಚ್.ಕೋನರಡ್ಡಿ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿ) ಅವರನ್ನು ನೇಮಿಸಲಾಗಿದೆ.

ಉಳಿದಂತೆ, ಗ್ರಂಥಾಲಯ ಸಮಿತಿಗೆ ಯು.ಬಿ.ಬಣಕಾರ್, ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್‌ರಾಜ್ ಸಂಸ್ಥೆಗಳ ಸಮಿತಿಗೆ ರಿಜ್ವಾನ್ ಅರ್ಷದ್, ಅಂದಾಜುಗಳ ಸಮಿತಿಗೆ ಹಂಪನಗೌಡ ಬಾದರ್ಲಿ, ಸರ್ಕಾರಿ ಭರವಸೆಗಳ ಸಮಿತಿಗೆ ಕೆ.ವೈ.ನಂಜೇಗೌಡ, ಹಕ್ಕುಬಾಧ್ಯತೆಗಳ ಸಮಿತಿಗೆ ಶಿವಾನಂದ ಮಹಾಂತೇಶ ಕೌಜಲಗಿ, ಖಾಸಗಿ ಸದಸ್ಯರುಗಳ ವಿಧೇಯಕ ಹಾಗೂ ನಿರ್ಣಯಗಳ ಸಮಿತಿ, ಅರ್ಜಿಗಳ ಸಮಿತಿ ಹಾಗೂ ವಸತಿ ಸೌಕರ್ಯಗಳ ಸಮಿತಿಗೆ ರುದ್ರಪ್ಪ ಲಮಾಣಿ ಅವರನ್ನು ಅಧ್ಯಕ್ಷರನ್ನಾಗಿ ನೇಮಿಸಲಾಗಿದೆ.

ಈ ಎಲ್ಲ ಸಮಿತಿಗಳಿಗೆ ವಿಧಾನಸಭೆ ಮತ್ತು ವಿಧಾನ ಪರಿಷತ್ ಸದಸ್ಯರನ್ನು ಸದಸ್ಯರನ್ನಾಗಿ ನಾಮನಿರ್ದೇಶನ ಮಾಡಲಾಗಿದೆ ಎಂದು ವಿಧಾನಸಭೆ ಸಚಿವಾಲಯ ತಿಳಿಸಿದೆ.

ಫಲಪುಷ್ಪ ಪ್ರದರ್ಶನ, ಕವಿಗೋಷ್ಠಿ, ಸಾಂಸ್ಕೃತಿಕ ಕಾರ್ಯಕ್ರಮಗಳ ಪೋಸ್ಟರ್ ಬಿಡುಗಡೆ

● ಅ.3ರಿಂದ 10ರವರೆಗೆ ಅರಮನೆ ವೇದಿಕೆಯಲ್ಲಿ ಪ್ರತಿದಿನ ಸಂಜೆ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮ ● ಖ್ಯಾತ ಕವಿ ನಾಗತಿಹಳ್ಳಿ ಚಂದ್ರಶೇಖರ್ ಅವರಿಂದ ದಸರಾ ಕವಿಗೋಷ್ಠಿ ಉದ್ಘಾಟನೆ ● ಅರ್ಥಗರ್ಭಿತ ಪರಿಕಲ್ಪನೆಯಲ್ಲಿ ಫಲಪುಷ್ಪ ಪ್ರದರ್ಶನ



ಅರಮನೆ ಮಂಡಳಿ ಕಚೇರಿಯಲ್ಲಿ ದಸರಾ ಕಾರ್ಯಕ್ರಮಗಳ ಪೋಸ್ಟರ್‌ಗಳನ್ನು ಬಿಡುಗಡೆ ಮಾಡಲಾಯಿತು.

> ದಸರಾ ಫಲಪುಷ್ಪಕ್ಕೆ ವಯಸ್ಕರಿಗೆ 50 ರೂ. ಪ್ರವೇಶ ಶುಲ್ಕ ನಿಗದಿಪಡಿಸಿದ್ದು, 6 ವರ್ಷದೊಳಗಿನ ಮಕ್ಕಳಿಗೆ ಪ್ರವೇಶ ಉಚಿತವಿದೆ 6ರಿಂದ 12 ವರ್ಷದ ಮಕ್ಕಳಿಗೆ 25 ರೂ. ಪ್ರವೇಶ ಶುಲ್ಕವಿದ್ದು, ಶಾಲಾ ಸಮವಸ್ತ್ರದಲ್ಲಿ ಬರುವ ಮಕ್ಕಳಿಗೆ ಉಚಿತ ಪ್ರವೇಶಾವಕಾಶವಿದೆ.

ಮೈಸೂರು,ಸೆ.29(ಪಿಎಂ)– ಮೈಸೂರು ಅರಮನೆ ಆವರಣದಲ್ಲಿರುವ ಅರಮನೆ ಮಂಡಳಿ ಕಚೇರಿಯಲ್ಲಿ ದಸರಾ ಫಲಪುಷ್ಪ ಪ್ರದರ್ಶನ, ದಸರಾ ಕವಿಗೋಷ್ಠಿ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳ ಪೋಸ್ಟರ್‌ಗಳನ್ನು ಭಾನುವಾರ ಬಿಡುಗಡೆ ಮಾಡಲಾಯಿತು.

ಪೋಸ್ಟರ್‌ಗಳನ್ನು ಬಿಡುಗಡೆ ಮಾಡಿದ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಬಳಿಕ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಿದರು. ದಸರಾ ಸಮೀಪದಲ್ಲಿದ್ದು, ಎಲ್ಲಾ ಸಿದ್ಧತೆ ನಡೆದಿದೆ. ಸಾಂಸ್ಕೃತಿಕ ಉಪಸಮಿತಿ ವತಿಯಿಂದ ಅರಮನೆ ವೇದಿಕೆ ಸೇರಿದಂತೆ ವಿವಿಧ ವೇದಿಕೆಗಳಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಅದರಂತೆ ಅ.3ರಂದು ಸಂಜೆ 6ಕ್ಕೆ ಅರಮನೆ ಮುಂಭಾಗದಲ್ಲಿ ದಸರಾ ಸಾಂಸ್ಕೃತಿಕ ಕಾರ್ಯಕ್ರಮಗಳ ಉದ್ಘಾಟನೆಯಾಗಲಿದೆ. ಇದೇ ವೇಳೆ ರಾಜ್ಯ ಸಂಗೀತ ವಿದ್ವಾನ್ ಪ್ರಶಸ್ತಿ ಪ್ರದಾನ ಸಮಾರಂಭ ಸಹ ನಡೆಯಲಿದೆ ಎಂದು ತಿಳಿಸಿದರು.

ಅ.3ರಿಂದ 10ರವರೆಗೆ ಒಟ್ಟು 8 ದಿನಗಳ ಕಾಲ ಅರಮನೆ ಮುಂಭಾಗದ ವೇದಿಕೆಯಲ್ಲಿ ಪ್ರತಿದಿನ ಸಂಜೆ 4ರಿಂದ ರಾತ್ರಿ 10ರವರೆಗೆ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಅಲ್ಲದೆ, ಅ.3ರಿಂದ 11ರವರೆಗೆ ಒಟ್ಟು 9 ದಿನಗಳ ಕಾಲ ದಸರಾ ಸಾಂಸ್ಕೃತಿಕ ಉಪಸಮಿತಿಗೆ ಸ್ವೀಕೃತವಾಗಿರುವ ಅರ್ಜಿಗಳನ್ನು ಪರಿಶೀಲಿಸಿ ವಿವಿಧ ಕಲಾಪ್ರಕಾರಗಳ ಉತ್ತಮ ಕಲಾತಂಡಗಳನ್ನು ಆಯ್ಕೆ ಮಾಡಿ ಸಂಗೀತ, ನೃತ್ಯ, ವಾದ್ಯ ಹಾಗೂ ಇತರೆ ವೇದಿಕೆ ಕಾರ್ಯಕ್ರಮಗಳನ್ನು ನಿಗದಿಪಡಿಸಿ ಪ್ರಸ್ತುತಪಡಿಸಲಾಗುವುದು. ಜಗನ್ಮೋಹನ ಅರಮನೆ, ಕಲಾಮಂದಿರ, ಗಾನಭಾರತಿ, ನಾದಬ್ರಹ್ಮ ಸಂಗೀತ ಸಭಾ, ಚಿಕ್ಕ ಗಡಿಯಾರ, ನಂಜನಗೂಡಿನ ಶ್ರೀಕಂಠೇಶ್ವರ ದೇವಸ್ಥಾನದ ಆವರಣದಲ್ಲಿ ಈ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಈ ಸಂಬಂಧ ಒಟ್ಟು 320 ಕಲಾತಂಡಗಳ ಸುಮಾರು 4 ಸಾವಿರ ಕಲಾವಿದರಿಗೆ ಅವಕಾಶ ದೊರೆಯಲಿದೆ ಎಂದು ವಿವರಿಸಿದರು.

ಅದೇ ರೀತಿಯಲ್ಲಿ ಅ.3ರಿಂದ 11ರವರೆಗೆ ಪೌರಾಣಿಕ, ಐತಿಹಾಸಿಕ, ಸಾಮಾಜಿಕ ಹಾಗೂ ರಂಗಗೀತೆಗಳ ಕಾರ್ಯಕ್ರಮಗಳು, ವೃತ್ತಿ ರಂಗಭೂಮಿ ಹಾಗೂ ಹವ್ಯಾಸಿ ರಂಗಭೂಮಿ ಕಲಾವಿದರಿಂದ ನಾಟಕ ಪ್ರದರ್ಶನ ಏರ್ಪಡಿಸಲಾಗುವುದು. ಸುಮಾರು 6 ಸಾವಿರಕ್ಕೂ ಹೆಚ್ಚು ಕಲಾವಿದರಿಗೆ ಅವಕಾಶ ದೊರೆಯಲಿದೆ. ಪುರಭವನ, ಕಿರುರಂಗ ಮಂದಿರ, ನಟನ ರಂಗಮಂದಿರ ಹಾಗೂ ರಮಾಗೋವಿಂದ ರಂಗಮಂದಿರದ ವೇದಿಕೆಗಳಲ್ಲಿ ಈ ಕಾರ್ಯಕ್ರಮಗಳು ನಡೆಯಲಿವೆ ಎಂದರು.

ಕವಿಗೋಷ್ಠಿ: ಕವಿಗೋಷ್ಠಿ ಉಪಸಮಿತಿ ವತಿಯಿಂದ ಜಗನ್ಮೋಹನ ಅರಮನೆಯಲ್ಲಿ ವಿವಿಧ ರೀತಿ ಕವಿಗೋಷ್ಠಿ ಆಯೋಜನೆಗೆ ಎಲ್ಲಾ ಸಿದ್ಧತೆ ನಡೆದಿದೆ ಎಂದು ತಿಳಿಸಿದ ಸಚಿವರು, ಅ.5ರಂದು ಬೆಳಗ್ಗೆ 10.30ಕ್ಕೆ ಖ್ಯಾತ ಕವಿ ನಾಗತಿಹಳ್ಳಿ ಚಂದ್ರಶೇಖರ್ ಈ ಬಾರಿಯ ದಸರಾ ಕವಿಗೋಷ್ಠಿ ಉದ್ಘಾಟಿಸಲಿದ್ದಾರೆ. ಚಿಂತಕ ಡಾ.ಬಂಜಗೆರೆ ಜಯ ಪ್ರಕಾಶ್ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ. ಚಿಗುರು ಅತಿಥಿಯಾಗಿ ಕುಮಾರಿ ಪ್ರಣತಿ ಆರ್.ಗಡಾದ ಭಾಗವಹಿಸಲಿದ್ದಾರೆ. ಜಗನ್ಮೋಹನ ಅರಮನೆಯಲ್ಲಿ ಅ.5ರಿಂದ 9ರವರೆಗೆ ಪ್ರತಿದಿನ ಬೆಳಗ್ಗೆ 10.30ರಿಂದ ಮಧ್ಯಾಹ್ನ 1.30ರವರೆಗೆ ಕವಿಗೋಷ್ಠಿ ಕಾರ್ಯಕ್ರಮಗಳು ನಡೆಯಲಿವೆ ಎಂದು ತಿಳಿಸಿದರು.

ಅ.5ರಂದೇ ನಡೆಯುವ ಸಮರಸ (ಪ್ರಾದೇಶಿಕ) ಕವಿಗೋಷ್ಠಿಯನ್ನು ಖ್ಯಾತ ಚಿತ್ರ ಸಾಹಿತಿ ನಾಗೇಂದ್ರ ಪ್ರಸಾದ್ ಉದ್ಘಾಟಿಸಲಿದ್ದು, ಮೈಸೂರು ಹಾಗೂ ನೆರೆಯ ಜಿಲ್ಲೆಗಳ ಸುಮಾರು 33 ಕವಿಗಳು ಭಾಗವಹಿಸಿ ತಮ್ಮ ಕವನ ವಾಚನ ಮಾಡಲಿದ್ದಾರೆ. ಅ.6ರಂದು 'ಸಮಾನತಾ ಕವಿಗೋಷ್ಠಿ' ನಡೆಯಲಿದ್ದು, ದೇವು ಪತ್ತಾರ ಉದ್ಘಾಟನೆ ನೆರವೇರಿಸಲಿದ್ದಾರೆ. ಶಂಕರ್ ದೇವನೂರು ಅಧ್ಯಕ್ಷತೆ ವಹಿಸಲಿದ್ದಾರೆ. ಪ್ರಶಾಂತ್ ನಾಯಕ ಅವರು ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ. ಈ ಗೋಷ್ಠಿಯಲ್ಲಿ ಈವರೆಗೆ ಮುಖ್ಯ ವಾಹಿನಿಯಲ್ಲಿ ಭಾಗವಹಿಸದೇ ಮತ್ತು ವಿವಿಧ ವೃತ್ತಿನಿರತವಾಗಿ ಪ್ರವೃತ್ತಿಯಲ್ಲಿ ಕವಿಯಾಗಿರುವ ಒಟ್ಟು 30 ಕವಿಗಳು ಪಾಲ್ಗೊಳ್ಳಲಿದ್ದಾರೆ ಎಂದು ಹೇಳಿದರು.

ಅ.7ರಂದು 'ಸಂತಸ ಕವಿಗೋಷ್ಠಿ' ನಡೆಯಲಿದೆ. ಈ ಗೋಷ್ಠಿಯಲ್ಲಿ ಚುಟುಕಗಳ ಮೂಲಕ ಹಾಸ್ಯರಸವನ್ನು ವಿಡಂಬನಾತ್ಮಕವಾಗಿ ಕಟ್ಟಿಕೊಡುತ್ತಿದ್ದು, ಈ ಬಾರಿಯ ನಾಡಹಬ್ಬ ದಸರಾ ಉದ್ಘಾಟಿಸುವ ಹಂಪ ನಾಗರಾಜಯ್ಯ ಅವರು ಈ ಸಂತಸ ಕವಿಗೋಷ್ಠಿ ಉದ್ಘಾಟಿಸಲಿದ್ದಾರೆ. ಡಾ.ಬಸವರಾಜ ಸಾದರ ಅಧ್ಯಕ್ಷತೆ ವಹಿಸಲಿದ್ದು, ಡಾ.ಲತಾ ರಾಜಶೇಖರ್ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ. ಒಟ್ಟು 11 ಕವಿಗಳ ಜುಗಲ್‌ಬಂದಿ ಇದರ ವಿಶೇಷತೆಯಾಗಿದೆ ಎಂದರು.

ಅ.8ರಂದು ಸಮಷ್ಟಿ ಕವಿಗೋಷ್ಠಿ ನಡೆಯಲಿದ್ದು, ಇದು ಈ ಬಾರಿಯ ವಿಶೇಷವಾಗಿದೆ. ದೇಶ ವಿದೇಶಗಳ ಬಹುಭಾಷಾ ಕವಿಗಳು ಇದರಲ್ಲಿ ಭಾಗವಹಿಸುತ್ತಿದ್ದು, ಈ ಗೋಷ್ಠಿಯನ್ನು ಹಿರಿಯ ಕವಿ ಡಾ.ಹೆಚ್. ಎಸ್.ಶಿವಪ್ರಕಾಶ್ ಉದ್ಘಾಟಿಸಲಿದ್ದಾರೆ. ಪ್ರೊ.ಕೆ.ವೈ.ನಾರಾಯಣಸ್ವಾಮಿ ಅಧ್ಯಕ್ಷತೆ ವಹಿಸಲಿದ್ದು, ಜ.ನಾ.ತೇಜಶ್ರೀ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ. ಒಟ್ಟು 15 ಕವಿಗಳು ವಿವಿಧ ಭಾಷೆಯ ಕಾವ್ಯಾನುಭವವನ್ನು ಕಟ್ಟಿಕೊಡಲಿದ್ದಾರೆ ಎಂದು ತಿಳಿಸಿದರು.

ಅ.9ರಂದು ಸಮೃದ್ಧ ಕವಿಗೋಷ್ಠಿ ನಡೆಯಲಿದ್ದು, ಡಾ.ಹೆಚ್.ಎಲ್.ಪುಷ್ಪ ಉದ್ಘಾಟಿಸಲಿದ್ದಾರೆ. ಮೈಸೂರು ಆಕಾಶವಾಣಿಯ ಅಬ್ದುಲ್ ರಶೀದ್ ಅಧ್ಯಕ್ಷತೆ ವಹಿಸಲಿದ್ದಾರೆ. ಪ್ರೊ.ಕವಿತಾ ರೈ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ. ಒಟ್ಟು 31 ಜಿಲ್ಲೆಗಳಿಂದ ಕವಿಗಳು ಭಾಗವಹಿಸಲಿದ್ದು, ಈ ಗೋಷ್ಠಿಯು ಬಹುತ್ವ ಮತ್ತು ಪ್ರಬುದ್ಧತೆಯ ಸಂಕೇತವಾಗಿದೆ ಎಂದು ಹೇಳಿದರು.

ದಸರಾ ಫಲಪುಷ್ಪ ಪ್ರದರ್ಶನವು ಅರ್ಥಗರ್ಭಿತವಾದ ಪರಿಕಲ್ಪನೆಗಳೊಂದಿಗೆ ಸಜ್ಜುಗೊಳ್ಳುತ್ತಿದೆ. ಅ.3ರಿಂದ 12ರವರೆಗೆ ಕುಪ್ಪಣ್ಣ ಪಾರ್ಕ್‌ನಲ್ಲಿ (ನಿಶಾದ್‌ಬಾಗ್) ದಸರಾ ಫಲಪುಷ್ಪ ಪ್ರದರ್ಶನ ನಡೆಯಲಿದ್ದು, ಅ.3ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟನೆ ನೆರವೇರಿಸಲಿದ್ದಾರೆ ಎಂದರು. ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ, ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ಜಿಪಂ ಸಿಇಒ ಕೆ.ಎಂ.ಗಾಯಿತ್ರಿ, ಅರಮನೆ ಮಂಡಳಿ ಉಪನಿರ್ದೇಶಕ ಟಿ.ಎಸ್.ಸುಬ್ರಹ್ಮಣ್ಯ ಸೇರಿದಂತೆ ಮೂರು ಉಪ ಸಮಿತಿಗಳ ಪ್ರತಿನಿಧಿಗಳು ಹಾಜರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಚಿತ್ರಮಂದಿರ / ಚಿತ್ರ	
ಪದ್ಮ ಚಿತ್ರಮಂದಿರ	(ದೂ: 2521923)
ಪೆಟ್ಟಾರಾಪ್ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಕೃಷ್ಣಂ ಪ್ರಣಯ ಸಖಿ (ಕ) ದೇವರ (ಕ)	2+2 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ದೇವರ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಉಪೇಂದ್ರ (ಕ)	4 ಪ್ರದರ್ಶನಗಳು
ಗಾಯಿತ್ರಿ	
ದೇವರ (ತೆ)	4 ಪ್ರದರ್ಶನಗಳು
ರಾಜಕಮಲ್	
ಹಿಟ್ಲರ್ (ತ)	4 ಪ್ರದರ್ಶನಗಳು
ಸಂಗಂ	
ಮೆಯ್ಯಳಗನ್ (ತ)	4 ಪ್ರದರ್ಶನಗಳು
ಲಿಡೋ	
ಹಗ್ಗ (ಕ)	2 ಪ್ರದರ್ಶನಗಳು
ಉಪೇಂದ್ರ (ಕ)	2 ಪ್ರದರ್ಶನಗಳು
ತಿಬ್ಬಾದೇವಿ	
ಪೆಟ್ಟಾರಾಪ್ (ತ)	4 ಪ್ರದರ್ಶನಗಳು
ಪ್ರಭಾ	
ಸಂಜು (ಕ)	2 ಪ್ರದರ್ಶನಗಳು
ನೈಟ್ ರೋಡ್ (ಕ)	2 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಲುಕ್ ಬ್ಯಾಕ್ ಬಿಯಾಂಡ್ ದಿ ಬ್ಲೇಡ್ಸ್ (ಇಂ): ಬೆ.10.20ಕ್ಕೆ, ಮೆಯ್ಯಳಗನ್ (ತ): ಮ.12.45ಕ್ಕೆ, ಸಂ.4.15ಕ್ಕೆ, ದೇವರ 1 (ತೆ): ರಾ.7.45ಕ್ಕೆ.
ಸ್ಕ್ರೀನ್ 2	ಸ್ತ್ರೀ 2 (ಹಿಂ): ಬೆ.10.10ಕ್ಕೆ, ಪೆಟ್ಟಾರಾಪ್ (ತ): ಮ.1.15ಕ್ಕೆ, ಹಿಟ್ಲರ್ (ತ): ಸಂ.4.15ಕ್ಕೆ, ಇಬ್ಬನಿ ತಬ್ಬಿದ ಇಳೆಯಲಿ (ಕ): ರಾ.7ಕ್ಕೆ, ಮೆಯ್ಯಳಗನ್ (ತ): ರಾ.10.05ಕ್ಕೆ.
ಸ್ಕ್ರೀನ್ 3	ಕೇದಾರ್‌ನಾಥ್ ಕುರಿ ಫಾರಂ (ಕ): ಬೆ.10.40ಕ್ಕೆ, ಇಬ್ಬನಿ ತಬ್ಬಿದ ಇಳೆಯಲಿ (ಕ): ಮ.1.10ಕ್ಕೆ, ಸಂಜು (ಕ): ಸಂ.4.25ಕ್ಕೆ, ಅನ್ನ (ಕ): ರಾ.7ಕ್ಕೆ, ಕೃಷ್ಣಂ ಪ್ರಣಯ ಸಖಿ (ಕ): ರಾ.9.40ಕ್ಕೆ.
ಸ್ಕ್ರೀನ್ 4	ದೇವರ 1 (ತೆ): ಬೆ.8ಕ್ಕೆ, ಬೆ.11.45ಕ್ಕೆ, ಮ.3.15ಕ್ಕೆ, ಸಂ.6.45ಕ್ಕೆ, ರಾ.10.10ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಕೃಷ್ಣಂ ಪ್ರಣಯ ಸಖಿ (ಕ): ಮ.1.15ಕ್ಕೆ, ದಿ ಗ್ರೇಟೆಸ್ಟ್ ಆಫ್ ಆಲ್ ಟೈಂ (ತ): ಸಂ.6.25ಕ್ಕೆ, ಹಿಟ್ಲರ್ (ತ): ರಾ.9.45ಕ್ಕೆ.
ಸ್ಕ್ರೀನ್ 2	ದೇವರ 1 (ತೆ): ಬೆ.8ಕ್ಕೆ, ಬೆ.11.20ಕ್ಕೆ, ಮ.2.40ಕ್ಕೆ, ಸಂ.6.05ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 3	ದೇವರ 1 (ಕ): ಬೆ.10ಕ್ಕೆ, ಮ.1.20ಕ್ಕೆ, ಸಂ.4.40ಕ್ಕೆ, ದೇವರ 1 (ತೆ): ರಾ.8ಕ್ಕೆ.
ಸ್ಕ್ರೀನ್ 4	ಇಬ್ಬನಿ ತಬ್ಬಿದ ಇಳೆಯಲಿ (ಕ): ಬೆ.10.30ಕ್ಕೆ, ಮ.1.30ಕ್ಕೆ, ಹಿಟ್ಲರ್ (ತ): ಸಂ.4.35ಕ್ಕೆ, ದೇವರ 1 (ತೆ): ರಾ.7.15ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್,
2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಮಾವುತರು, ಕಾವಾಡಿಗಳಿಗೆ ಭೋಜನ



ದಸರಾ ಗಜಪಡೆಯ ಮಾವುತರು, ಕಾವಾಡಿಗಳಿಗೆ ಚೆಸ್ಕಾಂ ಅಧ್ಯಕ್ಷ ಶಾಸಕ ರಮೇಶ್‌ಬಾಬು ಬಂಡಿಸಿದ್ದೇಗೌಡ ಭೋಜನ ಏರ್ಪಡಿಸಿದ್ದರು.

ಮೈಸೂರು, ಸೆ.29(ಎಂಟಿವೈ)– ದಸರಾ ಮಹೋತ್ಸವ ಗಜಪಡೆಯ ಮಾವುತರು, ಕಾವಾಡಿಗಳಿಗೆ ಶ್ರೀರಂಗಪಟ್ಟಣದ ಶಾಸಕ ರಮೇಶ್ ಬಾಬು ಬಂಡಿಸಿದ್ದೇಗೌಡ ಭೋಜನ ಏರ್ಪಡಿಸಿದ್ದರು.

ಮೈಸೂರು ಅರಮನೆ ಆವರಣದಲ್ಲಿ ಬೀಡುಬಿಟ್ಟಿರುವ ಗಜಪಡೆಯ ಬಿಡಾರದ ಬಳಿ ಮಾವುತ, ಕಾವಾಡಿಗಳು ಹಾಗೂ ಕುಟುಂಬ ಸದಸ್ಯರಿಗೆ ಮಧ್ಯಾಹ್ನದ ಭೋಜನ ವ್ಯವಸ್ಥೆ ಮಾಡಿದ್ದರು. ಕ್ಯಾಟರಿಂಗ್ ವ್ಯವಸ್ಥೆಯಲ್ಲಿ 150ಕ್ಕೂ ಹೆಚ್ಚು ಮಂದಿಗೆ ಊಟ ಮಾಡಿಸಿಕೊಂಡು ಬಂದ ಶಾಸಕ ರಮೇಶ್‌ಬಾಬು ಬಂಡಿಸಿದ್ದೇಗೌಡರು ಗಜಪಡೆಯ ಎಲ್ಲಾ ಆನೆಗಳ ಮಾವುತರು, ಕಾವಾಡಿಗಳು ಹಾಗೂ ಸಹಾಯಕರ ಕುಶಲೋಪರಿ ವಿಚಾರಿಸಿದರು.

ಬಳಿಕ ಭೋಜನ ಕಲ್ಪಿಸಲಾಯಿತು. ಕೆಲವರು ತಮಗೆ ಕಲ್ಪಿಸಿರುವ ತಾತ್ಕಾಲಿಕ ಮನೆಗೆ ಆಹಾರವನ್ನು ಕೊಂಡೊಯ್ದು ಊಟ ಮಾಡಿದರೆ, ಮತ್ತಷ್ಟು ಮಂದಿ ಅಲ್ಲಿಯೇ ಕುಳಿತು ಸವಿದರು.

ಈ ವೇಳೆ ಪತ್ರಕರ್ತರೊಂದಿಗೆ ಮಾತನಾಡಿದ ರಮೇಶ್‌ಬಾಬು ಬಂಡೀಸಿದ್ದೇಗೌಡ, ನಾಡಹಬ್ಬ ದಸರಾ ಮಹೋತ್ಸವದ ಪ್ರಮುಖ ಆಕರ್ಷಣೆ ಗಜಪಡೆಗಳೇ ಆಗಿವೆ. ಜಂಬೂಸವಾರಿಯಲ್ಲಿ ಗಜಪಡೆಯ ಪಾತ್ರ ಮಹತ್ವದ್ದಾಗಿದೆ. ಈ ಹಿನ್ನೆಲೆಯಲ್ಲಿ ಗಜಪಡೆಯ ಮಾವುತರು, ಕಾವಾಡಿಗಳಿಗೆ ಪ್ರೀತಿಪೂರ್ವಕವಾಗಿ ಭೋಜನದ ವ್ಯವಸ್ಥೆ ಮಾಡಲಾಗಿದೆ ಎಂದರು.

ಈ ಸಂದರ್ಭದಲ್ಲಿ ಆರ್‌ಎಫ್‌ಓ ಸಂತೋಷ್ ಹೂಗಾರ್, ಮುಖಂಡರಾದ ಮಂಜುನಾಥ್, ರವೀಶ್, ಗೋವಿಂದರಾಜ್, ನವೀನ್, ತರುಣ್ ಅನಿಲ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ದಸರಾ ಗಜಪಡೆ, ಅಶ್ವಪಡೆಗೆ ಎರಡನೇ ಹಂತದ ಸಿಡಿಮದ್ದು ತಾಲೀಮು ಯಶಸ್ವಿ

● ಸಿಡಿಮದ್ದು ಸಿಡಿತಕ್ಕೂ ಮುನ್ನ ಪಟಾಕಿ ಸಿಡಿಸುವ ಪ್ರಯೋಗ ● ವರಲಕ್ಷ್ಮಿಗೆ ವಿನಾಯಿತಿ, ಮತ್ತೆ ಬೆದರಿದ ಹಿರಣ್ಯ, ಗಟ್ಟಿಯಾಗಿ ನಿಂತ ರೋಹಿತ

ಮೈಸೂರು,ಸೆ.29(ಎಂಟಿವೈ)– ದಸರಾ ಮಹೋತ್ಸವ ಗಜಪಡೆ ಹಾಗೂ ಅಶ್ವಪಡೆಗೆ ಭಾನುವಾರ ಎರಡನೇ ಹಂತದ ಸಿಡಿಮದ್ದು ಸಿಡಿಸುವ ತಾಲೀಮು ಯಶಸ್ವಿಯಾಗಿ ನೆರವೇರಿತು. ಕಳೆದ ಬಾರಿ ಹೆದರಿದ್ದ ರೋಹಿತ ಆನೆ ಈ ಬಾರಿ ಗಟ್ಟಿತನ ಪ್ರದರ್ಶಿಸಿದರೆ, ಕುಮ್ಕಿ ಆನೆ ಹಿರಣ್ಯ ಸಿಡಿಮದ್ದಿನ ಶಬ್ದಕ್ಕೆ ಮತ್ತೆ ಸ್ವಲ್ಪಮಟ್ಟಿಗೆ ಹೆದರಿತು.



ದಸರಾ ವಸ್ತುಪ್ರದರ್ಶನದ ವಾಹನ ನಿಲುಗಡೆ ಸ್ಥಳದಲ್ಲಿ ಗಜಪಡೆಗೆ ಭಾನುವಾರ 2ನೇ ಹಂತದ ಸಿಡಿಮದ್ದು ಸಿಡಿಸುವ ತಾಲೀಮು.

ಜಂಬೂಸವಾರಿಗೆ ಕೇವಲ 13 ದಿನ ಮಾತ್ರವಿದ್ದು, ಗಜಪಡೆ ಹಾಗೂ ಅಶ್ವಪಡೆಯನ್ನು ಸಜ್ಜುಗೊಳಿಸುವ ಪ್ರಕ್ರಿಯೆ ಬಿರುಸಾಗಿ ಸಾಗಿದ್ದು, ಇಂದು ಎರಡನೇ ಹಂತದ ಸಿಡಿಮದ್ದು ಸಿಡಿಸುವ ತಾಲೀಮು ನಡೆಸಲಾಯಿತು. ದಸರಾ ವಸ್ತುಪ್ರದರ್ಶನದ ಆವರಣದಲ್ಲಿರುವ ವಾಹನ ನಿಲುಗಡೆ ಸ್ಥಳದಲ್ಲಿ ಎಂದಿನಂತೆ ಇಂದು ನಗರ ಸಶಸ್ತ್ರ ಮೀಸಲು ಪಡೆಯ ನುರಿತ ಸಿಬ್ಬಂದಿಗಳುಳ್ಳ ಸಿಡಿಮದ್ದು ಸಿಡಿತದ ತಂಡದ ಸದಸ್ಯರು ಚಾಕಚಕ್ಯತೆಯಿಂದ 7 ಫಿರಂಗಿ ಬಳಸಿ ತಲಾ ಮೂರು ಸುತ್ತಿನಂತೆ 21 ಬಾರಿ ಸಿಡಿಮದ್ದು ಸಿಡಿಸಿದರು.

ವರಲಕ್ಷ್ಮಿ ಗೈರು: ದಸರಾ ಮಹೋತ್ಸವದಲ್ಲಿ ಪಾಲ್ಗೊಳ್ಳಲು ಈ ಬಾರಿ 14 ಆನೆಗಳನ್ನು ಕರೆತರಲಾಗಿದ್ದು, ವಯಸ್ಸಿನ ಹಿರಿತನದ ಕಾರಣ ವರಲಕ್ಷ್ಮಿ ಆನೆಗೆ ಇಂದು ನಡೆದ ಎರಡನೇ ಹಂತದ ಸಿಡಿಮದ್ದು ತಾಲೀಮಿನಿಂದ ವಿನಾಯಿತಿ ನೀಡಲಾಗಿತ್ತು. ಉಳಿದಂತೆ ಕ್ಯಾಪ್ಟನ್ ಅಭಿಮನ್ಯು ನೇತೃತ್ವದ 13 ಆನೆಗಳು ಹಾಗೂ ಅಶ್ವಪಡೆಯ 38 ಕುದುರೆಗಳು ತಾಲೀಮಿನಲ್ಲಿ ಪಾಲ್ಗೊಂಡವು.

ಪಟಾಕಿ ಪ್ರಯೋಗ: ಮೂರು ದಿನದ ಹಿಂದೆ ನಡೆದ ಮೊದಲ ಹಂತದ ಸಿಡಿಮದ್ದು ತಾಲೀಮಿನ ವೇಳೆ ರೋಹಿತ, ಹಿರಣ್ಯ, ದೊಡ್ಡಹರವೆ ಲಕ್ಷ್ಮೀ ಹೆಚ್ಚಿನ ಪ್ರಮಾಣದಲ್ಲಿ ಬೆದರಿದ್ದರೆ, ಮತ್ತೆ ಕೆಲ ಆನೆಗಳು ಆತಂಕದಿಂದ ಘೀಳಿಟ್ಟಿದ್ದವು. ಈ ಹಿನ್ನೆಲೆಯಲ್ಲಿ ಏಕಾಏಕಿ ಭಾರಿ ಪ್ರಮಾಣದ ಶಬ್ದ ಕೇಳಿದರೆ ಗಜಪಡೆ ಹಾಗೂ ಅಶ್ವಪಡೆ ಮತ್ತೆ ಆತಂಕಕ್ಕೀಡಾಗಬಹುದು ಎಂಬ ಮುಂದಾಲೋಚನೆಯಿಂದ ಇಂದು ತಾಲೀಮಿಗೂ ಮುನ್ನ ಆನೆಗಳ ಮುಂದೆ ಅಟಂಬಾಂಬ್ ಸಿಡಿಸಿ ಪ್ರಯೋಗ ಮಾಡಲಾಯಿತು. ಆನೆ ಮತ್ತು ಕುದುರಗಳು ಪಟಾಕಿ ಸಿಡಿತದ ಶಬ್ದಕ್ಕೆ ಒಗ್ಗಿಕೊಂಡವು. ಆ ನಂತರ ಸಿಡಿಮದ್ದು ಸಿಡಿಸಲಾಯಿತು.

ಹಿರಣ್ಯ ಬೆದರಿತು: ಸಿಡಿಮದ್ದು ಸಿಡಿಸುವ ಪ್ರಕ್ರಿಯೆ ಆರಂಭಕ್ಕೂ ಮೊದಲೇ ಸಾಲಾಗಿ ನಿಂತಿದ್ದ ಆನೆಗಳಿಂದ ಹಿರಣ್ಯ ಆನೆಯನ್ನು ಬೇರ್ಪಡಿಸಲಾಯಿತು. ಆನೆಗಳ ಸಾಲಿನಿಂದ ಹಿಂದಕ್ಕೆ ಕರೆದೊಯ್ದು ಹಿರಣ್ಯ ಆನೆಯನ್ನು ನಿಲ್ಲಿಸಲಾಗಿತ್ತು ಮಾವುತ, ಕಾವಾಡಿ ಹಾಗೂ ಸಹಾಯಕರು ಹಿರಣ್ಯಳನ್ನು ಸಮಾಧಾನಿಸುವ ಪ್ರಯತ್ನ ಮಾಡುತ್ತಿದ್ದರು. ಈ ವೇಳೆ ಸಿಡಿಮದ್ದು ಸಿಡಿಸುವ ಪ್ರಕ್ರಿಯೆ ಆರಂಭಿಸುತ್ತಿದ್ದಂತೆಯೇ ಹಿರಣ್ಯ ಮತ್ತಷ್ಟು ಆತಂಕಕ್ಕೆ ಒಳಗಾಯಿತು. ಆದರೂ ಮಾವುತ, ಕಾವಾಡಿಗಳು ಆ ಆನೆಯನ್ನು ಸಮಾಧಾನಿಸಿದರು. ಕಾವಾಡಿ ಹಿರಣ್ಯಳ ಸೊಂಡಿಲು ತಬ್ಬಿಕೊಂಡು ಸಮಾಧಾನ ಮಾಡುತ್ತಿದ್ದ ವೇಳೆ ಸಿಡಿಮದ್ದು ಶಬ್ದಕ್ಕೆ ಹೆದರಿ ಬಲಬದಿಗೆ ಒಮ್ಮೆಲೆ ತಿರುಗಿತು. ಇದರಿಂದ ಕಾವಾಡಿಯೂ ಸೊಂಡಿಲಿನೊಂದಿಗೆ ಬಲಬದಿಗೆ ಬಂದು ನಿಲ್ಲುವಂತಾಯಿತು. ಇದು ದೂರದಿಂದ ಸೊಂಡಿಲಿನಿಂದ ತಳ್ಳಿದಂತೆ ಕಂಡುಬಂತಾದರೂ, ನಂತರ ಹಿರಣ್ಯ ಮಾವುತ, ಕಾವಾಡಿಗಳ ಆಜ್ಞೆ ಪಾಲಿಸಲು ಮುಂದಾಯಿತು. ತಾಲೀಮು ಮುಗಿದ ಕೆಲ ಸಮಯದ ನಂತರ ಹಿರಣ್ಯಳನ್ನು ಇತರೆ ಆನೆಗಳೊಂದಿಗೆ ಕರೆತಂದು ಸಾಮಾನ್ಯ ಸ್ಥಿತಿಗೆ ಮರಳುವಂತೆ ಮಾಡಿದರು.

ಫಿರಂಗಿಯತ್ತ ಮುನ್ನುಗ್ಗಿದ ಗಜಪಡೆ: ಎರಡನೇ ಸುತ್ತಿನ ಸಿಡಿಮದ್ದು ಸಿಡಿತದ ಬಳಿಕ ಮೂರನೇ ಸುತ್ತಿನ ಸಿಡಿಮದ್ದು ಸಿಡಿಯುತ್ತಿದ್ದಂತೆ ಕ್ಯಾಪ್ಟನ್ ಅಭಿಮನ್ಯು ನೇತೃತ್ವದ ಗಜಪಡೆ ಸಿಡಿಮದ್ದು ಸಿಡಿಯುತ್ತಿದ್ದರೂ ಫಿರಂಗಿಯತ್ತ ಮುನ್ನುಗ್ಗಲಾರಂಭಿಸಿದ್ದವು. ಅಭಿಮನ್ಯು ಹೆಜ್ಜೆ ಮುಂದಿಡುತ್ತಿದ್ದಂತೆ ಮಹೇಂದ್ರ, ಭೀಮ, ಧನಂಜಯ, ಪ್ರಶಾಂತ, ಸುಗ್ರೀವ, ಗೋಪಿ, ಕಂಜನ್, ಏಕಲವ್ಯ, ಲಕ್ಷ್ಮೀ, ದೊಡ್ಡಹರವೆ ಲಕ್ಷ್ಮೀ ಸೇರಿದಂತೆ ಎಲ್ಲಾ ಆನೆಗಳು ಫಿರಂಗಿ ಸಮೀಪವೇ ಮುನ್ನಡಿ ಇಟ್ಟವು. 21ನೇ ಸಿಡಿಮದ್ದು ಸಿಡಿಯುತ್ತಿದ್ದಂತೆಯೇ ಎಲ್ಲಾ ಆನೆಗಳು ಫಿರಂಗಿ ಬಳಿ ಬಂದು ಸಿಡಿಮದ್ದಿನ ವಾಸನೆ ಗ್ರಹಿಸಿ, ಸೊಂಡಿಲೆತ್ತಿ ಧೈರ್ಯ ಪ್ರದರ್ಶಿಸಿದವು.

> **ಆನೆಗಳು ಅತ್ಯುತ್ತಮವಾಗಿ ಸ್ಪಂದಿಸಿವೆ**
>
> “ಎರಡನೇ ಹಂತದ ತಾಲೀಮಿನಲ್ಲಿ ಬಹುತೇಕ ಎಲ್ಲಾ ಆನೆಗಳು ಉತ್ತಮವಾಗಿ ವರ್ತಿಸಿವೆ. ಕಳೆದ ಬಾರಿಗೆ ಹೋಲಿಸಿದರೆ, ಈ ಬಾರಿ ಯಾವುದೇ ಆನೆಯೂ ಹೆದರದಿರುವುದು ಕಂಡು ಬಂದಿದೆ. ಅಂತಿಮ ಹಂತದ ತಾಲೀಮಿನ ವೇಳೆ ಎಲ್ಲಾ ಆನೆಗಳು ಸಜ್ಜಾಗಲಿವೆ. **– ಡಾ.ಐ.ಬಿ.ಪ್ರಭುಗೌಡ, ಡಿಸಿಎಫ್, ವನ್ಯಜೀವಿ ವಿಭಾಗ**

ಈ ಸಂದರ್ಭದಲ್ಲಿ ವನ್ಯಜೀವಿ ವಿಭಾಗದ ಡಿಸಿಎಫ್ ಡಾ.ಐ.ಬಿ.ಪ್ರಭುಗೌಡ, ಅರಣ್ಯ ಸಂಚಾರಿ ದಳದ ಡಿಸಿಎಫ್ ಡಾ.ಚಂದ್ರಶೇಖರ್ ಪಾಟೀಲ್, ಮೌಂಟೆಡ್ ಕಮಾಂಡೆಂಟ್ ವಿ.ಶೈಲೇಂದ್ರ, ಅರಮನೆ ಭದ್ರತಾ ಎಸಿಪಿ ಚಂದ್ರಶೇಖರ್, ಸಿಎಆರ್ ಎಸಿಪಿ ಸತೀಶ್, ಆರ್‌ಎಫ್‌ಓ ಸಂತೋಷ್ ಹೂಗಾರ್, ಪಶುವೈದ್ಯರಾದ ಡಾ.ಮುಜೀಬ್ ರೆಹಮಾನ್, ಡಾ.ಮಿರ್ಜಾ ವಾಸಿಂ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಶಾಸಕ ಕೆ.ಹರೀಶ್‌ಗೌಡರ ನೇತೃತ್ವದಲ್ಲಿ ಗಜಪಡೆ ಕುಟುಂಬದವರಿಗೆ ಉಪಾಹಾರ



ಶಾಸಕ ಕೆ.ಹರೀಶ್‌ಗೌಡ ಗಜಪಡೆ ಕುಟುಂಬದವರಿಗೆ ಉಪಾಹಾರ ವಿತರಿಸಿದರು.

ಮೈಸೂರು, ಸೆ.29–ನಾಡಹಬ್ಬ ಮೈಸೂರು ದಸರಾ ಮಹೋತ್ಸವದಲ್ಲಿ ಪಾಲ್ಗೊಳ್ಳಲು ಆಗಮಿಸಿರುವ ಗಜಪಡೆಯ ಮಾವುತರು, ಕಾವಾಡಿಗಳು ಹಾಗೂ ಕುಟುಂಬದ ಸದಸ್ಯರಿಗೆ ಅರಮನೆ ಆವರಣದಲ್ಲಿ ಶಾಸಕ ಕೆ.ಹರೀಶ್‌ಗೌಡ ಉಪಾಹಾರ ವಿತರಿಸಿದರು.

ಬಳಿಕ ಮಾತನಾಡಿದ ಅವರು, ಕಾವಾಡಿ ಹಾಗೂ ಮಾವುತರ ಕುಟುಂಬ ಆರೋಗ್ಯದ ಕಡೆ ಗಮನ ನೀಡಬೇಕು ಹಾಗೂ ಮಕ್ಕಳಿಗೆ ಉನ್ನತ ಶಿಕ್ಷಣ ನೀಡಬೇಕು. ನಿಮ್ಮ ಜೊತೆ ಸದಾ ನಾವು ಇರುತ್ತೇವೆ. ಅರಣ್ಯ ಸಂಪತ್ತು ನಾಡಿನ ಸಂಪತ್ತಾಗಿದೆ. ಕಾಡಿನ ಸಂರಕ್ಷಕರಾದ ನೀವು, ಅರಣ್ಯ ಸಂಪತ್ತಿನ ಭಾಗವೇ ಆಗಿದ್ದೀರಿ. ನಿಮಗೆ ಅಗತ್ಯ ಮೂಲಸೌಕರ್ಯವನ್ನು ಸರ್ಕಾರದಿಂದ ಒದಗಿಸಿಕೊಡಲಾಗುವುದು ಎಂದು ಭರವಸೆ ನೀಡಿದರು.

ಈ ವೇಳೆ ವನ್ಯಜೀವಿ ವಿಭಾಗದ ಡಿಸಿಎಫ್ ಡಾ.ಐ.ಬಿ.ಪ್ರಭುಗೌಡ, ಆರ್‌ಎಫ್‌ಓ ಸಂತೋಷ್ ಹೂಗಾರ್, ಸ್ವಾತಿ ಎಂ.ಗೌಡ, ಪಾಲಿಕೆ ಮಾಜಿ ಸದಸ್ಯರಾದ ಗೋಪಿ, ಡೆಲ್ಲಿ ರವಿ, ಪ್ರಮೋದ್, ರವಿಚಂದ್ರ, ಸಂತೋಷ್, ಪ್ರಶಾಂತ್, ಸಂದೀಪ್, ವಿನೋದ್ ಅರಸ್, ನಿತಿನ್, ಶಿವಕುಮಾರ್, ಪ್ರಜ್ವಲ್, ಗಗನ್, ಜೈ ಶೀಲ್, ಲೋಕೇಶ್, ಗುರುರಾಜ್ ಶೆಟ್ಟಿ, ಮಂಜುನಾಥ್, ನವೀನ್, ಧನುಷ್, ಶುಭ, ಮಾನ್ಯ ಇದ್ದರು.

ಡಿಕೆಶಿ ಸಿಎಂ ಆಗಲು ವಲಸೆ ನಾಯಕ ಸಿದ್ದರಾಮಯ್ಯ ಎಂದಿಗೂ ಬಿಡುವುದಿಲ್ಲ

ಸಾಮಾಜಿಕ ಜಾಲತಾಣದಲ್ಲಿ ಬಿಜೆಪಿ ಪೋಸ್ಟ್



ಬೆಂಗಳೂರು: ರಾಜ್ಯ ಕಾಂಗ್ರೆಸ್ ಸರ್ಕಾರದಲ್ಲಿ ಮುಖ್ಯಮಂತ್ರಿ ಕುರ್ಚಿಗಾಗಿ ದಿನೇ ದಿನೇ ಸ್ಪರ್ಧೆ ಹೆಚ್ಚಾಗುತ್ತಿದೆ. ಸಿಎಂ ಆಗುವ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರ ಆಸೆಗೆ ಸಿದ್ದರಾಮಯ್ಯ ಅವರು ತಣ್ಣೀರು ಎರಚಿದ್ದಾರೆ ಎಂದು ಬಿಜೆಪಿ ಟೀಕಿಸಿದೆ.

ಈ ಕುರಿತು ಸಾಮಾಜಿಕ ಜಾಲತಾಣ 'ಎಕ್ಸ್'ನಲ್ಲಿ ಪೋಸ್ಟ್ ಮಾಡಿರುವ ಬಿಜೆಪಿ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರಿಗೆ ಸ್ವಪಕ್ಷದಲ್ಲಿಯೇ ಸ್ವಾತಂತ್ರ್ಯ ಇಲ್ಲದಂತಾಗಿದೆ. ಅವರ ಸಿಎಂ ಆಗುವ ಹಗಲು ಕನಸಿನ ಆಸೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಮಾಜ ಕಲ್ಯಾಣ ಸಚಿವರ ಮೂಲಕ ತಣ್ಣೀರು ಎರಚಿದ್ದಾರೆ. ದುರ್ಬಲ ಕೆಪಿಸಿಸಿ ಅಧ್ಯಕ್ಷರಿಗೆ ಈಗ ಸಿದ್ದರಾಮಯ್ಯ ಬೆಂಬಲಿಗರನ್ನು ನಿಯಂತ್ರಿಸಲು ಸಾಧ್ಯವಾಗುತ್ತಿಲ್ಲ ಎಂದು ವ್ಯಂಗ್ಯವಾಡಿದೆ.

ಅಧಿಕಾರದ ಮೂಲಕ ತಮ್ಮ ಸ್ವ ಕುಟುಂಬದ ಕಲ್ಯಾಣ ಮಾಡಿಕೊಂಡ ಸಿದ್ದರಾಮಯ್ಯ ಕೋರ್ಟ್ ಛೀಮಾರಿ ಹಾಕಿದರೂ ಕುರ್ಚಿಯಿಂದ ಏಳಲೂ ಸಿದ್ಧವಿಲ್ಲ. ಪಕ್ಷ ಕಟ್ಟಿದ ಡಿಕೆಶಿ ಅವರಿಗೆ ಹೈಕಮಾಂಡ್ ಕೂಡಾ ಮನ್ನಣೆ ನೀಡುತ್ತಿಲ್ಲ. ಡಿಕೆಶಿ ಅವರದ್ದು ಈಗ ತಿರುಕನ ಕನಸಾಗಿದೆ. ಮುಖ್ಯಮಂತ್ರಿ ಕುರ್ಚಿ ಮೇಲೆ ಡಿ.ಕೆ.ಶಿವಕುಮಾರ್ ಕುಳಿತುಕೊಳ್ಳಲು ವಲಸೆ ನಾಯಕ ಸಿದ್ದರಾಮಯ್ಯ ಎಂದಿಗೂ ಬಿಡುವುದಿಲ್ಲ ಎಂದು ಅವರ ತಾಯಿ ಗೌರಮ್ಮ ಹೇಳಿದ ಭವಿಷ್ಯ ನಿಜವಾಗುತ್ತಿದೆ ಎಂದು ಬಿಜೆಪಿ ಹೇಳಿದೆ.

ಕಾಂಗ್ರೆಸ್ vs ಕಾಂಗ್ರೆಸ್ ಕಿತ್ತಾಟ ಕರ್ನಾಟಕದ ಅಭಿವೃದ್ಧಿಗೆ ಮತ್ತಷ್ಟು ಮಾರಕವಾಗುವುದು ಖಚಿತ ಎಂದು ಕಿಡಿಕಾರಿದೆ.

ನಾಡನ್ನಾಳಿದ ನಾಲ್ವಡಿಯವರ ಹೆಸರಲ್ಲಿ ಸರ್ಕಾರ ಪ್ರಶಸ್ತಿ ಸ್ಥಾಪಿಸದಿರುವುದಕ್ಕೆ ಬರಗೂರು ವಿಷಾದ

● ಡಾ.ಎನ್.ಎನ್.ಚಿಕ್ಕಮಾದು ಅವರ 'ಪ್ರಜಾಮಾತೆ', 'ಕೃಷ್ಣರಾಜಭೂಪ ಮನೆಮನೆದೀಪ' ಕೃತಿ ಬಿಡುಗಡೆ ● ಉಪನ್ಯಾಸಕರ ಬೇಡಿಕೆಗಳಿಗೆ ಸ್ಪಂದಿಸಲು ಮನವಿ

ಮೈಸೂರು,ಸೆ.29(ಎಸ್‌ಪಿಎನ್)– ರಾಜಪ್ರಭುತ್ವದಲ್ಲಿ 'ಕೃಷ್ಣರಾಜಭೂಪ ಮನೆಮನೆದೀಪ' ಎಂದು ಜನರಿಂದ ಕರೆಸಿಕೊಳ್ಳುತ್ತಿದ್ದ ನಾಲ್ವಡಿ ಕೃಷ್ಣರಾಜ ಒಡೆಯರ್ ಹೆಸರಿನಲ್ಲಿ ರಾಜ್ಯಮಟ್ಟದ ಪ್ರಶಸ್ತಿ ಸ್ಥಾಪಿಸಬೇಕು ಎಂದು ಹಿರಿಯ ಸಾಹಿತಿ ಪ್ರೊ.ಬರಗೂರು ರಾಮಚಂದ್ರಪ್ಪ ರಾಜ್ಯ ಸರ್ಕಾರವನ್ನು ಒತ್ತಾಯಿಸಿದರು.



ಲೇಖಕ ಡಾ.ಎನ್.ಎನ್.ಚಿಕ್ಕಮಾದು ಅವರ 'ಪ್ರಜಾಮಾತೆ', 'ಕೃಷ್ಣರಾಜಭೂಪ ಮನೆಮನೆದೀಪ' ಕೃತಿಗಳನ್ನು ಪ್ರೊ.ಬರಗೂರು ರಾಮಚಂದ್ರಪ್ಪ ಬಿಡುಗಡೆಗೊಳಿಸಿದರು.

ಮೈಸೂರು ಜೆಎಲ್‌ಬಿ ರಸ್ತೆಯ ಐಡಿಯಲ್ ಜಾವಾ ರೋಟರಿ ಸಭಾಂಗಣದಲ್ಲಿ ಪದವಿ ಪೂರ್ವ ಕಾಲೇಜು ಕನ್ನಡ ಉಪನ್ಯಾಸಕರ ವೇದಿಕೆ ವತಿಯಿಂದ ಲೇಖಕ ಡಾ.ಎನ್.ಎನ್.ಚಿಕ್ಕಮಾದು ಅವರ 'ಪ್ರಜಾಮಾತೆ' ಮತ್ತು 'ಕೃಷ್ಣರಾಜಭೂಪ ಮನೆಮನೆದೀಪ' ಕೃತಿಗಳನ್ನು ಬಿಡುಗಡೆಗೊಳಿಸಿ, ಮಾತನಾಡಿದರು.

ನೃಪತುಂಗ, ಪಂಪ, ಬಸವಣ್ಣ, ಕನಕ, ವಾಲ್ಮೀಕಿ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ಸೇರಿದಂತೆ ಇತರೆ ಗಣ್ಯವ್ಯಕ್ತಿಗಳ ಹೆಸರಿನಲ್ಲಿ ಪ್ರಶಸ್ತಿಗಳನ್ನು ಸ್ಥಾಪಿಸಿ, ಆಯಾಯ ವರ್ಗದಲ್ಲಿ ಬರುವ ಸಾಧಕರಿಗೆ ಕೊಡಮಾಡುವಂತೆ ಜನರ ಮಧ್ಯೆ ಇದ್ದು ಆಡಳಿತ ನಡೆಸಿದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಹೆಸರಿನಲ್ಲಿ ರಾಜ್ಯ ಸರ್ಕಾರ ರಾಜ್ಯ ಮಟ್ಟದ ಪ್ರಶಸ್ತಿ ಸ್ಥಾಪಿಸಿಲ್ಲ ಎಂದರೆ, ಇದು ನಾಚಿಕೆಗೇಡಿನ ಸಂಗತಿ ಎಂದು ಟೀಕಿಸಿದರು.

ಲೇಖಕ ಡಾ.ಎನ್.ಎನ್.ಚಿಕ್ಕಮಾದು ರಚಿತ 'ಕೃಷ್ಣರಾಜ ಭೂಪ ಮನೆಮನೆ ದೀಪ' ಕೃತಿಯಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಆಡಳಿತಾವಧಿಯಲ್ಲಿ ಜಾರಿಗೆ ತಂದ ಹಲವು ಸುಧಾರಣಾ ಕಾರ್ಯಕ್ರಮಗಳನ್ನು ಉಲ್ಲೇಖಿಸಿ ಪುಟ ಸಂಖ್ಯೆ 51 ಮತ್ತು 52ರಲ್ಲಿ ಮಹಿಳೆಯರ ಶಿಕ್ಷಣ, ವಿಧವಾ ವಿವಾಹ, ದೇವದಾಸಿ ಪದ್ಧತಿ ನಿಷೇಧ ಸೇರಿದಂತೆ ಮಹಿಳಾ ಸಬಲೀಕರಣ ಕುರಿತು ಅನೇಕ ಕಾರ್ಯಕ್ರಮಗಳನ್ನು ಜಾರಿಗೊಳಿಸಿದ ಉಲ್ಲೇಖವಿದೆ. ಅಲ್ಲದೆ, ತಮ್ಮ ರಾಜ್ಯದಲ್ಲಿ ಎಲ್ಲ ವರ್ಗದ ಜನರು ಶಿಕ್ಷಣ ಕಲಿಯಬೇಕು. ಪ್ರತಿಯೊಬ್ಬರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಬೇಕು ಎಂಬ ಸದಾಶಯ ಹೊಂದಿದ್ದರು ಎಂದರು.

ನಾಲ್ವಡಿ ಅವರಿಗೆ 'ಕೃಷ್ಣರಾಜಭೂಪ ಮನೆಮನೆ ದೀಪ' ಎಂದು ಜನರು ಸುಮ್ಮನೆ ಕರೆದಿಲ್ಲ. ಅವರ ಕೆಲಸ ಕಾರ್ಯಗಳನ್ನು ನೋಡಿ ಕರೆಯುತ್ತಿದ್ದಾರೆ. ಪ್ರಜಾಪ್ರಭುತ್ವದ ಆಳ್ವಿಕೆಯಲ್ಲಿ ರಾಜಪ್ರಭುತ್ವದ ಆಡಳಿತವೇ ಚೆನ್ನಾಗಿತ್ತು. ಹಾಗಾಗಿ ಅವರ ಹೆಸರಿನಲ್ಲಿ ರಾಜ್ಯಮಟ್ಟದ ಪ್ರಶಸ್ತಿ ಸ್ಥಾಪಿಸಲಿ ಎಂದು ಸಲಹೆ ನೀಡಿದರು.

> “ಪ್ರಸ್ತುತ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಕೆಲಸ ಮಾಡುತ್ತಿರುವ ಉಪನ್ಯಾಸಕರ ಕಾರ್ಯಭಾರ ಹೆಚ್ಚಾಗುತ್ತಿದ್ದು, ಗುಣಮಟ್ಟದ ಶಿಕ್ಷಣ ನೀಡಲು ಸಾಧ್ಯವಾಗುತ್ತಿಲ್ಲ. ಸರ್ಕಾರ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ದೊರಕಿಸಿಕೊಡುವ ನಿಟ್ಟಿನಲ್ಲಿ ಪಿಯು ಕಾಲೇಜಿನ ಉಪನ್ಯಾಸಕರ ಬೇಡಿಕೆಗಳನ್ನು ಈಡೇರಿಸುವಂತೆ ಮನವಿ ಮಾಡಿದರಲ್ಲದೆ, ಸರ್ಕಾರ ನಿಮ್ಮ ಬೇಡಿಕೆಯನ್ನು ಈಡೇರಿಸಲು ಹಿಂದು–ಮುಂದು ನೋಡಿದರೆ, ನಿಮ್ಮ ಪ್ರತಿಭಟನಾ ವೇದಿಕೆಗಳಲ್ಲಿ ನಾನು ಭಾಗವಹಿಸಿ ಬೆಂಬಲ ಸೂಚಿಸುತ್ತೇನೆ. **–ಪ್ರೊ.ಬರಗೂರು ರಾಮಚಂದ್ರಪ್ಪ**

ಡಾ.ಎನ್.ಎನ್.ಚಿಕ್ಕಮಾದು ರಚಿತ ಎರಡು ಕೃತಿಗಳು ನಿರೂಪಣೆ ಶೈಲಿಯಲ್ಲಿವೆ. ಇವರ ಕೃತಿಗಳು ಓದುಗರನ್ನು ಸೆಳೆಯುವ ನಿಟ್ಟಿನಲ್ಲಿ ತಮ್ಮ ವಿಶೇಷ ಧಾಟಿಯನ್ನು ದಾಖಲಿಸಿದ್ದಾರೆ. ಸಿಂಹಾಸನ ಖಾಲಿ ಇದ್ದರೂ ನಿರ್ಲಿಪ್ತ ಭಾವದೊಂದಿಗೆ ಕೆಂಪನಂಜಮ್ಮಣ್ಣಿ ಅವರು, ನಾಲ್ವಡಿ ಕೃಷ್ಣರಾಜ ಒಡೆಯರ್ ಚಿಕ್ಕ ವಯಸ್ಸಿನವರಾಗಿದ್ದ ಅವಧಿಯಲ್ಲಿ ರಾಜಪ್ರತಿನಿಧಿಯಾಗಿದ್ದರು. ಮೈಸೂರು ರಾಣಿಯರ ಇತಿಹಾಸದಲ್ಲಿ ಕೆಂಪನಂಜಮ್ಮಣ್ಣಿ ಅವರ ಹೆಸರು ವಿಶೇಷವಾಗಿ ಉಲ್ಲೇಖಿಸಿದ್ದು, ಇವೆರಡು ಕೃತಿಗಳನ್ನು ಓದುಗ ಹತ್ತಿರವಾಗಿಸುವಲ್ಲಿ ಲೇಖಕರು ಯಶಸ್ವಿಯಾಗಿದ್ದಾರೆ ಎಂದರು.

ಈ ವೇಳೆ ಪ್ರಜಾಮಾತೆ ಕೃತಿ ಕುರಿತು ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ಪ್ರಾಧ್ಯಾಪಕಿ ಪ್ರೊ.ಎಸ್.ಡಿ.ಶಶಿಕಲಾ, ಕೃಷ್ಣರಾಜಭೂಪ ಮನೆಮನೆದೀಪ ಕೃತಿ ಕುರಿತು ಹಿರಿಯ ಸಾಹಿತಿ ಬನ್ನೂರು ಕೆ.ರಾಜು ಮಾತನಾಡಿದರು.

ಕನ್ನಡ ಉಪನ್ಯಾಸಕರ ವೇದಿಕೆ ಅಧ್ಯಕ್ಷ ಎಂ. ಮಹೇಶ್ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಲೇಖಕ ಡಾ.ಎನ್.ಎನ್.ಚಿಕ್ಕಮಾದು ಕೃತಿ ಕುರಿತು ತಮ್ಮ ಅನುಭವ ಬಿಚ್ಚಿಟ್ಟರು. ವೇದಿಕೆಯಲ್ಲಿ ಪ್ರಕಾಶಕ ಓಂಕಾರಪ್ಪ ಇನ್ನಿತರರಿದ್ದರು.

ಡಿ ಬಾಸ್ ಎಂದು ಕೂಗಬೇಡಿ ಎಂದಿದ್ದಕ್ಕೆ ಚಾಕುವಿನಿಂದ ಇರಿತ

ನಟ ದರ್ಶನ್ ಫ್ಯಾನ್ಸ್‌ನಿಂದ ಕೃತ್ಯ

ರಾಮನಗರ,ಸೆ.29– ಚಿತ್ರನಟ ದರ್ಶನ್ ಅಭಿಮಾನಿಗಳಾದ



ಗಾರೆ ಕೆಲಸಗಾರರಿಬ್ಬರು ಮೇಸ್ತ್ರಿ ಕುತ್ತಿಗೆಗೆ ಚಾಕು ಇರಿದು ಗಾಯಗೊಳಿಸಿರುವ ಘಟನೆ ಬೆಂಗಳೂರು ದಕ್ಷಿಣ ತಾಲೂಕಿನ ಕೆಂಗೇರಿ ಹೋಬಳಿ ಸೂಲಿಕೆರೆ ಪಾಳ್ಯದ ಲೇಬರ್ ಶೆಡ್‌ನಲ್ಲಿ ನಡೆದಿದೆ. ರಾಮನಗರ ತಾಲೂಕಿನ ಕಸಬಾ ಹೋಬಳಿ ದೊಡ್ಡಮಣ್ಣು ಗುಡ್ಡೆ ಗ್ರಾಮದ ನಿವಾಸಿ ವೆಂಕಟಸ್ವಾಮಿ ಗಾಯಗೊಂಡಿದ್ದು, ಐಜೂರು ಬಡಾವಣೆ ನಿವಾಸಿಗಳಾದ ಕಿರಣ್, ಮಹದೇವ ದುಷ್ಕೃತ್ಯ ಎಸಗಿದವರು. ವೆಂಕಟಸ್ವಾಮಿಯು ಗ್ರಾಮದ ಸುರೇಶ್ ಎನ್ನುವರ ಗುತ್ತಿಗೆ ತೆಗೆದುಕೊಂಡಿದ್ದ ಜಾಗದಲ್ಲಿ ಮೇಸ್ತ್ರಿ ಕೆಲಸ ಮಾಡಲು ಗ್ರಾಮದ ಕಾಳಯ್ಯ ಅವರೊಂದಿಗೆ ಕೆಂಗೇರಿ ಹೋಬಳಿ ಸೂಲಿಕೆರೆ ಪಾಳ್ಯಕ್ಕೆ ತೆರಳಿದ್ದಾರೆ. ಅವರ ಜೊತೆಯಲ್ಲಿ ಪರಿಚಯವಿರುವ ಕಿರಣ್ ಹಾಗೂ ಮಹದೇವ ಅವರನ್ನು ಕೆಲಸಕ್ಕಾಗಿ ಕರೆದುಕೊಂಡು ಹೋಗಿದ್ದಾರೆ. ಆ ಸ್ಥಳದಲ್ಲಿಯೇ ಶೆಡ್ ನಿರ್ಮಾಣ ಮಾಡಿಕೊಂಡು ಎಲ್ಲರೂ ವಾಸವಾಗಿದ್ದರು. ಸೆ.26ರಂದು ರಾತ್ರಿ ಶೆಡ್ಡಿನಲ್ಲಿ ಕಿರಣ್ ಮತ್ತು ಮಹದೇವ್ ಪಾನಮತ್ತರಾಗಿ ನಟ ದರ್ಶನ್ ವಿಚಾರವಾಗಿ ಮಾತನಾಡುತ್ತಾ ಡಿ ಬಾಸ್, ಡಿ ಬಾಸ್ ಎಂದು ಕೂಗಾಡಲು ಆರಂಭಿಸಿದ್ದಾರೆ. ಇದಕ್ಕೆ ವೆಂಕಟಸ್ವಾಮಿ, ಅಕ್ಕಪಕ್ಕದಲ್ಲಿ ಮನೆಗಳಿವೆ ಏಕೆ ಕೂಗಾಡುತ್ತಿದ್ದೀರಿ ಎಂದು ಕೇಳಿದ್ದಾರೆ. ನಮ್ಮ ಡಿ ಬಾಸ್ ಬಗ್ಗೆ ನಿನಗೆ ಏನು ಗೊತ್ತು, ನಿನ್ನನ್ನು ಕೊಲೆ ಮಾಡದೆ ಬಿಡುವುದಿಲ್ಲ ಎಂದು ಇಬ್ಬರು ವೆಂಕಟಸ್ವಾಮಿ ಜೊತೆ ಜಗಳ ತೆಗೆದು ಚಾಕುವಿನಿಂದ ಕುತ್ತಿಗೆಗೆ ಇರಿ ದಿದ್ದಾರೆ. ಆಗ ಸ್ಥಳಕ್ಕೆ ಬಂದ ಕಾಳಯ್ಯ ಜಗಳ ಬಿಡಿಸಿ ವೆಂಕಟಸ್ವಾಮಿ ಅವರನ್ನು ರಾಮೋಹಳ್ಳಿ ಸಂಜೀವಿನಿ ಆಸ್ಪತ್ರೆಗೆ ದಾಖಲು ಮಾಡಿದ್ದಾರೆ.

ಈ ಸಂಬಂಧ ವೆಂಕಟಸ್ವಾಮಿ ಪತ್ನಿ ಶಾಂತ, ಕಿರಣ್ ಮತ್ತು ಮಹದೇವ ವಿರುದ್ಧ ಕುಂಬಳಗೋಡು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಅ.3ರಿಂದ ಗುಜರಾತಿ ಸಮಾಜದಿಂದ ಗಾರ್ಬಾ, ದಾಂಡಿಯಾ ಉತ್ಸವ

ಮೈಸೂರು: ಮೈಸೂರು ಗುಜರಾತಿ ಸಮಾಜ ವತಿಯಿಂದ ನವರಾತ್ರಿ ಅಂಗವಾಗಿ ಅ.3ರಿಂದ 11ರವರೆಗೆ ಯಾದವಗಿರಿಯ ಗುಜರಾತಿ ಸಮಾಜದ ಆವರಣದಲ್ಲಿ ಗಾರ್ಬಾ, ದಾಂಡಿಯಾ ಉತ್ಸವ ಏರ್ಪಡಿಸಿದ್ದು, ಪ್ರತಿದಿನ ಸಂಜೆ 7.30ಕ್ಕೆ ಕಾರ್ಯಕ್ರಮ ಆರಂಭವಾಗಲಿದ್ದು, ಮಾಹಿತಿಗೆ 9448042770.

ಕರ್ನಾಟಕ ಜಾನಪದ ಪರಿಷತ್ತಿಗೆ ಯುನೆಸ್ಕೋ ಮಾನ್ಯತೆ

ಬೆಂಗಳೂರು: ಕರ್ನಾಟಕದ ಸಂಸ್ಕೃತಿ ಹಾಗೂ ಸಾಂಪ್ರದಾಯಿಕ ಕಲಾ ಪ್ರಕಾರಗಳ ರಕ್ಷಣೆಗೆ ಹೆಸರಾಗಿರುವ ಕರ್ನಾಟಕ ಜಾನಪದ ಪರಿಷತ್ತು ಮುಡಿಗೆ ಮತ್ತೊಂದು ಗರಿ ಸೇರ್ಪಡೆಗೊಂಡಿದೆ.

ಜೂನ್ 2024ರಲ್ಲಿ ಯುನೆಸ್ಕೋ ಪ್ರಧಾನ ಕಚೇರಿಯಲ್ಲಿ ನಡೆದ 10ನೇ ಅಧಿವೇಶನದಲ್ಲಿ ಘೋಷಿಸಲಾದ ಅಮೂರ್ತ ಸಾಂಸ್ಕೃತಿಕ ಪರಂಪರೆಯನ್ನು ರಕ್ಷಿಸಲು ಯುನೈಟೆಡ್ ನೇಷನ್ಸ್ ಶೈಕ್ಷಣಿಕ, ವೈಜ್ಞಾನಿಕ ಮತ್ತು ಸಾಂಸ್ಕೃತಿಕ ಸಂಸ್ಥೆ (ಯುನೆಸ್ಕೋ) ಇದನ್ನು ಗುರುತಿಸಿದೆ. ಕರ್ನಾಟಕ ಜಾನಪದ ಪರಿಷತ್ತಿನ ಅಧ್ಯಕ್ಷ ಪ್ರೊ.ಎಚ್.ಸಿ.ಬೋರಲಿಂಗಯ್ಯ ಮಾತನಾಡಿ, ಭಾರತೀಯ ಸಂಸ್ಕೃತಿ ಮತ್ತು ಸಂಪ್ರದಾಯವನ್ನು ಗುರುತಿಸುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದು ತಿಳಿಸಿದರು. ನಾವು ಕಳೆದ ವರ್ಷ ಯುನೆಸ್ಕೋ ಮಾನ್ಯತೆಗಾಗಿ ಅರ್ಜಿ ಸಲ್ಲಿಸಿದ್ದೆವು. ಹೆಚ್ಚಿನ ವಿವರಗಳನ್ನು ಒದಗಿಸುವಂತೆ ಅವರು ನಮ್ಮನ್ನು ಕೇಳಿದರು ಮತ್ತು ಅದು ಪೂರ್ಣಗೊಂಡಿತು. ನಾವು ಸೆಪ್ಟೆಂಬರ್ 26 ರಂದು ಈ ಬಗ್ಗೆ ಮಾಹಿತಿ ಪಡೆದುಕೊಂಡಿದ್ದೇವೆ ಎಂದರು.

ಅಂತೆಯೇ ಇದರೊಂದಿಗೆ, ಪರಿಷತ್ತು ವಾರ್ಷಿಕ ಅಂತಾರಾಷ್ಟ್ರೀಯ ಸಮ್ಮೇಳನಗಳಲ್ಲಿ ಭಾಗ ವಹಿಸಲು



ಮತ್ತು ಪ್ರಪಂಚ ದೊಂದಿಗೆ ಸಾಂಪ್ರದಾಯಿಕ ಜ್ಞಾನವನ್ನು ಹಂಚಿಕೊಳ್ಳಲು ಸಾಧ್ಯವಾಗುತ್ತದೆ. ಹಂಪಿಯಂತೆಯೇ, ಇದು ಹೆಚ್ಚಿನ ಪ್ರವಾಸಿಗರನ್ನು ಸೆಳೆಯುತ್ತದೆ. ಇದು ರಾಜ್ಯ ಮತ್ತು ಕೇಂದ್ರ ಸರ್ಕಾರಗಳಿಂದ ಸುಧಾರಣೆ ಮತ್ತು ವಿಸ್ತರಣೆಗಾಗಿ ಹೆಚ್ಚಿನ ಹಣವನ್ನು ಪಡೆಯಬಹುದು ಎಂದರು.

ಇನ್ನು 1979ರಲ್ಲಿ ಸ್ಥಾಪನೆಯಾದ ಪರಿಷತ್ ಕಳೆದ 45 ವರ್ಷಗಳಿಂದ ಜಾನಪದ ಕ್ಷೇತ್ರಕ್ಕೆ ತನ್ನ ಕೊಡುಗೆಯನ್ನು ನೀಡುತ್ತಾ ಬಂದಿದೆ. ಬೆಂಗಳೂರು–ಮೈಸೂರು ಹೆದ್ದಾರಿಯಲ್ಲಿ 15 ಎಕರೆ ಜಾಗದಲ್ಲಿ ಕರ್ನಾಟಕ ಜಾನಪದ ಪರಿಷತ್ತು ನಿರ್ಮಿಸಿರುವ 'ಜಾನಪದ ಲೋಕ' ವಿಶಿಷ್ಟ ಸಾಂಸ್ಕೃತಿಕ ಕೇಂದ್ರವಾಗಿ ಗುರುತಿಸಿಕೊಂಡಿದೆ. ಮನ್ನಣೆಯು ಸಾಂಸ್ಕೃತಿಕ ಪರಂಪರೆಯ ಸಂರಕ್ಷಣೆಯ ಜಾಗತಿಕ ಸಂವಾದಕ್ಕೆ ಹೆಚ್ಚು ಪರಿಣಾಮಕಾರಿಯಾಗಿ ಕೊಡುಗೆ ನೀಡಲು ಪ್ರೋತ್ಸಾಹಿಸುತ್ತದೆ. ಅಂತಾರಾಷ್ಟ್ರೀಯ ಸಾಂಸ್ಕೃತಿಕ ಪರಂಪರೆ ಸಮುದಾಯದಲ್ಲಿ ಕರ್ನಾಟಕ ಜಾನಪದ ಪರಿಷತ್ತಿನ ಪಾತ್ರವನ್ನು ಹೆಚ್ಚಿಸುತ್ತದೆ ಎಂದು ಬೋರಲಿಂಗಯ್ಯ ಹೇಳಿದರು.

ಇಡಗುಂಜಿ ಮಹಾಗಣಪತಿ ಯಕ್ಷಗಾನ ಮಂಡಳಿಗೂ ಯುನೆಸ್ಕೋ ಮನ್ನಣೆ: ಉತ್ತರ ಕನ್ನಡದ ಹೊನ್ನಾವರದ ಇಡಗುಂಜಿ ಮಹಾಗಣಪತಿ ಯಕ್ಷಗಾನ ಮಂಡಳಿ ಯುನೆಸ್ಕೋದಿಂದಲೂ ಮನ್ನಣೆ ಪಡೆದಿದೆ. ಮಂಡಲಿಯ ಸಂಚಾಲಕ ಕೆರೆಮನೆ ಶಿವಾನಂದ ಹೆಗಡೆ ಈ ಬಗ್ಗೆ ಮಾತನಾಡಿ, ಈ ಭಾಗದ ಸಂಸ್ಕೃತಿ, ಜಾನಪದವನ್ನು ಜನಪ್ರಿಯಗೊಳಿಸಲು ಪ್ರಶಸ್ತಿ ಸಹಕಾರಿಯಾಗಲಿದೆ. ಹೆಚ್ಚಿನ ಸಾಂಪ್ರದಾಯಿಕ ಜಾನಪದ ಮತ್ತು ಕಲಾ ಪ್ರಕಾರಗಳು ಸಾಯುತ್ತಿವೆ. ಆದರೆ ಈ ಗುರುತಿಸುವಿಕೆ ಅವುಗಳನ್ನು ಪುನರುಜ್ಜೀವನಗೊಳಿಸಲು ಮತ್ತು ಸಾರ್ವಜನಿಕ ಗಮನವನ್ನು ಸೆಳೆಯಲು ಸಹಾಯ ಮಾಡುತ್ತದೆ. ಇದು ಸಂಸ್ಕೃತಿಯನ್ನು ಅಂತರರಾಷ್ಟ್ರೀಯ ಮಟ್ಟದಲ್ಲಿ ಹರಡಲು ಸಹಾಯ ಮಾಡುತ್ತದೆ. ಈ ಸಂಸ್ಥೆಯು ಸ್ವಾತಂತ್ರ್ಯ ಪೂರ್ವದಲ್ಲಿ 1934ರಲ್ಲಿ ಸ್ಥಾಪನೆಯಾಯಿತು ಮತ್ತು ವರ್ಷಗಳಲ್ಲಿ ರಾಜ್ಯಕ್ಕೆ ಅನೇಕ ಶ್ರೇಷ್ಠ ಕಲಾವಿದರನ್ನು ಕೊಡುಗೆಯಾಗಿ ನೀಡಿದೆ ಎಂದು ಹೇಳಿದರು.